**ಸಂಪುಟ:** 04 **ಸಂಚಿಕೆ:** 300 **ಪುಟಗಳು:** 08 **ಭಾನುವಾರ** 12 **ಜನವರಿ** 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ದೃಢವಾದ ನೈತಿಕ ತಳಹದಿಯಿದ್ದರೆ ಮಾತ್ರ ಸಮಾಜ ಪ್ರಗತಿ ಹೊಂದಲು ಸಾಧ್ಯ.

# ರಾಮಮಂದಿರ ಪ್ರತಿಷ್ಠಾಪನೆಗೆ 1 ವರ್ಷ

• **ಉದಯವಾಹಿನಿ, ಅಯೋಧ್ಯೆ**

ಜನವರಿ 11ರ ಶನಿವಾರ, ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ರಾಮಲಾಲಾ ಅವರ ಪ್ರಾಣ ಪ್ರತಿಷ್ಠೆಯ ಒಂದು ವರ್ಷ ಪೂರ್ಣಗೊಂಡ ನೆನಪಿಗಾಗಿ ಮೂರು ದಿನಗಳ ಸಾಂಸ್ಕೃತಿಕ ಮತ್ತು ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಶುಭ ಯೋಗಗಳು ಹಾಗೂ ದ್ವಾದಶಿ ತಿಥಿಯು 2025ರಲ್ಲಿ ಜನವರಿ 11 ರಂದು ಬಂದಿರುವುದರಿಂದ ಅಯೋಧ್ಯೆ ರಾಮ ಮಂದಿರದ ವಾರ್ಷಿಕ ಪ್ರಾಣ ಪ್ರತಿಷ್ಠಾಪನೆಯನ್ನು ಜನವರಿ 22ರ ಬದಲಾಗಿ ಜನವರಿ 11ರಂದು ಆಚರಿಸಲಾಗುತ್ತಿದೆ. ಪ್ರಾಣ ಪ್ರತಿಷ್ಠೆಯ ಒಂದು



ವರ್ಷ ಪೂರ್ಣಗೊಂಡ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಈ ವಿಶೇಷ ಸಂದರ್ಭದಲ್ಲಿ ದೇಶವಾಸಿಗಳಿಗೆ

## ದೇಶವಾಸಿಗಳಿಗೆ ಶುಭ ಕೋರಿದ ಪ್ರಧಾನಿ



ಶುಭಾಶಯಗಳನ್ನು ಕೋರಿದ್ದಾರೆ. ಈ ವಿಶೇಷ ಸಂದರ್ಭದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ಸಾಮಾಜಿಕ ಮಾಧ್ಯಮ 'ಎಕ್ಸ್' ನಲ್ಲಿ ಹೀಗೆ ಬರೆದಿದ್ದಾರೆ, ಅಯೋಧ್ಯೆಯಲ್ಲಿ ರಾಮಲಲ್ಲಾ ಸ್ಥಾಪನೆಯ ಮೊದಲ ವಾರ್ಷಿಕೋತ್ಸವದಂದು ಎಲ್ಲಾ ದೇಶವಾಸಿಗಳಿಗೆ ಶುಭಾಶಯಗಳು. ಶತಮಾನಗಳ ತ್ಯಾಗ, ತಪಸ್ಸು ಮತ್ತು ಹೋರಾಟದ ಮೂಲಕ ನಿರ್ಮಿಸಲಾದ ಈ ದೇವಾಲಯವು ನಮ್ಮ ಸಂಸ್ಕೃತಿ ಮತ್ತು ಆಧ್ಯಾತ್ಮಿಕತೆಯ ದೊಡ್ಡ ಪರಂಪರೆಯಾಗಿದೆ. ಅಭಿವೃದ್ಧಿ ಹೊಂದಿದ ಭಾರತದ ಸಂಕಲ್ಪವನ್ನು ಸಾಧಿಸುವಲ್ಲಿ ಈ ದೈವಿಕ ಮತ್ತು ಭವ್ಯವಾದ ರಾಮ ಮಂದಿರವು ದೊಡ್ಡ ಸ್ಫೂರ್ತಿಯಾಗಲಿದೆ ಎಂದು ನನಗೆ ವಿಶ್ವಾಸವಿದೆ ಎಂದು ಹೇಳಿದ್ದಾರೆ.

## ನಕ್ಸಲರ ಶರಣಾಗತಿ ಸಂಶಯ ಮೂಡಿಸುತ್ತಿದೆ: ಅಣ್ಣಾಮಲೈ

• **ಉದಯವಾಹಿನಿ, ಉಡುಪಿ**

ಎನ್‌ಕೌಂಟರ್ ಶುರು ಮಾಡಿದ ಬಳಿಕ ಸರ್ಕಾರವು ನಕ್ಸಲರನ್ನು ಶರಣಾಗತಿ ಮಾಡಿಸಿರುವುದು ಸಂಶಯ ಮೂಡಿಸುತ್ತಿದೆ ಎಂದು ಬಿಜೆಪಿ ತಮಿಳುನಾಡು ರಾಜ್ಯ ಘಟಕದ ಅಧ್ಯಕ್ಷ ಕೆ. ಅಣ್ಣಾಮಲೈ ಹೇಳಿದರು. ಸುದ್ದಿಗಾರರ ಜೊತೆ ಶನಿವಾರ ಇಲ್ಲಿ ಮಾತನಾಡಿ ಅವರು, ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಮ್ಮುಖದಲ್ಲಿ ಶರಣಾಗತಿ ಆಗುವುದು ಕ್ರಮ. ಆದರೆ ಇಲ್ಲಿ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಶರಣಾಗತಿಯಾಗಿರುವುದು ಸಂಶಯಕ್ಕೆ ಎಡೆಮಾಡಿ ಕೊಟ್ಟಿದೆ ಎಂದರು. ನಕ್ಸಲ್ ಶರಣಾಗತಿ ಮತ್ತು ಪುನರ್ವಸತಿ ನೀತಿ ರಾಜ್ಯದಲ್ಲಿದೆ. ನಕ್ಸಲರು ತಮ್ಮ ಚಟುವಟಿಕೆಗಳನ್ನು ತೊರೆದು, ಸಾಮಾನ್ಯ ಬದುಕಿಗೆ ಬರಲು ದಾರಿ ಮಾಡಿಕೊಡುವುದು ಇದರ ಉದ್ದೇಶವಾಗಿದೆ. ಆದರೆ ಇಲ್ಲಿ ಸರ್ಕಾರವು ನಕ್ಸಲರಿಗೆ ಶರಣಾಗತಿ ಪ್ರಕ್ರಿಯೆಗಳನ್ನು ಸುಲಭ ಮಾಡಿಕೊಟ್ಟಂತೆ ಕಾಣುತ್ತಿದೆ ಎಂದರು.

## ಸರ್ಕಾರವೇ ನಕ್ಸಲರಿಗೆ ಶರಣಾಗಿದೆ ಕೋಟ ಶ್ರೀನಿವಾಸ ಪೂಜಾರಿ

• **ಉದಯವಾಹಿನಿ, ಉಡುಪಿ**

ನಕ್ಸಲರು ಶಸ್ತ್ರಾಸ್ತ್ರಗಳನ್ನು ತ್ಯಜಿಸಿ ಮುಖ್ಯವಾಹಿನಿಗೆ ಬಂದರೆ ಅವರನ್ನು ಸ್ವೀಕರಿಸುವುದು ತಪ್ಪಲ್ಲ. ಆದರೆ ಮೊನ್ನೆ ನಕ್ಸಲರು ಸರ್ಕಾರಕ್ಕೆ ಶರಣಾದಂತೆ ತೋರಿಲ್ಲ. ಬದಲಾಗಿ ಸರ್ಕಾರವೇ ನಕ್ಸಲರಿಗೆ ಶರಣಾದಂತೆ ಭಾಸವಾಯಿತು ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಹೇಳಿದರು. ಸುದ್ದಿಗಾರರ ಜೊತೆ ಶನಿವಾರ ಮಾತನಾಡಿದ ಅವರು, ಈ ಹಿಂದೆ ಶರಣಾದವರಿಗೆ ಸೌಲಭ್ಯಗಳು ಲಭಿಸಿಲ್ಲ. ಅಲ್ಲದೆ ನಕ್ಸಲ್ ಪೀಡಿತ ಪ್ರದೇಶದ ಜನರಿಗೆ ಮೂಲ ಸೌಲಭ್ಯಗಳನ್ನು ಒದಗಿಸುವ ಕಾರ್ಯ ನಡೆದಿಲ್ಲ ಎಂದರು. ಸರ್ಕಾರವೇ ನಕ್ಸಲರಿಗೆ ಶರಣಾದಂತಹ ನೀತಿಯಿಂದಾಗಿ ಇನ್ನು ಮುಂದೆ ನಕ್ಸಲರು ಹೆಚ್ಚಾಗುವ ಆತಂಕವೂ ಕಾಡುತ್ತಿದೆ ಎಂದು ಹೇಳಿದರು.

## ಸಿಎಂ ಕಚೇರಿ ನಗರ ನಕ್ಸಲರ ಕಚೇರಿಯಾಗದಿರಲಿ: ಸುನಿಲ್

• **ಉದಯವಾಹಿನಿ, ಉಡುಪಿ**

ಮುಖ್ಯಮಂತ್ರಿ ಕಚೇರಿಯನ್ನು ಸಂಪೂರ್ಣವಾಗಿ ನಗರ ನಕ್ಸಲರು ಆವರಿಸಿಕೊಂಡಿರುವುದು ರಾಜ್ಯದ ಹಿತದೃಷ್ಟಿಯಿಂದ ಒಳ್ಳೆಯದಲ್ಲ. ಮುಖ್ಯಮಂತ್ರಿ ಕಚೇರಿ ಮುಖ್ಯಮಂತ್ರಿಗಳ ಕಚೇರಿಯಾಗಿರಬೇಕೇ ಹೊರತು ನಗರ ನಕ್ಸಲರ ಕಚೇರಿಯಾಗಬಾರದು ಎಂದು ಶಾಸಕ ವಿ. ಸುನಿಲ್ ಕುಮಾರ್ ಹೇಳಿದರು. ಸುದ್ದಿಗಾರರ ಜೊತೆ ಶನಿವಾರ ಇಲ್ಲಿ ಮಾತನಾಡಿದ ಅವರು, ಸರ್ಕಾರವು ನಗರ ನಕ್ಸಲರ ಕೈಗೊಂಬೆಯಂತೆ ಕೆಲಸ ಮಾಡುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಗರ ನಕ್ಸಲರ ಬಗ್ಗೆ ಮೃದು ಧೋರಣೆ ಬಿಟ್ಟು ದಿಟ್ಟ ನಿರ್ಧಾರ ಕೈಗೊಳ್ಳಬೇಕು ಎಂದರು. ಗಾಂಧಿವಾದಿ ಎನ್ನುತ್ತಿದ್ದ ಸಿದ್ದರಾಮಯ್ಯನವರು ತಮ್ಮ ರಾಜಕೀಯದ ಕೊನೆಯ ದಿನಗಳಲ್ಲಿ ಮಾವೋವಾದದತ್ತ ಹೊರಳುತ್ತಿರುವ ಹಾಗೆ ಅವರ ಧೋರಣೆಗಳಿಂದ ಭಾಸವಾಗುತ್ತಿದೆ ಎಂದು ಹೇಳಿದರು.

## ರಾಜ್ಯದ ಕಾಂಗ್ರೆಸ್ ಸರ್ಕಾರ ಪತನಗೊಳ್ಳುವುದು ಖಚಿತ

• **ಉದಯವಾಹಿನಿ, ಹುಬ್ಬಳ್ಳಿ**

ಮುಖ್ಯಮಂತ್ರಿ ಕುರ್ಚಿ ಕಿತ್ತಾಟ ಇನ್ನಷ್ಟು ಜೋರಾಗಲಿದ್ದು. ಇದರಿಂದ ರಾಜ್ಯದ ಕಾಂಗ್ರೆಸ್ ಸರ್ಕಾರ ಪತನಗೊಳ್ಳುವುದು ಖಚಿತ ಎಂದು ಸಂಸದ ಜಗದೀಶ ಶೆಟ್ಟರ ಭವಿಷ್ಯ ನುಡಿದರು. ಸಿಎಂ ಕುರ್ಚಿ ವಿಷಯವಾಗಿಯೇ ಔತಣಕೂಟ ಆರಂಭವಾಗಿದೆ.
ಪರಿಶಿಷ್ಟ ಜಾತಿ, ಪಂಗಡ ಶಾಸಕರು, ಸಚಿವರ ಔತಣಕೂಟಕ್ಕೆ ಡಿಸಿಎಂ ಡಿ.ಕೆ.ಶಿವಕುಮಾರ ಅಡ್ಡಗಾಲು ಹಾಕಿದ್ದಾರೆ. ತಮ್ಮ ವಿರುದ್ಧ ಪಕ್ಷದೊಳಗೆ ಷಡ್ಯಂತ್ರ ನಡೆಯುತ್ತಿದೆ ಎಂದೆನಿಸಿಯೇ ಡಿ.ಕೆ.ಶಿವಕುಮಾರ ಶತ್ರು ಸಂಹಾರ ಯಾಗ ಮಾಡಿಸಿದ್ದಾರೆ. ತೆರೆಮರೆಯಲ್ಲಿ ಇರುವ ಕಾಂಗ್ರೆಸ್ ಗುದ್ದಾಟ ಶೀಘ್ರದಲ್ಲೇ ಬೀದಿರಂಪವಾಗಲಿದೆ ಎಂದರು. ನಕ್ಸಲರ ಶರಣಾಗತಿ ಬಗ್ಗೆ ಸರ್ಕಾರ ಇಷ್ಟೊಂದು ವೈಭವೀಕರಿಸುವ ಅವಶ್ಯಕತೆ ಇರಲಿಲ್ಲ. ನಕ್ಸಲರು ಚಿಕ್ಕಮಗಳೂರು ಜಿಲ್ಲಾಧಿಕಾರಿಗಳ ಮುಂದೆ ಶರಣಾಗಬೇಕಾಗಿತ್ತು. ಕೊನೆ ಕ್ಷಣದಲ್ಲಿ ನಿಲುವು ಬದಲಿಸಿ ಸಿಎಂ ಎದುರು ಶರಣಾಗಿದ್ದು ಸರಿಯಲ್ಲ ಎಂದರು.

**6 ಮಂದಿ ನಕ್ಸಲೀಯರು ಮುಖ್ಯಮಂತ್ರಿ ಸಿದ್ದರಾಮಯ್ಯ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸಮ್ಮುಖದಲ್ಲಿ ಶರಣಾಗಿರುವ ಬೆನ್ನಲ್ಲೆ ಅಡಗಿಸಿಟ್ಟಿದ್ದ ಅಪಾರ ಪ್ರಮಾಣದ ಶಸ್ತ್ರಾಸ್ತ್ರ, ಮದ್ದು ಗುಂಡು ಪೊಲೀಸರು ಪತ್ತೆ ಹಚ್ಚಿ ವಶಪಡಿಸಿಕೊಂಡಿದ್ದಾರೆ. ಕೊಪ್ಪ ತಾಲ್ಲೂಕಿನ ಕಿತ್ತಲೆಗುಳಿ ಬಳಿಯ ಅರಣ್ಯ ಪ್ರದೇಶದಲ್ಲಿ ೬ ಬಂದೂಕು ಮತ್ತು ಮದ್ದುಗುಂಡುಗಳು ದೊರೆತಿವೆ. ಈ ಹಿಂದೆ ನಕ್ಸಲಿಸಂ ಅನ್ನು ತೊರೆದು ಮುಖ್ಯವಾಹಿನಿಗೆ ಬಂದಿದ್ದ ಆರು ನಕ್ಸಲರ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ಪೊಲೀಸರು ಶನಿವಾರ ವಶಕ್ಕೆ ಪಡೆದಿದ್ದಾರೆ. ನಕ್ಸಲರು ಇರಿಸಿದ್ದ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡಿದ್ದಾರೆ. ಎರಡು ದಿನಗಳ ನಿರಂತರ ಹುಡುಕಾಟದ ನಂತರ ಪೊಲೀಸರಿಗೆ ಮೇಗೂರು ಅರಣ್ಯ ಪ್ರದೇಶದಲ್ಲಿ ಆರು ಬಂದೂಕು ಹಾಗೂ ಮದ್ದು ಗುಂಡು ದೊರೆತಿವೆ. ಅಂತೆಯೇ ಒಂದು ಎ.ಕೆ-56, ಮೂರು 303 ರೈಫಲ್, ಹನ್ನೆರಡು ಬೋರ್ ಎಸ್‌ಬಿಬಿಎಲ್, ಒಂದು ಸ್ವದೇಶ ನಿರ್ಮಿತ ಬಂದೂಕು ಸಿಕ್ಕಿದೆ. 7.62 ಎಂಎಂ ಎ.ಕೆ. ಮದ್ದುಗುಂಡು-11, 303- ರೈಫಲ್ ಮದ್ದುಗುಂಡು – 133, 12 ಬೋರ್ ಕಾರ್ಟ್ರಿಡ್ಜಸ್ – 24, ಸ್ವದೇಶ ನಿರ್ಮಿತ ಪಿಸ್ತೂಲ್ ಮದ್ದುಗುಂಡುಗಳು – 8 ಸೇರಿ ಒಟ್ಟು 176 ಮದ್ದುಗುಂಡು, ಎ.ಕೆ-56 ಖಾಲಿ ಮ್ಯಾಗ್ಜಿನ್ – 01 ದೊರೆತಿದೆ.**

## ಕೊಪ್ಪ ತಾಲ್ಲೂಕಿನ ಮೇಗೂರು ಅರಣ್ಯದಲ್ಲಿ ಪತ್ತೆ





# ವಿಕ್ರಂ ಎನ್‌ಕೌಂಟರ್ ಶಂಕೆ
# ನಕ್ಸಲರ ಶಸ್ತ್ರಾಸ್ತ್ರ ವಶಕ್ಕೆ

**ಎರಡು ದಿನಗಳ ನಿರಂತರ ಹುಡುಕಾಟ**



ನಕ್ಸಲರು ಶರಣಾಗತಿಗೂ ಮುನ್ನ ಮೇಗೂರು ಅರಣ್ಯದಲ್ಲಿ ಅಡಗಿದ್ದರು. ಶರಣಾಗುವ ದಿನ ಮೇಗೂರು ಅರಣ್ಯದಲ್ಲೇ ಕೊನೆಯಬಾರಿಗೆ ಸಭೆ ನಡೆಸಿದ್ದರು. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದೆ ಶರಣಾಗಿದ್ದರು. ಶರಣಾಗತಿ ವೇಳೆ

### ಎಲ್ಲಿ ಸಿಕ್ಕವು ಶಸ್ತ್ರಾಸ್ತ್ರ

ಶಸ್ತ್ರಾಸ್ತ್ರ ಹಸ್ತಾಂತರವಾದ ಬಗ್ಗೆ ಚರ್ಚೆಯಾಗಿತ್ತು. ಈ ಹಿನ್ನೆಲೆಯಲ್ಲಿ ಕೊಪ್ಪ ಠಾಣೆ ಇನ್‌ಸ್ಪೆಕ್ಟರ್ ನೇತೃತ್ವದ ತಂಡ ಕಳೆದ ಎರಡು ದಿನಗಳಿಂದ ಹುಡುಕಾಟ ನಡೆಸಿ ಶಸ್ತ್ರಾಸ್ತ್ರಗಳನ್ನು ಪತ್ತೆಹಚ್ಚಿದೆ. ನಕ್ಸಲರು ಕೊನೆಯ ಬಾರಿಗೆ ಸಭೆ ನಡೆಸಿದ್ದ ಸ್ಥಳದಲ್ಲೇ ಶಸ್ತ್ರಾಸ್ತ್ರಗಳು ಪತ್ತೆಯಾಗಿವೆ ಎಂದು ಪೊಲೀಸ್ ಮೂಲಗಳಿಂದ ಮಾಹಿತಿ ದೊರೆತಿದೆ.

## ನಕ್ಸಲ್ ಕಾರ್ಯಾಚರಣೆ ಬಗ್ಗೆ ಶಸ್ತ್ರಾಸ್ತ್ರಗಳ ಬಗ್ಗೆ ಸಿಎಂ ಜನರಿಗೆ ಮಾಹಿತಿ ನೀಡಬೇಕು

• **ಉದಯವಾಹಿನಿ, ಬೆಂಗಳೂರು**

ಜಯಪುರ ಠಾಣೆಯಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ. ಶಸ್ತ್ರಾಸ್ತ್ರ ಕಾಯ್ದೆಯ ಸೆಕ್ಷನ್ 251 (1) (ಬಿ), 7 ಮತ್ತು 25 (1ಎ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಮ ಅಮಟೆ ತಿಳಿಸಿದ್ದಾರೆ. ಬುಧವಾರ ಮುಖ್ಯವಾಹಿನಿಗೆ ಬಂದ ನಕ್ಸಲರು, ಅದೇ ಮೇಗೂರು ಅರಣ್ಯದಿಂದ ಹೊರ ಬಂದಿದ್ದರು. ನಕ್ಸಲರು ಶರಣಾಗುವ ಮೊದಲು ಕೊನೆಯ ಸಭೆ ನಡೆಸಿದ್ದ ಮೇಗೂರು ಅರಣ್ಯ ಪ್ರದೇಶದಲ್ಲಿ ಪೊಲೀಸ್ ತಂಡ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿತ್ತು. ಕೊಪ್ಪ ಪೊಲೀಸ್ ಠಾಣೆ ಇನ್‌ಸ್ಪೆಕ್ಟರ್ ಮಂಜುನಾಥ್ ನೇತೃತ್ವದ ತಂಡ ಶಸ್ತ್ರಾಸ್ತ್ರಗಳನ್ನು ಪತ್ತೆಹಚ್ಚಿತ್ತು.

**ಸಿಎಂ ಸಿದ್ದರಾಮಯ್ಯ ಉಪಸ್ಥಿತಿಯಲ್ಲಿ ಶರಣಾಗತಿ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಗೃಹ ಕಚೇರಿಯಲ್ಲಿ ಅವರ ಮುಂದೆ ಶರಣಾಗಿದ್ದ ಆರು ನಕ್ಸಲರು ತಮ್ಮ ಶಸ್ತ್ರಾಸ್ತ್ರಗಳನ್ನು ಶರಣಾಗತಿ ಮಾಡಿರಲಿಲ್ಲ. ಅವರು ತಮ್ಮ ಹಸಿರು ಸಮವಸ್ತ್ರವನ್ನು ಸಾಂಕೇತಿಕವಾಗಿ ಸಿಎಂ ಸಿದ್ದರಾಮಯ್ಯ ಅವರಿಗೆ ಹಸ್ತಾಂತರಿಸಿ ತಮ್ಮ ಶರಣಾಗತಿಯನ್ನು ಘೋಷಿಸಿದ್ದರು. ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶರಣಾದ ಮಾವೋವಾದಿಗಳಿಗೆ ಗುಲಾಬಿಗಳು ಮತ್ತು ಭಾರತೀಯ ಸಂವಿಧಾನದ ಪ್ರತಿಗಳನ್ನು ನೀಡುವ ಮೂಲಕ ಅವರನ್ನು ಮುಖ್ಯವಾಹಿನಿಗೆ ಸ್ವಾಗತಿಸಿದರು. ಅಲ್ಲದೆ ಮಾವೋವಾದಿ ಚಳುವಳಿಯನ್ನು ನಿರ್ಮೂಲನೆ ಮಾಡುವುದು ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ಉದ್ದೇಶ, ಎಲ್ಲಾ ಪ್ರತಿಭಟನೆಗಳು ಶಾಂತಿಯುತವಾಗಿರಬೇಕು ಮತ್ತು ಹಿಂಸಾತ್ಮಕ ವಿಧಾನಗಳನ್ನು ಅಳವಡಿಸಿಕೊಳ್ಳಬಾರದು ಎಂದು ಹೇಳಿದರು, ಅದು ಅವರ ಸರ್ಕಾರದ ನಿಲುವು ಕೂಡ ಆಗಿದೆ. ಶರಣಾದ ಮಾವೋವಾದಿಗಳ ಬಂದೂಕುಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಸಿಎಂ ಸಿದ್ದರಾಮಯ್ಯ ಭರವಸೆ ನೀಡಿದ್ದರು.

**ಶಸ್ತ್ರಾಸ್ತ್ರಗಳಿಗೆ ಪ್ಯಾಕೇಜ್ ಘೋಷಣೆ:** ರಾಜ್ಯ ಸರ್ಕಾರ ಮಾವೋವಾದಿಗಳಿಗೆ ಶರಣಾದ ಶಸ್ತ್ರಾಸ್ತ್ರಗಳಿಗೆ ಪ್ಯಾಕೇಜ್ ಘೋಷಣೆ ಮಾಡಿದ್ದು, ಎಕೆ–47 ರೈಫಲ್‌ಗೆ 30,000 ರೂ; ಯುಪಿಎಂ, ಜಿಪಿಎಂ, ಆರ್‌ಪಿಜಿ, ಸ್ನೈಪರ್ ರೈಫಲ್‌ಗಳಿಗೆ 50,000 ರೂ; ಸ್ನೈಪರ್ ಕ್ಷಿಪಣಿಗೆ 40,000 ರೂ; ಒಂದು ಗ್ರೆನೇಡ್‌ಗೆ 2,000 ರೂ; ರಿವಾಲ್ವರ್/ಪಿಸ್ತೂಲ್‌ಗೆ 10,000 ರೂ; ರಾಕೆಟ್ ಲಾಂಚರ್‌ಗೆ 3,000 ರೂ; 1 ಕಿಲೋ ಸ್ಫೋಟಕಗಳಿಗೆ 4,000 ರೂ, ಸ್ಯಾಟಲೈಟ್ ಫೋನ್‌ಗೆ 20,000 ರೂ, ಪ್ರತಿ ಜೀವಂತ ಗುಂಡಿಗೆ 100 ರೂ ಎಂದು ನಿಗದಿಪಡಿಸಿದೆ ಎಂದು ಮೂಲಗಳು ತಿಳಿಸಿವೆ.

1 **ನಕ್ಸಲ್ ಕಾರ್ಯಾಚರಣೆ ಬಗ್ಗೆ ಶಸ್ತ್ರಾಸ್ತ್ರಗಳ ಬಗ್ಗೆ ಸಿಎಂ ಜನರಿಗೆ ಮಾಹಿತಿ ನೀಡಬೇಕು '**

2 **ನಕ್ಸಲ್ ಚಳುವಳಿಯನ್ನು ಬೇರು ಸಮೇತ ಹೊಸುಕಿ ಹಾಕುವ ಚಿಂತನೆ ಕೇಂದ್ರ ಸರ್ಕಾರ ಮಾಡುತ್ತಿದೆ**


3 **ಶರಣಾಗತಿಯಾದ ನಕ್ಸಲ್ ಎಷ್ಟು ಶಸ್ತ್ರಾಸ್ತ್ರಗಳು ಒಪ್ಪಿಸಿದ್ದಾರೆ? ಪ್ರಲ್ಹಾದ್ ಜೋಶಿ ಪ್ರಶ್ನೆ**

### ನಕ್ಸಲರಿಗೆ ವಿದೇಶಿದಿಂದ ಹಣದ ಸಹಾಯ

ನಕ್ಸಲರಿಗೆ ವಿದೇಶಿದಿಂದ ಹಣದ ಸಹಾಯವಾಗುತ್ತದೆ. ಇದರಲ್ಲಿ ನಮ್ಮ ರಾಜ್ಯದ ಯುವಕರು ಸಿಲುಕಿದ್ದಾರೆ. ನಕ್ಸಲ್ ಪ್ಯಾಕೇಜ್ ಇತರೇ ನಕ್ಸಲ್‌ರಿಗೆ ಸಲುಗೆಯಾಗದಿರಲಿ. ಆರು ಜನ ನಕ್ಸಲ್ ಶರಾಣಾದ್ರೆ ರಾಜ್ಯದಲ್ಲಿ ನಕ್ಸಲ್ ಚಳುವಳಿ ಮುಗಿತು ಅಂತ ಬಿಂಬಿಸಲಾಗುತ್ತಿದೆ. ಆಂಟಿ ನಕ್ಸಲ್ ತಂಡದ ಕಾರ್ಯಾಚರಣೆ ನಿಲ್ಲಿಸುತ್ತೇವೆ ಎನ್ನುವುದು ಎಷ್ಟರಮಟ್ಟಿಗೆ ಸರಿ...? ಎಂದು ಪ್ರಶ್ನಿಸಿದರು.



### ವಿಕ್ರಂ ಗೌಡನ ಎನ್‌ಕೌಂಟರ್ ಬಗ್ಗೆ ಸಂಶಯವಿದೆ..!



ಇನ್ನು ವಿಕ್ರಂ ಗೌಡನ ಎನ್‌ಕೌಂಟರ್ ಕೂಡಾ ಸಂಶಯಕ್ಕೆ ಕಾರಣವಾಗಿದೆ. ವಿಕ್ರಂ ಗೌಡ ಒಂದು ಮನೆಗೆ ಬಂದಿದ್ದರು, ಆ ಮನೆಯವರು ಮಾಧ್ಯಮಗಳಿಗೆ ಮಾಹಿತಿಯನ್ನೂ ನೀಡಿದ್ದರು. ಆ ಬಳಿಕ ತಕ್ಷಣ ಎನ್ಕೌಂಟರ್ ಸುದ್ದಿಯಾಗುತ್ತದೆ. ಎನ್‌ಕೌಂಟರ್ ಆದ ತಕ್ಷಣ ಶರಣಾಗತಿಯ ಬಗ್ಗೆ ಸರಕಾರ ಹೇಳುತ್ತದೆ. ಈ ಕಾರಣಕ್ಕಾಗಿಯೇ ಬಿಜೆಪಿ ಮುಖಂಡರು ಈ ಬಗ್ಗೆ ಆಕ್ಷೇಪ ವ್ಯಕ್ತಪಡಿಸುತ್ತಿದ್ದಾರೆ ಎಂದು ಹೇಳಿದರು.

## 2ಎ ಮೀಸಲಾತಿ 14ರಿಂದ 8ನೇ ಹಂತದ ಹೋರಾಟ: ಬಸವಜಯ ಮೃತ್ಯುಂಜಯ ಸ್ವಾಮೀಜಿ

• **ಉದಯವಾಹಿನಿ, ಬೆಳಗಾವಿ**

'ಪಂಚಮಸಾಲಿ ಸಮುದಾಯಕ್ಕೆ ಪ್ರವರ್ಗ '2ಎ' ಮತ್ತು ಲಿಂಗಾಯತ ಉಪ ಪಂಗಡಗಳಿಗೆ ಇತರೆ ಹಿಂದುಳಿದ ವರ್ಗಗಳ ಮೀಸಲಾತಿ ಕಲ್ಪಿಸಬೇಕು ಎಂದು ಆಗ್ರಹಿಸಿ, ಜ.14ರಂದು ಬೆಳಿಗ್ಗೆ 11ಕ್ಕೆ ಬಾಗಲಕೋಟೆ ಜಿಲ್ಲೆಯ ಕೂಡಲಸಂಗಮದ ಪಂಚಮಸಾಲಿ ಪೀಠದಿಂದ ಎಂಟನೇ ಹಂತದ ಹೋರಾಟಕ್ಕೆ ಚಾಲನೆ ಕೊಡಲಾಗುವುದು' ಎಂದು ಪೀಠಾಧ್ಯಕ್ಷ ಬಸವಜಯ ಮೃತ್ಯುಂಜಯ ಸ್ವಾಮೀಜಿ ಹೇಳಿದರು. ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಡಿಸೆಂಬರ್‌ನಲ್ಲಿ ಬೆಳಗಾವಿಯಲ್ಲಿ ವಿಧಾನಮಂಡಲ ಚಳಿಗಾಲದ ಅಧಿವೇಶನ ನಡೆದಾಗ, ಸರ್ಕಾರದ ಕುಮ್ಮಕ್ಕಿನಿಂದ ಪೊಲೀಸರು ನಮ್ಮ ಮೇಲೆ ಲಾಠಿಚಾರ್ಜ್ ಮಾಡಿದರು. ಲಾಠಿಚಾರ್ಜ್ ವೇಳೆ ಗಾಯಗೊಂಡ ಹೋರಾಟಗಾರರಿಗೆ 'ಲಿಂಗಾಯತ ಪಂಚಮಸಾಲಿ ಮೀಸಲಾತಿ ವೀರ' ಎಂಬ ಬಸವರಕ್ಷೆ ಕೊಡುತ್ತೇವೆ' ಎಂದರು. 'ಈ ಸಲ ರಾಜ್ಯದಾದ್ಯಂತ ಹಳ್ಳಿ-ಹಳ್ಳಿಗಳಲ್ಲಿ 'ಪಂಚಮಸಾಲಿ ಪ್ರತಿಜ್ಞಾ ಕ್ರಾಂತಿ ಅಭಿಯಾನ' ಮಾಡುತ್ತೇವೆ. ಜನರ ಬಳಿ ಹೋಗಿ ಅಭಿಪ್ರಾಯ ಸಂಗ್ರಹಿಸಿ, ನಮ್ಮ ಗುರಿ ಸಾಧಿಸುತ್ತೇವೆ. ಪಂಚಮಸಾಲಿ ಸಮುದಾಯದವರು ಇದರಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು' ಎಂದು ಕೋರಿದರು. 'ನಿಮ್ಮ ಸಮುದಾಯದ ಕೆಲವು ನಾಯಕರಿಂದಲೇ ಬೆಂಬಲ ಸಿಗುತ್ತಿಲ್ಲ ಏಕೆ' ಎಂಬ ಪ್ರಶ್ನೆಗೆ,' ಯಾವುದೋ ಕ್ಷಣದಲ್ಲಿ ಅವರು ಮೋಸ ಮಾಡಿದ್ದಾರೆ. ಮುಂದೆ ಮನಃ ಪರಿವರ್ತನೆ ಆಗಬಹುದು' ಎಂದು ಉತ್ತರಿಸಿದರು.

'ರಾಷ್ಟ್ರೀಯ ಬಸವ ಕೃಷಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಫೆ.12ರಂದು ನೆರವೇರಿಸಲಾಗುವುದು' ಎಂದೂ ಸ್ವಾಮೀಜಿ ತಿಳಿಸಿದರು. 'ನಿಮ್ಮ ಸಮುದಾಯದ ಕೆಲವು ನಾಯಕರಿಂದಲೇ ಬೆಂಬಲ ಸಿಗುತ್ತಿಲ್ಲ ಏಕೆ' ಎಂಬ ಪ್ರಶ್ನೆಗೆ, 'ಹೋರಾಟಕ್ಕೆ ಮೋಸ ಮಾಡಿದವರಿಗೆ ನಾವೇನೂ ಹೇಳುವುದಿಲ್ಲ. ಸಮುದಾಯದ ಜನರೇ ಅವರಿಗೆ ಪಾಠ ಕಲಿಸುತ್ತಾರೆ' ಎಂದರು.

**ರಾಷ್ಟ್ರೀಯ ಬಸವ ಕೃಷಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಫೆ.12ರಂದು**



# ಕಾಂಗ್ರೆಸ್ಸಿಗರ ಮಿಡ್‌ನೈಟ್ ಮೀಟಿಂಗ್ ನಡುವೆ ಕರ್ನಾಟಕ ಬಡವಾಗುತ್ತಿದೆ: ಬಿವೈವಿ

● ಒಂದು ಬಾರಿ 5 ವರ್ಷ ಕಾಲ ಮುಖ್ಯಮಂತ್ರಿಯಾಗಿದ್ದಾರೆ ● 2ನೇ ಬಾರಿಗೆ 2 ವರ್ಷ ಸಿಎಂ ಆಗಿದ್ದು, ಅವರೇ ಅಧಿಕಾರ ಬಿಟ್ಟುಕೊಡಬೇಕೆಂಬ ಚರ್ಚೆ

• **ಉದಯವಾಹಿನಿ, ಬೆಂಗಳೂರು**

ಕಾಂಗ್ರೆಸ್ಸಿಗರ ಮಿಡ್ ನೈಟ್ ಮೀಟಿಂಗ್ ನಡುವೆ ಕರ್ನಾಟಕ ಬಡವಾಗುತ್ತಿದೆ, ಜನರು ಪರಿತಪಿಸುವಂತಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಕ್ರೋಶ ಹೊರಹಾಕಿದ್ದಾರೆ. ನಗರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಬಿಜೆಪಿ ಕಾನೂನು ಪ್ರಕೋಷ್ಠದ ವಿಶೇಷ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಿದ್ದರಾಮಯ್ಯನವರು ಹೊರಗಡೆಯಿಂದ ಬಂದವರು ಎಂದು ಆಡಳಿತ ಪಕ್ಷದಲ್ಲಿ ಕೆಲವರಿಗೆ ಅನಿಸಿದೆ. ಒಂದು ಬಾರಿ 5 ವರ್ಷ ಕಾಲ ಮುಖ್ಯಮಂತ್ರಿಯಾಗಿದ್ದಾರೆ. ಎರಡನೇ ಬಾರಿಗೆ 2 ವರ್ಷ ಸಿಎಂ ಆಗಿದ್ದು, ಅವರೇ ಅಧಿಕಾರ ಬಿಟ್ಟುಕೊಡಬೇಕೆಂಬ ಚರ್ಚೆ ಈಗ ಕಾಂಗ್ರೆಸ್ಸಿನಲ್ಲಿ ಆರಂಭವಾಗಿದೆ ಎಂದು ವಿವರಿಸಿದರು. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಈಚೆಗೆ ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ ಬಹಳ ಮುಕ್ತವಾಗಿ ಮಾತನಾಡಿದ್ದರು.

25 ವರ್ಷಗಳ ಹಿಂದೆ ಅಂದಿನ ಮುಖ್ಯಮಂತ್ರಿಗಳು ಡಿ.ಕೆ.ಶಿವಕುಮಾರ್ ಅವರನ್ನು ಮಂತ್ರಿಮಂಡಲದಲ್ಲಿ ತೆಗೆದುಕೊಂಡಿರಲಿಲ್ಲ. ಆಗ ಅವರ ಗುರುಗಳು 'ಅಧಿಕಾರ ಸಿಗಲಿಲ್ಲ ಅಂದ್ರೆ ಅಧಿಕಾರವನ್ನು ಒದ್ದು ಕಿತ್ಕೊಳ್ಳಬೇಕು' ಎಂದಿದ್ದರಂತೆ, ಆಗ ಡಿ.ಕೆ.ಶಿವಕುಮಾರ್ ಅವರು ಅಧಿಕಾರವನ್ನು ಒದ್ದು ಕಿತ್ತೊಳ್ಳುವಲ್ಲಿ ಯಶಸ್ವಿಯಾಗಿದ್ದರು. 25 ವರ್ಷಗಳ ನಂತರ ಸಿದ್ದರಾಮಯ್ಯನವರು ಸಿಎಂ ಆಗಿ 2 ವರ್ಷ ಪೂರೈಸಿದ್ದು, ಅಧಿಕಾರ ಬಿಟ್ಟು ಕೊಡುವರೇ ಇಲ್ಲವೇ ಎಂಬ ಅನುಮಾನ ಅವರಿಗೆ ಕಾಡುತ್ತಿದೆ. ಆದ್ದರಿಂದ ಅವರು ಒದ್ದು ಕಿತ್ತೊಳ್ಳುವ ವಿಷಯವನ್ನು ನೆನಪು ಮಾಡಿಕೊಂಡಿದ್ದಾರೆ ಎಂದು ನುಡಿದರು. ಡಿ.ಕೆ.ಶಿವಕುಮಾರ್ ಎಂದರೆ ಹಠವಾದಿಗಳು, ಒದ್ದು ಕಿತ್ತುಕೊಳ್ಳುವ ವಿಷಯದಲ್ಲಿ ನಿಸ್ಸಿಮರು. ಹಾಗಾಗಿ ಆ ಪ್ರಕ್ರಿಯೆಗೆ ಅವರು ಚಾಲನ ನೀಡಿದ್ದಾರೆ. ಒಂದು ಕಡೆ ಸಿದ್ದರಾಮಯ್ಯನವರು ಅವರ ಅವಧಿ ಪೂರ್ಣವಾದರೂ ಬಿಟ್ಟು ಕೊಡಲು ಮನಸ್ಸು ಬರುತ್ತಿಲ್ಲ. ಸಚಿವರ ನೇತೃತ್ವದಲ್ಲಿ ಡಿಕೆ ಶಿವಕುಮಾರ್ ಇಲ್ಲದ ವೇಳೆ ಡಿನ್ನರ್ ಮೀಟಿಂಗ್ ಅವರು ಪ್ರಾರಂಭಿಸಿದ್ದಾರೆ. ಇನ್ನೊಂದೆಡೆ ವಿಳಂಬವಾಗಿ ಮಲಗುವ ಡಿ.ಕೆ.ಶಿವಕುಮಾರ್ ಲೇಟ್ ನೈಟ್ ಮೀಟಿಂಗ್ ಶುರುಮಾಡಿದ್ದಾರೆ ಎಂದು ತಿಳಿಸಿದರು.

ಈ ಸಭೆಗೆ 95 ಜನ ಅಪೇಕ್ಷಿತರಿದ್ದು, 85 ಜನರು ಭಾಗವಹಿಸಿದ್ದಾರೆ. ತಮಗೆಲ್ಲರಿಗೂ ಅಭಿನಂದನೆಗಳು ಎಂದು ತಿಳಿಸಿದರು. ಡಿನ್ನರ್ ಮೀಟಿಂಗ್, ಮಿಡ್‌ನೈಟ್ ಮೀಟಿಂಗ್‌ಗಳ ವಿಚಾರ ಪತ್ರಿಕೆಗಳಲ್ಲಿ– ಮಾಧ್ಯಮಗಳಲ್ಲಿ ಬಹಳಷ್ಟು ಚರ್ಚೆ ಆಗುತ್ತಿದೆ.

ಸಿದ್ದರಾಮಯ್ಯ– ಡಿ.ಕೆ.ಶಿವಕುಮಾರ್ ನಡುವೆ ಅವರ ಹೈಕಮಾಂಡಿನ ಮಟ್ಟದಲ್ಲಿ ಅಧಿಕಾರದ ಒಪ್ಪಂದ, ಸೂತ್ರ ಏರ್ಪಟ್ಟಿದೆ. ಅಭಿವೃದ್ಧಿ ಬಗ್ಗೆ ಒಪ್ಪಂದ ಆಗಿಲ್ಲ, ಅಧಿಕಾರ ಹಂಚಿಕೆ ಕುರಿತು ಒಪ್ಪಂದವಾದಂತಿದೆ ಎಂದು ವ್ಯಂಗ್ಯವಾಡಿದರು.

ಒಂದು ಕಡೆ ಸರಕಾರದ ಬೇಜವಾಬ್ದಾರಿಯಿಂದ ಸರಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರು, ನವಜಾತ ಶಿಶುಗಳ ಸರಣಿ ಸಾವು ಸಂಭವಿಸುತ್ತಿದೆ. ಭ್ರಷ್ಟಾಚಾರ ಮಿತಿ ಮೀರಿದೆ. ಸರಕಾರ ಆಡಳಿತಕ್ಕೆ ಬಂದು 2 ವರ್ಷಗಳು ಕಳೆದರೂ ಅಭಿವೃದ್ಧಿಯನ್ನು ಯಾವುದೇ ವಿಧಾನಸಭಾ ಕ್ಷೇತ್ರದಲ್ಲಿ ನೋಡಲು ಸಾಧ್ಯವಾಗದ ಸ್ಥಿತಿ ಇದೆ ಎಂದು ಟೀಕಿಸಿದರು. ಮುಖ್ಯಮಂತ್ರಿ ಉಪ ಮುಖ್ಯಮಂತ್ರಿಯವರು ಚುನಾವಣೆ ಹೊರತುಪಡಿಸಿ ಬೇರೆ ದಿನಗಳಲ್ಲಿ ರಾಜ್ಯದಾದ್ಯಂತ ಪ್ರವಾಸ ಮಾಡುತ್ತಿಲ್ಲ; ಅವರ ಪ್ರವಾಸ ಕೇವಲ ಬೆಂಗಳೂರಿಗೆ ಸೀಮಿತವಾಗಿದೆ ಎಂದು ಆಕ್ಷೇಪಿಸಿದರು.



**ಒದ್ದು ಕಿತ್ತೊಳ್ಳುವ ವಿಷಯ**

### ಅಭಿವೃದ್ಧಿಯ ವಿಚಾರ ಪ್ರಮುಖವಾಗಿಲ್ಲ

ರಾಜ್ಯ, ಬೆಂಗಳೂರು ಮಹಾನಗರದಲ್ಲಿ ರಸ್ತೆಗುಂಡಿ ಮುಚ್ಚಿಸುವ ಕೆಲಸವೂ ರಾಜ್ಯ ಸರಕಾರದಿಂದ ಆಗುತ್ತಿಲ್ಲ, 50 ಸಾವಿರ ಕೋಟಿಗೂ ಹೆಚ್ಚು ಮೊತ್ತದ ಅಂಡರ್ಗ್ರೌಂಡ್ ಟನೆಲ್ ರೋಡನ್ನು ಬೆಂಗಳೂರಿನಲ್ಲಿ ಮಾಡಲು ಡಿ.ಕೆ.ಶಿವಕುಮಾರ್ ಮುಂದಾಗಿದ್ದಾರೆ. ಇದರ ಕುರಿತು ಯಾರ ಜೊತೆಗೂ ಚರ್ಚೆಯನ್ನೂ ಮಾಡಿಲ್ಲ ಎಂದು ಟೀಕಿಸಿದರು. ಹಿಂದೆ ಟೆಸ್ಟ್ ಮ್ಯಾಚ್ ನೋಡುತ್ತಿದ್ದೀರಿ; ಬಳಿಕ ಏಕದಿನ ಪಂದ್ಯ ನಡೆಯುತ್ತಿತ್ತು. ಬಳಿಕ 20-20 ಮ್ಯಾಚ್‌ಗಳು ಜನಪ್ರಿಯವಾಗಿವೆ. ಹಾಗೇ ರಾಜ್ಯದ ಜನರು ಆಶೀರ್ವಾದ ಮಾಡಿ, ಸ್ಪಷ್ಟ ಬಹುಮತ ಕೊಟ್ಟು ಅಧಿಕಾರ ಹಂಚುವಿಕೆ ಬಗ್ಗೆ ಚರ್ಚೆ ಮುಖ್ಯವಾಗಿದೆಯೇ ಹೊರತು, ಅಭಿವೃದ್ಧಿಯ ವಿಚಾರ ಪ್ರಮುಖವಾಗಿಲ್ಲ ಎಂದು ಹೇಳಿದರು.

**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹7,964/Gram24ct ₹7,300/Gram22ct | ಬೆಳ್ಳಿ: ₹93.50/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

# ವೇದೋಽಖಿಲೋಧರ್ಮಮೂಲಂ

ಸ್ಮೃತಿಶೀಲೇ ಚ ತದ್ವಿದಾಮ್.
ಆಚಾರಶ್ಚೈವ ಸಾಧೂನಾಂ ಆತ್ಮನಸ್ತುಷ್ಟಿರೇವ ಚ.

ಮನುಸ್ಮೃತಿಯ ಎರಡನೆಯ ಅಧ್ಯಾಯದ ಶ್ಲೋಕ. ಋಗ್ವೇದ ಯಜುರ್ವೇದ ಸಾಮವೇದ ಹಾಗೂ ಅಥರ್ವವೇದ ಈ ನಾಲ್ಕು ವೇದಗಳು ಧರ್ಮದ ಸ್ವರೂಪವನ್ನು ಹೇಳಿವೆ. ಧರ್ಮ ವಿಷಯದಲ್ಲಿ ಇವೇ ಮೂಲ. ಇವುಗಳಲ್ಲದೇ ವೇದ ಬಲ್ಲವರು ಧರ್ಮ ತಿಳಿದವರು ಬರೆದ ಸ್ಮೃತಿಗಳು ಸದ್ಗ್ರಂಥಗಳು ಧರ್ಮಸ್ವರೂಪವನ್ನು ತಿಳಿಸುತ್ತವೆ. ಬಸವಾದಿ ಶರಣರ ವಚನಗಳು, ನಿಜಗುಣ ಶಿವಯೋಗಿಗಳ ಕನ್ನಡದ ವೇದಾಂತ ಗ್ರಂಥಗಳು ಮುಂತಾದವು ಈ ಸಾಲಿಗೆ ಸೇರುತ್ತವೆ. ಧರ್ಮ ಬಲ್ಲವರ ಶೀಲ ನಡೆಯೂ ಧರ್ಮದ ಮೂಲ ಪ್ರಮಾಣ ಎನಿಸುವುದು. ಶೀಲ ಎಂದರೆ ನಿರಂತರ ಇರುವ ಪವಿತ್ರ ಸ್ವಭಾವ. ದೇವರು ತಂದೆ ತಾಯಿಗಳಲ್ಲಿ ಭಕ್ತಿ, ಸೌಮ್ಯ ಸ್ವಭಾವ, ಅಸೂಯೆ ಇಲ್ಲದಿರುವುದು, ಒರಟಿಲ್ಲದಿರುವುದು, ಸ್ನೇಹಭಾವ, ಹಿತ ಮಿತ ಮೃದು ಮಾತು, ಕೃತಜ್ಞತೆ, ಶರಣಾಗತಿ, ಕರುಣೆ, ಪ್ರಶಾಂತತೆ ರಾಗದ್ವೇಷ ಇಲ್ಲದಿರುವುದು ಹೀಗೆ ಶೀಲ ಹಲವು ವಿಧ. ಸಾಧು ಸಜ್ಜನರ ಸದಾಚಾರವೂ ಧರ್ಮದ ವಿಚಾರದಲ್ಲಿ ಪ್ರಮಾಣ ಎನಿಸುವುದು. ಆದ್ದರಿಂದ ಜನರು ಸಾಧು ಸಂತರನ್ನು ಹಿಂಬಾಲಿಸುವರು. ಈ ಎಲ್ಲ ಮೂಲಗಳಿದ್ದಾಗ್ಯೂ ತನಗೆ ಧರ್ಮದ ಕುರಿತು ಸಂದೇಹ ಉಂಟಾದಲ್ಲಿ ತನ್ನ ಮನದಾಳಕ್ಕೆ ಇಳಿದು ಚಿಂತನ ಮಂಥನ ಮಾಡಿದ ಬಳಿಕ ಹೊಳೆಯುವ ಪರಿಹಾರ ಧರ್ಮದ ಪ್ರಮಾಣ ಆಗುವುದು. ಇದನ್ನೇ ಶರಣರು ಅರಿವೇ ಗುರು ಎಂದರು.

# ಶ್ರೀ ಹರಿಕಥಾಮೃತಸಾರ (ಪ್ರವಚನ)

• ಉದಯ ವಾಹಿನಿ, ಬೆಂಗಳೂರು



ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಜನವರಿ 12 ರಿಂದ 19ರ ವರೆಗೆ ಪ್ರತಿದಿನ ಸಂಜೆ 7-00 ಗಂಟೆಗೆ ಮ||ಶಾ||ಸಂ|| ಶ್ರೀ ಪ್ರಶಾಂತ ಭಾರ್ಗವಾಚಾರ್ಯರಿಂದ ಶ್ರೀ ಜಗನ್ನಾಥದಾಸರ ವಿರಚಿತ ಶ್ರೀ ಹರಿಕಥಾಮೃತಸಾರ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ : ಶ್ರೀ ಶ್ರೀನಿವಾಸ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಬೆಂಗಳೂರು-560003

# ಹೃದಯ ವಿದ್ರಾವಕ ಪ್ರೀತಿಗೆ ಒಪ್ಪಲಿಲ್ಲ ಅಂತ ಪ್ರೇಮಿಗಳು ಆತ್ಮಹತ್ಯೆ

• ಉದಯ ವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಹೃದಯ ವಿದ್ರಾವಕ ಘಟನೆ ನಡೆದಿದ್ದು, ಪ್ರೇಮಿಗಳಿಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ಬೆಂಗಳೂರಿನ ರಾಚೇನಹಳ್ಳಿಯಲ್ಲಿ ನಿನ್ನೆ ಜಾನ್ಸನ್ ಎಂಬಾತ ಆತ್ಮಹತ್ಯೆ ಮಾಡಿಕೊಂಡಿದ್ದ. ಸಂಪಿಗೆಯಲ್ಲಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿತ್ತು. ಜಾನ್ಸನ್ ದಿಲ್ಶಾದ್ ಎಂಬ ವಿವಾಹಿತ ಮಹಿಳೆಯನ್ನು ಪ್ರೀತಿಸುತ್ತಿದ್ದ. ಆದರೆ ಪ್ರೀತಿಗೆ ಸಮಾಜ ಒಪ್ಪುವುದಿಲ್ಲ ಎಂದು ಜಾನ್ಸನ್ ಆತ್ಮಹತ್ಯೆ ಮಾಡಿಕೊಂಡಿದ್ದ. ಜಾನ್ಸನ್ ಆತ್ಮಹತ್ಯೆಯಿಂದ ಮನನೊಂದ ದಿಶ್ಯಾದ್ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಶ್ರೀರಾಂಪುರ ಠಾಣಾ ವ್ಯಾಪ್ತಿಯ ಅಮೃತಹಳ್ಳಿಯಲ್ಲಿ ದಿಲ್ಶಾದ್ ಆತ್ಮಹತ್ಯೆ ಮಾಡಿಕೊಂಡಿದ್ದು, ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಕನ್ನಡ ಸಿನಿಮಾ ಸ್ಪರ್ಧಾ ವಿಭಾಗಕ್ಕೆ ಚಲನಚಿತ್ರಗಳ ಆಹ್ವಾನ

• ಉದಯ ವಾಹಿನಿ, ಬೆಂಗಳೂರು

16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವವನ್ನು ಮಾರ್ಚ್ 1 ರಿಂದ 8ರ ವರೆಗೆ ಹಮ್ಮಿಕೊಳ್ಳಲಾಗಿದ್ದು, ಸರ್ವಜನಾಂಗದ ಶಾಂತಿಯ ತೋಟ ಘೋಷವಾಕ್ಯದಡಿ ನಡೆಯಲಿದೆ. ಈ ಹಿನ್ನೆಲೆ ಮೂರು ಸ್ಪರ್ಧಾ ವಿಭಾಗಗಳಿಗೆ ಅರ್ಹ ಚಲನಚಿತ್ರಗಳನ್ನು ಆಹ್ವಾನಿಸಲಾಗಿದೆ. ಕನ್ನಡ ಸಿನಿಮಾ ಸ್ಪರ್ಧಾ ವಿಭಾಗದ ಆಯ್ಕೆಗಾಗಿ ಸಲ್ಲಿಸಬೇಕಾದ ಕಥಾ ಚಿತ್ರಗಳು ಕನಿಷ್ಠ 70 ನಿಮಿಷದ ಅವಧಿಯದ್ದಾಗಿರಬೇಕು. ಜನವರಿ 1, 2024 ರಿಂದ ಡಿಸೆಂಬರ್ 31, 2024ರ ಒಳಗೆ ನಿರ್ಮಾಣಗೊಂಡಿರಬೇಕು. ಕನ್ನಡ ಮತ್ತು ಕರ್ನಾಟಕ ರಾಜ್ಯದ ಯಾವುದೇ ಉಪಭಾಷೆಯಲ್ಲಿ ತಯಾರಾಗಿರುವ ಕಥಾಚಿತ್ರಗಳನ್ನು ಕಳುಹಿಸಬಹುದು. ಚಲನಚಿತ್ರಗಳನ್ನು ಸಲ್ಲಿಸುವ ಪ್ರಕ್ರಿಯೆಯು 2025ರ ಜನವರಿ 9 ರಿಂದ ಆರಂಭವಾಗಿದ್ದು, ಅರ್ಜಿ ಸಲ್ಲಿಕೆಗೆ ಜನವರಿ 23ರವರೆಗೆ ಅವಕಾಶವಿದೆ.

# ಲೋಕಾಯುಕ್ತ ಬಲೆಗೆ ಬಿದ್ದ ಮತ್ತೊಬ್ಬ ಬಿಬಿಎಂಪಿ ಅಧಿಕಾರಿ

• ಉದಯ ವಾಹಿನಿ, ಬೆಂಗಳೂರು

ಭ್ರಷ್ಟ ಅಧಿಕಾರಿಗಳನ್ನು ಬಲೆ ಹಾಕುವಲ್ಲಿ ಲೋಕಾಯುಕ್ತ ಅಧಿಕಾರಿಗಳ ದಾಳಿ ಮುಂದುವರೆದಿದ್ದು, ಇದೀಗ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ದಾಸರಹಳ್ಳಿ ವಲಯ ಕಚೇರಿ ಮೇಲೆ ಮಾಡಿರುವ ಲೋಕಾಯುಕ್ತ ಅಧಿಕಾರಿಗಳು ಯದುಕೃಷ್ಣ ಹೆಸರಿನ ಅಧಿಕಾರಿಯೊಬ್ಬರನ್ನು ಲಂಚದ ದುಡ್ಡು ಸಮೇತ ಬಲೆಗೆ ಕೆಡವಿದ್ದಾರೆ. ಹೌದು ಕಾಮಗಾರಿ ಟೆಂಡರ್ ವಿಭಾಗದಲ್ಲಿ ಎಕ್ಸಿಕ್ಯೂಟಿವ್ ಇಂಜಿನೀಯರ್ ಆಗಿ ಯದುಕೃಷ್ಣ ಕೆಲಸ ಮಾಡುತ್ತಿದ್ದರು. ಈ ವೇಳೆ ಕಚೇರಿಯ ಮೇಲೆ ದಾಳಿ ಮಾಡಿದ ಲೋಕಾಯುಕ್ತ ಪೊಲೀಸರು ಅವರಿಗೆ ಸೇರಿದಂತಹ ಕಾರಿನಿಂದ ದಾಖಲೆ ಇಲ್ಲದ ಸುಮಾರು 2.6 ಲಕ್ಷ ನಗದು ಹಣವನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಇದೆ ವೇಳೆ ಯದುಕೃಷ್ಣ ಅವರನ್ನು ವಶಕ್ಕೆ ಪಡೆದು ಅಧಿಕಾರಿಗಳು ವಿಚಾರಣೆ ನಡೆಸುತ್ತಿದ್ದಾರೆ.

# ಯಾವ ಪವರ್ರೂ ಇಲ್ಲ, ಯಾವ ಶೇರಿಂಗೂ ಇಲ್ಲ, ಸಿದ್ದರಾಮಯ್ಯರೇ ಸಿಎಂ

## ಯಾವುದೇ ಸ್ವಾಮೀಜಿಗಳು ನಮ್ಮ ಸರ್ಕಾರದ ಬಗ್ಗೆ ಭವಿಷ್ಯ ನುಡಿಯುವುದು ಬೇಡ ಎಂದು ಮನವಿ

• ಉದಯ ವಾಹಿನಿ, ಬೆಂಗಳೂರು

ಕಾಂಗ್ರೆಸ್ ಪಾಳಯದಲ್ಲಿ ಮುಖ್ಯಮಂತ್ರಿ ಪಟ್ಟದ ಆಟಕ್ಕೆ ರೋಚಕ ಟ್ವಿಸ್ಟ್ ಸಿಕ್ಕಿದೆ. ಮುಖ್ಯಮಂತ್ರಿ ಬದಲಾವಣೆ ಕುರಿತು ಚರ್ಚೆ ನಡೆಯುತ್ತಿರುವ ಹೊತ್ತಲ್ಲೇ ಡಿಸಿಎಂ ಡಿ ಕೆ ಶಿವಕುಮಾರ್ ಪವರ್ ಶೇರಿಂಗ್, ಡಿನ್ನರ್ ಪಾಲಿಟಿಕ್ಸ್ ಹಾಗೂ ಸಿಎಂ ಬದಲು ಚರ್ಚೆಗೆ ಫುಲ್ ಸ್ಟಾಪ್ ಹಾಕುವ ಪ್ರಯತ್ನವನ್ನ ಡಿಸಿಎಂ ಡಿ ಕೆ ಶಿವಕುಮಾರ್ ಮಾತನಾಡಿದ್ದಾರೆ. ಈ ಕುರಿತು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಯಾವ ಪವರ್ ಇಲ್ಲ, ಯಾವ ಶೇರಿಂಗ್ ಇಲ್ಲ. ಐದು ವರ್ಷ ಕಾಂಗ್ರೆಸ್ ಸರ್ಕಾರ ಇರಲಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಸಿದ್ದರಾಮಯ್ಯ ಅವರು ರಾಜ್ಯದ ಮುಖ್ಯಮಂತ್ರಿಗಳಾಗಿದ್ದು ನಾವೆಲ್ಲರೂ ಒಟ್ಟಾಗಿ ಕೆಲಸ ಮಾಡುತ್ತಿದ್ದೇವೆ. ಪವರ್ ಶೇರಿಂಗ್ ಬಗ್ಗೆ ಚರ್ಚೆ ಆಗುತ್ತಿರುವಾಗ ಈ ಹೇಳಿಕೆ ಬಂದಿದೆ ಎಂಬ ಬಗ್ಗೆಯೂ ಮಾತನಾಡಿ, ಯಾವ ಪವರ್ ಇಲ್ಲ, ಶೇರು ಇಲ್ಲ. ಐದು ವರ್ಷ ಕಾಂಗ್ರೆಸ್ ಸರ್ಕಾರ ಇರುತ್ತದೆ ಎಂದರು.

ಇದೇ ಅವಧಿಯಲ್ಲಿ ನೀವು ಸಿಎಂ ಆಗುತ್ತೀರಿ ಎಂಬ ವಿನಯ್ ಗುರೂಜಿ ಅವರ ಹೇಳಿಕೆ ಬಗ್ಗೆ ಮಾತನಾಡಿ, ನಮ್ಮ ಸರ್ಕಾರ



ಉದಯವಾಹಿನಿ ಚಿತ್ರ

**ಏಕಾಏಕಿ ಡಿಕೆಶಿ ಹೀಗೆ ಹೇಳಿದ್ಯಾಕೆ?**

ಸುಭದ್ರವಾಗಿದ್ದು, ಯಾವುದೇ ಸ್ವಾಮೀಜಿಗಳು ನಮ್ಮ ಸರ್ಕಾರದ ಬಗ್ಗೆ ಭವಿಷ್ಯ ನುಡಿಯುವುದು ಬೇಡ ಎಂದು ಮನವಿ ಮಾಡುತ್ತೇನೆ.

ಕೇಂದ್ರದ ಬಳಿ ನಮ್ಮ ತೆರಿಗೆ ನಮ್ಮ ಹಕ್ಕಿಗಾಗಿ ನಾವು ಹೋರಾಟ ಮಾಡಲೇ ಬೇಕು. ನಮ್ಮ ರಾಜ್ಯದ ಹಿತವನ್ನು ಕಾಪಾಡಲೇಬೇಕು ಎಂದು ಡಿಸಿಎಂ ಡಿ. ಕೆ. ಶಿವಕುಮಾರ್ ಅವರು ಹೇಳಿದರು. ಬಿಜೆಪಿಯ ಇಷ್ಟೊಂದು ಜನ ಸಂಸದರು ಏಕೆ ಮೌನವಾಗಿ ಇದ್ದಾರೆ ಎಂಬುದು ನನಗೆ ಅರ್ಥವಾಗುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

> **ಸಿ ಟಿ ರವಿ ಒಬ್ಬ ದೊಡ್ಡ ಡ್ರಾಮಾ ಮಾಸ್ಟರ್. ಸುಳ್ಳಿಗೆ ಸುಳ್ಳು ಪೋಣಿಸಿ ಕತೆ ಹೆಣೆಯುವುದರಲ್ಲಿ ನಿಸ್ಸಿಮ ಎಂದು ಡಿಸಿಎಂ ಡಿ ಕೆ ಶಿವಕುಮಾರ್ ಅವರು ಟೀಕಿಸಿದ್ದಾರೆ. ಸಿ.ಟಿ. ರವಿ ದೊಡ್ಡ ಡ್ರಾಮಾ ಮಾಸ್ಟರ್ ಆಗಿದ್ದಾರೆ. ಅವರನ್ನು ರಾಷ್ಟ್ರೀಯ ನಾಯಕರು, ಬಿಜೆಪಿ ರಾಷ್ಟ್ರೀಯ ಪದಾಧಿಕಾರಿ ಎಂದು ಭಾವಿಸಿದೆ. ಅವರ ಮಾತು, ವಿಚಾರ ನೋಡಿದ ನಂತರ ಇಷ್ಟು ಕೀಳು ಮಟ್ಟಕ್ಕೆ ಇಳಿಯುತ್ತಾರೆ ಎಂದು ನಿರೀಕ್ಷೆ ಮಾಡಿರಲಿಲ್ಲ ಎಂದು ಹೇಳಿದರು.**

ನೀರಾವರಿ ಮತ್ತು ನಗರಾಭಿವೃದ್ಧಿಗೆ ನೀಡುವ ಅನುದಾನದ ವಿಚಾರದಲ್ಲಿ ಕೇಂದ್ರ ಸರ್ಕಾರ ಕೊಟ್ಟ ಮಾತನ್ನು ಉಳಿಸಿಕೊಂಡಿಲ್ಲ. ರಾಜ್ಯದ ಪಾಲಿನ ತೆರಿಗೆ ಅನ್ಯಾಯವನ್ನು ಕಾನೂನಾತ್ಮಕವಾಗಿ ಹೇಗೆ ಎದುರಿಸಬೇಕು ಎಂಬುದನ್ನು ನಮ್ಮ ಮುಖ್ಯಮಂತ್ರಿಗಳು ಅಧ್ಯಯನ ಮಾಡುತ್ತಿದ್ದಾರೆ. ರಾಜ್ಯ ಬಜೆಟ್ ಮಂಡನೆ ವೇಳೆಗೆ ಈ ಅಸಮಾನ ಹಂಚಿಕೆಗೆ ನಾವು

> **ಆದರೆ ಮೊಸರಲ್ಲಿ ಕಲ್ಲು ಹುಡುಕುವ ಪ್ರಯತ್ನ ಮಾಡಲಾಗುತ್ತಿದೆ. ಚುನಾವಣೆಗೆ ಇನ್ನು ಸಮಯವಿದೆ. ಚುನಾವಣೆ ಬಂದಾಗ ರಾಜಕೀಯ ಮಾಡಲಿ. ಈಗ ರಾಜ್ಯದ ಪ್ರಗತಿ ಬಗ್ಗೆ ಚರ್ಚೆ ಮಾಡಿ, ರಾಜ್ಯ ಹಾಗೂ ದೇಶ ಉಳಿಸುವ ಕೆಲಸ ಮಾಡೋಣ ಎಂದು ತಿರುಗೇಟು ನೀಡಿದರು.**

ಉತ್ತರ ಕೊಡುತ್ತೇವೆ ಎಂದು ಹೇಳಿದರು.

ಈ ಪ್ರಕರಣದಲ್ಲಿ ಅವರು ಬೇರೆ ಯಾರ ಮಾತು ಕೇಳಬೇಕಿಲ್ಲ. ಅವರ ಆತ್ಮಸಾಕ್ಷಿ ಮಾತನ್ನು ಕೇಳಲಿ. ಆ ರೀತಿ ಮಾತನಾಡಬಾರದಿತ್ತು ಎಂದು ಅವರ ಪಕ್ಷದ ನೂರು ನಾಯಕರು ನನ್ನ ಬಳಿ ಹೇಳಿದ್ದಾರೆ. ಅಚಾತುರ್ಯವಾಗಿ ಆ ರೀತಿ ಮಾತಾಡಿದ್ದೇನೆ ಕ್ಷಮೆ ಕೇಳುತ್ತೇನೆ ಎಂದಿದ್ದರೆ ಪ್ರಕರಣ ಮುಗಿಯುತ್ತಿತ್ತು ಅದನ್ನು ಬಿಟ್ಟು ಸುಳ್ಳಿಗೆ ಸುಳ್ಳು ಸೇರಿಸಿಕೊಂಡು ಹೋದರೆ ಪ್ರಯೋಜನವಿಲ್ಲ. ಅವರ ಆರೋಪ ಸುಳ್ಳು. ಅವರದ್ದೇ ಅನೇಕ ತನಿಖಾ ತಂಡಗಳಿವೆಯಲ್ಲ ತನಿಖೆ ಮಾಡಿಸಲಿ ಎಂದು ಕಿಡಿಕಾರಿದರು.

# ಜನವರಿ 13 ಮತ್ತು 14ರಂದು ಬೆಂಗಳೂರಲ್ಲಿ ಮೊದಲ ಮಳೆ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

ಮುಂದಿನ ದಿನಗಳಲ್ಲಿ ಬೆಂಗಳೂರಿನಲ್ಲಿ ಹವಾಮಾನ ಬದಲಾವಣೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಜನವರಿ 13 ಮತ್ತು 14 ರಂದು ಕರ್ನಾಟಕದ ರಾಜಧಾನಿಯಲ್ಲಿ ಮೊದಲ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಮಳೆಯು ತಾಪಮಾನದಲ್ಲಿ ಕುಸಿತಕ್ಕೆ ಕಾರಣವಾಗಬಹುದು ಎಂದು ಅದು ಹೇಳಿದೆ. ಆಗ್ನೇಯ ಬಂಗಾಳಕೊಲ್ಲಿಯಲ್ಲಿ ರೂಪುಗೊಳ್ಳುತ್ತಿರುವ ಚಂಡಮಾರುತದ ಪರಿಚಲನೆಯಿಂದಾಗಿ ಹವಾಮಾನದಲ್ಲಿ ಬದಲಾವಣೆ ನಿರೀಕ್ಷಿಸಲಾಗಿದೆ ಎಂದು ಹವಾಮಾನ ಇಲಾಖೆ ಸ್ಪಷ್ಟಪಡಿಸಿದೆ. ಇದಲ್ಲದೆ, ಬೆಂಗಳೂರಿನ ಹಲವಾರು ಭಾಗಗಳಲ್ಲಿ ಆಳವಿಲ್ಲದ ಮತ್ತು ಮಧ್ಯಮ ಮಂಜು ಬೀಳುವ



ಉದಯವಾಹಿನಿ ಚಿತ್ರ

**ಹವಾಮಾನ ಇಲಾಖೆ ಮುನ್ಸೂಚನೆ**

ಸಾಧ್ಯತೆಯಿದೆ ಎಂದು ಇಲಾಖೆ ಮಾಹಿತಿ ನೀಡಿದೆ. ಬಂಗಾಳಕೊಲ್ಲಿಯಲ್ಲಿ ಬೀಸುವ ಗಾಳಿಯಿಂದಾಗಿ ಕನಿಷ್ಠ ತಾಪಮಾನದಲ್ಲಿ ಹೆಚ್ಚಳವಾಗಿದೆ ಎಂದು ಬೆಂಗಳೂರಿನ ಹವಾಮಾನ ಕೇಂದ್ರದ ಮುಖ್ಯಸ್ಥ ಎನ್ .ಪುವಿಯರಸನ್ ತಿಳಿಸಿದ್ದಾರೆ.

ಕಳೆದ ಎರಡು ದಿನಗಳಿಂದ 16.3 ಡಿಗ್ರಿ ಸೆಲ್ಸಿಯಸ್ ಮತ್ತು 17.3 ಡಿಗ್ರಿ ಸೆಲ್ಸಿಯಸ್ ನಡುವೆ ಹೆಚ್ಚಿನ ಕನಿಷ್ಠ ತಾಪಮಾನವನ್ನು ದಾಖಲಿಸಿರುವುದರಿಂದ ಜನವರಿಯಲ್ಲಿ ಇಲ್ಲಿಯವರೆಗೆ ನಗರವು ಬೆಚ್ಚಗಿದೆ. ನಗರದಲ್ಲಿ ಸರಾಸರಿ ದೈನಂದಿನ ತಾಪಮಾನ 15.8 ಡಿಗ್ರಿ ಸೆಲ್ಸಿಯಸ್ ಎಂದು ಐಎಂಡಿ ಮಾಹಿತಿ ನೀಡಿದೆ.

ಎಚ್‌ಎಎಲ್ ವಿಮಾನ ನಿಲ್ದಾಣದಲ್ಲಿ 16.3 ಡಿಗ್ರಿ ಸೆಲ್ಸಿಯಸ್, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ 17 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.ಬೆಂಗಳೂರಿನಲ್ಲಿ ಕನಿಷ್ಠ ತಾಪಮಾನವು ಸಾಮಾನ್ಯಕ್ಕಿಂತ ಹೆಚ್ಚಾಗಿದ್ದರೂ, ಜನವರಿ ಮಧ್ಯದ ನಂತರ ಹವಾಮಾನವು ಗಮನಾರ್ಹವಾಗಿ ಬದಲಾಗುತ್ತದೆ ಎಂದು ಹವಾಮಾನ ಇಲಾಖೆ ಸ್ಪಷ್ಟಪಡಿಸಿದೆ.

# ವಿನಯ್ ಕುಲಕರ್ಣಿ ಬಳಸುತ್ತಿದ್ದ ಮತ್ತೊಂದು ಕಾರು ಸೀಜ್

• ಉದಯ ವಾಹಿನಿ, ಬೆಂಗಳೂರು

ಮಾಜಿ ಸಂಸದ ಡಿಕೆ ಸುರೇಶ್ ಸಹೋದರಿ ಎಂದು ಹೇಳಿ ವಂಚನೆ ಎಸಗಿದ್ದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇದೀಗ ಆರೋಪಿ ಐಶ್ವರ್ಯ ಗೌಡ ವಂಚನೆ ಪ್ರಕರಣದ ಕುರಿತು ಶಾಸಕ ವಿನಯ್ ಕುಲಕರ್ಣಿ ಬಳಸುತ್ತಿದ್ದ ಕಾರನ್ನು ಸೀಜ್ ಮಾಡಲಾಗಿದೆ.

ವಿನಯ್ ಕುಲಕರ್ಣಿ ಬಳಸುತ್ತಿದ್ದ ಕಾರನ್ನು ಇದೀಗ ಪೊಲೀಸರು ಸೀಜ್ ಮಾಡಿದ್ದಾರೆ ಎಂದು ತಿಳಿದುಬಂದಿದೆ. ಹೌದು ಐಶ್ವರ್ಯ ಪತಿ ಹರೀಶ್ ಗೌಡ ಹೆಸರಲಿದ್ದ ಮತ್ತೊಂದು ಕಾರು ಇದೀಗ ಪೊಲೀಸರು ಜಪ್ತಿ ಮಾಡಿದ್ದಾರೆ. ಈ ದಿನ ಐಶ್ವರ್ಯ ಬಳಿ ಇದ್ದಂತಹ ಮೂರು ಕಾರುಗಳನ್ನು ಪೊಲೀಸರು ಸೀಜ್ ಮಾಡಿದ್ದು, ಈ ಹಿಂದೆ ಐಶ್ವರ್ಯ ಪತಿ ಹರೀಶ್ ಹೆಸರಿನಲ್ಲಿದ್ದ ಮೂರು ಐಷಾರಾಮಿ ಕಾರುಗಳನ್ನು ಸೀಸ್ ಮಾಡಿದ್ದರು. ಇದೀಗ ಶಾಸಕ ವಿನಯ್ ಕುಲಕರ್ಣಿ ಅವರು ಬಳಸುತ್ತಿದ್ದ ಕಾರನ್ನು ಕೂಡ ಪೊಲೀಸರು ಸೀಜ್ ಮಾಡಿದ್ದಾರೆ. ಆಡಿ, ಬಿಎಂಡಬ್ಲ್ಯೂ ಹಾಗೂ



ಉದಯವಾಹಿನಿ ಚಿತ್ರ

ಫಾರ್ಚುನರ್ ಕಾರನ್ನು ಸೀಜ್ ಮಾಡಿದ್ದರು. ಇದೀಗ ಮತ್ತೊಂದು ಕಾರನ್ನು ಪೊಲೀಸರು ಸೀಜ್ ಮಾಡಿದ್ದಾರೆ ಎಂದು ತಿಳಿದುಬಂದಿದೆ. ವಂಚನೆ ಮಾಡಿದ ಹಣದಿಂದ ಐಶ್ವರ್ಯ ಗೌಡ ಕಾರು ಖರೀದಿಸಿದ್ದಳು.

ಶಾಸಕ ವಿನಯ್ ಕುಲಕರ್ಣಿಗೆ ಇದೆ ವಂಚನೆ ಹಣದಿಂದ ಐಶ್ವರ್ಯ ಗೌಡ ಕಾರನ್ನು ಗಿಫ್ಟ್ ಆಗಿ ನೀಡಿದ್ದಳು ಎನ್ನಲಾಗಿದೆ. ಇದೀಗ ಕುಲಕರ್ಣಿ ಬಳಿ ಇದ್ದ ಕಾರನ್ನು ಪೊಲೀಸರು ಸೀಜ್ ಮಾಡಿದ್ದಾರೆ. ಸೀಜ್ ಮಾಡಿದ ಕಾರನ್ನು ಇದೀಗ ಪೊಲೀಸರು ಆರ್ ಆರ್ ನಗರ ಠಾಣೆಗೆಯಲ್ಲಿ ತಂದು ನಿಲ್ಲಿಸಿದ್ದಾರೆ.

# ಚಂದನ್ ಶೆಟ್ಟಿ ಮೇಲೆ ಟ್ಯೂನ್ ಕದ್ದ ಆರೋಪ

• ಉದಯವಾಹಿನಿ, ಬೆಂಗಳೂರು

ಚಂದನ್ ಶೆಟ್ಟಿ ನ್ಯೂ ಇಯರ್ ಹೊಸ್ತಿಲಿನಲ್ಲಿ 'ಕಾಟನ್ ಕ್ಯಾಂಡಿ' ಹೆಸರಿನ ಹಾಡು ಬಿಡುಗಡೆ ಮಾಡಿದ್ದಾರೆ.ಚಂದನ್ ಶೆಟ್ಟಿ ವಿರುದ್ಧ ಕನ್ನಡದ ರ್ಯಾಪರ್ ಒಬ್ಬರು ಇದೀಗ ಕೃತಿ ಚೌರ್ಯ ಆರೋಪ ಮಾಡಿದ್ದಾರೆ. ರಾಕ್‌ಸ್ಟಾರ್ ಯುವರಾಜ್ 'ಕಾಟನ್ ಕ್ಯಾಂಡಿ' ಟ್ಯೂನ್ ನನ್ನ ಈ ಹಿಂದಿನ ಪಾರ್ಟಿ ಸಾಂಗ್ ನಕಲಿನಂತೆಯೇ ಇದ್ದು, ದೂರು ನೀಡಲು ನಿರ್ಧಾರ ಮಾಡಿದ್ದಾರೆ ಎನ್ನಲಾಗಿದೆ. 'ಕಾಟನ್ ಕ್ಯಾಂಡಿ' ಸಿನಿಮಾದ ಹಾಡಿನ ಕೆಲ ಸಾಲುಗಳು, ಯುವರಾಜ್ ಅವರ ಹಳೆಯ ಹಾಡನ್ನು ಹೋಲುತ್ತಿವೆ ಎಂಬುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಆದರೆ ಚಂದನ್ ಶೆಟ್ಟಿ ಈ ಬಗ್ಗೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.





ಉದಯವಾಹಿನಿ ಚಿತ್ರ

**ಚಂದನ್ ಶೆಟ್ಟಿ ಎದುರಾಯ್ತಾ? ಸಂಕಷ್ಟ..**

ಯುವರಾಜ್ ಹೆಸರಿನ ಮತ್ತೊಬ್ಬ ರ್ಯಾಪರ್, ಚಂದನ್ ಶೆಟ್ಟಿ ವಿರುದ್ಧ ಆರೋಪ ಮಾಡಿದ್ದು, ತಾನು ಆರು ವರ್ಷದ ಹಿಂದೆ 'ವೈ ಬುಲ್ ಪಾರ್ಟಿ' ಹಾಡಿನ ಮೊದಲ ಪಲ್ಲವಿ ಹಾಗೂ ಎರಡನೇ ಚರಣ ನಕಲು ಮಾಡಿ ತಮ್ಮ ಹಾಡಿನಲ್ಲಿ ಬಳಸಿಕೊಂಡಿದ್ದಾರೆ.

ಚಂದನ್ ಶೆಟ್ಟಿಯೇ ಈ ಬಗ್ಗೆ ಮಾತನಾಡುತ್ತಾರೆ ಎಂದು ಕಾದಿದ್ದ ಆದರೆ ಅವರು ಈ ಬಗ್ಗೆ ಎಲ್ಲೂ ಮಾತನಾಡಿಲ್ಲ. ನನ್ನ ಬಳಿಯೂ ಅವರು ಈ ಬಗ್ಗೆ

> **'ಕಾಟನ್ ಕ್ಯಾಂಡಿ' ಹಾಡಿನಲ್ಲಿ ನನ್ನ ಟ್ಯೂನ್ ಮಾತ್ರವೇ ಅಲ್ಲದೆ ಇನ್ನೊಬ್ಬರ ಬಿಜಿಎಂ ಅನ್ನು ಸಹ ಕದ್ದಿದ್ದಾರೆ. ಟ್ಯೂನ್ ಬೇಕು ಎಂದು ಕೇಳಿದ್ದರೆ ನಾನೇ ಕೊಟ್ಟುಬಿಡುತ್ತಿದೆ' ಎಂದಿದ್ದಾರೆ.**

ಕೇಳಿಲ್ಲ. ಹಾಗಾಗಿ ಈಗ ನಾನೇ ಈ ಬಗ್ಗೆ ಮಾತನಾಡುತ್ತಿದ್ದೇನೆ. ಚಂದನ್ ಶೆಟ್ಟಿ ವಿರುದ್ಧ ನಾವು ಕಾನೂನು ಮೊರೆ ಹೋಗಲಿದ್ದೀವಿ' ಎಂದಿದ್ದಾರೆ ಯುವರಾಜ್, ಆ ಹಾಡನ್ನು ನಾನು ಬಹಳ ಕಷ್ಟಪಟ್ಟು ಮಾಡಿದ್ದೆ. ಆಗಲೇ ಹಣ ಕೂಡಿಟ್ಟು 17 ಲಕ್ಷ ರೂಪಾಯಿ ಖರ್ಚು ಮಾಡಿ ಹಾಡು ಮಾಡಿದ್ದೆ.

# ನಟ ರಿಷಬ್ ಶೆಟ್ಟಿ ವಿರುದ್ಧ ಕೇಸ್ ದಾಖಲು

• ಉದಯ ವಾಹಿನಿ, ಬೆಂಗಳೂರು

ಡಿವೈನ್ ಸ್ಟಾರ್ ರಿಷಬ್ ಶೆಟ್ಟಿ ವಿರುದ್ಧ ಕೇಸ್ ದಾಖಲಾಗಿದೆ ಎಂದು ವರದಿಯಾಗಿದೆ. ರಿಷಬ್ ಶೆಟ್ಟಿ ಅವರು ನಟಿಸುತ್ತಿರುವ ಜೈ ಹನುಮಾನ್ ಸಿನಿಮಾ ವಿಚಾರ ಸದ್ಯ ವಿವಾದಕ್ಕೆ ಕಾರಣವಾಗಿದೆ.

ಹೈಕೋರ್ಟ್ ವಕೀಲ ಮಾಮಿದಾಳ್ ತಿರುಮಲ್ ರಾವ್ ಎಂಬುವವರು ಪ್ರಕರಣ ದಾಖಲಿಸಿದ್ದಾರೆ. ಇದರಲ್ಲಿ ಹನುಮಂತನ ಚಿತ್ರಣವು ಆಕ್ಷೇಪಾರ್ಹವಾಗಿದೆ ಎಂದು ವಕೀಲ ಮಾಮಿದಾಳ್ ತಿರುಮಲ್ ರಾವ್ ಆರೋಪಿಸಿದ್ದಾರೆ. ಈ ಹಿನ್ನೆಲೆ ಜೈ ಹನುಮಾನ್ ಸಿನಿಮಾದ ನಿರ್ದೇಶಕ ಪ್ರಶಾಂತ್ ವರ್ಮಾ



ಉದಯವಾಹಿನಿ ಚಿತ್ರ

ಮತ್ತು ನಾಯಕ ನಟ ರಿಷಬ್ ಶೆಟ್ಟಿ ಸೇರಿದಂತೆ ಚಿತ್ರದ ನಿರ್ಮಾಪಕರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ ಎಂದು ವರದಿಯಾಗಿದೆ.


ಮಾನವ ಮುಖದ ದೇವರನ್ನು ಆಕ್ಷೇಪಾರ್ಹವಾಗಿ ಚಿತ್ರಿಸಲಾಗಿದೆ ಎಂದು ರಿಷಬ್ ಶೆಟ್ಟಿ ಮತ್ತು ಮೈತ್ರಿ ಮೂವಿ ಮೇಕರ್ಸ್ ವಿರುದ್ಧ ಪ್ರಕರಣ ದಾಖಲಾಗಿದೆ. ಈಗಾಗಲೇ ಜೈ ಹನುಮಾನ್ ಸಿನಿಮಾದ ಪೋಸ್ಟರ್ ಕೂಡ ಬಿಡುಗಡೆಯಾಗಿದ್ದು, ಇದರಲ್ಲಿ ರಿಷಬ್ ಹನುಮಂತನ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಈ ಚಿತ್ರಣವು ಧಾರ್ಮಿಕ ವ್ಯಕ್ತಿಗಿಂತ ನಟನಿಗೆ ಹೆಚ್ಚಿನ ಆದ್ಯತೆ ನೀಡುತ್ತದೆ.

ಭಗವಾನ್ ಹನುಮಂತನ ನೈಜ ಸ್ವರೂಪದ ಬಗ್ಗೆ ಭವಿಷ್ಯದ ಪೀಳಿಗೆಯನ್ನು ದಾರಿ ತಪ್ಪಿಸಬಹುದು ಎಂದು ವಕೀಲ ರಾವ್ ಕಳವಳ ವ್ಯಕ್ತಪಡಿಸಿದ್ದಾರೆ. ಈ ಪ್ರಕರಣವನ್ನು ನಾಂಪಲ್ಲಿ ಕ್ರಿಮಿನಲ್ ಕೋರ್ಟ್ ಅಂಗೀಕರಿಸಿದ್ದು, ಮೈತ್ರಿ ಮೂವಿ ಮೇಕರ್ಸ್‌ಗೆ ಕಾನೂನು ಸಂಕಷ್ಟ ತಂದಿಟ್ಟಿದೆ.

# 11 ಡಿವೈಎಸ್‌ಪಿ ಅಧಿಕಾರಿಗಳ ವರ್ಗಾವಣೆ ಮಾಡಿ ಸರ್ಕಾರ ಆದೇಶ

• ಉದಯ ವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರವು ಆಡಳಿತ ಯಂತ್ರಕ್ಕೆ ಮೇಜರ್ ಸರ್ಜರಿ ಮಾಡಿದ್ದು. 11 ಮಂದಿ ಡಿವೈಎಸ್‌ಪಿ (ಸಿವಿಲ್) ರವರುಗಳ ವರ್ಗಾವಣೆ/ ಸ್ಥಳ ನಿಯುಕ್ತಿ ಮಾಡಿ ಆದೇಶ ಹೊರಡಿಸಿದೆ. ಉಲ್ಲೇಖಿತ ದಿನಾಂಕ ದಂದು ನಡೆದ ಪೊಲೀಸ್ ಸಿಬ್ಬಂದಿ ಮಂಡಳಿಯ ಸಭೆಯ ನಿರ್ಣಯದಂತೆ, ಈ ಕೆಳಕಂಡ ಡಿವೈಎಸ್‌ಪಿ (ಸಿವಿಲ್) ರವರುಗಳನ್ನು ಅವರ ಹೆಸರಿನ ಮುಂದೆ ತೋರಿಸಿರುವ ಸ್ಥಳಕ್ಕೆ ಈ ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾಯಿಸಿ ಆದೇಶಿಸಲಾಗಿದೆ. ಸಂಬಂಧಪಟ್ಟ ಘಟಕಾಧಿಕಾರಿಗಳು,



ಮೇಲ್ಕಂಡ ಅಧಿಕಾರಿಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಿ. ಯಾವುದೇ ಸೇರುವಿಕೆ ಕಾಲವನ್ನು ಉಪಯೋಗಿಸಿಕೊಳ್ಳದೆ ವರ್ಗಾಯಿಸಲಾದ ಸ್ಥಳದಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವಂತೆ ಸೂಚಿಸುವುದು ಹಾಗೂ ಸದರಿ ಅಧಿಕಾರಿಗಳು ಬಿಡುಗಡೆಗೊಂಡ ಮತ್ತು ವರದಿ ಮಾಡಿದ ಬಗ್ಗೆ ಈ ಕಛೇರಿಗೆ ಪಾಲನಾ ವರದಿ ಸಲ್ಲಿಸುವುದು. ಮೇಲ್ಕಂಡ ವರ್ಗಾವಣಾ ಆದೇಶದಲ್ಲಿ ಸ್ಥಳ ನಿಯುಕ್ತಿಗೊಳಿಸದಿರುವ ಡಿವೈಎಸ್‌ಪಿ ವೃಂದದ ಅಧಿಕಾರಿಗಳು ಮುಂದಿನ ಸ್ಥಳ ನಿಯುಕ್ತಿಗಾಗಿ ಪೊಲೀಸ್ ಪ್ರಧಾನ ಕಛೇರಿಯಲ್ಲಿ ವರದಿ ಮಾಡಿಕೊಳ್ಳುವುದು.

# ಹೊಸ ಮಾರ್ಗದಲ್ಲಿ ಬಿಎಂಟಿಸಿ ಬಸ್ ಸಂಚಾರ ಆರಂಭ

• ಉದಯ ವಾಹಿನಿ, ಬೆಂಗಳೂರು

ನಗರದ ಜನರಿಗೆ ಉತ್ತಮ ಸಾರಿಗೆ ಸೇವೆ ಒದಗಿಸುವ ನಿಟ್ಟಿನಲ್ಲಿ ಹೊಸ ಮಾರ್ಗದಲ್ಲಿ ಬಿಎಂಟಿಸಿ ಬಸ್ ಸಂಚಾರವನ್ನು ಆರಂಭಿಸಲಾಗಿದೆ. ಈ ಮೂಲಕ ಬೆಂಗಳೂರು ಜನತೆಗೆ ಗುಡ್ ನ್ಯೂಸ್ ನೀಡಲಾಗಿದೆ. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಸಾರ್ವಜನಿಕ ಪ್ರಯಾಣಿಕರಿಗೆ ದಕ್ಷ, ವಿಶ್ವಾಸನೀಯ, ಆರಾಮದಾಯಕ ಹಾಗೂ ಮಿತವ್ಯಯಕರ ದರದಲ್ಲಿ ಉತ್ತಮ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಿದೆ ಎಂದಿದೆ.

ಬೆಂ.ಮ.ಸಾ.ಸಂಸ್ಥೆಯು ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹವಾನಿಯಂತ್ರಣರಹಿತ ನೂತನ ಮಾರ್ಗವನ್ನು ದಿನಾಂಕ: 16.01.2025 ರಿಂದ ಪರಿಚಯಿಸುತ್ತಿದ್ದು ವಿವರ ಕೆಳಕಂಡಂತಿದೆ: ಮಾರ್ಗ ಸಂಖ್ಯೆ ಎಲ್ಲಿಂದ ಎಲ್ಲಿಗೆ ಮಾರ್ಗ ಬಸ್ಸು/ಸುತ್ತುವಳಿಗಳ ಸಂಖ್ಯೆ 168-ಎ ಜೈ ಭೀಮನಗರ ಕೃ.ರಾ.ಮಾರುಕಟ್ಟೆ ತಾವರೆಕೆರೆ, ಸುದ್ದಗುಂಟೆ ಪಾಳ್ಯ, ಬೆಂಗಳೂರು ಡೈರಿ, ವಿಲ್ಸನ್ಗಾರ್ಡನ್ ಪೊಲೀಸ್ ಸ್ಟೇಷನ್, ಲಾಲ್ಬಾಗ್ ಮೈನ್ಗೇಟ್ 1 ಬಸ್ಸು/ 18 ಸುತ್ತುವಳಿಗಳು 161-ಬಿ ಜೈ ಭೀಮ ನಗರ ಶಿವಾಜಿನಗರ ತಾವರೆಕೆರೆ, ಸುದ್ದಗುಂಟೆ ಪಾಳ್ಯ, ಬೆಂಗಳೂರು ಡೈರಿ, ವಿಲ್ಸನ್ಗಾರ್ಡನ್ ಪೊಲೀಸ್ ಸ್ಟೇಷನ್, ರಿಚ್ ಮಂಡ್ ವೃತ್ತ, ಗಾಂಧಿ ಪ್ರತಿಮೆ 1 ಬಸ್ಸು/ 18 ಸುತ್ತುವಳಿಗಳು

168-ಇ ಜೈ ಭೀಮನಗರ ಕೆಂಪೇಗೌಡ ಬಸ್ ನಿಲ್ದಾಣ ತಾವರೆಕೆರೆ, ಸುದ್ದಗುಂಟೆ ಪಾಳ್ಯ, ಬೆಂಗಳೂರು ಡೈರಿ, ವಿಲ್ಸನ್ ರ್ಡನ್ ಪೊಲೀಸ್ ಭಾರತ ಸ್ಟೇಷನ್, ಕಾರ್ಪೋರೇಷನ್ 1 ಬಸ್ಸು/ 15 ಸುತ್ತುವಳಿಗಳು ಸದರಿ ಮಾರ್ಗದ ವೇಳಾಪಟ್ಟಿ



ಉದಯವಾಹಿನಿ ಚಿತ್ರ

**-168-0 ಜೈ ಭೀಮನಗರ ಬಿಡುವ ವೇಳೆ 0520, 0645, 0815, 0950, 1145, 1540, 1710, 1915, 2100 ಕೃ. ರಾ.ಮಾರುಕಟ್ಟೆ ಬಿಡುವ ವೇಳೆ 0600, 0730, 0900, 1100, 1455, 1625, 1800, 2000, 2145 ಕರ್ನಾಟಕ -161-2 ಜೈ ಭೀಮನಗರ ಬಿಡುವ ವೇಳೆ 0715, 0925, 1130, 1450, 1630, 1855, 2045 ಶಿವಾಜಿನಗರ ಬಿಡುವ ವೇಳೆ 0645, 0830, 0950, 1145, 1520, 1650, 1825, 2015, 2200 -168-2 ಜೈ ಭೀಮನಗರ ಬಿಡುವ ವೇಳೆ 0715, 0925, 1130, 1450, 1630, 1855, 2045 ಕೆಂಪೇಗೌಡ ಬಸ್ ನಿಲ್ದಾಣ ಬಿಡುವ ವೇಳೆ 0625, 0805, 1035, 1225, 1540, 1745, 1950**

ಈ ಕೆಳಕಂಡಂತಿದೆ.

# ನಮ್ಮ ಮೆಟ್ರೋ ರೈಲು ಸಂಚಾರ ಸಮಯ ಬದಲಾವಣೆ

## ಸೋಮವಾರ ಬೆಳಿಗ್ಗೆ ಬೇಗ ಹೊರಡಲಿದೆ ಬೆಂಗಳೂರು ಮೆಟ್ರೋ, ಜ 13 ರಿಂದಲೇ ಜಾರಿ

• ಉದಯ ವಾಹಿನಿ, ಬೆಂಗಳೂರು

ಸೋಮವಾರದಿಂದ (ಜನವರಿ 13) ಬೆಂಗಳೂರು ಮೆಟ್ರೋ ಬೆಳಿಗ್ಗೆ ಬೇಗ ಸಂಚಾರ ಶುರುಮಾಡಲಿದೆ. ಬೆಂಗಳೂರಿಗರ ಅನುಕೂಲಕ್ಕಾಗಿ ಪ್ರತಿ ಸೋಮವಾರ ನಮ್ಮ ಮೆಟ್ರೋ ರೈಲುಗಳು ಬೇಗ ಸಂಚಾರ ಪ್ರಾರಂಭಿಸಲಿವೆ ಎಂದು ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (ಬಿಎಂಆರ್‌ಸಿಎಲ್) ತಿಳಿಸಿದೆ.ಈ ಸಮಯ ಬದಲಾವಣೆಯು ವಾರದ ಇತರ ದಿನಗಳಲ್ಲಿ ಮೆಟ್ರೋ ರೈಲು ವೇಳಾಪಟ್ಟಿಗಳ ಮೇಲೆ ಪರಿಣಾಮ ಬೀರುವುದಿಲ್ಲ. ಹೆಚ್ಚು ಅನುಕೂಲಕರ ಮತ್ತು ಪರಿಣಾಮಕಾರಿ ಪ್ರಯಾಣದ ಅನುಭವವನ್ನು ಒದಗಿಸುವುದು ಉದ್ದೇಶ ಎಂದು ಅದು ಹೇಳಿದೆ.

ವಾರಾಂತ್ಯದ ಪ್ರವಾಸ ಮುಗಿಸಿ ಬೆಂಗಳೂರಿಗೆ ಹಿಂದಿರುಗುವ ಪ್ರಯಾಣಿಕರಿಗೆ ಪ್ರಯಾಣದ ಅನುಕೂಲವನ್ನು ಸುಧಾರಿಸಲು ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ ಎಂದು ಹೇಳಿರುವ ಬಿಎಂಆರ್‌ಸಿಎಲ್, ಪರಿಷ್ಕೃತ ಸಮಯವು ಪ್ರಯಾಣಿಕರು ಬಂದ ತಕ್ಷಣ ಮೆಟ್ರೋ ಸೇವೆ ಬಳಸುವುದನ್ನು ಖಚಿತಪಡಿಸುತ್ತದೆ, ಅವರ ಪ್ರಯಾಣವನ್ನು ಸುಗಮಗೊಳಿಸುತ್ತದೆ ಮತ್ತು ಸಮಯವನ್ನು ಉಳಿಸುತ್ತದೆ ಎಂದು ಹೇಳಿದೆ. ಈ ಬದಲಾವಣೆಯನ್ನು ನಿರ್ದಿಷ್ಟವಾಗಿ ಸಿಟಿ ರೈಲು ನಿಲ್ದಾಣ ಮತ್ತು ಕೆಂಪೇಗೌಡ ಬಸ್ ನಿಲ್ಯಾಣದಂತಹ ಪ್ರಮುಖ ಸಾರಿಗೆ ಕೇಂದ್ರಗಳಿಗೆ ಆಗಮಿಸುವ ಪ್ರಯಾಣಿಕರ ಅನುಕೂಲವನ್ನು ಗಮನದಲ್ಲಿಟ್ಟುಕೊಂಡು ಮಾಡಲಾಗಿದೆ. ಈ ಉಪಕ್ರಮದಿಂದಾಗಿ ಮುಂಜಾನೆ ಸಿಟಿ ರೈಲು ನಿಲ್ದಾಣ, ಕೆಂಪೇಗೌಡ ಬಸ್ ನಿಲ್ದಾಣ ತಲುಪುವ ಪ್ರಯಾಣಿಕರಿಗೆ ಕೊನೆಯ ಮೈಲಿ ಸಂಪರ್ಕವನ್ನು ಹೆಚ್ಚಿಸುತ್ತದೆ.

ಈ ಸಮಯದ ಹೊಂದಾಣಿಕೆಯು ಕೇವಲ ಸೋಮವಾರಕ್ಕೆ ಮಾತ್ರ ಸೀಮಿತ. ವಾರದ ಉಳಿದ ದಿನಗಳಲ್ಲಿ ನಮ್ಮ ಮೆಟ್ರೋ ಎಂದಿನಂತೆ ಮುಂಜಾನೆ 5 ಗಂಟೆಗೆ ಸಂಚಾರ ಶುರುಮಾಡಲಿದೆ. ಅದರಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಬಿಎಂಆರ್‌ಸಿಎಲ್ ಸ್ಪಷ್ಟಪಡಿಸಿದೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳು ತಮ್ಮ ಬಸ್‌ಗಳಲ್ಲಿ ಪ್ರಯಾಣ ದರವನ್ನು ಶೇಕಡ 15 ಏರಿಸಿವೆ. ಇದರ ಬೆನ್ನಿಗೆ ಬಿಎಂಟಿಸಿ ಕೂಡ ಟಿಕೆಟ್ ದರ ಹೆಚ್ಚಿಸಿದೆ. ನಮ್ಮ ಮೆಟ್ರೋ ಕೂಡ ಖರ್ಚು ವೆಚ್ಚಗಳನ್ನು ಮುಂದಿಟ್ಟುಕೊಂಡು ಟಿಕೆಟ್ ದರ ಪರಿಷ್ಕರಣೆಗೆ ಒಲವು ತೋರಿಸಿದೆ. ಆದ್ದರಿಂದ ಬೆಂಗಳೂರಿನ ನಮ್ಮ ಮೆಟ್ರೋ ಪ್ರಯಾಣಿಕರು ಶೀಘ್ರದಲ್ಲೇ ಭಾರಿ ದರ ಹೆಚ್ಚಳವನ್ನು ನಿರೀಕ್ಷಿಸಬಹುದು.



ನಮ್ಮ ಮೆಟ್ರೋ ಟಿಕೆಟ್ ದರಗಳು 40-45 ಪ್ರತಿಶತದಷ್ಟು ಹೆಚ್ಚಾಗುವ ನಿರೀಕ್ಷೆಯಿದೆ. ಎಂಟು ವರ್ಷಗಳಲ್ಲಿ ಇದೇ ಮೊದಲ ಸಲ ಟಿಕೆಟ್ ದರ ಹೆಚ್ಚಿಸುವ ಪ್ರಸ್ತಾವನೆಯನ್ನು ಬಿಎಂಆರ್‌ಸಿಎಲ್ ಮುಂದಿಟ್ಟಿದೆ. ಈ ಪ್ರಸ್ತಾವನೆಯು ಸರ್ಕಾರವು ನೇಮಿಸಿದ ದರ ನಿಗದಿ ಸಮಿತಿಯ ಪರಿಶೀಲನೆಯಲ್ಲಿದೆ. ಈ ಸಮಿತಿಯು ನಮ್ಮ ಮೆಟ್ರೋ ಟಿಕೆಟ್ ದರ ಹೊಂದಾಣಿಕೆಯ ಪ್ರಸ್ತಾಪವನ್ನು ಎಲ್ಲ ರೀತಿಯಿಂದಲೂ ಪರಿಶೀಲಿಸಿದೆ.

**ಮುಂಜಾನೆ 5 ಗಂಟೆಗೆ ಸಂಚಾರ ಶುರು**

> **ಪ್ರತಿ ಸೋಮವಾರ ನಮ್ಮ ಮೆಟ್ರೋ ರೈಲು ಸಂಚಾರ ಬೇಗ ಶುರು ಬೆಂಗಳೂರು ನಗರದಲ್ಲಿ ಜನರಿಗೆ ಸಂಚಾರ ಸೇವೆ ಒದಗಿಸುವ ನಮ್ಮ ಮೆಟ್ರೋ ರೈಲುಗಳು ಇನ್ನು ಮುಂದೆ ಪ್ರತಿ ಸೋಮವಾರ ಮುಂಜಾನೆ 5 ಗಂಟೆಗೆ ಬದಲಾಗಿ ಮುಂಜಾನೆ 4.15ಕ್ಕೆ ಸಂಚಾರ ಶುರುಮಾಡಲಿವೆ. ಈ ಸಂಚಾರ ಸಮಯ ಬದಲಾವಣೆ ಇದೇ ಸೋಮವಾರದಿಂದ (ಜನವರಿ 13) ಶುರುವಾಗಲಿದೆ ಎಂದು ಬಿಎಂಆರ್‌ಸಿಎಲ್ ತಿಳಿಸಿದೆ.**

**ಕಳೆದ ವಾರ ಬಿಎಂಆರ್‌ಸಿಎಲ್ ಆಡಳಿತ ಮಂಡಳಿಗೆ ಸಲ್ಲಿಕೆ**

**ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಪ್ರಯಾಣಿಕರಿಂದಲೂ ಅಬಿಪ್ರಾಯ ಸಂಗ್ರಹಿಸಿದೆ. ಕಳೆದ ವರ್ಷ ಅಂದರೆ 2024ರ ಅಕ್ಟೋಬರ್‌ನಲ್ಲಿ ಈ ಪ್ರಕ್ರಿಯೆ ಪೂರ್ಣಗೊಳಿಸಿದೆ. ಅಂತಿಮ ವರದಿಯನ್ನು ಸಮಿತಿಯು ಕಳೆದ ವಾರ ಬಿಎಂಆರ್‌ಸಿಎಲ್ ಆಡಳಿತ ಮಂಡಳಿಗೆ ಸಲ್ಲಿಸಿದೆ. ಇದಕ್ಕೆ ಸಂಬಂಧಿಸಿದ ಅಂತಿಮ ನಿರ್ಧಾರ ಜನವರಿ 17ರ ಸುಮಾರಿಗೆ ಪ್ರಕಟವಾಗಬಹುದು ಎಂಬ ನಿರೀಕ್ಷೆ ಇದೆ.**

ಉದಯ ವಾಹಿನಿ

ಪ್ರಾದೇಶಿಕ

ಭಾನುವಾರ
12 ಜನವರಿ 2025



# ಬಾಗೇಪಲ್ಲಿಯಲ್ಲಿ ಕೈಗಾರಿಕೀಕರಣ: ಎಕರೆಗೆ ಒಂದು ಕೋಟಿ ನಿಗದಿ ಸಾಧ್ಯತೆ

## ಈ ಹಿಂದೆ ಗುರುತಿಸಿದ್ದ 192 ಎಕರೆ ಜಮೀನಿನ ಜೊತೆಗೆ ಬಾಗೇಪಲ್ಲಿ ತಾಲ್ಲೂಕಿನ ಕೊಂಡರೆಡ್ಡಿ ಪಲ್ಲಿ ಬಳಿ 684 ಎಕರೆ ಜಮೀನನ್ನು ಕೆಐಎಡಿಬಿ ಗುರುತು

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ರಾಜ್ಯದ ಗಡಿ ಮತ್ತು ಬರದ ತಾಲ್ಲೂಕು ಎನಿಸಿರುವ ಬಾಗೇಪಲ್ಲಿಯಲ್ಲಿ ಈಗ ಕೈಗಾರಿಕೀಕರಣದ ಆಶಾವಾದ ಮೊಳೆತಿವೆ. ತಾಲ್ಲೂಕಿನ ಕೊಂಡರೆಡ್ಡಿಪಲ್ಲಿ ಮತ್ತು ಹೊಸ ಹುಡ್ಯ ಗ್ರಾಮಗಳ ಬಳಿ ಕೈಗಾರಿಕೆಗಳ ಸ್ಥಾಪನೆ ವಿಚಾರವಾಗಿ ನಡೆಯುತ್ತಿದ್ದ ಹಗ್ಗಜಗ್ಗಾಟಕ್ಕೆ ಇತಿಶ್ರೀ ಬೀಳುತ್ತಿದೆ. ಈ ಹಳ್ಳಿಗಳಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ವಶಕ್ಕೆ ಪಡೆಯಲಿರುವ ಜಮೀನಿಗೆ ದರ ನಿಗದಿ ಸಂಬಂಧ ಜ.27ರಂದು ಚಿಕ್ಕಬಳ್ಳಾಪುರದಲ್ಲಿ ಸಭೆ ಸಹ ನಡೆಯಲಿದೆ. ರೈತರು ಸಹ ಒಂದು ಎಕರೆಗೆ 1 ಕೋಟಿ ನೀಡಬೇಕು ಎಂದು ಮನವಿ ಮಾಡುತ್ತಿದ್ದರು.

ರೈತರ ಈ ಮನವಿ ಪುರಸ್ಕಾರಗೊಳ್ಳುವ ಲಕ್ಷಣಗಳು ದಟ್ಟವಾಗಿವೆ. 2009ರಿಂದಲೂ ಈ ಗ್ರಾಮಗಳ ಬಳಿ ಕೈಗಾರಿಕೆಗಳ ಸ್ಥಾಪನೆಯ ವಿಚಾರವಾಗಿ ಚರ್ಚೆಗಳು ಪ್ರತಿಭಟನೆಗಳು, ಹಗ್ಗಜಗ್ಗಾಟಗಳು ನಡೆದಿವೆ. 15 ವರ್ಷಗಳ ಹಿಂದೆ ಈ ಹಳ್ಳಿಗಳಲ್ಲಿ ಕೈಗಾರಿಕೆಗಳ ಸ್ಥಾಪನೆಗೆ 192 ಎಕರೆ ಭೂಮಿ ಗುರುತಿಸಲಾಗಿತ್ತು.



ಆ ಮೂಲಕ ಉದ್ಯೋಗಾವಕಾಶಗಳು ಸೃಷ್ಟಿಸಬೇಕು ಎನ್ನುವುದು ನನ್ನ ಬಹುದಿನಗಳ ಆಸೆಯಾಗಿತ್ತು. ಈಗ ಆ ಕಾಲ ಸನ್ನಿಹಿತವಾಗಿದೆ. ಬರ ಮತ್ತು ಹಿಂದುಳಿದ ತಾಲ್ಲೂಕು ಎನಿಸಿರುವ ಬಾಗೇಪಲ್ಲಿಗೆ ಕೈಗಾರಿಕೀಕರಣವು ಹೊಸ ಅಧ್ಯಾಯ ಪ್ರಾರಂಭಿಸುತ್ತದೆ

–ಎಸ್.ಎನ್.ಸುಬ್ಬಾರೆಡ್ಡಿ, ಶಾಸಕ

ಆದರೆ ಈ ಜಮೀನು ನೀಡಲು ರೈತರು ವಿರೋಧ ವ್ಯಕ್ತಪಡಿಸಿದ್ದರು. ಪ್ರತಿಭಟನೆಗಳು ಸಹ ನಡೆದಿದ್ದವು. ಆ ನಂತರ ರೈತರ ಜೊತೆ ಮಾತುಕತೆಗಳು ನಡೆದಿದ್ದವು. ಉತ್ತರ ದರ ನೀಡುವಂತೆ ಆಗ್ರಹಿಸುತ್ತಿದ್ದರು.

### ಪರಿಹಾರ ನೀಡುವಂತೆ ಮನವಿ

**ಆಂಧ್ರಪ್ರದೇಶಕ್ಕೆ ಹೊಂದಿಕೊಂಡಿರುವ ಬಾಗೇಪಲ್ಲಿಯಲ್ಲಿ ಈ ಹಿಂದೆ ಕೈಗಾರಿಕೀಕರಣಕ್ಕೆ ನಡೆದ ಪ್ರಯತ್ನಗಳು ವಿಫಲವಾಗಿದ್ದವು. ನೆರೆಯ ಆಂಧ್ರ ಪ್ರದೇಶದಲ್ಲಿ ಕೊರಿಯಾ ದೇಶದ ಕಿಯಾ ಮೋಟರ್ಸ್ ಈಗಾಗಲೇ ದೊಡ್ಡ ಕೈಗಾರಿಕಾ ಘಟಕಗಳನ್ನು ಹೊಂದಿದೆ.ಎಕರೆಗೆ 1 ಕೋಟಿ ಪರಿಹಾರಕ್ಕೆ ಒತ್ತಾಯ ಕೈಗಾರಿಕೀಕರಣಕ್ಕೆ ವಶಕ್ಕೆ ಪಡೆಯುವ ಒಂದು ಎಕರೆ ಜಮೀನಿಗೆ 1 ಕೋಟಿ ಪರಿಹಾರ ನೀಡುವಂತೆ ರೈತರು ಮನವಿ ಮಾಡಿದ್ದಾರೆ.**

ಈ ಹಿಂದೆ ಗುರುತಿಸಿದ್ದ 192 ಎಕರೆ ಜಮೀನಿನ ಜೊತೆಗೆ ಬಾಗೇಪಲ್ಲಿ ತಾಲ್ಲೂಕಿನ ಕೊಂಡರೆಡ್ಡಿಪಲ್ಲಿ ಬಳಿ 684 ಎಕರೆ ಜಮೀನನ್ನು ಕೆಐಡಿಬಿ ಗುರುತಿಸಿದೆ. ಈ ಹಿಂದೆ ಗುರುತಿಸಿದ್ದ ಭೂಮಿಯೂ ಸೇರಿದಂತೆ 876 ಎಕರೆಯಲ್ಲಿ ಕೈಗಾರಿಕೆಗಳು ಸ್ಥಾಪನೆಯಾಗುವ ನಿರೀಕ್ಷೆ ಇದೆ. ಈಗ ಕೈಗಾರಿಕೀಕರಣದ ವಿಚಾರವು ಅಂತಿಮ ಹಂತದಲ್ಲಿ ಇದೆ. ಕರ್ನಾಟಕ ಪ್ರದೇಶ ಕೈಗಾರಿಕಾಭಿವೃದ್ಧಿ ಮಂಡಳಿಯು ವಶಕ್ಕೆ ಪಡೆಯಲಿರುವ ಒಂದು ಎಕರೆ ಜಮೀನಿಗೆ 1 ಕೋಟಿ ನೀಡಬೇಕು ಎಂದು ಈ ಹಳ್ಳಿಗಳ ರೈತರು ಇತ್ತೀಚೆಗೆ ಚಿಕ್ಕಬಳ್ಳಾಪುರದಲ್ಲಿ ನಡೆದ ಸಭೆಯಲ್ಲಿ ಶಾಸಕರಿಗೆ ಹಾಗೂ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರು.

### ರೈತರ ಮನವಿಯ ಪರವಾಗಿಯೇ ನಾನು ಇದ್ದೇನೆ

ರೈತರ ಮನವಿಗೆ ಧ್ವನಿಗೂಡಿಸಿದ್ದ ಶಾಸಕರು 1 ಕೋಟಿ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದ್ದರು. ಗಡಿಭಾಗದ ತಾಲ್ಲೂಕಿನಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಬೇಕು.

ಜ.27ರಂದು ಕರ್ನಾಟಕ ಪ್ರದೇಶ ಕೈಗಾರಿಕಾ ಅಭಿವೃದ್ಧಿ ಮಂಡಳಿ ಉನ್ನತ ಅಧಿಕಾರಿಗಳು ಜಿಲ್ಲಾಧಿಕಾರಿ ಜೊತೆ ಈ ಬಗ್ಗೆ ಸಭೆ ನಡೆಸಲಾಗುವುದು. ಅಂದು ಎರಡೂ ಹಳ್ಳಿಗಳ ರೈತರ ಸಮ್ಮುಖದಲ್ಲಿಯೇ ಈ ಸಭೆ ನಡೆಯಲಿದೆ. ಇಲ್ಲಿ ದರವನ್ನು ಅಂತಿಮಗೊಳಿಸಲಾಗುವುದು. ನಾನೂ ಸಹ 1 ಕೋಟಿ ಕೊಡಬೇಕು ಎಂದು ಒತ್ತಾಯಿಸುತ್ತಿದ್ದೇನೆ ಎಂದರು.

ಕಡತವು ಮಂಡಳಿ ಎದುರಿಗೆ ಬರುತ್ತಿದೆ. ಅದಕ್ಕೂ ಮುನ್ನ ದರ ನಿಗದಿಯ ವಿಚಾರ ಅಂತಿಮವಾಗಲಿದೆ. ಆ ನಂತರ ಎರಡು ವಾರಗಳಲ್ಲಿ ರೈತರಿಗೆ ಮೊದಲ ಕಂತಿನಲ್ಲಿ ಹಣವು ಜಮೆ ಆಗಲಿದೆ ಎಂದು ತಿಳಿಸಿದರು. ರೈತರ ಮನವಿಯ ಪರವಾಗಿಯೇ ನಾನು ಇದ್ದೇನೆ. ನಾನೂ ಸಹ ಇದೇ ದರವನ್ನು ನೀಡಬೇಕು ಎಂದು ಒತ್ತಾಯಿಸುತ್ತೇನೆ ಎಂದು ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ತಿಳಿಸಿದರು.

ದರ ನಿಗದಿ ವಿಚಾರವಾಗಿ ಚರ್ಚಿಸಲು ವಿಧಾನ ಸೌಧದಲ್ಲಿ ಸಭೆ ಸಹ ನಡೆಯಿತು. ಶಾಸಕ ಸುಬ್ಬಾರೆಡ್ಡಿ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಕೈಗಾರಿಕಾ ಅಭಿವೃದ್ಧಿ ಮಂಡಳಿ ಅಧಿಕಾರಿಗಳು ವಿಶೇಷ ಭೂಸ್ವಾಧೀನ ಅಧಿಕಾರಿ ಪಾಲ್ಗೊಂಡಿದ್ದರು.

# ನೀರಿಗಾಗಿ ಗಲಾಟೆ, ಗದ್ದಲ, ವಾಗ್ವಾದ: ಹೊರನಡೆದ ಶಾಸಕ

• **ಉದಯವಾಹಿನಿ, ತಿಪಟೂರು**

ನಗರಕ್ಕೆ ಕುಡಿಯುವ ನೀರು ಪೂರೈಸುವ ಸಂಬಂಧ ನಗರಸಭೆಯಲ್ಲಿ ನಡೆದ ವಿಶೇಷ ಸಾಮಾನ್ಯ ಸಭೆ ಗಲಾಟೆ, ಗದ್ದಲ, ಗೊಂದಲದ ಮಧ್ಯೆ ಮುಗಿಯಿತು. 20 ಶಾಸಕ ಕೆ.ಷಡಕ್ಷರಿ, ನಗರ ಸಭೆ ಅಧ್ಯಕ್ಷೆ ಎ.ಎಸ್.ಯಮುನಾ ಅರ್ಧಕ್ಕೆ ಸಭೆಯಿಂದ ಹೊರನಡೆದರು.

ಇದನ್ನು ಖಂಡಿಸಿ ಬಿಜೆಪಿ ಸದಸ್ಯರು ನಗರ ಸಭೆ ಕಾರ್ಯಾಲಯದ ಮುಂಭಾಗ ಧರಣಿ ನಡೆಸಿದರು. ನಗರದ ಜನತೆಗೆ ಕುಡಿಯುವ ನೀರು ಸರಬರಾಜು ಮಾಡುವ ಈಚನೂರು ಕೆರೆ ತ್ಯಾಜ್ಯದಿಂದ ಕಲುಷಿತಗೊಂಡಿದೆ. ಇದಕ್ಕೆ ಪರ್ಯಾಯ ಮಾರ್ಗ ಕಂಡುಕೊಳ್ಳುವ ಉದ್ದೇಶದಿಂದ ಕರೆದಿದ್ದ ಸಭೆಯಲ್ಲಿ ಯಾವುದೇ ತೀರ್ಮಾನ ತೆಗೆದುಕೊಳ್ಳಲು ಸಾಧ್ಯವಾಗಲಿಲ್ಲ.

ಆಡಳಿತ ವರ್ಗ, ವಿರೋಧ ಪಕ್ಷದ ಸದಸ್ಯರ ಮಧ್ಯದ ವಾಗ್ವಾದದಲ್ಲೇ ಸಭೆ ಕೊನೆಯಾಯಿತು.



ಉದಯವಾಹಿನಿ ಚಿತ್ರ

ನಗರಕ್ಕೆ ಕುಡಿಯುವ ನೀರು ಪೂರೈಸಲು ಪರ್ಯಾಯ ಯೋಜನೆ ರೂಪಿಸಲಾಗುವುದು ಎಂಬ ಪ್ರಸ್ತಾವವನ್ನು ಅಧ್ಯಕ್ಷೆ ಎ.ಎಸ್.ಯಮುನಾ ಸಭೆಯ ಮುಂದಿಟ್ಟರು. ಶಾಸಕ ಕೆ.ಷಡಕ್ಷರಿ ಇದನ್ನು ಅನುಮೋದಿಸಿದರು. ವಿರೋಧ ಪಕ್ಷದ ಸದಸ್ಯರು ಇದಕ್ಕೆ ವಿರೋಧ ವ್ಯಕ್ತಪಡಿಸಿದರು.

ಜನತೆಗೆ ಕುಡಿಯುವ ನೀರು ಒದಗಿಸುವುದು ನಮ್ಮ ಜವಾಬ್ದಾರಿ. ಇದಕ್ಕೆ ಯಾರ ವಿರೋಧವೂ ಇಲ್ಲ. ಆದರೆ, ಯಾವ ರೀತಿ, ಎಲ್ಲಿಂದ, ಯಾವ ನದಿ ಮೂಲದಿಂದ ನೀರು ಪೂರೈಸಲಾಗುತ್ತದೆ ಎಂಬುವುದನ್ನು ಸ್ಪಷ್ಟಪಡಿಸಬೇಕು ಎಂದು ನಗರಸಭೆ ಸದಸ್ಯ, ರಾಮಮೋಹನ್ ಇತರರು ಪಟ್ಟು ಹಿಡಿದರು.

### ಅಧಿಕಾರಿಗಳೇ ನೇರ ಹೊಣೆ

**2024 ಡಿ 12ರಂದು ಈಚನೂರು ಕೆರೆ ಕಲುಷಿತಗೊಂಡಿದೆ ಎಂಬ ವರದಿ ಬಂದಿದೆ. ಕೆರೆಯ ನೀರನ್ನು ಪರೀಕ್ಷೆಗೆ ಕಳುಹಿಸಿದ ಬಗ್ಗೆ ಅಧಿಕಾರಿಗಳು ನಗರಸಭೆ ಸದಸ್ಯರ ಗಮನಕ್ಕೆ ತಂದಿಲ್ಲ ಅಧಿಕಾರಿಗಳು ಬೇಜವಾಬ್ದಾರಿಯಿಂದ ನಡೆದು ಕೊಂಡಿದ್ದಾರೆ. ಉದ್ದೇಶಪೂರ್ವಕ ವಾಗಿ ನೀರು ಸಿಗದಂತೆ ಮಾಡಲಾಗಿದೆ. ನಗರದ ಸಮಸ್ಯೆಗೆ ಪೌರಾಯುಕ್ತರು ಸ್ಪಂದಿಸುತ್ತಿಲ್ಲ. ಇದೀಗ ಎದುರಾಗಿರುವ ನೀರಿನ ಸಮಸ್ಯೆಗೆ ಅಧಿಕಾರಿಗಳೇ ನೇರ ಹೊಣೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.**

# ತ್ಯಾಜ್ಯ ವಿದ್ಯುತ್ ಸ್ಥಾವರ ದುರಂತ: ಜೀವಕ್ಕೆ ಉರುಳಾದ ನಿರ್ಲಕ್ಷ್ಯ

• **ಉದಯವಾಹಿನಿ, ಬಿಡದಿ**

ಅವರೆಲ್ಲರೂ ತುತ್ತಿನ ಚೀಲ ತುಂಬಿಸಿಕೊಳ್ಳಲು ದೂರದ ಊರುಗಳಿಂದ ಬಂದವರು. ತಮ್ಮ ಜೀವಕ್ಕೆ ಸುರಕ್ಷತೆಯ ಗ್ಯಾರಂಟಿ ಇಲ್ಲದ ಅಪಾಯಕಾರಿ ಕೆಲಸವಾದರೂ ಬಿಡಿಗಾಸು ಸಂಬಳಕ್ಕೆ ಹಗಲಿರುಳು ಮೈ ಬಗ್ಗಿಸಿ ದುಡಿಯುವ ಅಮಾಯಕರು. ಈ ಅಮಾಯಕತನವೇ ಅವರ ಜೀವಕ್ಕೆ ಉರುಳಾಯಿತು. ಇವರ ದುಡಿದು ಕಳಿಸುತ್ತಿದ್ದ ಹಣ ನೆಚ್ಚಿಕೊಂಡು ಬದುಕುತ್ತಿದ್ದ ತಂದೆ– ತಾಯಿ ಹಾಗೂ ಹೆಂಡತಿ ಮಕ್ಕಳೀಗ ದಿಕ್ಕು ತೋಚದ ಸ್ಥಿತಿಯಲ್ಲಿದ್ದಾರೆ.

ತಾಲ್ಲೂಕಿನ ಬಿಡದಿ ಕೈಗಾರಿಕಾ ಪ್ರದೇಶದ ಬಿಲ್ಲಕೆಂಪನಹಳ್ಳಿಯಲ್ಲಿರುವ ತ್ಯಾಜ್ಯದಿಂದ ವಿದ್ಯುತ್ ಉತ್ಪಾದಿಸುವ ರಾಜ್ಯದ ಮೊದಲ ಸ್ಥಾವರದಲ್ಲಿ ಸಂಭವಿಸಿದ ಬಿಸಿ ಬೂದಿ ಅವಘಡದಲ್ಲಿ ಸುಟ್ಟ ಗಾಯಗಳಿಂದ ನರಳಿ ಜೀವ ಬಿಟ್ಟವರ ದಯನೀಯ ಸ್ಥಿತಿ ಇದು. ಕರ್ನಾಟಕ ವಿದ್ಯುತ್ ನಿಗಮ (ಕೆಪಿಸಿಎಲ್) ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಸಹಯೋಗದಲ್ಲಿ ನಿರ್ಮಿಸಿರುವ ಸ್ಥಾವರ ಅಧಿಕೃತ ಕಾರ್ಯಾಚರಣೆಗೆ ಮುಂಚೆಯೇ



ಉದಯವಾಹಿನಿ ಚಿತ್ರ

ನಾಲ್ವರನ್ನು ಬಲಿ ಪಡೆದಿದೆ. ಕೋಟ್ಯಂತರ ರೂಪಾಯಿ ಖರ್ಚು ಮಾಡಿ ನಿರ್ಮಿಸಿರುವ ಸ್ಥಾವರದಲ್ಲಿ ಕಾರ್ಮಿಕರ ಸುರಕ್ಷತೆಗೆ ಬೇಕಾದ ಅಗತ್ಯ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ವಹಿಸಿದ್ದೇ ಅವಘಡಕ್ಕೆ ಕಾರಣ ಎಂಬುದು ಮೇಲ್ನೋಟಕ್ಕೆ ದೃಢಪಟ್ಟಿದೆ.

ಹದಿನೈದು ಎಕರೆಯಲ್ಲಿರುವ 11.5 ಮೆ.ವಾ. ವಿದ್ಯುತ್ ಉತ್ಪಾದನೆ ಸಾಮರ್ಥ್ಯದ ಸ್ಥಾವರದ ನಿರ್ಮಾಣ ಹಾಗೂ ನಿರ್ವಹಣೆಯನ್ನು ಐಎಸ್‌ಜೆಇಸಿ ಕಂಪನಿಯು 2020ರಲ್ಲಿ ವಹಿಸಿಕೊಂಡಿತ್ತು. ಸಿವಿಲ್ ಕಾಮಗಾರಿ ಹಾಗೂ ಯಂತ್ರೋಪಕರಣಗಳ ಅಳವಡಿಕೆ ಪೂರ್ಣಗೊಂಡ ಬಳಿಕ, ಕಳೆದ ಜುಲೈನಿಂದ ಪ್ರಾಯೋಗಿಕ ಕಾರ್ಯಾಚರಣೆ ಆರಂಭಿಸಿತ್ತು ಎಂದು ಕೆಪಿಸಿಎಲ್ ಮೂಲಗಳು ಹೇಳಿದವು.

# ಪರೀಕ್ಷೆ ಬಗ್ಗೆ ಆತ್ಮವಿಶ್ವಾಸ ಇರಲಿ: ಡಿಡಿಪಿಐ ಕಿವಿಮಾತು

• **ಉದಯವಾಹಿನಿ, ರಾಮನಗರ**

ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಅಗತ್ಯವಿರುವ ಸವಲತ್ತುಗಳನ್ನು ಸರ್ಕಾರ ಪೂರೈಸುತ್ತಿದೆ. ಅವುಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಫಲಿತಾಂಶ ಪಡೆಯಲು ಚಿತ್ತ ಹರಿಸಬೇಕು. ಪರೀಕ್ಷಾ ಭಯ ಬಿಟ್ಟು ಚನ್ನಾಗಿ ಪರೀಕ್ಷೆ ಬರೆಯುವೆ ಎಂಬ ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ವಿ.ಸಿ. ಬಸವರಾಜೇಗೌಡ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವ್ಯಾಪ್ತಿಯ ವಸತಿ ಶಾಲೆ ಹಾಗೂ ಮೌಲಾನಾ ಆಜಾದ್ ಮಾದರಿ ಶಾಲೆಯಲ್ಲಿ ಓದುತ್ತಿರುವ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ, ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಶೈಕ್ಷಣಿಕ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಓದುವ ವಯಸ್ಸಿನಲ್ಲಿ ಕಾಲಹರಣ ಮಾಡಬಾರದು. ಅಮೂಲ್ಯವಾದ



ಉದಯವಾಹಿನಿ ಚಿತ್ರ

ಸಮಯವನ್ನು ಜ್ಞಾನಾರ್ಜನೆಗಾಗಿ ಮೀಸಲಿಟ್ಟು ಶ್ರದ್ಧೆಯಿಂದ ಕಲಿತುಕೊಳ್ಳಬೇಕು. ಆ ಮೂಲಕ ದೇಶದ ಆಸ್ತಿಯಾಗಬೇಕು. 20 ’ಪರೀಕ್ಷೆಗೆ ಭಯ ಪಡಬಾರದು. ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯಬೇಕು. ಅದಕ್ಕೆ ವಿಷಯವನ್ನು ಮನನ, ಪುನರ್ ಮನನ ಮಾಡಿಕೊಳ್ಳಬೇಕು.

ಯಾವುದಾದರೂ ವಿಷಯ ಅರ್ಥವಾಗದಿದ್ದರೆ ಶಿಕ್ಷಕರಿಂದ ಕೇಳಿ ಕಲಿಯಬೇಕು. ಪರೀಕ್ಷೆಯನ್ನು ಉತ್ತಮವಾಗಿ ಬರೆಯುವ ಮೂಲಕ ಬದುಕಿನ ಮುಂದಿನ ಘಟ್ಟವನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು. ಚೆನ್ನಾಗಿ ಓದಿ ಮುಂದೆ ಭವಿಷ್ಯ ರೂಪಿಸಿಕೊಳ್ಳಬೇಕು’ ಎಂದು ಶುಭ ಹಾರೈಸಿದರು.

# ವೈಷ್ಣವ ದೇಗುಲಗಳಲ್ಲಿ ಭಕ್ತರ ದಂಡು

• **ಉದಯವಾಹಿನಿ, ಶ್ರೀರಂಗಪಟ್ಟಣ**

ವೈಕುಂಠ ಏಕಾದಶಿ ನಿಮಿತ್ತ ಪಟ್ಟಣ ಹಾಗೂ ತಾಲ್ಲೂಕಿನ ವಿವಿಧ ವೈಷ್ಣವ ದೇವಾಲಯಗಳಿಗೆ ಶುಕ್ರವಾರ ಹೆಚ್ಚಿನ ಭಕ್ತರು ಭೇಟಿ ನೀಡಿ ದೇವರ ದರ್ಶನ ಪಡೆದರು. ಪಟ್ಟಣದ ಐತಿಹಾಸಿಕ ಶ್ರೀರಂಗನಾಥಸ್ವಾಮಿ ದೇವಾಲಯದಲ್ಲಿ ಮುಂಜಾನೆಯಿಂದಲೇ ಪೂಜಾ ವಿಧಿ ವಿಧಾನಗಳು ಆರಂಭವಾದವು. ಶ್ರೀರಂಗನಾಥಸ್ವಾಮಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು.

ದೇವಾಲಯಕ್ಕೆ ಬೆಳಿಗ್ಗೆಯಿಂದ ಸಂಜೆ ವರೆಗೂ ಸಹಸ್ರಾರು ಭಕ್ತರು ಭೇಟಿ ನೀಡಿ ಶ್ರೀರಂಗನಾಥ ಸ್ವಾಮಿಯ ದರ್ಶನ ಪಡೆದರು. ದೇವಾಲಯ ಹೊರಗೂ ಭಕ್ತರ ಸಾಲುಗಟ್ಟಿ ನಿಂತಿದ್ದ ದೃಶ್ಯ ಕಂಡು ಬಂತು. ಬನ್ನಹಳ್ಳಿ: ತಾಲ್ಲೂಕಿನ ಬನ್ನಹಳ್ಳಿಯ 10ನೇ ಶತಮಾನದ ತಿರುಮಲ ದೇವಾಲಯದಲ್ಲಿ ಮುಂಜಾನೆ 3 ಗಂಟೆಯಿಂದಲೇ ಪೂಜಾ ಕೈಂಕರ್ಯಗಳು ಆರಂಭವಾದವು. ಬೆಳಿಗ್ಗೆ 9 ಗಂಟೆ ವೇಳೆಗೆ ದೇವಾಲಯ ಮುಂದೆ ಭಕ್ತರ ದಂಡೇ ನೆರೆದಿತ್ತು. ಬನ್ನಹಳ್ಳಿ ಮತ್ತು ಆಸುಪಾಸಿನ ಗ್ರಾಮಗಳು ಹಾಗೂ ಮಂಡ್ಯ, ಮೈಸೂರು, ಬೆಂಗಳೂರು ಇತರ ಕಡೆಗಳಿಂದಲೂ ಭಕ್ತರು ದೇವಾಲಯಕ್ಕೆ ಆಗಮಿಸಿದ್ದರು.



ದೇಗುಲದ ಪ್ರಾಂಗಣದಲ್ಲಿ ನಿರ್ಮಿಸಿದ್ದ ವೈಕುಂಠ ದ್ವಾರ ಪ್ರವೇಶಿಸಿ ಪುನೀತರಾದರು. ದೇವಾಲಯದ ಪ್ರಧಾನ ಅರ್ಚಕ ಕೃಷ್ಣಮೂರ್ತಿ ಅವರ ನೇತೃತ್ವದಲ್ಲಿ ದೇವರಿಗೆ ಅಭಿಷೇಕ, ಅರ್ಚನೆಗಳು ನಡೆದವು ಪ್ರಸಾದ ವಿತರಣೆ ನಡೆಯಿತು. ಹಾಡುಗಾರರು ಭಕ್ತಿ ಗೀತೆ, ದೇವರನಾಮ ಪ್ರಸ್ತುತಪಡಿಸಿದರು. ತಾಲ್ಲೂಕಿನ ಕರಿಘಟ್ಟದ ವೆಂಕಟರಮಣಸ್ವಾಮಿ ದೇವಾಲಯದಲ್ಲಿ, ಅರ್ಚಕ ಅಭಿಷೇಕ್ ಶ್ರೀನಿವಾಸ್ ಅವರ ನೇತೃತ್ವದಲ್ಲಿ ವಿಶೇಷ ಪೂಜೆಗಳು ನಡೆದವು. ಆಸಿಪಾಸಿನ ಗ್ರಾಮಗಳು ಮತ್ತು ನಗರ ಪ್ರದೇಶದ ಭಕ್ತರು ಕೂಡ ಆಗಮಿಸಿ ದರ್ಶನ ಪಡೆದರು.

### ದೇವರ ಮೂರ್ತಿಗೆ ಅಲಂಕಾರ

**ತಾಲ್ಲೂಕಿನ ದರಸಗುಪ್ಪೆ ಗ್ರಾಮದ ವೀರಾಂಜನೇಯಸ್ವಾಮಿ ದೇವಾಲಯದಲ್ಲಿ ವೈಕುಂಠ ದ್ವಾರದ ಮಾದರಿಯನ್ನು ನಿರ್ಮಿಸಲಾಗಿತ್ತು. ದಿನ ಪೂರ್ತಿ ಪೂಜೆ, ಪುನಸ್ಕಾರಗಳು ನಡೆದವು. ಪ್ರಸಾದ ವಿತರಣೆ ನಡೆಯಿತು. ಪಟ್ಟಣದ ಕಾಳಿಕಾಂಬ ಕಮಠೇಶ್ವರ ದೇವಾಲಯದಲ್ಲಿರುವ ಶ್ರೀನಿವಾಸ ದೇವರ ಮೂರ್ತಿಗೆ ವಿಶೇಷ ಅಲಂಕಾರ ಮಾಡಿ ಪೂಜಿಸಲಾಯಿತು.**

# ನರೇಗಾ ಕಾರ್ಮಿಕರ ಕೆಲಸಕ್ಕೆ ಯಂತ್ರಗಳ ಕೊಕ್ಕೆ?

• **ಉದಯವಾಹಿನಿ, ಬಂಗಾರಪೇಟೆ**

ಕೆರೆಗಳಲ್ಲಿನ ಮಣ್ಣನ್ನು ಅಕ್ರಮವಾಗಿ ತೆಗೆಯುವ ಮೂಲಕ ಕೆರೆಯ ಸ್ವರೂಪವನ್ನೇ ಹಾಳುಮಾಡುವ ದಂಧೆಯು ತಾಲ್ಲೂಕಿನಲ್ಲಿ ವ್ಯಾಪ್ತಿಯಲ್ಲಿ ಅವ್ಯಾಹತವಾಗಿದೆ. ಈ ದಂಧೆ ವಿರುದ್ಧ ಕ್ರಮ ಕೈಗೊಳ್ಳಬೇಕಿದ್ದ ಅಧಿಕಾರಿಗಳು ಮಾತ್ರ ಮೌನಕ್ಕೆ ಜಾರಿದ್ದು, ಕಂಡೂ ಕಾಣದಂತೆ ವರ್ತಿಸುತ್ತಿದ್ದಾರೆ ಎಂದು ಸಾರ್ವಜನಿಕ ವಲಯದಲ್ಲಿ ಆಕ್ರೋಶ ವ್ಯಕ್ತವಾಗಿದೆ.

**ಕೆರೆಯ ಸ್ವರೂಪಕ್ಕೆ ಧಕ್ಕೆ**

ತಾಲ್ಲೂಕಿನ ಐನೋರಹೊಸಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಾರನಹಳ್ಳಿ ಗ್ರಾಮದ ಕೆರೆಯಲ್ಲಿ ಗೋಕುಂಟೆ ನಿರ್ಮಾಣದ ಹೆಸರಿನಲ್ಲಿ ಪಂಚಾಯಿತಿ ಸದಸ್ಯರು ಯಾರೊಬ್ಬರ ಭಯವಿಲ್ಲದೆ ಹತ್ತಾರು ಟ್ರ್ಯಾಕ್ಟರ್‌ಗಳ ಮೂಲಕ ಕೆರೆಯಲ್ಲಿನ ಮಣ್ಣನ್ನು ಅಕ್ರಮವಾಗಿ ತೆಗೆದು ಬಂಗಾರಪೇಟೆ ಮತ್ತು ಮಾಲೂರು ಮುಖ್ಯ ರಸ್ತೆಯಲ್ಲಿರುವ ರಾಮಾಪುರ ಗೇಟ್ ಸಮೀಪ 34ರಲ್ಲಿ ನಿರ್ಮಾಣವಾಗುತ್ತಿರುವ ಖಾಸಗಿ ಬಡಾವಣೆಗೆ ಮಾರಾಟ ಮಾಡಲಾಗುತ್ತಿದೆ ಎಂದು ಗ್ರಾಮಸ್ಥರು ಆರೋಪಿಸುತ್ತಾರೆ.



ಉದಯವಾಹಿನಿ ಚಿತ್ರ

ಬರಪೀಡಿತ ತಾಲ್ಲೂಕು ಹಣೆಪಟ್ಟಿ ಹೊಂದಿರುವ ಬಂಗಾರಪೇಟೆಯಲ್ಲಿ ರೈತರು ಕೃಷಿ ಚಟುವಟಿಕೆಗಳನ್ನೇ ಅವಲಂಬಿಸಿದ್ದಾರೆ.

ಮಳೆಗಾಲದ ಹೊರತಾಗಿ, ಕೆರೆಗಳೇ ರೈತರ ಜೀವ ಳವಾಗಿವೆ. ಆದರೆ, ಕೆರೆಯಲ್ಲಿನ ಮಣ್ಣನ್ನು ಅಕ್ರ ಮವಾಗಿ ತೆಗೆಯುತ್ತಿರುವ ಕೆಲ ವರು ಕೆರೆಯ ಸ್ವರೂಪಕ್ಕೆ ಧಕ್ಕೆ ತಂದಿದ್ದಾರೆ.

### ಕನಿಷ್ಠ 100 ದಿನ ಕೆಲಸ

**ತಾಲ್ಲೂಕಿನಲ್ಲಿ ಬಡವರಿಗೆ 100 ದಿನ ಕೂಲಿ ಕೊಡುವ ಉದ್ದೇಶದಿಂದ ಕೇಂದ್ರ ಸರ್ಕಾರವು ನರೇಗಾ ಯೋಜನೆ ಜಾರಿಗೆ ತಂದಿದೆ. ಈ ಯೋಜನೆಯಡಿ ಬಡವರಿಗೆ ವರ್ಷಕ್ಕೆ ಕನಿಷ್ಠ 100 ದಿನ ಕೆಲಸ ನೀಡಬೇಕಿತ್ತು. ಆದರೆ, ಮಣ್ಣು ತೆಗೆಯುವ ಯಂತ್ರದಿಂದ ಕರೆಯ ಮಣ್ಣನ್ನು ತೆಗೆಸಲಾಗುತ್ತಿದೆ. ಇದರಿಂದ ಕೂಲಿ ಕಾರ್ಮಿಕರು ಕೆಲಸದಿಂದ ವಂಚಿತರಾಗುವಂತಾಗಿದೆ ಎಂದು ಕೂಲಿಕಾರ್ಮಿಕರು ಅವಲತ್ತುಕೊಂಡರು.**

ಇಲ್ಲಿ ಅಕ್ರಮವಾಗಿ ತೆಗೆದ ಮಣ್ಣನ್ನು ಬಡಾವಣೆಗಳ ನಿರ್ಮಾಣಕ್ಕೆ ಲಕ್ಷಾಂತರ ರೂಪಾಯಿಗೆ ಮಾರಾಟ ಮಾಡಿಕೊಳ್ಳುತ್ತಿದ್ದಾರೆ ಎಂದು ಸ್ಥಳೀಯರು ದೂರಿದ್ದಾರೆ.

# ವಿರಾಜಪಪೇಟೆ ಕ್ಷೇತ್ರಕ್ಕೆ 60 ಕೋಟಿ ಮಂಜೂರು: ಸಚಿವ

• **ಉದಯವಾಹಿನಿ, ಮಡಿಕೇರಿ**

ವಿರಾಜಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರಾಜ್ಯ ರಾಷ್ಟ್ರೀಯ ಹೆದ್ದಾರಿ ರಸ್ತೆ ಅಭಿವೃದ್ಧಿಗೆ 60 ಕೋಟಿ ಮಂಜೂರು ಮಾಡಲಾಗಿದೆ ಎಂದು ಲೋಕೋಪಯೋಗಿ ಇಲಾಖೆ ಖಾತೆ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.

ವಿರಾಜಪೇಟೆ ತಾಲ್ಲೂಕಿನ ಕೊಣನೂರು– ಮಾಕುಟ್ಟ ರಾಜ್ಯ ಹೆದ್ದಾರಿ ವಿಸ್ತರಣಾ ಕಾಮಗಾರಿಗೆ ಶುಕ್ರವಾರ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಕೊಡಗು ಜಿಲ್ಲೆಯಲ್ಲಿ ರಸ್ತೆ ಅಭಿವೃದ್ಧಿಗೆ ಆದ್ಯತೆ ಮೇಲೆ ಕ್ರಮ ವಹಿಸಲಾಗಿದೆ. ಹಂತ ಹಂತವಾಗಿ ರಸ್ತೆ ಅಭಿವೃದ್ಧಿ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ಭರವಸೆ ನೀಡಿದರು. ಲೋಕೋಪಯೋಗಿ ಇಲಾಖೆಯಿಂದ ರಾಷ್ಟ್ರೀಯ ಹೆದ್ದಾರಿ ವಿಭಾಗದಲ್ಲಿ ದಕ್ಷಿಣ ವಲಯ ವ್ಯಾಪ್ತಿಯಲ್ಲಿ 163 ಕಾಮಗಾರಿ ಕೈಗೊಳ್ಳಲಾಗುತ್ತಿದ್ದು, ಇವುಗಳಿಗೆ 705 ಕೋಟಿ ಹಾಗೂ ಉತ್ತರ ವಲಯದಲ್ಲಿ 132 ಕಾಮಗಾರಿ ಕೈಗೊಳ್ಳಲಾಗಿದ್ದು, 680 ಕೋಟಿ ಮಂಜೂರು ಮಾಡಲಾಗಿದೆ. ಒಟ್ಟಾರೆ, ರಾಜ್ಯದಲ್ಲಿ 295 ಕಾಮಗಾರಿಯ 1,991 ಕಿ.ಮೀ ಉದ್ದದ ರಸ್ತೆ



ಉದಯವಾಹಿನಿ ಚಿತ್ರ

ಅಭಿವೃದ್ಧಿಗೆ 1,385 ಕೋಟಿ ವೆಚ್ಚದ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಮುಖ್ಯಮಂತ್ರಿಯ ಕಾನೂನು ಸಲಹೆಗಾರ ಶಾಸಕ ಎ.ಎಸ್.ಪೊನ್ನಣ್ಣ ಮಾತನಾಡಿ, ’ಅಂತರ ರಾಜ್ಯ ಹೆದ್ದಾರಿ ಸಂಬಂಧ ಸಾರ್ವಜನಿಕರಿಂದ ಸಾಕಷ್ಟು ದೂರುಗಳು ಬರುತ್ತಿದ್ದವು. ಹೀಗಾಗಿ, ರಸ್ತೆ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಲಾಗಿದೆ ಎಂದರು.

ರಾಷ್ಟ್ರೀಯ ಹೆದ್ದಾರಿ ವಿಭಾಗ ವ್ಯಾಪ್ತಿಯ ಕೇಂದ್ರ ರಸ್ತೆ ನಿಧಿ ಮೂಲ ಸೌಕರ್ಯ ಯೋಜನೆಯಡಿ ವಿರಾಜಪೇಟೆ ತಾಲ್ಲೂಕಿನ ಕೊಣನೂರು– ಮಾಕುಟ್ಟ ರಾಜ್ಯ ಹೆದ್ದಾರಿ 91 ರಡಿ 6 ಕೋಟಿ ವೆಚ್ಚದ ರಸ್ತೆ ವಿಸ್ತರಣಾ ಕಾಮಗಾರಿ ಚಾಲನೆ ನೀಡಲಾಗಿದೆ.

# ಕಾವೇರಿ ನದಿ ನೀರು ಕಲುಷಿತಗೊಳ್ಳುತ್ತಿರುವುದು ಹೇಗೆ ಗೊತ್ತಾ?

## ಕಾವೇರಿ ನದಿಯಲ್ಲಿ ನೀರಿನ ಪ್ರಮಾಣ ಹೆಚ್ಚಿದ್ದಾಗ ಎಲ್ಲವನ್ನೂ ಒಡಲಲ್ಲಿ ಸೇರಿಸಿಕೊಂಡು ಹರಿಯುವಾಗ ನಮ್ಮ ಕಣ್ಣಿಗೆ ಕಾಣಿಸುವುದಿಲ್ಲ

• **ಉದಯವಾಹಿನಿ, ಮಡಿಕೇರಿ**

ತಲಕಾವೇರಿಯಲ್ಲಿ ಹುಟ್ಟಿ ಹರಿಯುವ ಕಾವೇರಿ ನದಿ ಕೊಡಗಿನ ಗಡಿ ದಾಟಿ ಹರಿಯುವ ಮುನ್ನವೇ ಅಪವಿತ್ರ ಳಾಗುತ್ತಿರುವುದು ನಿಜಕ್ಕೂ ಬೇಸರದ ಸಂಗತಿಯಾಗಿದೆ. ಇದಕ್ಕೆ ಕಾರಣಗಳು ಅನೇಕ ಇದ್ದರೂ ಅಭಿವೃದ್ಧಿ ಹೊಂದುತ್ತಿರುವ ನದಿ ತಟದ ಪಟ್ಟಣಗಳ ತ್ಯಾಜ್ಯ ನೀರು ಯಾವುದೇ ಅಡೆ ತಡೆಯಿಲ್ಲದೆ ಕಾವೇರಿಯನ್ನು ಸೇರುತ್ತಿರುವುದು ಬಹುಮುಖ್ಯ ಕಾರಣ ಎನ್ನುವುದನ್ನು ತಳ್ಳಿಹಾಕಲಾಗದು. ಕಾವೇರಿನದಿಯಲ್ಲಿ ನೀರಿನ ಪ್ರಮಾಣ ಹೆಚ್ಚಿದ್ದಾಗ ಎಲ್ಲವನ್ನೂ ಒಡಲಲ್ಲಿ ಸೇರಿಸಿಕೊಂಡು ಹರಿಯುವಾಗ ಯಾವುದೂ ನಮ್ಮ ಕಣ್ಣಿಗೆ ಕಾಣಿಸುವುದಿಲ್ಲ. ಆದರೆ ಬೇಸಿಗೆ ಬರುತ್ತಿದ್ದಂತೆಯೇ ನೀರಿನ ಪ್ರಮಾಣ ಕಡಿಮೆಯಾದಾಗ ನದಿ ನೀರು ಕಲುಷಿತವಾಗುತ್ತಿರುವುದು ಅರಿವಿಗೆ ಬರುತ್ತದೆ. ಆದರೆ ಅನ್ಯ ಮಾರ್ಗವಿಲ್ಲದೆ ಅದನ್ನೇ ಬಳಸ ಬೇಕಾಗುತ್ತದೆ.

**ನಿಜಕ್ಕೂ ಬೇಸರದ ಸಂಗತಿ**

ಆ ಮೂಲಕ ಸಂಕಷ್ಟವನ್ನು ಮೈಮೇಲೆ ಎಳೆದು ಕೊಳ್ಳಬೇಕಾಗುತ್ತದೆ. ಕಾವೇರಿ ನದಿಯ ಶುಚಿತ್ವ ಕಾಪಾಡಬೇಕಾದರೆ ಮೊದಲಿಗೆ ನದಿತಟದಲ್ಲಿರುವ ಪಟ್ಟಣಗಳ ಕೊಳಚೆ ನೀರು ನದಿಗೆ ಹರಿಯುವುದನ್ನು ತಡೆಯಬೇಕಾಗಿದೆ. ಹಾಗೆನೋಡಿದರೆ ಕೊಡಗಿನ ತಲಕಾವೇರಿಯಲ್ಲಿ ಹುಟ್ಟಿ ಹರಿಯುವ ಕಾವೇರಿ ನದಿ ಜಿಲ್ಲೆಯ ಹಲವು ಪಟ್ಟಣಗಳನ್ನು ಹಾದು ಬರುತ್ತದೆ. ಹೀಗೆ ಬರುವಾಗ ನದಿ ತಟದಲ್ಲಿ ಹಲವು ಪಟ್ಟಣಗಳನ್ನು ದಾಟಿ ಬರುವಾಗ ಅಲ್ಲಿನ ಕಲ್ಮಶಗಳನ್ನು ತನ್ನೊಂದಿಗೆ ಹೊತ್ತು ಹರಿಯಬೇಕಾಗುತ್ತದೆ. ಮೊದಲೆಲ್ಲ ನದಿತಟದ ಪ್ರದೇಶಗಳು ಅಷ್ಟೊಂದು ಅಭಿವೃದ್ಧಿ ಹೊಂದಿರಲಿಲ್ಲ. ಜನವಸತಿ ಪ್ರದೇಶಗಳು ಕಡಿಮೆಯಿದ್ದವು ಹೀಗಾಗಿ ಕಾವೇರಿ ಶುದ್ಧಳಾಗಿದ್ದಳು. ಆದರೆ ಕಳೆದೊಂದು ದಶಕದಿಂದ ಕೊಡಗು ನಾಗಾಲೋಟದಲ್ಲಿ ಬೆಳೆಯುತ್ತಿದೆ. ಅದರ ಪರಿಣಾಮಗಳು ಇದೀಗ ಗೋಚರಿಸುತ್ತಿವೆ.



ಉದಯವಾಹಿನಿ ಚಿತ್ರ

**ಭಾಗಮಂಡಲ, ನಾಪೋಕ್ಲು, ಬೇತ್ರಿ, ಕೊಂಡಂಗೇರಿ, ನೆಲಹುದಿಕೇರಿ, ಕುಶಾಲನಗರ ಹೀಗೆ ಹಲವು ಊರುಗಳನ್ನು ದಾಟಿ ಕಾವೇರಿ ಹರಿದು ಬರಬೇಕು. ಈ ಊರುಗಳು ಈಗ ನಗರಕ್ಕೆ ಕಡಿಮೆ ಇಲ್ಲದಂತೆ ಬೆಳೆಯುತ್ತಿವೆ. ಜನವಸತಿ ಹೆಚ್ಚಾಗಿವೆ. ಪರಿಣಾಮ ಪಟ್ಟಣದ ಬಹುತೇಕ ಕೊಳಚೆ ನೇರವಾಗಿ ನದಿಯತ್ತ ಹರಿಯುತ್ತಿದೆ. ಇದನ್ನು ಆಯಾ ಗ್ರಾಮಪಂಚಾಯಿತಿ, ಪಟ್ಟಣಪಂಚಾಯಿತಿಗಳು ತಡೆಯಬೇಕಾಗಿದೆ. ಆದರೆ ಅದು ಆದಂತೆ ಕಾಣಿಸುತ್ತಿಲ್ಲ. ಹೀಗಾಗಿಯೇ ಕಾವೇರಿ ನದಿ ಕಲುಷಿತವಾಗುತ್ತಿದೆ ಎನ್ನುವುದು ಪರಿಸರ ಪ್ರೇಮಿಗಳ ಆರೋಪವಾಗಿದೆ.**

ಇದೆಲ್ಲದರ ನಡುವೆ ನಾಪೋಕ್ಲು, ನೆಲ್ಯಹುದಿಕೇರಿ ಮತ್ತು ಕುಶಾಲನಗರ ಪಟ್ಟಣವು ದಿನದಿಂದ ದಿನಕ್ಕೆ ಬೆಳೆಯುತ್ತಿದೆ. ಇಲ್ಲಿ ಜನವಸತಿ ಮಾತ್ರವಲ್ಲದೆ, ಹೋಟೆಲ್, ಮಾಂಸ ಮಾರಾಟ ಮಳಿಗೆಗಳು ಹೀಗೆ ಹತ್ತಾರು ವಹಿವಾಟುಗಳು ನಡೆಯುತ್ತಿದ್ದು, ಬಹುತೇಕ ಕಡೆಗಳಲ್ಲಿ ತ್ಯಾಜ್ಯವನ್ನೆಲ್ಲ ನದಿಗೆ ಸುರಿದು ಕೈತೊಳೆದು ಕೊಳ್ಳುವವರು ಇಲ್ಲದಿಲ್ಲ. ಅದರಲ್ಲೂ ನೆಲಹುದಿಕೇರಿಯ ಮೀನು ಮಾರುಕಟ್ಟೆಯಿಂದ ತ್ಯಾಜ್ಯ ನೀರು ನೇರವಾಗಿ ನದಿಯನ್ನು ತಲುಪುತ್ತಿದೆ ಎಂಬ ಆರೋಪವೂ ಇಲ್ಲದಿಲ್ಲ.

**ಈಗಾಗಲೇ ಹಲವು ಬಾರಿ ಕುಶಾಲನಗರ ವ್ಯಾಪ್ತಿಯಲ್ಲಿ ಕಾವೇರಿ ನದಿಯಲ್ಲಿ ಸಂಗ್ರಹಗೊಂಡಿದ್ದ ಹಳೆ ಬಟ್ಟೆ ಸೇರಿದಂತೆ ವಿವಿಧ ತ್ಯಾಜ್ಯಗಳನ್ನು ಹೊರತೆಗೆದು ಶುಚಿಗೊಳಿಸುವ ಕೆಲಸವನ್ನು ಪರಿಸರ ಪ್ರೇಮಿಗಳು ಮಾಡಿದ್ದಾರೆ. ಆದರೆ ನದಿಗೆ ತ್ಯಾಜ್ಯ ಸುರಿದು ಕೈತೊಳೆದುಕೊಳ್ಳುವವರು ಇರುವ ತನಕ ನದಿಯನ್ನು ಎಷ್ಟೇ ಶುಚಿಗೊಳಿಸಿದರೂ ಕಲುಷಿತವಾಗುತ್ತಲೇ ಇರುತ್ತದೆ ಎನ್ನುವುದನ್ನು ನಾವು ಒಪ್ಪಿಕೊಳ್ಳಬೇಕಾಗಿದೆ.**

ಕೊಡಗಿನ ಹೆಬ್ಬಾಗಿಲು ಎಂದೇ ಕರೆಯುವ ಕುಶಾಲನಗರ ಪಟ್ಟಣ ದಿನದಿಂದ ಬೆಳೆಯುತ್ತಿದೆ. ಒಂದೆಡೆ ಹೊಸ ಬಡಾವಣೆಗಳು ಹುಟ್ಟಿಕೊಳ್ಳುತ್ತಿದ್ದರೆ, ಮತ್ತೊಂದೆಡೆ ಹೋಟೆಲ್, ಲಾಡ್ಜ್ ಸೇರಿದಂತೆ ಹಲವು ರೀತಿಯ ವಸತಿ ನಿಲಯಗಳು ನಿರ್ಮಾಣವಾಗುತ್ತಿವೆ. ಇಲ್ಲಿಂದ ಹೊರಬರುವ ಕೆಲವು ತ್ಯಾಜ್ಯ ಪ್ರತ್ಯಕ್ಷ, ಪರೋಕ್ಷವಾಗಿ ನದಿಯನ್ನೇ ಸೇರಬೇಕಾಗುತ್ತದೆ. ಅಷ್ಟೇ ಅಲ್ಲದೆ ಮಳೆ ಬಂದಾಗ ನೀರು ಎಲ್ಲಾ ತಾಜ್ಯವನ್ನು ತಂದು ನದಿಗೆ ಸೇರಿಸುತ್ತಿದೆ.

ನದಿ ಸ್ವಚ್ಛತೆ ಕುರಿತಂತೆ ಮಾತನಾಡುವವರು ಕೊಡಗಿನಿಂದಲೇ ಸ್ವಚ್ಛತೆಗೆ ಆದ್ಯತೆ ನೀಡಬೇಕಾಗಿದೆ. ಇಲ್ಲಿ ಕಲುಷಿತ, ತ್ಯಾಜ್ಯ ನೀರು ನದಿಯನ್ನು ಸೇರದಂತೆ ತಡೆಯುವ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ. ಅಷ್ಟೇ ಅಲ್ಲದೆ ನದಿ ದಡದ ಪಟ್ಟಣಗಳ ಕಲುಷಿತ ನೀರು ನೇರವಾಗಿ ನದಿಗೆ ಸೇರುವುದನ್ನು ತಪ್ಪಿಸಲು ವೈಜ್ಞಾನಿಕ ಕ್ರಮಗಳನ್ನು ಅಳವಡಿಸಿಕೊಳ್ಳಬೇಕಿದೆ. ಅದಕ್ಕಿಂತ ಹೆಚ್ಚಾಗಿ ಸಿಕ್ಕ ಸಿಕ್ಕ ತ್ಯಾಜ್ಯಗಳನ್ನು ನದಿಗೆ ತಂದು ಸುರಿಯುವವರ ವಿರುದ್ಧ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ.

# ಮಿನಿ ನ್ಯೂಸ್

## 2 ಜಿಂಕೆ, 2 ಕಾಡುಹಂದಿ ಬೇಟೆ: ಮೂವರ ಬಂಧನ

• **ಉದಯವಾಹಿನಿ, ಬಿಡದಿ**

ಹೋಬಳಿ ವ್ಯಾಪ್ತಿಯ ನಂಜೇಗೌಡನದೊಡ್ಡಿ ಹಾಗೂ ಸುತ್ತಮುತ್ತಲಿನ ಅರಣ್ಯ ಪ್ರದೇಶದಲ್ಲಿ 2 ಜಿಂಕೆ ಹಾಗೂ 2 ಕಾಡುಹಂದಿಯನ್ನು ಬೇಟೆಯಾಡಿ, ವಾಹನದಲ್ಲಿ ಬೆಂಗಳೂರಿಗೆ ಸಾಗಿಸುತ್ತಿದ್ದ ಮೂವರನ್ನು ಅರಣ್ಯ ಇಲಾಖೆಯ ಬೆಂಗಳೂರಿನ ಅಪರಾಧ ನಿಯಂತ್ರಣ ಕೋಶ ಮತ್ತು ಸಂಚಾರಿ ಜಾಗೃತ ದಳವು ಜಂಟಿ ಕಾರ್ಯಾಚರಣೆ ನಡೆಸಿ, ಬಿಡದಿ ಸಮೀಪದ ಚಿಕ್ಕ ಕುಂಟನಹಳ್ಳಿ ಕ್ರಾಸ್‌ನಲ್ಲಿ ಬಂಧಿಸಿದೆ. ಬೆಂಗಳೂರಿನ ತೋಟದಗುಡ್ಡನಹಳ್ಳಿ ಶ್ರೀನಿವಾಸ್(47), ನೆಲಮಂಗಲ ತಾಲ್ಲೂಕು ಪಾದನಕುಂಟೆ ಗ್ರಾಮದ ಹನುಮಂತರಾಜು(44) ಹಾಗೂ ರಾಮನಗರ ತಾಲ್ಲೂಕಿನ ನಂಜೇಗೌಡನದೊಡ್ಡಿ ಗ್ರಾಮದ ಮುನಿರಾಜು(38) ಬಂಧಿತ ಆರೋಪಿಗಳು.

ಆರೋಪಿಗಳಿಂದ ಥಾರ್ ವಾಹನ, ಪ್ರಾಣಿಗಳ ಕಳೇಬರ, ಸಿಂಗಲ್ ಬ್ಯಾರೆಲ್ ರೈಫಲ್, ಏರ್‌ಗನ್, ಬುಲೆಟ್‌ಗಳು, 3 ಮೊಬೈಲ್, ಬ್ಯಾಟರಿಗಳು, ಚಾಕು ಸೇರಿದಂತೆ ಇತರ ಆಯುಧಗಳನ್ನು ವಶಪಡಿಸಿಕೊಳ್ಳಲಾಗಿದೆ. ಪ್ರಾಣಿಗಳ ಬೇಟೆ ಹವ್ಯಾಸ ಮಾಡಿಕೊಂಡಿದ್ದ ಶ್ರೀನಿವಾಸ್ ಮತ್ತು ಹನುಮಂತರಾಜು, ತಮ್ಮ ಸ್ನೇಹಿತರೊಬ್ಬರ ಮೂಲಕ ಸ್ಥಳೀಯನಾದ ಮುನಿರಾಜುನನ್ನು ಪರಿಚಯ ಮಾಡಿಕೊಂಡಿದ್ದರು. ನಂಜೇಗೌಡನದೊಡ್ಡಿ ಹಾಗೂ ಸುತ್ತಮುತ್ತಲಿನ ಭಾಗದಲ್ಲಿ ಕಾಡುಹಂದಿ ಮತ್ತು ಜಿಂಕೆ ಓಡಾಡುವುದರ ಮಾಹಿತಿ ಪಡೆದಿದ್ದ ಇಬ್ಬರೂ, ಮುನಿರಾಜು ಸಹಕಾರದೊಂದಿಗೆ ಬೇಟೆಯಾಡುತ್ತಿದ್ದರು ಎಂದು ಇಲಾಖೆಯ ಅಧಿಕಾರಿಗಳು ತಿಳಿಸಿದರು.

## ನರೇಂದ್ರಸ್ವಾಮಿ ಮಂತ್ರಿಗಿರಿಗೆ ಹರಕೆ ನ್ಯಾಯಮೂರ್ತಿ ವಜಾಕ್ಕೆ ಆಗ್ರಹ

• **ಉದಯವಾಹಿನಿ, ಮಂಡ್ಯ**

ಮಳವಳ್ಳಿ ಶಾಸಕ ಪಿ.ಎಂ. ನರೇಂದ್ರಸ್ವಾಮಿಗೆ ಸಚಿವ ಸ್ಥಾನ ಸಿಗಲೆಂದು ದೇವರಲ್ಲಿ ಹರಕೆ ಹೊರುವೆ ಎಂದಿರುವ ಹೈಕೋರ್ಟ್ ನ್ಯಾಯಮೂರ್ತಿ ಟಿ.ಜಿ. ಶಿವಶಂಕರೇಗೌಡರನ್ನು ಸ್ಥಾನದಿಂದ ವಜಾ ಮಾಡಬೇಕೆಂದು ಮಾಜಿ ಶಾಸಕ ಕೆ. ಅನ್ನದಾನಿ ಪತ್ರಿಕಾಗೋಷ್ಠಿಯಲ್ಲಿ ಆಗ್ರಹಿಸಿದರು.

ಮಂಗಳವಾರ ಮಳವಳ್ಳಿ ಕೋರ್ಟ್ ಆವರಣದಲ್ಲಿ ನಡೆದ ಸಮಾರಂಭದಲ್ಲಿ ನ್ಯಾ. ಟಿ.ಜಿ. ಶಿವಶಂಕರೇಗೌಡರು ರಾಜಕಾರಣಿಯಂತೆ ಮಾತನಾಡಿದ್ದಾರೆ. ಅವರು ನ್ಯಾಯಮೂರ್ತಿಗಳೋ ರಾಜಕಾರಣಿಯ ಹಿಂಬಾಲಕರೋ ಎಂದು ಪ್ರಶ್ನಿಸಿದರು. ಅವರ ವಿರುದ್ಧ ಕ್ರಮಕ್ಕಾಗಿ ಅವರು ಮಾತನಾಡಿರುವ ವೀಡಿಯೋ ಸಿಡಿ ಜತೆಗೆ ರಾಷ್ಟ್ರಪತಿ, ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ, ರಾಜ್ಯಪಾಲರಿಗೆ ಪತ್ರ ಬರೆಯಲಾಗುವುದು ಎಂದರು.

## ನೂತನ ನಗರಸಭಾ ಸದಸ್ಯರಿಂದ ಪುಟ್ಟರಂಗಶೆಟ್ಟರಿಗೆ ಸನ್ಮಾನ

• **ಉದಯವಾಹಿನಿ, ಚಾಮರಾಜನಗರ**

ನಗರಸಭೆ ನೂತನವಾಗಿ ನಾಮ ನಿರ್ದೇಶನಗೊಂಡಿರುವ ನಾಲ್ವರು ನಗರಸಭಾ ಸದಸ್ಯರು ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರನ್ನು ಅವರ ನಿವಾಸದಲ್ಲಿ ಭಾರಿ ಗಾತ್ರದ ಹಾರ ಹಾಕಿ ಫಲತಾಂಬುಲ ನೀಡಿ ಅಭಿನಂದಿಸಿದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಶಾಸಕ ಸಿ. ಪುಟ್ಟರಂಗಶೆಟ್ಟಿ, ಜಿಲ್ಲಾ ಕೇಂದ್ರದ ನಗರಸಭೆಯನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ನೂತನ ನಾಮ ನಿರ್ದೇಶನ ಸದಸ್ಯರು ಶ್ರಮಿಸಬೇಕು. ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ನಗರಾಭಿವೃದ್ಧಿ ಇಲಾಖೆಯ ಹಾಗು ಇತರೇ ಯೋಜನೆಯಡಿಯಲ್ಲಿ ಅನುದಾನ ಬರುತ್ತಿದೆ. ಇದನ್ನು ಸಮರ್ಪಕವಾಗಿ ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಚುನಾಯಿತ ಸದಸ್ಯರ ಜೊತೆಗೂಡಿ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಸ್ವಚ್ಛತೆ, ಕುಡಿಯುವ ನೀರು, ರಸ್ತೆ, ಚರಂಡಿ, ಬೀದಿ ದೀಪಗಳ ದುರಸ್ತಿಗೆ ಕ್ರಮ ವಹಿಸುವಂತೆ ಸಲಹೆ ನೀಡಿದರು.

ನೂತನ ಸದಸ್ಯ, ಕರಿನಂಜನಪುರ ಸ್ವಾಮಿ ಮಾತನಾಡಿ, ನಮ್ಮ ಜನಪ್ರಿಯ ನಾಯಕರು ಹಾಗೂ ಕ್ಷೇತ್ರದ ಶಾಸಕರು ನಗರಸಭೆಗೆ ನಾಮ ನಿರ್ದೇಶನ ಮಾಡುವ ಮೂಲಕ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದ್ದಾರೆ. ಅವರ ಮಾರ್ಗದರ್ಶನ ಮತ್ತು ಸೂಚನೆಯಂತೆ ಅವರಿಗೆ ಒಳ್ಳೆಯ ಹೆಸರು ತರುವ ನಿಟ್ಟಿನಲ್ಲಿ 31 ವಾರ್ಡುಗಳ ಅಭಿವೃದ್ಧಿಗೆ ಕೆಲಸ ಕಾರ್ಯಗಳನ್ನು ಮಾಡೋಣ ಎಂದರು.

## ಭತ್ತ ಖರೀದಿ ಮಾಡೋಕೆ ಸರ್ಕಾರದ ಬಳಿ ಗೋಣಿ ಚೀಲವಿಲ್ಲ: ಎಚ್‌ಡಿಕೆ ವ್ಯಂಗ್ಯ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮಂಡ್ಯ**

ಜನರು ಬೀದಿಗೆ ಇಳಿದು ಪ್ರತಿಭಟನೆ ಮಾಡುವ ಮುನ್ನ ಭತ್ತ ಖರೀದಿ ಕೇಂದ್ರ ತೆರೆಯಿರಿ ಎಂದು ಮಂಡ್ಯ ಜಿಲ್ಲಾಧಿಕಾರಿಗೆ ಕಳೆದ ವಾರವೇ ಹೇಳಿದ್ದೆ. ಪಾಪ ಇನ್ನೂ ಗೋಣಿಚೀಲ ಖರೀದಿ ಮಾಡ್ತಿದ್ದಾರೆ ಅನಿಸುತ್ತದೆ. ಭತ್ತ ಖರೀದಿ ಮಾಡೋಕೆ ಸರ್ಕಾರದ ಬಳಿ ಗೋಣಿ ಚೀಲ ಇಲ್ಲ. ಚಲುವರಾಯಸ್ವಾಮಿ ಅವರು ನನಗೆ ಅಭಿನಂದನೆ ಸಲ್ಲಿಸುವ ಬದಲು ಈ ಕೆಲಸವನ್ನು ಮೊದಲು ಮಾಡಲಿ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ತಿರುಗೇಟು ನೀಡಿದರು.ಮದ್ದೂರು ತಾಲ್ಲೂಕಿನ ಚಾಕನಕೆರೆಯಲ್ಲಿ ಶನಿವಾರ ಬಾಗಿನ ಸಲ್ಲಿಸಿದ ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿ, ಸಚಿವ ಪರಮೇಶ್ವರ್ ಮನೆಯ ಔತಣಕೂಟದಲ್ಲಿ ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳ ಸ್ಕಾಲರ್‌ಶಿಪ್ ಬಗ್ಗೆ, ಮಾತಾಡುತ್ತೇವೆ ಎಂದಿದ್ದಾರೆ. ಹಾಗಾದರೆ ಕ್ಯಾಬಿನೆಟ್ ಇರೋದು ಏಕೆ ವಾಲ್ಮೀಕಿ ನಿಗಮದಲ್ಲಿ ಹೊಡೆದಿರೋ ದುಡ್ಡು ಬಂದಿಲ್ಲ. ಅಂತ ಚರ್ಚೆ ಮಾಡ್ತಾರಾ ಭೋವಿ ನಿಗಮದ ದುಡ್ಡಿನ ಪಾಲು ಬಂದಿಲ್ಲ ಎಂದು ಚರ್ಚೆ ಮಾಡ್ತಾರಾ ಅಹಿಂದ ಮಹಾನ್ ನಾಯಕರು ಅಲ್ವಾ ಇವರು ಎಂದು ಟೀಕಿಸಿದರು.

**ಶಂಕುಸ್ಥಾಪನೆ ಕಲ್ಲು:** ಕೇಂದ್ರ ಸರ್ಕಾರದ ಕಾರ್ಯಕ್ರಮಕ್ಕೆ ಚಲುವರಾಯಸ್ವಾಮಿ ಭೂಮಿಪೂಜೆ ಮಾಡಿದ್ದಾರೆ. ಇದರಲ್ಲಿ ನಾನು ರಾಜಕೀಯ ಮಾಡಲ್ಲ. ನಾನು ಸಿಎಂ ಆಗಿದ್ದಾಗ ಕೊಟ್ಟ ಕಾರ್ಯಕ್ರಮಗಳು ಹಲವು ಇವೆ. ಕಲ್ಲನ್ನು ಶಂಕುಸ್ಥಾಪನೆ ಮಾಡೋದಾಗಿದೆ ರಾಜ್ಯದಾದ್ಯಂತ ನನ್ನ ಶಂಕುಸ್ಥಾಪನೆ ಕಲ್ಲುಗಳು ಇರುತ್ತಿದ್ದವು ಎಂದು ಹೇಳಿದರು. ’ನಾನು ಹಲವು ಕೆರೆಗಳನ್ನು ತುಂಬಿಸಿದ್ದರೂ ಪ್ರಚಾರ ಪಡೆದಿಲ್ಲ. ನಿನ್ನೆ ಕೆರೆ ತುಂಬಿಸಿದ್ದೇವೆ ಎಂದು ಸಚಿವರು ಕುರಿ ಊಟ ಹಾಕಿಸಿದ್ದಾರೆ. ನಮ್ಮ ಕರ್ತವ್ಯ ಜನರ ಬದುಕು ಹಸನು ಮಾಡುವುದೇ ಹೊರತು ಪ್ರಚಾರವಲ್ಲ. ರೈತರ ಸಾಲ ಮನ್ನಾ ಯೋಜನೆಯಲ್ಲಿ 190 ಕೋಟಿ ಬಾಕಿ ಇದೆ. ಜಿಲ್ಲೆಯ ರೈತರಿಗೆ ಹಣ ಬಂದಿಲ್ಲ ಹಣ ಕೊಟ್ಟು ಪುಣ್ಯ ಕಟ್ಟಿಕೊ ಎಂದು ಚಲುವರಾಯಸ್ವಾಮಿಗೆ ಹೇಳೀನಿ ಎಂದರು.

ಅಂತರಾಳದಿಂದ... EDITORIAL

# ಸುಸಜ್ಜಿತ ಆಸ್ಪತ್ರೆ ದೂಳು ಹಿಡಿಯದಿರಲಿ

## ಪೂರ್ಣ ಪ್ರಮಾಣದ ಸೇವೆಗೆ ಲಭ್ಯವಾಗಲಿ



ಜನರಿಗೆ ಗುಣಮಟ್ಟದ ಆರೋಗ್ಯ ಸೇವೆಯನ್ನು ಒದಗಿಸುವುದು ಸರ್ಕಾರದ ಮೂಲ ಕರ್ತವ್ಯಗಳಲ್ಲಿ ಒಂದು. ನುರಿತ ವೈದ್ಯರು ಮತ್ತು ಸಿಬ್ಬಂದಿ, ಗುಣಮಟ್ಟದ ಔಷಧಿಗಳು ಹಾಗೂ ಪ್ರಯೋಗಾಲಯಗಳನ್ನು ಒಳಗೊಂಡ ಸುಸಜ್ಜಿತ ಸರ್ಕಾರಿ ಆಸ್ಪತ್ರೆಗಳು ಲಭ್ಯವಿದ್ದರೆ, ಆರೋಗ್ಯ ರಕ್ಷಣೆಗಾಗಿ ನಾಗರಿಕರು ದುಬಾರಿ ವೆಚ್ಚದ ಖಾಸಗಿ ಆಸ್ಪತ್ರೆಗಳನ್ನು ಆಶ್ರಯಿಸಬೇಕಾದ ಅನಿವಾರ್ಯ ತಪ್ಪುತ್ತದೆ.

ನಗರ ಪ್ರದೇಶಗಳಲ್ಲಂತೂ ದುಡಿಮೆಯ ಬಹುಪಾಲನ್ನು ದೈನಂದಿನ ಜೀವನ ನಿರ್ವಹಣೆಗೇ ವ್ಯಯಿಸಬೇಕಾಗಿರುವುದರಿಂದ ಬಡವರು ಮತ್ತು ಮಧ್ಯಮ ವರ್ಗದವರು ಖಾಸಗಿ ಆಸ್ಪತ್ರೆಗಳತ್ತ ಮುಖ ಮಾಡುವುದು ಕಷ್ಟ ಎಂಬ ಸ್ಥಿತಿ ಇದೆ. ರಾಜ್ಯದಲ್ಲಿ ಹೆಚ್ಚಿನ ಸಂಖ್ಯೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಸಾರ್ವಜನಿಕ ಆಸ್ಪತ್ರೆಗಳು, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಇದ್ದರೂ ಹಲವೆಡೆ ಮೂಲ ಸೌಕರ್ಯಗಳ ಕೊರತೆಯಿಂದ ಸಮರ್ಪಕವಾದ ಸೇವೆ ಲಭ್ಯವಾಗುತ್ತಿಲ್ಲ. ಇನ್ನೊಂದೆಡೆ, ನೂರಾರು ಕೋಟಿ ರೂಪಾಯಿ ವ್ಯಯಿಸಿ ನಿರ್ಮಿಸಲಾದ, ಅತ್ಯಾಧುನಿಕ ಯಂತ್ರೋಪಕರಣಗಳುಳ್ಳ ಆಸ್ಪತ್ರೆಗಳು ಸಮರ್ಪಕವಾಗಿ ಬಳಕೆಯಾಗುತ್ತಿಲ್ಲ.

**ನಮ್ಮ ಸರ್ಕಾರಿ ಆಸ್ಪತ್ರೆಗಳು ಮತ್ತು ಆರೋಗ್ಯ ಕೇಂದ್ರಗಳಲ್ಲಿನ ಸಮಸ್ಯೆಗಳು, ಕೊರತೆಗಳು ಕೋವಿಡ್ ಸಾಂಕ್ರಾಮಿಕದ ಅವಧಿಯಲ್ಲಿ ಬಹಿರಂಗವಾಗಿದ್ದವು. ಹಾಸಿಗೆಗಳ ಕೊರತೆ, ಆಮ್ಲಜನಕ ಪೂರೈಕೆ ವ್ಯವಸ್ಥೆಯ ಅಲಭ್ಯತೆ, ಯಂತ್ರೋಪಕರಣ ಮತ್ತು ಔಷಧಿಗಳ ಕೊರತೆ, ವೈದ್ಯರು, ಸಿಬ್ಬಂದಿ ಇಲ್ಲದಿರುವುದು ಹಲವೆಡೆ ಸಾರ್ವಜನಿಕ ಆರೋಗ್ಯ ಸೇವೆಯಲ್ಲಿ ದೊಡ್ಡ ಪ್ರಮಾಣದ ವ್ಯತ್ಯಯಕ್ಕೆ ಕಾರಣವಾಗಿದ್ದವು. ಭವಿಷ್ಯದಲ್ಲಿ ಅಂತಹ ಸವಾಲುಗಳನ್ನು ಎದುರಿಸಲು ಸಾರ್ವಜನಿಕ ಆರೋಗ್ಯ ಸೇವೆಯಲ್ಲಿ ಸುಧಾರಣೆ ತರಬೇಕೆಂಬ ಬೇಡಿಕೆ ಆಗ ವ್ಯಕ್ತವಾಗಿತ್ತು.**

ವೈದ್ಯರು, ಸಿಬ್ಬಂದಿಯನ್ನು ಒದಗಿಸದ ಕಾರಣದಿಂದ ಜನ ಅವುಗಳ ಸೇವೆಯನ್ನು ಪಡೆಯಲು ಸಾಧ್ಯವಾಗದಂತಹ ಸ್ಥಿತಿ ಇದೆ. 228.36 ಕೋಟಿ ವೆಚ್ಚದಲ್ಲಿ ರಾಜ್ಯದ ವಿವಿಧೆಡೆ ನಿರ್ಮಿಸಲಾದ ಆರು ಆಸ್ಪತ್ರೆಗಳನ್ನು ಬಳಕೆ ಮಾಡದೇ ಇದ್ದುದಕ್ಕೆ ಮಹಾಲೇಖಪಾಲರು (ಸಿಎಜಿ) 2024ರಲ್ಲಿ ರಾಜ್ಯ ವಿಧಾನಮಂಡಲಕ್ಕೆ ಸಲ್ಲಿಸಿದ್ದ ಲೆಕ್ಕಪರಿಶೋಧನಾ ವರದಿಯಲ್ಲಿ ಆಕ್ಷೇಪ ವ್ಯಕ್ತಪಡಿಸಿದ್ದರು. ಆದರೆ, ಅಂತಹ ನಿದರ್ಶನಗಳು ಮತ್ತೆ ಮತ್ತೆ ಕಾಣಸಿಗುತ್ತಿವೆ.

ಬೆಂಗಳೂರಿನ ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅಗ್ರಹಾರ ದಾಸರಹಳ್ಳಿ ಯಲ್ಲಿ 106 ಕೋಟಿ ವೆಚ್ಚದಲ್ಲಿ ನಿರ್ಮಿಸಿ 2023ರ ಮಾರ್ಚ್‌ನಲ್ಲಿ ಉದ್ಘಾಟಿಸಿದ್ದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಅಗತ್ಯ ಸಂಖ್ಯೆಯ ವೈದ್ಯರು, ಸಿಬ್ಬಂದಿಯನ್ನು ಒದಗಿಸದೇ ಇರುವುದರಿಂದ ಪೂರ್ಣಪ್ರಮಾಣದಲ್ಲಿ ಅದು ಬಳಕೆಗೆ ಲಭ್ಯವಾಗಿಲ್ಲ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ (ಬಿಬಿಎಂಪಿ) ಆರೋಗ್ಯ ಇಲಾಖೆಯ ಅಧೀನದಲ್ಲಿರುವ ಈ ಆಸ್ಪತ್ರೆಯ ನಾಲ್ಕು ಅಂತಸ್ತಿನ ಬೃಹತ್ ಕಟ್ಟಡದಲ್ಲಿ ಎಲ್ಲಾ ಸೌಕರ್ಯಗಳು, ಅತ್ಯಾಧುನಿಕ ವೈದ್ಯಕೀಯ ಯಂತ್ರೋಪಕರಣಗಳಿವೆ.

ಆದರೂ ಕನಿಷ್ಠ ತುರ್ತು ಚಿಕಿತ್ಸಾ ಘಟಕವೂ ಅಲ್ಲಿ ಕಾರ್ಯನಿರ್ವಹಿಸುತ್ತಿಲ್ಲ, 300 ಹಾಸಿಗೆಗಳ ಸಾಮರ್ಥ್ಯದ ಆಸ್ಪತ್ರೆಯಲ್ಲಿ ಏಳು ವೈದ್ಯರಷ್ಟೇ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದು ಅಲ್ಲಿನ ದುರವಸ್ಥೆಗೆ ಕನ್ನಡಿ ಹಿಡಿಯುವಂತಿದೆ. ನಗರದ ಮಧ್ಯಭಾಗದಲ್ಲೇ ಇರುವ ಆಸ್ಪತ್ರೆಯಲ್ಲಿ ವೈದ್ಯಕೀಯ ಸೇವೆಗೆ ಹೆಚ್ಚಿನ ಬೇಡಿಕೆ ಇದ್ದರೂ ಅದನ್ನು ಜನಬಳಕೆಗೆ ಲಭ್ಯವಾಗದಂತಹ ದುಃಸ್ಥಿತಿಗೆ ತಳ್ಳಿರುವ ಬಿಬಿಎಂಪಿಯ ನಡೆ ಸಂಶಯಕ್ಕೆ ಎಡೆಮಾಡುವಂತಿದೆ. ಭಾರಿ ಮೌಲ್ಯದ ಯಂತ್ರೋಪಕರಣಗಳು, ಪ್ರಯೋಗಾಲಯಗಳಲ್ಲಿನ ಪರೀಕ್ಷಾ ಯಂತ್ರಗಳು ದೂಳು ತಿನ್ನುತ್ತಿವೆ.

ಅದಕ್ಕೆ ಪೂರಕವಾಗಿ ಆಸ್ಪತ್ರೆಗಳಲ್ಲಿ ಇರುವ ಕೊರತೆಗಳನ್ನು ನಿವಾರಿಸಿ ಗುಣಮಟ್ಟದ ಸೇವೆ ಒದಗಿಸುವ ಭರವಸೆಯನ್ನು ರಾಜ್ಯ ಸರ್ಕಾರ ನೀಡಿತ್ತು. ಅಷ್ಟಾದರೂ ಸುಧಾರಣಾ ಕ್ರಮಗಳ ಅನುಷ್ಠಾನ ಪೂರ್ಣಗೊಳ್ಳದೇ ಇರುವುದರಿಂದ ಆಸ್ಪತ್ರೆಗಳು, ಆರೋಗ್ಯ ಕೇಂದ್ರಗಳಲ್ಲಿನ ಪರಿಸ್ಥಿತಿಯಲ್ಲಿ ಹೆಚ್ಚಿನ ಬದಲಾವಣೆಯೇನೂ ಆಗಿಲ್ಲ. ಆಸ್ಪತ್ರೆಯ ಕಟ್ಟಡ ನಿರ್ಮಾಣಕ್ಕೆ ಅತ್ಯುತ್ಸಾಹ ತೋರಿ, ಅಲ್ಲಿ ವೈದ್ಯಕೀಯ ಸೇವೆಯನ್ನು ಒದಗಿಸುವ ವಿಚಾರದಲ್ಲಿ ನಿರ್ಲಕ್ಷ್ಯ ವಹಿಸುವ ಧೋರಣೆಯು ಜನಹಿತಕ್ಕೆ ವಿರುದ್ಧವಾದುದು. ಅಗ್ರಹಾರ ದಾಸರಹಳ್ಳಿ ಆಸ್ಪತ್ರೆಯ ಪ್ರಕರಣದಲ್ಲಿ ರಾಜ್ಯ ಸರ್ಕಾರ ತುರ್ತಾಗಿ ಮಧ್ಯಪ್ರವೇಶಿಸಿ, ಅಗತ್ಯ ಸಂಖ್ಯೆಯ ವೈದ್ಯರು, ಸಿಬ್ಬಂದಿಯನ್ನು ನಿಯೋಜಿಸಬೇಕು. ಈ ಆಸ್ಪತ್ರೆಯನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ವಿಳಂಬವಿಲ್ಲದೆ ಕೈಗೊಳ್ಳಬೇಕು.

# ತೇಜಸ್ವಿ ವಿಚಾರಗಳಿಂದ ಕೂಡಿದ

## ಹಿಂದೂ ಧರ್ಮಪ್ರಸಾರಕ ಸ್ವಾಮಿ ವಿವೇಕಾನಂದರು

- ಶ್ರೀ. ಮೋಹನ ಗೌಡ
ಉದಯವಾಹಿನಿ ವಿಶೇಷ

**ಸ್ವಾಮಿ ವಿವೇಕಾನಂದರ ಜನನ, ಬಾಲ್ಯ ಹಾಗೂ ಶಿಕ್ಷಣ:** ಸ್ವಾಮಿ ವಿವೇಕಾನಂದರ ಮೂಲ ಹೆಸರು ನರೇಂದ್ರನಾಥ. ಸ್ವಾಮಿ ವಿವೇಕಾನಂದರ ಜನ್ಮವು ದಿನಾಂಕ 12 ಜನವರಿ, 1863ರಲ್ಲಿ ಕೊಲ್ಕತ್ತಾದಲ್ಲಿ ಆಯಿತು. ಬಾಲ್ಯದಲ್ಲಿಯೇ ವಿವೇಕಾನಂದರ ವರ್ತನೆಯಲ್ಲಿ ಎರಡು ವಿಷಯಗಳು ಪ್ರಖರವಾಗಿ ಕಂಡು ಬರತೊಡಗಿತು.

ಅವರು ಪ್ರವೃತ್ತಿಯಿಂದಲೇ ಶ್ರದ್ಧೆ ಮತ್ತು ದಯಾಮಯ ಹೃದಯವುಳ್ಳವರಾಗಿದ್ದರು. ಎರಡನೇ ವಿಷಯವೆಂದರೆ ಬಾಲ್ಯದಿಂದಲೇ ಅವರು ಯಾವುದೇ ಸಾಹಸಮಯವಾದ ಕಾರ್ಯವನ್ನು ಹಿಂಜರಿಯದೇ ಮಾಡುತ್ತಿದ್ದರು. ಸ್ವಾಮಿ ವಿವೇಕಾನಂದರ ಸಂಪೂರ್ಣ ಕುಟುಂಬವು ಆಧ್ಯಾತ್ಮ ಮಾರ್ಗದಲ್ಲಿದ್ದುದರಿಂದ ಬಾಲ್ಯದಿಂದಲೇ ಅವರ ಮೇಲೆ ಧರ್ಮದ ಕುರಿತು ಯೋಗ್ಯ ಸಂಸ್ಕಾರವಾಯಿತು. 1970ರಲ್ಲಿ ಅವರನ್ನು ಈಶ್ವರಚಂದ್ರ ವಿದ್ಯಾಸಾಗರ ಇವರ ಶಾಲೆಗೆ ಸೇರಿಸಲಾಯಿತು. ಶಾಲೆಯಲ್ಲಿರುವಾಗಲೇ ಅಧ್ಯಯನದೊಂದಿಗೆ ಬಲೋಪಾಸನೆಯನ್ನು ಮಾಡಿದರು.

**ಸ್ವಾಮಿ ವಿವೇಕಾನಂದ ಮತ್ತು ರಾಮಕೃಷ್ಣ ಪರಮಹಂಸರ ಭೇಟಿ:** ಧರ್ಮಭಾವನೆಯಿಂದ ಪ್ರೇರಿತರಾದ ನರೇಂದ್ರನ ಮನಸ್ಸಿನಲ್ಲಿ ಚಿಕ್ಕಂದಿನಿಂದಲೇ ತೀವ್ರ ವೈರಾಗ್ಯ ಉತ್ಪನ್ನವಾಗಿರುವುದನ್ನು ಕಂಡು ಡಾ. ದತ್ತ ಇವರು ಒಮ್ಮೆ ನರೇಂದ್ರನಿಗೆ 'ನಿನ್ನ ಜೀವನದ ಉದ್ದೇಶವು ಧರ್ಮಕಾರ್ಯವೇ ಆಗಿದ್ದರೆ, ನೀನು ನೇರವಾಗಿ ದಕ್ಷಿಣೇಶ್ವರದಲ್ಲಿರುವ ಶ್ರೀ ರಾಮಕೃಷ್ಣ ಪರಮಹಂಸರನ್ನು ಭೇಟಿಯಾಗು, ಹೋಗು' ಎಂದು ಹೇಳಿದರು. ಒಂದು ದಿನ ಅವರಿಗೆ ಅವರ ಪಕ್ಕದ ಮನೆಯವರಾದ ಶ್ರೀ ಸುರೇಂದ್ರನಾಥ ಇವರಲ್ಲಿ ಶ್ರೀ ರಾಮಕೃಷ್ಣ ಪರಮಹಂಸರ ದರ್ಶನವಾಯಿತು.


ಪ್ರಾರಂಭದ ಕೆಲವು ದಿನಗಳು ಶ್ರೀ ರಾಮಕೃಷ್ಣರು ನರೇಂದ್ರನನ್ನು ತಮ್ಮಿಂದ ಒಂದು ಕ್ಷಣವೂ ದೂರವಿಡಲು ಇಚ್ಛಿಸುತ್ತಿರಲಿಲ್ಲ. ನರೇಂದ್ರನನ್ನು ತಮ್ಮ ಹತ್ತಿರ ಕುಳ್ಳಿರಿಸಿಕೊಂಡು ಅನೇಕ ಉಪದೇಶಗಳನ್ನು ಮಾಡುತ್ತಿದ್ದರು. ಅವರಿಬ್ಬರೇ ಇರುವಾಗ ಅವರಲ್ಲಿ ಬಹಳ ಚರ್ಚೆಯಾಗುತ್ತಿತ್ತು. ಶ್ರೀ ರಾಮಕೃಷ್ಣರು ಅಪೂರ್ಣವಾಗಿ ಉಳಿದಿರುವ ತಮ್ಮ ಕಾರ್ಯವನ್ನು ನರೇಂದ್ರನಿಗೆ ವಹಿಸಿಕೊಡುವ ಯೋಚನೆಯಲ್ಲಿದ್ದರು.

ಒಂದು ದಿನ ಶ್ರೀ ರಾಮಕೃಷ್ಣರು ಒಂದು ಕಾಗದದ ತುಂಡಿನ ಮೇಲೆ 'ನರೇಂದ್ರನು ಲೋಕಶಿಕ್ಷಣದ ಕಾರ್ಯವನ್ನು ಮಾಡುವನು' ಎಂದು ಬರೆದರು.

ಅದನ್ನು ತಮಾಷೆಯಾಗಿ ತೆಗೆದುಕೊಂಡು ನರೇಂದ್ರನು ಅವರಿಗೆ 'ಈ ಎಲ್ಲ ಕಾರ್ಯಗಳು ನನ್ನಿಂದ ಆಗುವುದಿಲ್ಲ' ಎಂದಾಗ ಶ್ರೀ ರಾಮಕೃಷ್ಣರು ಕೂಡಲೇ ದೃಢವಾಗಿ 'ಏನದು ಆಗುವುದಿಲ್ಲವೆಂದರೆ? ಅರೆ, ನಿನ್ನ ಎಲುಬುಗಳು ಕೂಡ ಈ ಕಾರ್ಯವನ್ನು ಮಾಡುವವು!' ಎಂದರು. ಮುಂದೆ ಶ್ರೀ ರಾಮಕೃಷ್ಣ ಪರಮಹಂಸರು ನರೇಂದ್ರನಿಗೆ ಸಂನ್ಯಾಸ ದೀಕ್ಷೆಯನ್ನು ನೀಡಿ ಅವರ ನಾಮಕರಣವನ್ನು 'ಸ್ವಾಮಿ ವಿವೇಕಾನಂದ' ಎಂದು ಮಾಡಿದರು. ಸ್ವಾಮಿ ವಿವೇಕಾನಂದರು ಆಧ್ಯಾತ್ಮಿಕ ಪ್ರವಚನಗಳ ಮೂಲಕ ಜನರಲ್ಲಿ ದೇಶಭಕ್ತಿ ಮತ್ತು ಉತ್ಸಾಹವನ್ನು ಜಾಗೃತಗೊಳಿಸಿದರು.

ನಿರಂತರ ಆಕ್ರಮಣಗಳು, ಅನೈತಿಕತೆ, ಲೂಟಿ, ಅವರ ಮಹಿಳೆಯರ ಮೇಲಿನ ದಬ್ಬಾಳಿಕೆ ಮತ್ತು ಹಿಂಸಾಚಾರಗಳು ಹಿಂದೂಗಳನ್ನು ಮಾನಸಿಕವಾಗಿ ಹತ್ತಿಕ್ಕಿದವು.

ಸ್ವಾಮಿ ವಿವೇಕಾನಂದರು ರಾಮಕೃಷ್ಣರ ಸಂದೇಶವನ್ನು ಪ್ರಚಾರ ಮಾಡುವ ಧ್ಯೇಯವನ್ನು ಕೈಗೊಂಡರು ಮತ್ತು ಹಿಂದೂಗಳನ್ನು ಖಿನ್ನತೆ ಯಿಂದ ಮತ್ತು ಜನರಲ್ಲಿ ಉತ್ಪತ್ತಿಯಾಗುವ ಮನಸ್ಥಿತಿಯನ್ನು ಸೋಲಿಸಿದರು. ಸ್ವಾಮಿ ವಿವೇಕಾನಂದರು ಈ ಮಹಾನ್ ಉದ್ದೇಶಕ್ಕಾಗಿ ಭಾರತದಾದ್ಯಂತ ಸಂಚರಿಸಿದರು ಮತ್ತು ತಮ್ಮ ಆಧ್ಯಾತ್ಮಿಕ ಪ್ರವಚನಗಳ ಮೂಲಕ ಜನರಲ್ಲಿ ಉತ್ಸಾಹ ಮತ್ತು ದೇಶಭಕ್ತಿಯನ್ನು ಮೂಡಿಸಿದರು. ಇದಲ್ಲದೆ, ಅವರು ಇಡೀ ಜಗತ್ತಿಗೆ ಹಿಂದೂ ಧರ್ಮ ಮತ್ತು ಹಿಂದೂಸ್ತಾನದ ಮಹತ್ವವನ್ನು ಅರಿಯುವಂತೆ ಮಾಡಿದರು. ಚಿಕಾಗೋ ಸರ್ವಧರ್ಮ ಸಮ್ಮೇಳನದಲ್ಲಿ ವಿವೇಕಾನಂದ ಸಹಭಾಗಿತ್ವ ಭಾರತವೆಂಬ ಸುವರ್ಣಭೂಮಿಯ ಸತ್ಪುರುಷರಾದ ಶ್ರೇಷ್ಠತಮವಾದ ಸನಾತನ ಹಿಂದೂ ಧರ್ಮದ ಪರಿಚಯವನ್ನು ಜಗತ್ತಿಗೆ ಮಾಡಿಕೊಡುವುದು ಒಂದು ದೈವೀ ಯೋಗವೇ ಆಗಿತ್ತು.



ವಿವೇಕಾನಂದರ ಜಯಂತಿಯಂದು ರಾಷ್ಟ್ರೀಯ ಯುವ ದಿನ

ಅಮೇರಿಕಾದ ಶಿಕಾಗೋದಲ್ಲಿ ದಿನಾಂಕ 11 ಸಪ್ಟೆಂಬರ 1863 ರಂದು ನಡೆದ ಸರ್ವಧರ್ಮ ಸಮ್ಮೇಳನದ ಮಾಧ್ಯಮದಿಂದ ಹಿಂದೂ ಧರ್ಮದ ಬಗ್ಗೆ ತಿಳಿದುಕೊಳ್ಳಲು ಆಹ್ವಾನಿಸಿದ ಸ್ವಾಮಿ ವಿವೇಕಾನಂದರು ಹಿಂದೂ ಧರ್ಮದ ನಿಜವಾದ ಪ್ರತಿ ನಿಧಿಯಾದರು.

ಸೋಮವಾರ, ದಿನಾಂಕ 11 ಸಪ್ಟೆಂಬರ 1863 ರಂದು ಬೆಳಿಗ್ಗೆ ಧರ್ಮಗುರುಗಳ ಪ್ರಾರ್ಥನೆಯ ನಂತರ ಸಂಗೀತಮಯ ವಾತಾವರಣದಲ್ಲಿ ಸರ್ವಧರ್ಮ ಸಮ್ಮೇಳನದ ಶುಭಾರಂಭವಾಯಿತು. ಜನರ ಹರ್ಷದಿಂದ ತುಂಬಿದ ಧ್ವನಿ ಮತ್ತು ಕರತಾಡನ ನಿರಂತರವಾಗಿತ್ತು. ಸ್ವಾಮಿ ವಿವೇಕಾನಂದರ ಆ ಭಾವಪೂರ್ಣ ಶಬ್ದಗಳಲ್ಲಿರುವ ಸತ್ವದಿಂದ ಎಲ್ಲ ಶ್ರೋತೃಗಳ ಹೃದಯವು ಸ್ಪಂದಿಸಿತು. ಉಪಸ್ಥಿತ ವಕ್ತಾರರಲ್ಲಿ 'ಸಹೋದರ ಸಹೋದರರಿಯರೇ' ಎಂಬ ಶಬ್ದಗಳಿಂದ ಸಕಲ ಮಾನವ ಜಾತಿಯನ್ನು ಆಹ್ವಾನಿಸುವ ಸ್ವಾಮಿ ವಿವೇಕಾನಂದರು ಅದ್ವಿತೀಯರಾಗಿದ್ದರು. ಹಿಂದೂ ಸಮಾಜವು ಬಡವಾಗಿರಬಹುದು; ಆದರೆ ಅದು ಘೃಣಾಸ್ಪದವಲ್ಲ. ಅದು ದೀನವಾಗಿರಬ ಹುದು, ದುಃಖಿತವಾಗಿರಬಹುದು, ಆದರೆ ಅತ್ಯಮೂಲ್ಯವಾದಂತಹ ಪಾರಮಾರ್ಥಿಕ ಸಂಪತ್ತಿನ ಉತ್ತರಾಧಿಕಾರಿಯಾಗಿದೆ.

ಧರ್ಮದ ಕ್ಷೇತ್ರದಲ್ಲಿ ಅದು ಜಗದ್ಗುರುವಾಗಬಲ್ಲದು, ಇದು ಹಿಂದೂ ಧರ್ಮದ ಯೋಗ್ಯತೆಯಾಗಿದೆ' ಈ ಶಬ್ದಗಳಿಂದ ಹಿಂದೂ ಧರ್ಮದ ಮಹತ್ವವನ್ನು ಬಣ್ಣಿಸಿದರು. ಅನೇಕ ಶತಕಗಳ ನಂತರ ಸ್ವಾಮಿ ವಿವೇಕಾನಂದರು ಹಿಂದೂ ಸಮಾಜಕ್ಕೆ ಅದರ ಸೀಮೆಯು ಎಷ್ಟು ವಿಸ್ತೃತವಾಗಿದೆಯೆನ್ನುವುದನ್ನು ತೋರಿಸಿಕೊಟ್ಟರು. ಸ್ವಾಮಿ ವಿವೇಕಾನಂದರು ಯಾವುದೇ ಧರ್ಮದ ನಿಂದನೆ ಅಥವಾ ಟೀಕೆಯನ್ನು ಮಾಡಲಿಲ್ಲ. ಯಾವುದೇ ಧರ್ಮವನ್ನು ಅವರು ಕ್ಷುದ್ರವೆನ್ನಲಿಲ್ಲ. ಹಿಂದೂ ಧರ್ಮದ ಕುರಿತು ವಿದೇಶಿಯರ ತುಚ್ಛ ನಡುವಳಿಕೆ ಮತ್ತು ಅಪಮಾನಗಳೆಂಬ ಕೆಸರನ್ನು ಮೆತ್ತಿಕೊಂಡಿದ್ದ ಹಿಂದೂ ಧರ್ಮವನ್ನು ಸ್ವಾಮಿ ವಿವೇಕಾನಂದರು ಕೆಸರಿನಿಂದ ಪ್ರತ್ಯೇಕಿಸಿ, ಜಗತ್ತಿಗೆ ಅದರ ಮೂಲ ತೇಜಸ್ವಿ ಸ್ವರೂಪವನ್ನು ಪರಿಚಯಿಸಿದರು.

### ಚಪ್ಪಾಳೆಯ ಪ್ರಚಂಡ ಸುರಿಮಳೆ

**ಅಮೇರಿಕಾದ ನನ್ನ ಸಹೋದರ ಸಹೋದರಿಯರೇ' ಎಂದು ಸಭೆಯಲ್ಲಿರುವವರನ್ನು ಸಂಬೋಧಿಸಿ ತಮ್ಮ ಭಾಷಣವನ್ನು ಪ್ರಾರಂಭಿಸಿದ ಅವರ ಚೈತನ್ಯಪೂರ್ಣ ಮತ್ತು ತೇಜಸ್ವಿ ವಾಣಿಯಿಂದ ಎಲ್ಲರೂ ಮಂತ್ರಮುಗ್ಧರಾದರು. ಆ ಶಬ್ದಗಳು ಎಂತಹ ಅದ್ಭುತ ಶಕ್ತಿಯಿಂದ ತುಂಬಿದ್ದವು ಎಂದರೆ, ಸ್ವಾಮಿ ವಿವೇಕಾನಂದರ ಆ ಶಬ್ದಗಳನ್ನು ಉಚ್ಚರಿಸುತ್ತಲೇ ಸಾವಿರಾರು ಸ್ತ್ರೀ ಪುರುಷರು ತಮ್ಮ ಸ್ಥಳದಿಂದ ಎದ್ದು ನಿಂತರು ಮತ್ತು ಅವರು ಚಪ್ಪಾಳೆಯ ಪ್ರಚಂಡ ಸುರಿಮಳೆಯನ್ನು ಮಾಡಿದರು.**

## ದಿನಕ್ಕೊಂದು ಮುಕ್ತಕ -70



ಹೆಚ್.ಎಸ್. ಪ್ರತಿಮಾ
• ಉದಯವಾಹಿನಿ ವಿಶೇಷ

**ದಾರಿಯದು ಸಾಗುತಲಿ ಜೀವನವ ಸಾಗಿಸುತ
ಸಾರಿಹರು ಒಳಿತೆಂಬ ಸಂದೇಶವ
ಮಾರದಲೆ ನೀತಿಯನು ಮಾರ್ಗವನು ತಿಳಿಸುವರು
ತೋರದಲೆ ಗರ್ವವನು ಲಕ್ಷ್ಮಿ ದೇವಿ......**

**ಭಾವಾರ್ಥ:** ಸಮಾಜ ಎಂದ ಮೇಲೆ ಸಂಘ-ಸಂಸ್ಥೆಗಳು ಇರಲೇಬೇಕು. ಒಳಿತು -ಕೆಡಕುಗಳ ಚರ್ಚೆಯಾಗಬೇಕಿದೆ. ಅಂತಹ ಒಳಿತು ಕೆಡುಕುಗಳ ಜೀವನದಲ್ಲಿ ಸಾಗುವಾಗ ಸಂಘಟಕರು ಒಳ್ಳೆಯ ಮಾಹಿತಿಗಳನ್ನು ಮಾತ್ರ ಸಾರಬೇಕಾಗುತ್ತದೆ.

ಒಳ್ಳೆಯ ಕೆಲಸಗಳಿಗೆ ಮಾತ್ರ ಅವರು ಕೈ ಹಾಕಬೇಕಾಗುತ್ತದೆ. ತನ್ನತನವನ್ನು ಮಾರಿಕೊಳ್ಳದೆ ಒಳ್ಳೆಯ ಕಾರ್ಯಗಳತ್ತ ಗಮನವನ್ನು ಹರಿಸುತ್ತ ಜೀವನವನ್ನ ಸಾಗಿಸಬೇಕು.

ಆ ಮಾರ್ಗದಲ್ಲಿ ಯಾವುದೇ ರೀತಿಯ ದರ್ಪವನ್ನು ತೋರದೆ ಬಡವ ಶ್ರೀಮಂತ ಎನ್ನದೆ ಎಲ್ಲರೊಂದಿಗೂ ಪ್ರೀತಿಯಿಂದ ವಿಶ್ವಾಸದಿಂದ ನಡೆದುಕೊಳ್ಳಬೇಕು. ಆಗ ಮಾತ್ರ ಸಮಾಜದ ಉದ್ದಾರ ಸಾಧ್ಯ. ಮೋಸ ಕಪಟಗಳನ್ನು ಬಿಟ್ಟು ಒಳ್ಳೆಯ ಕಾರ್ಯಗಳನ್ನು ಹೇಳಬೇಕು.

# ಕ್ರೈಸ್ತ ಸಮುದಾಯ 72 ಡಾಕ್ಟರೇಟ್ ಪದವೀಧರರಿಗೆ ಸನ್ಮಾನ

## • ವಿದ್ಯಾವಂತ ಸಮಾಜ ನಿರ್ಮಾಣಕ್ಕೆ ಕ್ರೈಸ್ತ ಸಮುದಾಯ ಅಪಾರ ಕೊಡುಗೆ ನೀಡಿದೆ

• ಉದಯವಾಹಿನಿ ಬೆಂಗಳೂರು

ಪುಟ್ಟಣ್ಣಚೆಟ್ಟಿ ಪುರಭವನದಲ್ಲಿ ಕರ್ನಾಟಕ ಕ್ರೈಸ್ತ ಅಲ್ಪಸಂಖ್ಯಾತ ಜಾಗೃತಿ ವೇದಿಕೆ ವತಿಯಿಂದ 72 ಕ್ರೈಸ್ತ ಡಾಕ್ಟರೇಟ್ ಪದವೀಧರಿಗೆ ಸನ್ಮಾನ ಕಾರ್ಯಕ್ರಮ.

ಪರಮಪೂಜ್ಯ ಮಹಾಧರ್ಮಾಧ್ಯಕ್ಷರಾದ ಡಾ.ಪೀಟರ್ ಮಚಾಡೊ, ಕ್ರೈಸ್ತ ಸಮುದಾಯದ, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ಬರ್ತಲೋಮ್‌ರವರು , ಐ.ಪಿ.ಎಸ್.ಪೊಲೀಸ್ ಅಧಿಕಾರಿ ರಿಶ್ವಂತ್ , ಸಂಗೀತ ನಿರ್ದೇಶಕ, ನಟ ಸಾಧಕೋಕಿಲ, ಆರೋಗ್ಯಸ್ವಾಮಿ, ಶಿಕ್ಷಣ ತಜ್ಞೆ ಗ್ಲೋರಿ, ವಕೀಲರಾದ ಬಾಲರಾಜ್, ಸಮಾಜದ ಮುಖಡರಾದ ಕಿರೀಟಪ್ಪ, ಶಾಂತಪ್ಪ ರವರು ದೀಪ ಬೆಳಗಿಸಿ ಉದ್ಘಾಟನೆ ಮಾಡಿದರು.ಸ್ಮರಣೆ ಸಂಚಿಕೆ ಬಿಡುಗಡೆ ಮಾಡಲಾಯಿತು. ಏಸುಕ್ರಿಸ್ತ ಕುರಿತು ಭಕ್ತಿಗೀತೆಗಳನ್ನು ಹಾಡಲಾಯಿತು.



ಉದಯವಾಹಿನಿ ಚಿತ್ರ

ಐ.ಪಿ.ಎಸ್.ಅಧಿಕಾರಿ ಸಿ.ಬಿ.ರಿಶ್ವಂತ್ ಕ್ರೈಸ್ತ ಸಮುದಾಯದ ಡಾಕ್ಟರೇಟ್ ಪಡೆದವರಿಗೆ ಗುರುತಿಸಿ, ಸನ್ಮಾನ ಮಾಡುವುದು ಒಳ್ಳೆಯ ಕೆಲಸ,

ಉತ್ತಮ ಕೆಲಸ ಮಾಡುವ ಎಲ್ಲ ಸಂಘದವರಿಗೆ ಅಭಿನಂದನೆಗಳು. ಒಳ್ಳೆಯ ಕೆಲಸ ಮಾಡಲು ಒಬ್ಬರಿಂದ ಸಾಧ್ಯವಿಲ್ಲ, ಎಲ್ಲರು ಒಂದುಗೂಡಿ ಕೆಲಸ ಮಾಡಬೇಕು ಎಂದು ಹೇಳಿದರು. ವೇದಿಕೆಯ ಯೇಸುದಾಸ್, ಅರುಳಪ್ಪ, ಸಗಾಯರಾಜ್ ಪ್ರಕಾಶ್ ಎ.ಜಿ.ಮತ್ತು ಕ್ರೈಸ್ತ ಸಮುದಾಯದ ಸಾವಿರಾರು ಜನರು ಭಾಗವಹಿಸಿದ್ದರು.

**ಕ್ರೈಸ್ತ ಸಮುದಾಯ ವಿಶ್ವಕ್ಕೆ ಶಾಂತಿ ಸಾರುವ ಧರ್ಮವಾಗಿದೆ. ಎಲ್ಲಾ ಧರ್ಮ ಮತ್ತು ವರ್ಗದವರಿಗೆ ಮಕ್ಕಳ ಶಿಕ್ಷಣಕ್ಕೆ ಶಿಕ್ಷಣ ಸಂಸ್ಥೆಗಳನ್ನು ತೆರದು ವಿದ್ಯಾವಂತ ಸಮಾಜ ನಿರ್ಮಾಣಕ್ಕೆ ಕ್ರೈಸ್ತ ಸಮುದಾಯ ಅಪಾರ ಕೊಡುಗೆ ನೀಡಿದೆ. ಕ್ರೈಸ್ತರನ್ನು ಗುರುತಿಸುವ ಕೆಲಸವಾಗಬೇಕು ಎಂದು ಡಾಕ್ಟರೇಟ್ ಪಡೆದವರಿಗೆ ಸನ್ಮಾನಿಸಲಾಗುತ್ತಿದೆ. ಕರ್ನಾಟಕ ಕ್ರೈಸ್ತ ಅಲ್ಪಸಂಖ್ಯಾತ ಜಾಗೃತಿ ವೇದಿಕೆ 15ವರ್ಷಗಳಿಂದ ಕ್ರೈಸ್ತ ಸಮುದಾಯ ಸಂಘಟನೆ ಮತ್ತು ಕ್ರೈಸ್ತ ಸಮುದಾಯದವರನ್ನು ಗುರುತಿಸುವ ಕೆಲಸ ಮಾಡುತ್ತಿದೆ -ಡಾ||ಪೀಟರ್ ಮಚಾಡೊ , ಮಹಾಧರ್ಮಾಧ್ಯಕ್ಷ**

# ರಾತ್ರಿ ಪದೇ ಪದೆ ಎಚ್ಚರವಾಗುತ್ತಾ.?

## ಉತ್ತಮ, ಶಾಂತಿಯುತ ನಿದ್ದೆಗಾಗಿ ಈ 'ಮಂತ್ರ' ಪಠಿಸಿ

• ಉದಯವಾಹಿನಿ ಬೆಂಗಳೂರು

ಇತ್ತೀಚಿನ ದಿನಗಳಲ್ಲಿ ಇಂದಿನ ವೇಗದ ಜೀವನದಲ್ಲಿ ಹೆಚ್ಚಿನ ಜನರು ನಿದ್ರಾಹೀನತೆಯ ಸಮಸ್ಯೆಯನ್ನ ಎದುರಿಸುತ್ತಾರೆ. ಕೆಲವರಿಗೆ ಇಷ್ಟವಿದ್ದರೂ ನೆಮ್ಮದಿಯ ನಿದ್ದ ಬರುವುದಿಲ್ಲ. ಇದರಿಂದಾಗಿ ಅವರು ಪ್ರತಿದಿನ ಅನಾರೋಗ್ಯಕ್ಕೆ ಒಳಗಾಗುತ್ತಾರೆ. ಉತ್ತಮ ಆರೋಗ್ಯಕ್ಕೆ ಸಾಕಷ್ಟು ನಿದ್ದೆ ಮಾಡುವುದು ಕೂಡ ಬಹಳ ಮುಖ್ಯ ಇಂತಹ ಅನೇಕ ಪವಾಡ ಮಂತ್ರಗಳನ್ನ ಧಾರ್ಮಿಕ ಗ್ರಂಥಗಳು ಮತ್ತು ಧರ್ಮಗ್ರಂಥಗಳಲ್ಲಿ ಉಲ್ಲೇಖಿಸಲಾಗಿದೆ, ಇವುಗಳನ್ನು ಮಲಗುವ ಮೊದಲು ಪಠಿಸಿದರೆ, ಶಾಂತಿಯುತ ನಿದ್ರೆಯನ್ನ ನೀಡುತ್ತದೆ, ಒಳ್ಳೆಯ ಕನಸುಗಳು ಒತ್ತಡವನ್ನ ನಿವಾರಿಸುತ್ತವೆ.

**ಮಂತ್ರ-1:** ದೇವಿ ಸರ್ವಭೂತೇಷು ನಿದ್ರಾ ರೂಪೇಣ ಸಂಸ್ಕೃತ ನಮಸ್ತಸ್ಯೆ, ನಮಸ್ತಸ್ಯೆ, ನಮಸ್ತಸ್ಯೆ ನಮೋ ನಮಃ ಪ್ರಯಾಣ ಅರ್ಥ - ಮೂರು ಬಾರಿ ಎಲ್ಲಾ ಜೀವಿಗಳಲ್ಲಿ ವಿಶ್ರಾಂತಿ ಮತ್ತು ನಿದ್ರೆಯ ರೂಪದಲ್ಲಿ ನೆಲೆಸಿರುವ ದೇವಿಗೆ ನಮಸ್ಕಾರಗಳು.

**ಮಂತ್ರ-2:** ಅಗಸ್ತಿರ್ಮಾಧವಶ್ಯವ ಮುಚುಕುಂದೋ ಮಹಾಬಲ: ಕಪಿಲೋ ಮುನಿರಾಸ್ತಿಕ: ಪಂಚೈತೇ ಸುಖಾಯಿಂ:' ಅರ್ಥ- ಋಷಿಗಳು ಆಗಸ, ಮುಚುಕುಂದ, ಕಪಿಲ ಮುನಿ ಸೇರಿದಂತೆ ಪ್ರಯಾಣ ಪಂಚ ಭೋಗಗಳಿಂದ ಮಲಗುವ ರೀತಿ, ಹಾಗೆಯೇ ನಾನು ಕೂಡ ನಿದ್ರೆಯ ಸಮಯದಲ್ಲಿ ಶಾಂತಿಯನ್ನು ಅನುಭವಿಸಬೇಕು.



**ಮಂತ್ರ-3:** ರಾಮಂ ಸ್ಕಂದಂ ಹನುಮಂತಂ ವನತೇಯಂ ವೃಕೋದರಂ - ಆಟೋಜೋನ್ ಶಯನೇ ಯಃ ಸ್ಮರೇನ್ನಿತ್ಯಂ ದುಸ್ವಪ್ನಸ್ತಸ್ಯ ನಶ್ಯತಿ ಮನೋರಂಜನೆ ಅರ್ಥ- ಮಲಗಿರುವಾಗ ಶ್ರೀರಾಮ, ಕಾರ್ತಿಕೇಯ, ಹನುಮಂತ, ಗರುಡ, ಭೀಮರನ್ನು ಸ್ಮರಿಸಿದರೆ ಕೆಟ್ಟ ಕನಸುಗಳು ನಾಶವಾಗುತ್ತವೆ.

**ಮಂತ್ರ-4:** ನಿದ್ರಾಂ ಭಗವತಿ ವಿಷ್ಣೋ, ಅತುಲ್ ತೇಜಸ್: ಪ್ರಭೋ: ನಮಾಮಿ. ಅರ್ಥ-ಆಳವಾದ ನಿದ್ರೆಗೆ ಹೋಗಲು ಮಂತ್ರವನ್ನು ಪಠಿಸಲಾಗುತ್ತದೆ.

**- ಆಟೋಜೋನ್ ಮಂತ್ರಗಳನ್ನು ಪಠಿಸುವ ಪ್ರಯೋಜನಗಳು:** ನಂಬಿಕೆಗಳ ಪ್ರಕಾರ, ನೀವು ಹಾಸಿಗೆಯ ಮೇಲೆ ಮಲಗಿದಾಗ, ಶಾಂತ ಮನಸ್ಸಿನಿಂದ ಈ ಮಂತ್ರಗಳಲ್ಲಿ ಯಾವುದಾದರೂ ಒಂದನ್ನು ಜಪಿಸಿ. ಮಂತ್ರಗಳ ಪ್ರಭಾವದಿಂದಾಗಿ, ಒಬ್ಬ ವ್ಯಕ್ತಿಯು ಮನಸ್ಸಿನಲ್ಲಿ ಶಾಂತಿಯನ್ನ ಅನುಭವಿಸುತ್ತಾನೆ ಮತ್ತು ಒತ್ತಡವೂ ದೂರ ಹೋಗುತ್ತದೆ.

ಈ ಮಂತ್ರದ ಸಕಾರಾತ್ಮಕ ಪರಿಣಾಮವು ಶಾಂತಿಯುತ ನಿದ್ರೆಗೆ ಕಾರಣವಾಗುತ್ತದೆ ಮತ್ತು ದುಃಸ್ವಪ್ನಗಳನ್ನು ತಡೆಯುತ್ತದೆ. ಇದರೊಂದಿಗೆ, ಮರುದಿನ ಬೆಳಿಗ್ಗೆ ನೀವು ಉಲ್ಲಾಸವನ್ನು ಅನುಭವಿಸುವಿರಿ ಮತ್ತು ನಿಮ್ಮ ನಿದ್ರೆಗೆ ಯಾವುದೇ ಅಡ್ಡಿಯಾಗುವುದಿಲ್ಲ.

# ನವಿಲುಗಳ ಬಗ್ಗೆ ನಿಮಗೆಷ್ಟು ಗೊತ್ತು...?

• ಉದಯವಾಹಿನಿ ಬೆಂಗಳೂರು

ನವಿಲು, ಭಾರತದ ರಾಷ್ಟ್ರೀಯ ಪಕ್ಷಿಯಾಗಿರುವುದಲ್ಲದೆ, ತನ್ನ ಅದ್ಭುತ ಸೌಂದರ್ಯಕ್ಕೆ ಪ್ರಸಿದ್ಧವಾಗಿದೆ. ಅದರ ವಿಶಿಷ್ಟವಾದ ಬಾಲದ ಗರಿಗಳು ಮತ್ತು ನೃತ್ಯದ ರೀತಿಯಲ್ಲಿ ಪ್ರದರ್ಶನವು ಪ್ರಕೃತಿಯ ಅದ್ಭುತ ಕಲಾಕೃತಿಯಂತೆ. ಮುಖ್ಯವಾಗಿ ಮೂರು ವಿಧದ ನವಿಲುಗಳಿವೆ.

**ಭಾರತೀಯ ನವಿಲು:** ಇದು ಭಾರತದಲ್ಲಿ ಹೆಚ್ಚಾಗಿ ಕಂಡುಬರುವ ನವಿಲು. ಇದರ ಗಂಡು ನವಿಲು ತನ್ನ ಬಾಲದ ಗರಿಗಳನ್ನು ಹರಡಿಕೊಂಡು ನೃತ್ಯ ಮಾಡುವುದು ವಿಶೇಷ




**ಹಸಿರು ನವಿಲು:** ಇದು ದಕ್ಷಿಣ-ಪೂರ್ವ ಏಷ್ಯಾದಲ್ಲಿ ಕಂಡುಬರುತ್ತದೆ. ಭಾರತೀಯ ನವಿಲಿಗಿಂತ ಇದು ಸ್ವಲ್ಪ ದೊಡ್ಡದಾಗಿದೆ.

**ಕಾಂಗೋ ನವಿಲು:** ಇದು ಆಫ್ರಿಕಾದ ಕಾಂಗೋ ಪ್ರದೇಶದಲ್ಲಿ ಕಂಡುಬರುತ್ತದೆ. ಇತರ ಎರಡು ವಿಧಗಳಿಗಿಂತ ಭಿನ್ನವಾಗಿ ಕಾಣುತ್ತದೆ.

**ನವಿಲುಗಳ ಆವಾಸ:** ನವಿಲುಗಳು ಸಾಮಾನ್ಯವಾಗಿ ಕಾಡುಗಳು, ತೋಟಗಳು ಮತ್ತು ಹೊಲಗಳಲ್ಲಿ ವಾಸಿಸುತ್ತವೆ.

ಅವುಗಳು ಸಸ್ಯಹಾರಿಗಳಾಗಿದ್ದು ಹಣ್ಣುಗಳು, ಬೀಜಗಳು, ಕೀಟಗಳು ಮತ್ತು ಸಣ್ಣ ಪ್ರಾಣಿಗಳನ್ನು ತಿನ್ನುತ್ತವೆ.



# ರಾಮಾಯಣ

## ದಶರಥ ರಾಯನ ವಂಶಾವಳಿ

• ಹಿಂದಿನ ಸಂಚಿಕೆಯಿಂದ 73ನೆಯ ಅಧ್ಯಾಯ

ನಮ್ಮ ಮಶಪರಂಪರೆಯನ್ನು ನೀವು ನಿರೂಪಿಸಿದ್ದರಿಂದ ನಾವು ಕೃತಾರ್ಥರಾದೆವು. ನೀವು ಹೇಳಿದ ವಾಕ್ಯವು ನನಗೆ ಸಮ್ಮತವು, ನನ್ನ ತಮ್ಮನಾದ ಕುಶಧ್ವಜನ ಮಕ್ಕಳಿಬ್ಬರನ್ನೂ ಭರತಶತ್ರುಘ್ನರಿಗೆ ಕೊಟ್ಟು ವಿವಾಹ ಮಾಡುತ್ತೇನೆ. ಒಂದೇ ದಿನದಲ್ಲಿ ದಶರಥರಾಯನ ನಾಲ್ವರು ಕುಮಾರರಿಗೂ ನಿಮ್ಮ ನಾಲ್ವರು ಕುಮಾರಿಯರಿಗೂ ವಿವಾಹವಾಗಲಿ ಉತ್ತರಾನಕ್ಷತ್ರದಲ್ಲಿ ವಿವಾಹವು ಉತ್ತಮವಾದದ್ದೆಂದು ಬಲ್ಲವರು ಹೇಳುವರು ಮುನಿಗಳೆ, ನೀವು ನನಗೆ ಮಹಾಧರ್ಮವನ್ನು ಸಂಪಾದಿಸಿಕೊಟ್ಟಿರಿ. ನನಗೆ ಧರ್ಮೋಪದೇಶವನ್ನು ಮಾಡಿದ ಕಾರಣ ದಿಂದ ನೀವೇ ನನಗೆ ಗುರುಗಳು, ದಶರಥರಾಯನ ನಾಲ್ವರು ಕುಮಾರರಾದ ರಾಮಲಕ್ಷ್ಮಣ ಭರತಶತ್ರುಘ್ನರು ಅಯೋಧ್ಯಾಪಟ್ಟಣಕ್ಕೆ ಹೇಗೆ ಅಧಿಪತಿಗಳೋ ಆ ರೀತಿಯಲ್ಲಿಯೇ ನನ್ನ ರಾಜ್ಯಕ್ಕೂ ಅಧಿವತಿಗಳಾಗಿರಲಿ ಎಂದು ನುಡಿದನು.

ಆ ಮಾತನ್ನು ಕೇಳಿ ಸಮಸ್ತಜಗತ್ತಿಗೂ ಅಧಿಪತಿಯಾಗಿ ತೇಜಸ್ವಿಯಾದ ದಶರಥರಾಯನು ಹರ್ಷಗೊಂಡು ಮಗುಳುನಗೆಯಿಂದ ಜನಕರಾಯನನ್ನು ನೋಡಿ '' ಜನಕಮಹಾರಾಯನೆ ಮಿಥಿಲಾ ಪಟ್ಟಣಕ್ಕೆ ಅಧಿಪತಿಗಳಾಗಿ ಅಣ್ಣ ತಮ್ಮಂದಿರಾದ ನೀವು ಮಹಾಸದ್ಗುಣವುಳ್ಳಂಥವರು. ವಿನಯ ಸಂಪತ್ತಿಯುಳ್ಳವರು. ಬಹುಮಂದಿ ಋಷಿಗಳಿಗೆ ವಂದನಾದಿ ಸತ್ಕಾರಗಳನ್ನು ಮಾಡಿದವರು. ಆದ್ದರಿಂದ ನಿಮಗೆ ಅನೇಕ ಮಾಂಗಲ್ಯವಾಗಲಿ ನಾವು ವಿಧ್ಯುಕ್ತ ಪ್ರಕಾರದಲ್ಲಿ ನನ್ನ ಕುಮಾರರಿಗೆ ಅಭ್ಯುದಯ ಮೊದಲಾದ ಮಾಂಗಲ್ಯವ್ರತಗಳನ್ನು ಮಾಡಬೇಕು ಎಂದು ನುಡಿದು ಆ ರಾಯನಿಂದ ಬೀಳ್ಕೊಂಡು ಅತ್ಯಂತ ಕೀರ್ತಿಸಂಪನ್ನರಾದ ವಸಿಷ್ಠ ವಿಶ್ವಾಮಿತ್ರಮುನಿಗಳನ್ನು ಮುಂದಿಟ್ಟುಕೊಂಡು ತನ್ನ ಬಿಡಾರಕ್ಕೆ ಬಂದನು. ಅಲ್ಲಿ ಕುಮಾರರಾದ ರಾಮಲಕ್ಷ್ಮಣಭರತಶತ್ರುಘ್ನರಿಗೆ ಮಾಂಗಲ್ಯಸ್ನಾನಾದಿ ನಿತ್ಯಕರ್ಮಗಳನ್ನೂ ಸತ್ಕರ್ಮಗಳನ್ನೂ ವಿಧ್ಯುಕ್ತಪ್ರಕಾರವಾಗಿ ಮಾಡಿಸಿ ಮಾರನೆಯ ದಿವಸದಲ್ಲಿ ಗೋದಾನವ್ರತ ಮೊದಲಾದ ಸಮಾವರ್ತನಗಳನ್ನು ಮಾಡಿಸಿದನು. ಆ ಗೋದಾನವತದಲ್ಲಿ ಒಬ್ಬೊಬ್ಬ ಕುಮಾರನಿಗಾಗಿ ಒಂದೊಂದುಲಕ್ಷ ಅಲಂಕರಿಸಲ್ಪಟ್ಟ ಗೋವುಗಳನ್ನು ದಾನಮಾಡಿದನು ! ಪುಷ್ಟಾಂಗವುಳ್ಳವೂ ಎಳೆಯಕರುಗಳುಳ್ಳವೂ ಚಿನ್ನದ ಕೊಂಬುಗಳೂ ಬೆಳ್ಳಿಯ ಕೊಂಬುಗಳೂ ಕಂಚಿನ ಹಾಲುಕರೆಯುವ ಪಾತ್ರೆಗಳುಳ್ಳವೂ ಆದ ನಾಲ್ಕು ಲಕ್ಷ ಗೋವುಗಳನ್ನು ಪ್ರತ್ಯೇಕಪ್ರತ್ಯೇಕವಾಗಿ ದಾನಮಾಡಿದನು. ಸುವರ್ಣದಾನಗಳನ್ನು ಬ್ರಾಹ್ಮಣರಿಗೆ ಕೊಟ್ಟು ಗೋದಾನವ್ರತವನ್ನು ನಾಲ್ಕು ಮಂದಿ ಕುಮಾರರಿಗೂ ಮಾಡಿಸಿ ಆ ನಾಲ್ವರು ಕುಮಾರರಿಂದ ಬ್ರಹ್ಮದೇವನು ಇಂದ್ರಾದಿ ನಾಲ್ವರು ದಿಕ್ಪಾಲಕರಿಂದ ಒಪ್ಪುವ ರೀತಿಯಲ್ಲಿ ಒಪ್ಪುತ್ತಿದ್ದನು **ಸೀತಾ ಕಲ್ಯಾಣ:** ಅನಂತರದಲ್ಲಿ ದಶರಥರಾಯನು ತನ್ನ ಕುಮಾರರಾದ ರಾಮಲಕ್ಷ್ಮಣಭರತ ಶತ್ರುಘ್ನರಿಗೆ ಗೋದಾನವ್ರತವನ್ನು ಮಾಡಿಸುವ ದಿವಸದಲ್ಲಿ ಕೇಕಯರಾಜನ ಕುಮಾರನೂ ಭರತನಿಗೆ ಸೋದರ ಮಾವನೂ ಆದ ಯುಧಾಜಿದ್ರಾಯನು ಬಂದು ದಶರಥರಾಯನನ್ನು ಕಂಡನು. ಅನಂತರ ಆತನ ಕುಶಲವನ್ನು ಕೇಳಿ ತನ್ನ ಕುಶಲವನ್ನು ಹೇಳುತ್ತ ಎಲೈ ದಶರಥರಾಯನೆ, ನಿನ್ನ ಕೃಪೆಯಿಂದ ನಾವೆಲ್ಲರೂ ಕ್ಷೇಮವಾಗಿದ್ದೇವೆ.

**ಮುಂದುವರೆಯುವುದು.....**

# ಆಧ್ಯಾತ್ಮಿಕ ದೃಷ್ಟಿಯಿಂದ ಕುಂಭಮೇಳದ ಮಹತ್ವ




ಸದ್ಗುರು ನಿಲೇಶ ಸಿಂಗಬಾಳ
• ಉದಯವಾಹಿನಿ ವಿಶೇಷ

ಕುಂಭಮೇಳ ವಿಶ್ವದ ಅತಿದೊಡ್ಡ ಮತ್ತು ಭವ್ಯ ಧಾರ್ಮಿಕ ಆಯೋಜನೆಯಲ್ಲಿ ಒಂದಾಗಿದೆ, ಅದು ಭಾರತೀಯ ಸಂಸ್ಕೃತಿ ಮತ್ತು ಆಧ್ಯಾತ್ಮಿಕತೆಯ ಸಮೃದ್ಧಿಯ ಪ್ರತೀಕವಾಗಿದೆ. ಇದರ ಆಯೋಜನೆ ಭಾರತದ ನಾಲ್ಕು ಪವಿತ್ರ ಸ್ಥಳಗಳಲ್ಲಿ - ಪ್ರಯಾಗರಾಜ, ಹರಿದ್ವಾರ, ಉಜ್ಜೈನ್, ಮತ್ತು ನಾಸಿಕನಲ್ಲಿ 12 ವರ್ಷಕ್ಕೊಮ್ಮೆ ನಡೆಯುತ್ತದೆ. ಪ್ರತಿ 6 ವರ್ಷದಲ್ಲಿ ಅರ್ಧಕುಂಭದ ಆಯೋಜನೆ ಕೂಡ ಮಾಡಲಾಗುತ್ತದೆ. ಈ ಮೇಳ ಭಾರತೀಯ ದರ್ಶನ, ಧಾರ್ಮಿಕ ಪರಂಪರೆ ಮತ್ತು ಆಧ್ಯಾತ್ಮಿಕ ಚಿಂತನೆಯ ಮಹತ್ವಪೂರ್ಣ ಕೇಂದ್ರವಾಗಿದೆ. ಇದು ಕೇವಲ ಹಿಂದೂ ಧರ್ಮವನ್ನು ಸಮೃದ್ಧಗೊಳಿಸುವುದಷ್ಟೇ ಅಲ್ಲದೆ ಶ್ರದ್ಧಾಳುಗಳಿಗೆ ಆನಂದ ಮತ್ತು ಆಂತರಿಕ ಶಾಂತಿ ನೀಡುತ್ತದೆ.

**ಪವಿತ್ರ ಸ್ನಾನದ ಮಹತ್ವ :** ಕುಂಭಮೇಳದ ಈ ಮುಖ್ಯ ಆಕರ್ಷಣೆ ಗಂಗಾ, ಯಮುನಾ, ಕ್ಷಿಪ್ರಾ ಮತ್ತು ಗೋದಾವರಿಯಂತಹ ಪವಿತ್ರ ನದಿಗಳಲ್ಲಿ ಸ್ನಾನ ಮಾಡುವುದಾಗಿದೆ. ಈ ನದಿಗಳಲ್ಲಿ ಸ್ನಾನ ಮಾಡಿದರೆ ಪಾಪಗಳು ನಾಶವಾಗುತ್ತದೆ ಎಂದು ನಂಬಿಕೆ ಇದೆ ಮತ್ತು ಆತ್ಮಶುದ್ಧಿಯೂ ಆಗುತ್ತದೆ. ಇದು ಮಾನಸಿಕ ಶಾಂತಿಯ ಸ್ರೋತವೂ ಆಗಿದೆ.

**ಮೋಕ್ಷ ಪ್ರಾಪ್ತಿ:** ಧಾರ್ಮಿಕ ಮಾನ್ಯತೆಯ ಪ್ರಕಾರ ಕುಂಭದ ಸಮಯದಲ್ಲಿ ಪವಿತ್ರ ಸ್ಥಳಗಳಲ್ಲಿ ಸ್ನಾನ ಇದು ಮೋಕ್ಷ ಪ್ರಾಪ್ತಿಯಾಗಿದೆ. ಇದು ಜನ್ಮ ಮತ್ತು ಮೃತ್ಯುವಿನ ಚಕ್ರದಿಂದ ಮುಕ್ತಿಯ ಮಾರ್ಗ ಪ್ರಶಸ್ತಗೊಳಿಸುತ್ತದೆ.

**ಆಧ್ಯಾತ್ಮಿಕ ಜ್ಞಾನದ ಆದಾನ ಪ್ರದಾನ:** ಕುಂಭಮೇಳ ಸಂತರು, ಮಹಾತ್ಮರು ಮತ್ತು ಯೋಗಿಗಳಿಗಾಗಿ ಒಂದು ವೇದಿಕೆಯಾಗಿದೆ, ಅಲ್ಲಿ ಅವರು ತಮ್ಮ ಜ್ಞಾನ ಮತ್ತು ಅನುಭವಗಳನ್ನು ಆದಾನ ಪ್ರದಾನ ಮಾಡುತ್ತಾರೆ. ಧ್ಯಾನ, ಯೋಗ, ಪ್ರವಚನ ಮತ್ತು ಧಾರ್ಮಿಕ ಅನುಷ್ಠಾನಗಳಿಂದ ಈ ಮೇಳ ಆಧ್ಯಾತ್ಮಿಕ ಜಾಗೃತಿಗೆ ಪ್ರೇರಣೆ ನೀಡುತ್ತದೆ.



**ಶ್ರದ್ಧೆ ದೃಢಗೊಳಿಸುವ ಮೇಳ:** ಇದರ ಆಯೋಜನೆ ಶ್ರದ್ಧೆವುಳ್ಳವರಿಗೆ ಧರ್ಮ ಮತ್ತು ಶ್ರದ್ಧೆಯ ಕಡೆಗೆ ಮತ್ತೆ ಮುಂದೆ ಸಾಗಲು ಒಂದು ಅವಕಾಶ ಪ್ರದಾನಿಸುತ್ತದೆ. ಇದು ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯ ಅನುಭವ ನೀಡುತ್ತದೆ. ಇದು ಶ್ರದ್ಧಾಳುಗಳ ಶ್ರದ್ಧೆಯನ್ನು ದೃಢಗೊಳಿಸುವಲ್ಲಿ ಸಹಾಯ ಮಾಡುತ್ತದೆ.

**ಚೈತನ್ಯ ಮತ್ತು ಸಾಮೂಹಿಕ ಐಕ್ಯತೆಯ ಪ್ರತೀಕ:** ಕುಂಭಮೇಳ ಲಕ್ಷಾಂತರ ಶ್ರದ್ಧಾಳುಗಳನ್ನು ಒಗ್ಗೂಡಿಸುವ ಪ್ರತೀಕವಾಗಿದೆ. ಅದು ಐಕ್ಯತೆ, ಸೌಹಾರ್ದತೆ ಮತ್ತು ಶಾಂತಿಯ ಸಂದೇಶ ನೀಡುತ್ತದೆ. ಇದರ ಆಯೋಜನೆ ಸಾಮಾಜಿಕ ಮತ್ತು ಸಾಂಸ್ಕೃತಿಕ ಐಕ್ಯತೆಯನ್ನು ಗಟ್ಟಿಗೊಳಿಸುತ್ತದೆ. ಕುಂಭಮೇಳದ ಪಾವಿತ್ರ್ಯತೆಯಿಂದ ಎಲ್ಲೆಡೆ ಚೈತನ್ಯದ ಪ್ರಸಾರ ಮಾಡುತ್ತದೆ.

ಪೌರಾಣಿಕ ದೃಷ್ಟಿಯಿಂದ ಕುಂಭಮೇಳದ ಕಥೆ ಸಮುದ್ರ ಮಂಥನಕ್ಕೆ ಸಂಬಂಧಪಟ್ಟದಾಗಿದೆ. ಅಮೃತ ಕಲಶದಿಂದ ಅಮೃತದ ಕೆಲವು ಹನಿಗಳು ಪ್ರಯಾಗರಾಜ, ಹರಿದ್ವಾರ, ಉಜ್ಜೈನ ಮತ್ತು ನಾಸಿಕದಲ್ಲಿ ಬಿದ್ದಿದ್ದವು ಎಂದು ನಂಬಿಕೆ ಇದೆ. ಆದಕಾರಣ ಈ ಸ್ಥಳಗಳನ್ನು ಪವಿತ್ರವೆಂದು ಇಲ್ಲಿ ಕುಂಭಮೇಳದ ಆಯೋಜನೆ ಮಾಡಲಾಗುತ್ತದೆ.



**ಧರ್ಮಾಚರಣೆ ಕಲಿಸುತ್ತದೆ:** ಕುಂಭಮೇಳದಲ್ಲಿ ತಪಸ್ಸು, ವ್ರತ, ಧ್ಯಾನ ಮತ್ತು ಸಾಧನೆಗಳಂತಹ ಆಧ್ಯಾತ್ಮಿಕ ಶಿಸ್ತಿನ ಪಾಲನೆ ಆಗುತ್ತದೆ. ಇದನ್ನು ಧರ್ಮಾಚರಣೆ ಎನ್ನುತ್ತಾರೆ. ಆತ್ಮಶುದ್ಧಿ ಮತ್ತು ಆತ್ಮದ ಉನ್ನತಿಗೆ ಮಾರ್ಗ ಎಂಬ ನಂಬಿಕೆ ಇದೆ.

**ಗಂಗಾ ಸ್ನಾನ ಮತ್ತು ಪಾಪಗಳ ನಾಶ:** ಗಂಗೆಗೆ ಪಾಪನಾಶಿನಿ ಎಂದು ಹೇಳಲಾಗಿದೆ. ಇದರಲ್ಲಿ ಸ್ನಾನ ಮಾಡುವುದರಿಂದ ಕೇವಲ ದೇಹ ಅಷ್ಟೇ ಅಲ್ಲದೆ ಆತ್ಮಶುದ್ಧಿಯೂ ಆಗುತ್ತದೆ. ಇದು ಮಾನಸಿಕ ಶಾಂತಿ ಪ್ರದಾನಿಸುತ್ತದೆ ಮತ್ತು ರೋಗಗಳನ್ನು ಸಹ ದೂರಗೊಳಿಸುತ್ತದೆ.

**ಆಧ್ಯಾತ್ಮಿಕತೆ ಮತ್ತು ಭಾರತೀಯ ಸಂಸ್ಕೃತಿಯ ಪ್ರತೀಕ:** ಕುಂಭಮೇಳ ಧರ್ಮ, ಸಂಸ್ಕೃತಿ ಮತ್ತು ಆಧ್ಯಾತ್ಮಿಕತೆಯ ಸಂಗಮವಾಗಿದೆ. ಇದರ ಆಯೋಜನೆ ಶ್ರದ್ಧಾಳುಗಳಿಗೆ ಆತ್ಮ ಚಿಂತನೆ ಮತ್ತು ಮಾನವ ಜೀವನದ ಉದ್ದೇಶವನ್ನು ತಿಳಿಯಲು ಪ್ರೇರೇಪಿಸುತ್ತದೆ .

**ಜಿಜ್ಞಾಸುಗಳು ಮತ್ತು ಧರ್ಮಪ್ರೇಮಿಗಳಿಗೆ ಮನವಿ:** ಹಿಂದೂ ಜನಜಾಗೃತಿ ಸಮಿತಿ ಕಳೆದ 20 ವರ್ಷಗಳಿಂದ ಕುಂಭಮೇಳದಲ್ಲಿ ಹಿಂದೂ ರಾಷ್ಟ್ರ ಜಾಗೃತಿಯ ಕಾರ್ಯ ಮಾಡುತ್ತಿದೆ. ಈ ವರ್ಷವೂ ಸಮಿತಿ ಬೇರೆ ಬೇರೆ ಪ್ರದರ್ಶನ ಮತ್ತು ಸಭೆಗಳ ಮಾಧ್ಯಮದಿಂದ ರಾಷ್ಟ್ರ ರಕ್ಷಣೆ ಮತ್ತು ಧರ್ಮಜಾಗೃತಿಯ ಕಾರ್ಯ ಮಾಡಲಿದೆ. ಧರ್ಮಪ್ರೇಮಿಗಳು ಈ ಅವಕಾಶದ ಲಾಭ ಪಡೆದು ಧರ್ಮ ಮತ್ತು ರಾಷ್ಟ್ರದ ಸೇವೆಯಲ್ಲಿ ತಮ್ಮ ತಮ್ಮ ಯೋಗದಾನ ನೀಡಿ.

# ಕಲಾವಿದರ ಮಾಸಾಶನ ರೂ.5 ಸಾವಿರಕ್ಕೆ ಏರಿಕೆಗೆ ಪ್ರಯತ್ನ

## ಕಲ್ಯಾಣ ಕರ್ನಾಟಕ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಧಕರಿಗೆ ಸನ್ಮಾನ

• **ಉದಯವಾಹಿನಿ, ಬೀದರ್'**

ಎರಡು ದಿನಗಳ ಕಲ್ಯಾಣ ಕರ್ನಾಟಕ ವಿಭಾಗಮಟ್ಟದ ತತ್ವಪದಕಾರರ ಸಮಾವೇಶಕ್ಕೆ ನಗರದ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಶನಿವಾರ ಚಾಲನೆ ನೀಡಲಾಯಿತು. ಕಲ್ಯಾಣ ಕರ್ನಾಟಕ ಕಲಾವಿದರ ಒಕ್ಕೂಟ, ಕರ್ನಾಟಕ ಜಾನಪದ ಅಕಾಡೆಮಿ ಸಹಯೋಗದಲ್ಲಿ ಹಮ್ಮಿಕೊಂಡಿರುವ ಸಮಾವೇಶ, ಭಜನೆ ಸ್ಪರ್ಧೆ, ಕಲ್ಯಾಣ ಕರ್ನಾಟಕ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಧಕರಿಗೆ ಸನ್ಮಾನ ಸಮಾರಂಭವೂ ಸಂಭ್ರಮದಿಂದ ಜರುಗಿತು.


☛ ಉದಯವಾಹಿನಿ ಚಿತ್ರ

**ಸಚಿವ ಈಶ್ವರ ಖಂಡ್ರೆ ಭರವಸೆ**

ಆಧುನಿಕತೆ, ಜಾಗತೀಕರಣದ ಇಂದಿನ ಸಂದರ್ಭದಲ್ಲಿ ಜನಪದ, ತತ್ವಪದ, ಶರಣರು, ದಾಸರ ಹಾಡುಗಳನ್ನು ಕೇಳುತ್ತಿದ್ದರೆ ಮನಸ್ಸಿಗೆ ನೆಮ್ಮದಿಗೆ ಸಿಗುತ್ತದೆ. ದುರಾಸೆ ದುರ್ಗುಣಗಳಿಂದ ಸಂಬಂಧ ಕಲುಷಿತಗೊಳ್ಳುತ್ತಿವೆ. ಇಂತಹ ಸನ್ನಿವೇಶದಲ್ಲಿ ಭಜನೆ, ತತ್ತ್ವಪದಗಳು ವ್ಯಕ್ತಿಯ ಮನಸ್ಸು, ಹೃದಯ ಶಾಂತಗೊಳಿಸುತ್ತವೆ ಎಂದರು. ಕಲ್ಯಾಣ ಕರ್ನಾಟಕ ಕಲಾವಿದರ ಒಕ್ಕೂಟದ ಅಧ್ಯಕ್ಷ ವಿಜಯಕುಮಾರ ಸೋನಾರ ಮಾತನಾಡಿ, ಪಾಶ್ಚಿಮಾತ್ಯ ಹಾಡುಗಾರರಿಗೆ, ನೃತ್ಯ ಮಾಡುವವರಿಗೆ ?25 ಲಕ್ಷದ ವರೆಗೆ ಸಂಭಾವನೆ ನೀಡಲಾಗುತ್ತದೆ. ಆದರೆ, ದೇಶಿ ಸಂಸ್ಕೃತಿ ಉಳಿಸಿ ಬೆಳೆಸುವ ಜನಪದ ಕಲಾವಿದರ ಬದುಕು ದಯನೀಯವಾಗಿದೆ. ದೇಶಿ ಕಲಾವಿದರ ಸಂಭಾವನೆ ಕೂಡ ಹೆಚ್ಚಿಸಬೇಕು ಎಂದು ಮನವಿ ಮಾಡಿದರು.

ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಸಾನ್ನಿಧ್ಯ ವಹಿಸಿದ್ದರು. ಸಿದ್ದರಾಮ ಬೆಲ್ದಾಳ ಶರಣರು ನೇತೃತ್ವ ವಹಿಸಿದ್ದರು. ಶಾಸಕ ಡಾ.ಶೈಲೇಂದ್ರ ಕೆ. ಬೆಲ್ದಾಳೆ, ರಂಗ ಸಂಘಟಕ ಶ್ರೀನಿವಾಸ ಜಿ.ಕಪ್ಪಣ್ಣ, ಸ್ವಾಗತ ಸಮಿತಿ ಅಧ್ಯಕ್ಷ ಬಸವರಾಜ ಧನ್ನೂರ, ಡಾ.ಸಿದ್ದಾರೆಡ್ಡಿ ಫೌಂಡೇಶನ್ ಗೌರವ ಅಧ್ಯಕ್ಷೆ ಡಾ. ಗುರಮ್ಮ ಸಿದ್ದಾರೆಡ್ಡಿ, ನಫೇಡ್ ಸಂಸ್ಥೆ ನವದೆಹಲಿಯ ಉಪಾಧ್ಯಕ್ಷ ಸಿದ್ದಪ್ಪ ಹೊಟ್ಟಿ ಯಾದಗಿರಿ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ಎಂಜಿನಿಯರ್ ಹಾವಶೆಟ್ಟಿ ಪಾಟೀಲ, ಪತ್ರಕರ್ತ ಮಾಳಪ್ಪ ಅಡಸಾರೆ, ನವಲಿಂಗ ಪಾಟೀಲ, ಒಕ್ಕೂಟದ ಕಾರ್ಯದರ್ಶಿ ಪ್ರಕಾಶ ಅಂಗಡಿ ಕನ್ನಳ್ಳಿ, ಸುನೀಲ ಭಾವಿಕಟ್ಟಿ ಹಾಜರಿದ್ದರು. ಶಿವಕುಮಾರ ಪಾಂಚಾಳ ಹಾಗೂ ತಂಡದವರು ನಾಡಗೀತೆ ಹಾಡಿದರು.

ಬಸವರಾಜ ಬಳ್ಳಾರಿ ಕುಚಿಪುಡಿ ನೃತ್ಯ ಪ್ರದರ್ಶಿಸಿದರು. ಬೆಳಿಗ್ಗೆ 11ಕ್ಕೆ ಆರಂಭಗೊಳ್ಳಬೇಕಿದ್ದ ಕಾರ್ಯಕ್ರಮ ಮಧ್ಯಾಹ್ನ 2.30ಕ್ಕೆ ಉದ್ಘಾಟನೆಯೊಂದಿಗೆ ಪ್ರಾರಂಭಗೊಂಡಿತು. ಸಚಿವರು ಮೂರೂವರೆ ಗಂಟೆ ವಿಳಂಬವಾಗಿ ಬಂದು ಉದ್ಘಾಟಿಸಿದರು.

### ಪ್ರಥಮ ಸ್ಥಾನ ಪಡೆಯುವ ತಂಡಕ್ಕೆ ರೂ. 51 ಸಾವಿರ ಬಹುಮಾನ

**ತತ್ವಪದಕಾರರ ಸಮಾವೇಶದ ಅಂಗವಾಗಿ ಏರ್ಪಡಿಸಲಾಗುವ ಜನಪದ ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆಯುವ ತಂಡಕ್ಕೆ ?51 ಸಾವಿರ ಬಹುಮಾನ ವೈಯಕ್ತಿಕವಾಗಿ ನೀಡುತ್ತೇನೆ ಎಂದು ಘೋಷಿಸಿದರು. ಕಲಾವಿದರ ಸಂಭಾವನೆ ಹೆಚ್ಚಿಸಬೇಕೆನ್ನುವುದು ದೀರ್ಘಕಾಲೀನ ಬೇಡಿಕೆ. ಅದರ ಬಗ್ಗೆಯೂ ಚರ್ಚಿಸಿ ತೀರ್ಮಾನಕ್ಕೆ ಬರಲಾಗುವುದು. ಬೀದರ್ ನಗರದಲ್ಲಿ ಕಲಾವಿದರಿಗಾಗಿ ಸಮುದಾಯ ಭವನ ನಿರ್ಮಾಣಕ್ಕೆ 18 ಗುಂಟೆ ಜಮೀನು ಮಂಜೂರು ಮಾಡಿಸುವ ಪ್ರಯತ್ನಿಸುವೆ ಎಂದು ಭರವಸೆ ನೀಡಿದರು.**

**ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಉದ್ಘಾಟಿಸಿ, ಮುಖ್ಯಮಂತ್ರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರೊಂದಿಗೆ ಚರ್ಚಿಸಿ ಕಲಾವಿದರ ಮಾಶಾಸನ ಮೂರು ಸಾವಿರದಿಂದ ಐದು ಸಾವಿರಕ್ಕೆ ಏರಿಸಲು ಪ್ರಾಮಾಣಿಕವಾಗಿ ಪ್ರಯತ್ನ ನಡೆಸುತ್ತೇನೆ ಎಂದು ಆಶ್ವಾಸನೆ ನೀಡಿದಾಗ ಕರತಾಡನ ಮುಗಿಲು ಮುಟ್ಟಿತು.**

ಬಸವಲಿಂಗ ಪಟ್ಟದ್ದೇವರು, ರಾಜೇಂದ್ರ ಸಿಂಗ್ ಪವಾರ್, ಮಲ್ಲಿಕಾರ್ಜುನ ಬಿರಾದಾರ, ಸೂರಜ್ ಸಿಂಗ್ ರಾಜಪುತ, ಭೀಮಸಿಂಗ್ ರಾಠೋಡ್, ನರಸಪ್ಪ ಭೂತೇರ್, ಹೀರಾಚಂದ್ ವಾಘಮಾರೆ, ನರಸಿಂಹಲು ಡಪೂರ್ ಅವರನ್ನು ಸನ್ಮಾನಿಸಲಾಯಿತು.

ಸರ್ಕಾರದಿಂದ ನಾಮನಿರ್ದೇಶನಗೊಂಡ ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯೆ ರಶ್ಮಿ ಎಸ್., ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ವಿನಯ್ ಮಾಳಗೆ, ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಸಂಜೀವಕುಮಾರ ಅತಿವಾಳೆ, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ, ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಪತ್ರಿಕೆಗಳ ಆರ್ಥಿಕ ಸಾಮಾಜಿಕ ಸ್ಥಿತಿಗತಿ ಅಧ್ಯಯನ ಸಮಿತಿ ಸದಸ್ಯ ಪೃಥ್ವಿರಾಜ ಅವರನ್ನು ಸನ್ಮಾನಿಸಲಾಯಿತು.

---

## ಮುಸ್ಲಿಂ ಸಮುದಾಯದ ಶಿಕ್ಷಕಿ ಶೇಖ್ ಫಾತೀಮಾ ಕಾರ್ಯ ಅನನ್ಯ

• **ಉದಯವಾಹಿನಿ,ಚಿಂಚೋಳಿ**

ಸರ್ಕಾರಗಳು ಪ್ರಸ್ತುತ ದಿನಮಾನಗಳಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ ಶೇಖ್ ಫಾತೀಮಾರವರ ಬಗ್ಗೆ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ತಿಳಿಸಿ ಕೊಡುವ ಕೆಲಸ ಮಾಡಬೇಕು ಇವರ ಇತಿಹಾಸ ಅಧ್ಯಯನ ಮಾಡುವುದರಿಂದ ವಿದ್ಯಾರ್ಥಿಗಳಿಗೆ ಮಾನಸಿಕಬಲ ದೈಹಿಕಬಲ ಹೆಚ್ಚಾಗುತ್ತದೆ ಎಂದು ಸಮಾಜಿಕ ಹೋರಾಟಗಾರ ಮಾರುತಿ ಗಂಜಗಿರಿ ಹೇಳಿದರು.


☛ ಉದಯವಾಹಿನಿ ಚಿತ್ರ

ಪಟ್ಟಣದ ಚಂದಾಪೂರದ ಮೌಲಾನಾ ಆಜಾದ್ ಅಬ್ದುಲ್ ಕಲಾಂ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಹಮ್ಮಿಕೊಂಡ ಶೇಖ್ ಫಾತೀಮಾರವರ 194ನೇ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅವರು, ಶಿಕ್ಷಣದಿಂದ ವಂಚಿತರಾದ ಕೆಳಸ್ತರದ ಮಹಿಳೆಯರಿಗೆ ಶಿಕ್ಷಣ ನೀಡುವ ಮೂಲಕ ಭಾರತ ದೇಶದಲ್ಲಿ ಮಹಿಳೆಯರ ಘನತೆ ಎತ್ತಿಹಿಡಿದ ಮುಸ್ಲಿಂ ಸಮುದಾಯದ ಪ್ರಥಮ ಮಹಿಳಾ ಶಿಕ್ಷಕಿಯಾದ ಶೇಖ್ ಫಾತೀಮಾರವರ ಕಾರ್ಯ ಅನನ್ಯವಾಗಿದೆ.

ಇಂದಿನ ಕಾಲದಲ್ಲಿ ವಿಧ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿನಿಯರು, ವಿದ್ಯಾರ್ಥಿಗಳು ಇವರ ಜೀವನ ಚರಿತ್ರೆಯ ಪುಸ್ತಕಗಳು ಓದಿಕೊಂಡು ಆದರ್ಶ ತತ್ವಗಳು ಆಳವಡಿಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ನಿವೃತ್ತ ಮುಖ್ಯಗುರುಗಳು ಮಹ್ಮದ್ ಫಾರುಖ್, ಸಿರಾಜೋದ್ದೀನ್ ಕುಪನೂರ,ಅಮರ ಲೋಡನೂರ, ಸಾಗರ ಆನಂದಿ ಮಾತನಾಡಿದರು, ಘಾಳಪ್ಪ ಕುಂಬಾರ, ಚೇತನ ಸುಲೇಪೇಟ, ಸಿದ್ದು ರಂಗನೂರ,ಶಾಲೆಯ ಮುಖ್ಯಗುರುಗಳು ಮಹ್ಮದ್ ಜಲೀಲ್ ಮಿಯ್ಯಾ ಅಧ್ಯಕ್ಷತೆ ವಹಿಸಿದರು.

---

## ಸಾಲೇಬೀರನಳ್ಳಿ ಗ್ರಾ.ಪಂ. ಅಧ್ಯಕ್ಷ ಸ್ಥಾನಕ್ಕೆ ಅವಿಶ್ವಾಸ ನಿರ್ಣಯ ಮಂಡನೆ

• **ಉದಯವಾಹಿನಿ,ಚಿಂಚೋಳಿ**

ತಾಲ್ಲೂಕಿನ ಸಾಲೇ ಬೀರನಳ್ಳಿ ಗ್ರಾಮ ಪಂಚಾಯತ್ ಅಧ್ಯಕ್ಷ ರಾಜೇಶ್ವೇರಿ ಪ್ರಭು ವಿರುದ್ಧ 12ಜನ ಸದಸ್ಯರು ಕೈ ಎತ್ತುವ ಮೂಲಕ ಅವಿಶ್ವಾಸ ನಿರ್ಣಯ ಮಂಡನೆ ಮಾಡಲಾಗಿದೆ ಅವರ ಅಧಿಕಾರವನ್ನು ಮುಟುಕುಗೊಂಡಿದೆ ಎಂದು ಸೇಡಂ ಸಹಾಯಕ ಆಯುಕ್ತರು ಪ್ರಭುರೆಡ್ಡಿ ತಿಳಿಸಿದ್ದಾರೆ.

ಪತ್ರಕರ್ತರೊಂದಿಗೆ ಮಾತನಾಡಿದ ಅವರು, ತಾಲ್ಲೂಕಿನ ಸಾಲೇಬೀರನಳ್ಳಿ ಗ್ರಾಮ ಪಂಚಾಯತ ಸದಸ್ಯರು ಅಧ್ಯಕ್ಷರ ವಿರುದ್ಧ ಅವಿಶ್ವಾಸ ಮಾಡಲು ಕಳೆದ ಡಿ.16ರಂದು ಅರ್ಜಿ ಸಲ್ಲಿಸಿದರು,ನಮ್ಮ ಕಛೇರಿಯಿಂದ ಡಿ.21ರಂದು ಗ್ರಾ.ಪಂ.ಅಧಿಕಾರಿಗೆ ಸದಸ್ಯರಿಗೆ ಜನೆವರಿ 10ರಂದು ಅವಿಶ್ವಾಸ ಸಭೆ ಮಾಡಲು ನೋಟಿಸ್ ನೀಡಲಾಗಿತ್ತು,ಅದರಂತೆ ಜ.10ರಂದು ಅವಿಶ್ವಾಸ ಸಭೆ ಪಂಚಾಯಿತಿನಲ್ಲಿ ನಡೆಸಲಾಗಿತ್ತು ಒಟ್ಟಾರೆ ಸದಸ್ಯರು 16 ಜನ ಆದರೆ ಸಭೆಯಲ್ಲಿ 12ಜನ ಸದಸ್ಯರು ಹಾಜರಾಗಿ ಅಧ್ಯಕ್ಷರ ವಿರುದ್ಧ ಅವಿಶ್ವಾಸ ಪರವಾಗಿ ಕೈ ಎತ್ತುವ ಮೂಲಕ ಅವಿಶ್ವಾಸ ನಿರ್ಣಯ ಮಂಡನೆ ಮಾಡಲಾಗಿದೆ ಎಂದರು. ಅಧ್ಯಕ್ಷ ಹುದ್ದೆ ಅಲಂಕರಿಸದ ನಂತರ 15 ತಿಂಗಳವರೆಗೆ ಸಂವಿಧಾನದ ಅಡಿಯಲ್ಲಿ ಅವಿಶ್ವಾಸ ಮಾಡಲು ಬರುವುದಿಲ್ಲ 15ತಿಂಗಳ ನಂತರ ಅವಿಶ್ವಾಸ ನಿರ್ಣಯ ಮಾಡಬಹುದು ಹಾಗಾಗಿ ಸಂವಿಧಾನ ಬದ್ಧವಾಗಿ ಅವಿಶ್ವಾಸ ನಿರ್ಣಯ ಮಂಡನೆಯಾಗಿದೆ ಎಂದರು.


☛ ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಅವಿಶ್ವಾಸ ಮಂಡನೆ ನಂತರ ಹೊರಗಡೆ ಬೆಂಬಲಿಗರು ಪಟಾಕಿ ಸಿಡಿಸಿ ಸಂಭ್ರಮಿಸಿದರು,ಗುರುಪಾಟೀಲ,ವಿಜಯಕುಮಾರ ಮಾಡಗಿ, ಶಿವಲಿಂಗಪ್ಪ ಲೇವಡಿ, ಸಂಜು, ರಾಜಶೇಖರ ಮೌರ್ಯ, ಆಕಾಶ ಕೊಳ್ಳೂರ, ನಾಗಾರ್ಜುನ್ ಕಟ್ಟಿ,ಮಲ್ಲು ಕೊಡಂಬಲ್, ವಿಜಯಕುಮಾರ ಐನೋಳ್ಳಿ, ಲೋಕೇಶ ರಾಠೋಡ್, ರಾಜು ಲೇವಡಿ, ಮೋಹನರಡ್ಡಿ ಶೇರಿಕಾರ, ಸಂಗಮನಾಥರಡ್ಡಿ ಶೇರಿಕಾರ, ಜಯ ಸಿಂಗ್ ನಾಯಕ, ಹಣಮಂತರಡ್ಡಿ, ತುಕ್ಕರಾಮ, ಪ್ರಭುಲಿಂಗ ಸ್ವಾಮಿ, ಪ್ರೇಮು, ಸೇರಿದಂತೆ ಅನೇಕರಿದ್ದರು

**ಅವಿಶ್ವಾಸ ಮಂಡಿಸಿದ ಗ್ರಾ.ಪಂ. ಸದಸ್ಯರು**

**ಮೀನಾಕ್ಷಿ ಶಿವಶರಣಪ್ಪ,ಸರಸ್ವತಿ ವಿಶ್ವನಾಥಪಾಟೀಲ, ಸುನೀತಾ ಶಿವಲಿಂಗಪ್ಪ, ಸುರೇಖಾ ಚಂದ್ರಪ್ಪ,ರಾಜಶೇಖರ,ವೀರಾರಡ್ಡಿ, ಗೋಪಾಲ ಚವ್ಹಾಣ, ಅಶೋಕ ರಾಠೋಡ್, ಶಿವರಶರಣಪ್ಪಾ, ರೇಣುಕಾ ಲೋಕೇಶ, ಝುರಣಪ್ಪ,ಗೀತಾ ಸಂಜು ಅವಿಶ್ವಾಸ ನಿರ್ಣಯ ಮಂಡಿಸಿದರು. ಪಿಡಿಓ ವಾಹೇದ್ ಅಲಿ ಇದ್ದರು**

---

## ಆಫಿಷಿಯಲ್ಸ್ ಪೊಲೀಸ್ ಕ್ರಿಕೆಟ್ ಕಪ್‌ಗೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಚಾಲನೆ

• **ಉದಯವಾಹಿನಿ, ಚಿತ್ರದುರ್ಗ**

ಕ್ರೀಡೆಯಲ್ಲಿ ತೊಡಗಿಸಿಕೊಳ್ಳುವುದರಿಂದ ಮನಸ್ಸಿಗೆ ಉಲ್ಲಾಸ ದೊರೆಯವುದು. ಜತೆಗೆ ಕೆಲಸ ಮಾಡಲು ಚೈತನ್ಯವೂ ಬರಲಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಹೇಳಿದರು.

ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಶನಿವಾರ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಆಫಿಷಿಯಲ್ಸ್ ಪೊಲೀಸ್ ಕ್ರಿಕೆಟ್ ಕಪ್ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲಾ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ವಿವಿಧ ಇಲಾಖೆಯ ಸರ್ಕಾರಿ ನೌಕರರು ಸೇರಿ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಿರುವುದು ಉತ್ತಮ ಬೆಳವಣಿಗೆ. ಕ್ರೀಡೆ ಜೀವನದ ಅವಿಭಾಜ್ಯ ಅಂಗ. ಕ್ರೀಡೆಯು ಮನಸ್ಸನ್ನು ಮುದಗೊಳಿಸುವ ಜತೆಗೆ ನಮ್ಮ ಕೆಲಸಗಳ ಕಡೆ ಹೆಚ್ಚು ಮಗ್ನರಾಗಲು, ಆಸಕ್ತಿವಹಿಸಲು ಸಾಧ್ಯವಾಗಲಿದೆ. ಕ್ರೀಡೆ ಇರುವ ಕಡೆ ಯಶಸ್ಸು ಇರಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಕ್ರೀಡೆಯಲ್ಲಿ ಸೋಲು-ಗೆಲವು ಸಹಜ. ಇದಕ್ಕಿಂತ ಮುಖ್ಯವಾಗಿ ಕ್ರೀಡೆಯಲ್ಲಿ ಪಾಲ್ಗೊಳ್ಳುವುದು ಬಹಳ ಮುಖ್ಯ ಎಂದು ತಿಳಿಸಿದ ಅವರು ಎಲ್ಲ ಕ್ರೀಡಾಪಟುಗಳಿಗೆ ಶುಭ ಹಾರೈಸಿದರು. ಆಫಿಷಿಯಲ್ಸ್ ಪೊಲೀಸ್ ಕ್ರಿಕೆಟ್ ಕಪ್ ಪಂದ್ಯಾವಳಿಯಲ್ಲಿ ಪೊಲೀಸ್ ಇಲಾಖೆ, ನ್ಯಾಯಾಂಗ ಇಲಾಖೆ, ಬೆಸ್ಕಾಂ, ಜಿಲ್ಲಾ ಪಂಚಾಯಿತಿ, ಆರೋಗ್ಯ ಇಲಾಖೆ, ಭದ್ರಾ ಮೇಲ್ದಂಡೆ ಯೋಜನೆ, ನಗರಸಭೆ, ಅಂಚೆ ಇಲಾಖೆ, ಕಂದಾಯ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಪತ್ರಕರ್ತರ ತಂಡ ಸೇರಿದಂತೆ 16 ವಿವಿಧ ಇಲಾಖೆಯ ತಂಡಗಳು ಭಾಗವಹಿಸಿದ್ದವು.


☛ ಉದಯವಾಹಿನಿ ಚಿತ್ರ

**ಪೊಲೀಸ್ ಇಲಾಖೆಗೆ ಹೊಸ ವಾಹನಗಳ ಹಸ್ತಾಂತರ:** ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಶನಿವಾರ 4 ಬೊಲೆರೋ ನಿಯೋ ಹೊಸ ಮಾದರಿಯ ವಾಹನಗಳನ್ನು ಪೊಲೀಸ್ ಇಲಾಖೆಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಹಸ್ತಾಂತರಿಸಿದರು. ಮೊದಲ ಹಂತದಲ್ಲಿ 4 ಬೊಲೆರೋ ವಾಹನಗಳು ಹಾಗೂ ಎರಡನೇ ಹಂತದಲ್ಲಿ 4 ಬೊಲೆರೋ ನಿಯೋ ವಾಹನಗಳು ಸೇರಿದಂತೆ ಒಟ್ಟು 8 ಬೊಲೆರೋ ವಾಹನಗಳನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಅವರು ಶಾಸಕರ ಅನುದಾನದಲ್ಲಿ ಪೊಲೀಸ್ ಇಲಾಖೆಗೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಜಿಲ್ಲಾ ಸಶಸ್ತ್ರ ಮೀಸಲು ಪಡೆ ಪೊಲೀಸ್ ಉಪಾಧೀಕ್ಷಕ ಗಣೇಶ್, ಅಪರಾಧ ಪೊಲೀಸ್ ಠಾಣೆ ಪೊಲೀಸ್ ಉಪಾಧೀಕ್ಷಕ ಓಂಕಾರ ನಾಯ್ಕ್, ಚಿತ್ರದುರ್ಗ ಉಪವಿಭಾಗ ಪೊಲೀಸ್ ಉಪಾಧೀಕ್ಷಕ ದಿನಕರ್ ಸೇರಿದಂತೆ ಮತ್ತಿತರರು ಇದ್ದರು.

> **ಯಾವುದೇ ಇಲಾಖೆ ಇರಲಿ ಪ್ರತಿಯೊಬ್ಬರಿಗೂ ದೈಹಿಕ ಸಾಮಾರ್ಥ್ಯ ಬಹಳ ಮುಖ್ಯ. ಎಲ್ಲರಿಗೂ ದೈಹಿಕ ಸಾಮಾರ್ಥ್ಯದ ಬಗ್ಗೆ ಅರಿವು ಹಾಗೂ ವೇದಿಕೆ ಕಲ್ಪಿಸುವ ನಿಟ್ಟಿನಲ್ಲಿ ಕ್ರೀಡಾಕೂಟ ಆಯೋಜಿಲಾಗಿದ್ದು, ಕ್ರೀಡಾಕೂಟಗಳಿಂದ ಉತ್ತಮ ಗೆಳೆತನ, ಬಾಂಧವ್ಯ ವೃದ್ಧಿಯಾಗಲಿದೆ ಎಂದು ತಿಳಿಸಿದರು.**
>
> **ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು**

---

## ಕ್ಷಯ ತಡೆಗೆ 100 ದಿನಗಳ ಅಭಿಯಾನ

• **ಉದಯವಾಹಿನಿ, ದಾವಣಗೆರೆ**

ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಿಬ್ಬಂದಿ ಮನೆಮನೆಗೆ ಭೇಟಿ ನೀಡಿ ಪರಿಶೀಲಿಸಿದ ವೇಳೆ ಜಿಲ್ಲೆಯಲ್ಲಿ ಅಂದಾಜು 2 ಲಕ್ಷ ಜನರು 'ದುರ್ಬಲ ಗುಂಪಿನವರು' ಪತ್ತೆಯಾಗಿದ್ದಾರೆ. ಕ್ಷಯರೋಗಕ್ಕೆ ತುತ್ತಾಗಿರುವ ಸಾಧ್ಯತೆ ಹೆಚ್ಚಿರುವವರು ಅಥವಾ ಕ್ಷಯರೋಗದ ಲಕ್ಷಣಗಳನ್ನು ಹೊಂದಿರುವವರನ್ನು 'ದುರ್ಬಲ ಗುಂಪಿನ ವ್ಯಕ್ತಿಗಳು' ಎಂದು ಪಟ್ಟಿ ಮಾಡಲಾಗಿದೆ. 60 ವರ್ಷ ಮೇಲಿನವರು, ಮದ್ಯ, ಧೂಮಪಾನ ವ್ಯಸನಿಗಳು, ಕಡಿಮೆ ತೂಕ ಇರುವವರು ಹಾಗೂ ಕ್ಷಯರೋಗದ ಇನ್ನಿತರ ಲಕ್ಷಣ ಹೊಂದಿರುವವರನ್ನು 'ದುರ್ಬಲ ಗುಂಪಿನ ವ್ಯಕ್ತಿಗಳು' ಎಂದು ಗುರುತಿಸಲಾಗಿದೆ.


☛ ಉದಯವಾಹಿನಿ ಚಿತ್ರ

ಕ್ಷಯರೋಗದ ಬಗ್ಗೆ ನಿರಂತರ ಜಾಗೃತಿ ಮೂಡಿಸಿ, ಶಿಕ್ಷಣ ನೀಡುತ್ತಿದ್ದರೂ ಭಾರಿ ಸಂಖ್ಯೆಯಲ್ಲಿ ದುರ್ಬಲ ಗುಂಪಿನ ವ್ಯಕ್ತಿಗಳು ಪತ್ತೆಯಾಗಿರುವುದು ಆತಂಕಕಾರಿಯಾಗಿದೆ. ಜಿಲ್ಲೆಯಲ್ಲಿ ಕ್ಷಯ (ಟಿ.ಬಿ) ರೋಗಿಗಳನ್ನು ಗುರುತಿಸಿ, ಅವರಿಗೆ ಸೂಕ್ತ ಚಿಕಿತ್ಸೆ ನೀಡಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು 'ಟಿಬಿ ಪ್ರಕರಣಗಳನ್ನು ಪತ್ತೆ ಹಚ್ಚುವ 100 ದಿನಗಳ ಅಭಿಯಾನವನ್ನು ಕೈಗೊಂಡಿದೆ.

ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮವು (ಎನ್‌ಟಿಇಪಿ) ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ (ಎನ್‌ಎಚ್‌ಎಂ) ಜಾರಿಗೊಳಿಸಲಾಗಿದೆ. ದೇಶವನ್ನು ಕ್ಷಯ ಮುಕ್ತಗೊಳಿಸುವುದು, ಕ್ಷಯರೋಗಕ್ಕೆ ಸಂಬಂಧಿಸಿದಂತೆ ಉಚಿತ ಪರೀಕ್ಷೆ ನಡೆಸುವುದು ಹಾಗೂ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ಒದಗಿಸುವುದು ಈ ಅಭಿಯಾನದ ಮುಖ್ಯ ಉದ್ದೇಶ.

> **100 ದಿನಗಳ ಅಭಿಯಾನವು 2024ರ ಡಿಸೆಂಬರ್ 7ರಿಂದ ಆರಂಭಗೊಂಡಿದ್ದು, ಮಾರ್ಚ್ 17ರವರೆಗೆ ಜಿಲ್ಲೆಯನ್ನೂ ಒಳಗೊಂಡಂತೆ ದೇಶಾದ್ಯಂತ ನಡೆಯುತ್ತಿದೆ. ದೇಶದಲ್ಲಿ ಹೊಸದಾಗಿ ಅಂದಾಜು 2 ಲಕ್ಷ ಹೊಸ ಕ್ಷಯರೋಗ ಪ್ರಕರಣಗಳನ್ನು ಪತ್ತೆ ಹಚ್ಚುವ ಗುರಿ ಹೊಂದಲಾಗಿದೆ.**

---

## ಪಿಎಸ್‌ಐ ಮಡಿವಾಳಪ್ಪ ಬಾಗೋಡಿ ಬಿಡುಗಡೆ


☛ ಉದಯವಾಹಿನಿ ಚಿತ್ರ

• **ಉದಯವಾಹಿನಿ ಚಿಂಚೋಳಿ**

**ಉದಯವಾಹಿನಿ ಕನ್ನಡ ದಿನಪತ್ರಿಕೆ ವತಿಯಿಂದ 2025ನೇ ವರ್ಷದ ಹೊರತಂದಿರುವ ನೂತನ ದಿನದರ್ಶಿಕೆ (ಕ್ಯಾಲೆಂಡರ್)ನ್ನು ತಾಲ್ಲೂಕಿನ ಮಿರಿಯಾಣ ಪೋಲಿಸ್ ಠಾಣೆಯ ಪಿಎಸ್‌ಐ ಮಡಿವಾಳಪ್ಪ ಬಾಗೋಡಿ ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಎಸ್ಸಿ ಎಸ್ಟಿ ಘಟಕದ ತಾಲ್ಲೂಕಾಧ್ಯಕ್ಷ ಸಂತೋಷ ಗುತ್ತೇದಾರ,ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರು ಕಲಾವಿದ ಕವಿಗಳು ಶಂಕರಜೀ ಹೂವಿನಹಿಪ್ಪರಗಿ,ಆರ್.ಟಿ.ಐ ಅಧ್ಯಕ್ಷ ಅನೀಲಕುಮಾರ ಬಿರಾದಾರ,ವಕೀಲ ಸೂರ್ಯಕಾಂತ,ಬಿಜೆಪಿ ರಾಜ್ಯ ಉಪಾಧ್ಯಕ್ಷ ಕೆ.ಎಂ.ಬಾರಿ,ಚಿಮ್ಮಾಯಿದ್ಲಾಯಿ ಗ್ರಾ.ಪಂ. ಸದಸ್ಯ ಶ್ರೀನಿವಾಸ್ ಚಿಂಚೋಳಿಕರ್,ಸತ್ತಾರ್ ಪಟೇಲ,ಇದ್ದರು.**

---

# ಕೊಡಚಾದ್ರಿ, ಕೇಬಲ್ ಕಾರು: ಪರಿಸರಾಸಕ್ತರ ವಿರೋಧ ಜೋರು

## ಅಷ್ಟಕ್ಕೂ ಯಾರೂ ಇಲ್ಲಿ ಕೇಬಲ್ ಕಾರ್ ಯೋಜನೆ ಅನುಷ್ಠಾನ ಮಾಡಬೇಕು ಎಂದು ಒತ್ತಾಯಿಸಿ ಪ್ರತಿಭಟನೆ

• **ಉದಯವಾಹಿನಿ, ಹೊಸನಗರ**

ಇಲ್ಲಿನ ಮೂಕಾಂಬಿಕಾ ರಾಷ್ಟ್ರೀಯ ಉದ್ಯಾನದಲ್ಲಿರುವ ಕೊಡಚಾದ್ರಿ ಬೆಟ್ಟದಲ್ಲಿ ರೋಪ್‌ವೇ ಯೋಜನೆ ಅನುಷ್ಠಾನಗೊಳಿಸಲು ಕೇಂದ್ರ ಭೂಸಾರಿಗೆ ಹಾಗೂ ಹೆದ್ದಾರಿ ಸಚಿವಾಲಯ ಸಿದ್ಧತೆ ನಡೆಸಿರುವ ಕ್ರಮಕ್ಕೆ ತಾಲ್ಲೂಕಿನ ಪರಿಸರಾಸಕ್ತರಿಂದ ವಿರೋಧ ವ್ಯಕ್ತವಾಗಿದೆ. ಕೊಡಚಾದ್ರಿ ಬೆಟ್ಟವಿರುವ ಮೂಕಾಂಬಿಕಾ ಉದ್ಯಾನ ಪ್ರದೇಶ ಪಶ್ಚಿಮ ಘಟ್ಟದಲ್ಲೇ ಅತಿ ಸೂಕ್ಷ್ಮ ಅರಣ್ಯ ಪ್ರದೇಶವಾಗಿದೆ. ಶೋಲಾ ಅರಣ್ಯ ಪ್ರದೇಶವಾದ ಇಲ್ಲಿ ಜೀವ ವೈವಿಧ್ಯತೆ ಅರಳುವಂತಹ ಸಹಜ ಕಾಡು ಇದೆ. ಅದರಲ್ಲೂ ಮುಖ್ಯವಾಗಿ ಕುಟಚ ಎಂಬ ಔಷಧೀಯ ಸಸ್ಯ ಸಂಕುಲವಿದೆ. ಇದು ತೀರಾ ಅಪರೂಪದ ಪ್ರಬೇಧವಾಗಿದೆ. ಅಭಿವೃದ್ಧಿ ನೆಪದಲ್ಲಿ ಕೇಬಲ್ ಕಾರು, ರೋಪ್ ವೇ ನಿರ್ಮಾಣವಾದಲ್ಲಿ ಇಲ್ಲಿನ ಜೀವ ವೈವಿಧ್ಯತೆಗೆ ಧಕ್ಕೆಯಾಗುವುದರಲ್ಲಿ ಸಂಶಯವಿಲ್ಲ ಎಂದು ಪರಿಸರ ಹೋರಾಟಗಾರ ಚಕ್ರವಾಕ ಸುಬ್ರಹ್ಮಣ್ಯ ಆತಂಕ ವ್ಯಕ್ತಪಡಿಸುತ್ತಾರೆ.


☛ ಉದಯವಾಹಿನಿ ಚಿತ್ರ

**ಒಂದೆಡೆ ಕೋಟಿ ಕೋಟಿ ಹಣ ಸುರಿದು ಅಭಿವೃದ್ಧಿ**

ಅಷ್ಟಕ್ಕೂ ಯಾರೂ ಇಲ್ಲಿ ಕೇಬಲ್ ಕಾರ್ ಯೋಜನೆ ಅನುಷ್ಠಾನ ಮಾಡಬೇಕು ಎಂದು ಒತ್ತಾಯಿಸಿ ಪ್ರತಿಭಟನೆ ನಡೆಸಿಲ್ಲ. ಕೆಲ ಪಟ್ಟಭದ್ರರು ಸ್ವಹಿತಾಸಕ್ತಿಗಾಗಿ ಯೋಜನೆ ಜಾರಿಗೆ ಉತ್ಸುಕತೆ ತೋರುತ್ತಿದ್ದಾರೆ. ಬಹುಕೋಟಿ ಹಣವನ್ನು ದುಂದು ವೆಚ್ಚ ಮಾಡಲಿದ್ದಾರೆ. ಯೋಜನೆ ಪ್ರಕಾರ, 28 ಎಕರೆ ಕಾಡು ನಾಶವಾಗುವುದಿಲ್ಲ, ಬದಲಿಗೆ ನೂರಾರು ಎಕರೆ ಸಮೃದ್ಧ ಅರಣ್ಯ ಪ್ರದೇಶ ಹನನವಾಗಲಿದೆ. ಅಪರೂಪದ ಸಸ್ಯ ಸಂಕುಲ ಅವನತಿ ಹಾದಿ ಹಿಡಿಯುತ್ತವೆ. ಅದರಿಂದ ಪ್ರಾಕೃತಿಕ ಅಸಮತೋಲನ ಸೃಷ್ಟಿಯಾಗುತ್ತದೆ. ಯಾವುದೇ ಕಾರಣಕ್ಕೂ ಪಕೃತಿ ಮೇಲಿನ ಆಕ್ರಮಣ ಸಲ್ಲದು' ಎಂದು ಅವರು ಹೇಳುತ್ತಾರೆ.

**ಚಾರಣದಿಂದ ಆರೋಗ್ಯ:** ಕೊಡಚಾದ್ರಿ, ಗಿರಿ ಶಿಖರದ ಸೊಬಗು ಸವಿಯಲು ನಿತ್ಯ ಸಾವಿರಾರು ಪ್ರವಾಸಿಗರು ಬರುತ್ತಾರೆ. ಇಲ್ಲಿನ ಬೆಟ್ಟವನ್ನು ಚಾರಣ ಗೈಯುವುದು ಪರಿಸರ ಪ್ರೇಮಿಗಳಿಗೆ ಆಸಕ್ತಿಕರ ವಿಷಯ. ಚಾರಣ ಮಾಡುವುದರಿಂದ ಪ್ರವಾಸಿಗರ ಆರೋಗ್ಯ ವೃದ್ಧಿಯಾಗುತ್ತದೆ. ಅಶಕ್ತರಿಗೆ ಓಡಾಡಲು ಜೀಪ್ ವಾಹನದ ವ್ಯವಸ್ಥೆಯೂ ಇಲ್ಲಿದೆ. ರೋಪ್ ವೇ ನಿರ್ಮಾಣದಿಂದ ಚಾರಣ ವ್ಯವಸ್ಥೆಗೆ ಹಿನ್ನಡೆಯಾಗಲಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

**ಮನೋಲ್ಲಾಸವೇ ಇಲ್ಲ:** ಪ್ರಕೃತಿ ಸವಿ ಸವಿಯಲು ಚಾರಣ ಸುಲಭದ ದಾರಿಯಾಗಿದೆ. ಇಲ್ಲಿನ ಸಮೃದ್ಧ ಕಾಡು, ರಮಣೀಯ ಹಸಿರಿನ ಸೊಬಗು, ಜೀವ ಸಂಕುಲಗಳನ್ನು ಕಣ್ಣುಂಬಿಕೊಳ್ಳಲು ಕೇಬಲ್ ಕಾರ್ ಪಯಣದಿಂದ ಸಾಧ್ಯವಿಲ್ಲ. ರೋಪ್ ವೇ ಪ್ರಯಾಣದಿಂದ ಯಾವ ಮನೋಲ್ಲಾಸವೂ ಲಭಿಸದು. ಯಾಂತ್ರಿಕ ಪ್ರವಾಸವಷ್ಟೇ ನಮ್ಮದಾಗುತ್ತದೆ. ರೋಪ್ ವೇ ಮಲೆನಾಡಿಗೆ ಸರಿ ಹೊಂದುವುದಿಲ್ಲ' ಎಂದು ಸುಬ್ರಹ್ಮಣ್ಯ ವಿವರಿಸಿದ್ದಾರೆ. 'ಪರಿಸರ ನಾಶಕ್ಕೆ ಬರೆದ ಮರಣ ಶಾಸನ' 'ಕೊಲ್ಲೂರು ಮತ್ತು ಕೊಡಚಾದ್ರಿ ಗಿರಿ ನಡುವೆ ಕೇಬಲ್ ಕಾರ್ ಯೋಜನ ಅವೈಜ್ಞಾನಿಕವಾಗಿದೆ. ಈಗ ಹೇಳಿದಂತೆ ಯೋಜನೆ ಜಾರಿಗೆ ?375 ಕೋಟಿ ವ್ಯಯಿಸಲಾಗುತ್ತಿದೆ.

ಸರ್ಕಾರ ಒಂದೆಡೆ ಕೋಟಿ ಕೋಟಿ ಹಣ ಸುರಿದು ಅಭಿವೃದ್ಧಿ ನೆಪದಲ್ಲಿ ಪರಿಸರ ನಾಶಕ್ಕೆ ಯೋಜನೆ ರೂಪಿಸುತ್ತಿದೆ. ಮತ್ತೊಂದೆಡೆ ಪರಿಸರ ಉಳಿಸುವ ನಾಟಕವಾಡಿ ವನವಾಸಿಗಳನ್ನು ಒಕ್ಕಲೆಬ್ಬಿಸುವ ತಂತ್ರಗಾರಿಕೆ ನಡೆಸುತ್ತಿದೆ. ಇದು ಸರ್ಕಾರದ ಇಬ್ಬಗೆ ನೀತಿಯಾಗಿದೆ. ಸರ್ಕಾರ ಹತ್ತಾರು ಯೋಜನೆ ಜಾರಿಯಿಂದ ತಾಲ್ಲೂಕು ಹಿಂದುಳಿದಿದೆ. ಜಲಯೋಜನೆಯಲ್ಲಿ ಇಲ್ಲಿ ಭೂಮಿ ಕಾಡು ನಾಶವಾಗಿದೆ.

> **ಆದರೆ ಸಂಪೂರ್ಣವಾಗುವ ಹೊತ್ತಿಗೆ ಮತ್ತಷ್ಟು ಕೋಟಿ ಹಣ ವ್ಯಯವಾಗುತ್ತದೆ. ಯೋಜನೆಯಿಂದ ಗಿರಿಯ ಸೌಂದರ್ಯಕ್ಕೆ ಧಕ್ಕೆಯಾಗುವುದು ಖಚಿತ. ಈ ಯೋಜನೆ ಗಿರಿಯ ಸುಂದರ ಸಮ್ಮ ಪರಿಸರ ನಾಶಕ್ಕೆ ಬರೆದ ಮರಣ ಶಾಸನ' ಎಂಬುದು ಪರಿಸರ ಪ್ರೇಮಿ ಮಂಜುನಾಥ ಬ್ಯಾಣದ್ ಅವರ ವಾದ.**

> **ಮುಳುಗಡೆ ಬೇಗೆಯಲ್ಲಿ ಬೇಯುತ್ತಿದ್ದೇವೆ. ಮತ್ತೆ ಮತ್ತೆ ಯೋಜನೆ ರೂಪಿಸುವುದು ತರವಲ್ಲ. ಅಷ್ಟಕ್ಕೂ ಯೋಜನೆಯಿಂದ ಹೊಸನಗರಕ್ಕೆ ಯಾವುದೇ ಪ್ರಯೋಜನವಿಲ್ಲ. ಕೊಲ್ಲೂರು ಅಭಿವೃದ್ಧಿ ಆಗುತ್ತದೆ. ಪ್ರವಾಸಿಗರು ಇಲ್ಲದೆ ಹೊಸನಗರ ಬಡವಾಗುವ ಅಪಾಯವಿದೆ ಎನ್ನುತ್ತಾರೆ ಅವರು.**

---

## ಮಿನಿ ನ್ಯೂಸ್

### ಹಾಡಹಗಲೇ ಕುದುರೆಮುಖ ರಾಷ್ಟ್ರೀಯ ಹೆದ್ದಾರಿಯಲ್ಲಿ ಓಡಾಡಿದ ಚಿರತೆ

• **ಉದಯವಾಹಿನಿ, ಚಿಕ್ಕಮಗಳೂರು**

ಕಾಫಿನಾಡು ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಾಡುಪ್ರಾಣಿಗಳ ಉಪಟಳ ಮಿತಿ ಮೀರಿ ಹೋಗಿದೆ ಇಷ್ಟು ದಿನ ಕಾಡಾನೆ, ಕಾಡುಕೋಣ, ಹುಲಿ ದಾಳಿ ಅಂತ ಬೇಸತ್ತಿದ ಜನ ಇದೀಗ ಚಿರತೆಗೆ ಭಯಪಡುವಂತಾಗಿದೆ. ಕಳಸ ತಾಲೂಕಿನ ಕುದುರೆಮುಖ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಳೆದ ಎರಡು ದಿನಗಳಿಂದ ಚಿರತೆ ಕಾಣಿಸಿಕೊಳ್ಳುತ್ತಿದ್ದು ಸ್ಥಳೀಯರಲ್ಲಿ ಹಾಗೂ ವಾಹನ ಸವಾರರಲ್ಲಿ ಆತಂಕ ಸೃಷ್ಟಿಸಿದೆ. ಉಡುಪಿ ಹೀಗಾಗಿ ಚಿರತೆಯನ್ನು ಸೆರೆ ಹಿಡಿಯುವಂತೆ ಸ್ಥಳೀಯರು ಅರಣ್ಯ ಇಲಾಖೆಗೆ ಆಗ್ರಹಿಸಿದ್ದಾರೆ.

### ನಿಯಮ ಉಲ್ಲಂಘಿಸಿದ ದ್ವಿಚಕ್ರ ವಾಹನಗಳಿಗೆ ಬಿಸಿ ಮುಟ್ಟಿಸಿದ ಅಧಿಕಾರಿ

• **ಉದಯವಾಹಿನಿ, ದಾಂಡೇಲಿ**

ದಾಂಡೇಲಿ ನಗರ ಠಾಣೆಯ ತನಿಖಾ ವಿಭಾಗದ ಪಿಎಸ್‌ಐ ಕಿರಣ್ ಪಾಟೀಲ್ ಅವರ ನೇತೃತ್ವದಲ್ಲಿ ನಗರದ ವಿವಿಧೆಡೆ ಶನಿವಾರ ಕಾರ್ಯಾಚರಣೆಯನ್ನು ನಡೆಸಿ ಸಂಚಾರಿ ನಿಯಮಗಳನ್ನು ಉಲ್ಲಂಘಿಸಿದ 25 ದ್ವಿಚಕ್ರ ವಾಹನಗಳಿಗೆ ದಂಡ ವಿಧಿಸಿ, ಎಚ್ಚರಿಕೆ ನೀಡಿದ ಘಟನೆ ಶನಿವಾರ(ಜ.11) ನಡೆದಿದೆ. ನಗರದ ಆಯಕಟ್ಟಿನ ಸ್ಥಳಗಳಲ್ಲಿ ಬೆಳಗಿನಿಂದಲೆ ವಿವಿಧ ವಾಹನಗಳ ತಪಾಸಣೆಯನ್ನು ನಡೆಸಲಾಗಿತ್ತು. ಈ ತಪಾಸಣೆ ಕಾರ್ಯದಲ್ಲಿ ಸಂಚಾರಿ ನಿಯಮಗಳನ್ನು ಉಲ್ಲಂಘಿಸಿದ ಒಟ್ಟು 25 ದ್ವಿಚಕ್ರ ವಾಹನಗಳಿಗೆ ಒಟ್ಟು ರೂ.14,000/- ದಂಡ ವಿಧಿಸಲಾಗಿದೆ. 20 ಸಮರ್ಪಕ ದಾಖಲೆ ಪತ್ರಗಳಿಲ್ಲದೆ ಇರುವುದು, ವಾಹನ ಚಾಲನಾ ಪರವಾನಿಗೆ ಇಲ್ಲದೇ ಇರುವುದು, ಮೂವರನ್ನು ಕೂಡಿಸಿಕೊಂಡು ಬೈಕ್ ಚಲಾಯಿಸುವುದು ಸೇರಿದಂತೆ ವಿವಿಧ ಸಂಚಾರಿ ನಿಯಮಗಳ ಕ್ರೀಡೆ ಉಲ್ಲಂಘನೆಯನ್ನು ಮಾಡಿರುವುದನ್ನು ಗಮನಿಸಿ ಸೂಕ್ತ ದಂಡವನ್ನು ಆಕರಣೆ ಮಾಡಲಾಯ್ತು. ಇದೇ ಸಂದರ್ಭದಲ್ಲಿ ಪಿಎಸ್‌ಐ ಕಿರಣ್ ಪಾಟೀಲ್ ಅವರು ಸಂಚಾರಿ ನಿಯಮಗಳ ಪಾಲನೆಯ ಕುರಿತಂತೆ ಮನವರಿಕೆ ಮಾಡಿ ಮುಂದಿನ ದಿನಗಳಲ್ಲಿ ಈ ರೀತಿ ಆಗದಂತೆ ಎಚ್ಚರಿಕೆಯನ್ನು ನೀಡಿದರು. ಕಾರ್ಯಾಚರಣೆಯಲ್ಲಿ ನಗರ ಠಾಣೆಯ ಪೊಲೀಸರು ಭಾಗವಹಿಸಿದ್ದರು.

### ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವಿಜಯಪ್ರಸಾದ್ ಅಮಾನತು

• **ಉದಯವಾಹಿನಿ, ಗಂಗಾವತಿ**

ಆರೋಗ್ಯ ಇಲಾಖೆಯ ಹಿರಿಯ ಆರೋಗ್ಯ ನಿರೀಕ್ಷಕ ವಿಜಯಪ್ರಸಾದ ಇವರನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಬಿ.ಲಿಂಗರಾಜು ಅಮಾನತುಗೊಳಿಸಿ ಆದೇಶ ನೀಡಿದ್ದಾರೆ. ಜಿಲ್ಲಾ ಮಟ್ಟದ ರಾಷ್ಟ್ರೀಯ ಕಾರ್ಯಕ್ರಮ ಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಬಿ.ಲಿಂಗರಾಜು ಅವರಿಗೆ ಸಭೆಯ ಎಲ್ಲಾ ಅಧಿಕಾರಿಗಳ ಎದುರಿಗೆ ವಾಗ್ವಾದಕ್ಕೆ ಇಳಿದಿದ್ದು, ಕಾರ್ಯಕ್ರಮಗಳ ಪ್ರಗತಿ ಸಭೆಯಲ್ಲಿ ಕಾರ್ಯಕ್ರಮಗಳ ಅಂಕಿ ಅಂಶಗಳನ್ನು ತಾಳೆ ಹೊಂದಿಸಿ ಜಿಲ್ಲಾ ಮಟ್ಟಕ್ಕೆ ಸರಿಯಾಗಿ ನೀಡದೇ ಪ್ರತಿಯೊಂದು ಮಾಹಿತಿಗಾಗಿ ತಾಲೂಕ ಆರೋಗ್ಯಾಧಿಕಾರಿಗಳನ್ನೇ ಕೇಳಬೇಕು ಎಂದು ಬೇಜಾಬ್ದಾರಿತನ ದಿಂದ ನಡೆದುಕೊಂಡು ಹಿರಿಯ ಅಧಿಕಾರಿಗಳಿಗೆ ಅಗೌರವನ್ನುಂಟು ಮಾಡಿದ ಪ್ರಕರಣದಲ್ಲಿ ವಿಜಯಪ್ರಸಾದ ಕರ್ತವ್ಯದಲ್ಲಿ ದುರ್ನಡತೆ ಮತ್ತು ಕರ್ತವ್ಯ ಲೋಪ ಎಸಗಿರುವುದರಿಂದ ಮತ್ತು ಮೇಲಾಧಿಕಾರಿಗಳಿಗೆ ಅಗೌರವವನ್ನು ತೋರಿರುವುದರಿಂದ ಸದರಿ ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗಿದೆ ಎಂದು ಅಮಾನತು ಆದೇಶದಲ್ಲಿ ತಿಳಿಸಲಾಗಿದೆ.

### ಅಮಿತ್ ಶಾ ಅಣಕು ಶವ ಸಂಸ್ಕಾರದ ಅಸ್ಥಿ ವಿಸರ್ಜಿಸಿ ಪ್ರತಿಭಟನೆ

• **ಉದಯವಾಹಿನಿ, ಹುಬ್ಬಳ್ಳಿ**

ಡಾ.ಬಿ.ಆರ್.ಅಂಬೇಡ್ಕರ್ ಅವರ ಬಗ್ಗೆ, ಅಪಮಾನಕರವಾದ ಹೇಳಿಕೆ ನೀಡಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಅಣಕು ಶವ ಸಂಸ್ಕಾರದ ಅಸ್ತಿಯನ್ನು ಇಲ್ಲಿನ ನಾಲಾವೊಂದರಲ್ಲಿ ವಿಸರ್ಜನೆ ಮಾಡಿ ಪ್ರತಿಭಟಿಸಲಾಯಿತು. ಗುರುವಾರ ಹುಬ್ಬಳ್ಳಿ ಬಂದ್ ವೇಳೆ ಶಾ ಅವರ ಅಣಕು ಶವ ಸಂಸ್ಕಾರ ಮಾಡಲಾಗಿತ್ತು. ಶನಿವಾರ ಅಸ್ತಿಯನ್ನು ವಿಸರ್ಜನೆ ಮಾಡಲಾಯಿತು. ಡಾ.ಬಿ.ಆರ್ ಅಂಬೇಡ್ಕರ್ ಸ್ವಾಭಿಮಾನಿ, ಅಭಿಮಾನಿ ಅನುಯಾಯಿಗಳ ಬಳಗದಿಂದ ಅಸ್ತಿ ವಿಸರ್ಜನೆ ಮಾಡಲಾಗಿದೆ. ಕಿತ್ತೂರು ರಾಣಿ ಚನ್ನಮ್ಮವೃತ್ತದಿಂದ ಮೆರವಣಿಗೆ ಮೂಲಕ ಹಳೇ ಹುಬ್ಬಳ್ಳಿಯ ಮುಖ್ಯ ರಸ್ತೆಯ ಮಟನ್ ಮಾರುಕಟ್ಟೆ ಬಳಿಯ ನಾಲೆಯಲ್ಲಿ ಅಸ್ಥಿ ವಿಸರ್ಜಿಸಲಾಯಿತು. ಬಳಗದ ಗುರುನಾಥ ಉಳ್ಳಿಕಾಶಿ, ಮಾರುತಿ ದೊಡ್ಡಮನಿ ಇನ್ನಿತರ ದಲಿತ ಮುಖಂಡರು ಪಾಲ್ಗೊಂಡಿದ್ದರು.

### ಬೆಳಗಾವಿಗೆ ವಂದೇ ಭಾರತ್ ವಿಸ್ತರಣೆಗೆ ಮನವಿ

• **ಉದಯವಾಹಿನಿ, ಬೆಳಗಾವಿ**

ಬೆಳಗಾವಿ ಲೋಕಸಭಾ ಸದಸ್ಯರು ಹಾಗೂ ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್ ನವದೆಹಲಿಯಲ್ಲಿ ಶುಕ್ರವಾರ (ಜ.10) ಪ್ರಧಾನ ಮಂತ್ರಿ ನರೇಂದ್ರ ಮೋದಿ ಭೇಟಿ ಮಾಡಿದರು. ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಸ್ವತಃ ಬೆಳಗಾವಿ ನಗರಕ್ಕೆ ಆಗಮಿಸಿ, ಅತ್ಯುತ್ತಮ ಸಹಕಾರವನ್ನು ನೀಡಿದ್ದನ್ನು ಇದೇ ವೇಳೆ ಶೆಟ್ಟರ್ ಸ್ಮರಿಸಿದರು. ಸವದತ್ತಿಯ ಶ್ರೀ ಕ್ಷೇತ್ರ, ಶ್ರೀ ರೇಣುಕಾ ಎಲ್ಲಮ್ಮ ದೇವಿ ದೇವಸ್ಥಾನದ ಅಭಿವೃದ್ಧಿಗೆ 100 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿದ್ದಕ್ಕೆ ನರೇಂದ್ರ ಮೋದಿ ಅವರಿಗೆ ಕೃತಜ್ಞತೆ ಸಲ್ಲಿಸಿದರು. ಅದೇ ರೀತಿಯಲ್ಲಿ ರಾಮದುರ್ಗದಲ್ಲಿರುವ ಐತಿಹಾಸಿಕ ಶಬರಿ ಕೊಳ್ಳವನ್ನು ಸಹ ಅಭಿವೃದ್ಧಿಪಡಿಸುವಂತೆ ಮನವಿ ಮಾಡಿದರು. ಬೆಂಗಳೂರು - ಧಾರವಾಡದ ನಡುವೆ ಸದ್ಯ ಸಂಚರಿಸುತ್ತಿರುವ ವಂದೇ ಭಾರತ ಎಕ್ಸ್‌ಪ್ರೆಸ್ ರೈಲು ಸಂಚಾರವನ್ನು ಬೆಳಗಾವಿಯವರೆಗೆ ವಿಸ್ತರಿಸಿ ಬೆಳಗಾವಿ ಜಿಲ್ಲಾ ನಿವಾಸಿಗಳ ಅನೇಕ ದಿನಗಳ ಬೇಡಿಕೆಯನ್ನು ಪರಿಗಣಿಸುವಂತೆ ಮನವಿ ಮಾಡಿದರು. ವಿಮಾನಯಾನ ಸೇವೆಗೆ ಸಂಬಂಧಿಸಿದಂತೆ ಉಡಾನ್ 3.0 ಯೋಜನೆಯ ಉಡುಪಿ ಅವಧಿಯನ್ನು ಇನ್ನೂ ಹೆಚ್ಚಿಸಿದಲ್ಲಿ ಪ್ರಯಾಣಿಕರಿಗೆ ಉತ್ತರ ಕನ್ನಡ ಅನುಕೂಲವಾಗಲಿದೆ ಎಂದು ಮನವರಿಕೆ ಮಾಡಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** ನೀವು ದೀರ್ಘಕಾಲದ ಆಧಾರದ ಮೇಲೆ ಹೂಡಿಕೆ ಮಾಡಿದಲ್ಲಿ ಗಣನೀಯ ಲಾಭ ಮಾಡುತ್ತೀರಿ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ.

**ವೃಷಭ** ನೀವು ವಿಶ್ರಾಂತಿ ಪಡೆಯಬೇಕು ಮತ್ತು ನಿಕಟ ಸ್ನೇಹಿತರು ಮತ್ತು ಕುಟುಂಬದ ಸದಸ್ಯರ ನಡುವೆ ಸಂತೋಷವಾಗಿರಲು ಪ್ರಯತ್ನಿಸಬೇಕು ನಿಮ್ಮ ಪ್ರೇಮ ಪ್ರಕರಣದ ಬಗ್ಗೆ ಜೋರಾಗಿ ಹೇಳಿಕೊಳ್ಳಬೇಡಿ.

**ಮಿಥುನ** ಇಂದು ಗಣನೀಯ ಪ್ರಮಾಣದ ಹಣವನ್ನು ನಷ ಹೊಂದಿರುತ್ತೀರಿ ಮತ್ತು ಆದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಮೂಲವಾಗಬಹುದು.

**ಕರ್ಕಾಟಕ** ನಿಮ್ಮ ಮಗುವಿನ ಸಾಧನೆ ನಿಮಗೆ ಅಪಾರ ಸಂತೋಷ ನೀಡಬಹುದು. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಇಂದು ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ.

**ಸಿಂಹ** ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು.

**ಕನ್ಯಾ** ನಿಮ್ಮ ಅನುಮಾನದ ಪ್ರಕೃತಿ ನಿಮಗೆ ಸೋಲಿನ ಮುಖ ತೋರಿಸಬಹುದು. ಭೂಮಿ ಅಥವಾ ಯಾವುದೇ ಆಸ್ತಿಯಲ್ಲಿ ಹೂಡಿಕೆ ಮಾಡುವುದು ಇಂದು ನಿಮಗೆ ಮಾರಕವಾಗಬಹುದು.

**ತುಲಾ** ಇಂದು ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು, ನೀವು ಅವರ ಮಾತುಗಳನ್ನು ಬಹಳ ಗಮನವಾಗಿ ಕೇಳಬೇಕಾದ ಅಗತ್ಯವಿದೆ.

**ವೃಶ್ಚಿಕ** ಯಶಸ್ಸು ಹತ್ತಿರವಿರುವಂತೆ ತೋರಿದರೂ ಸಹ ಶಕ್ತಿ ಕುಂಠಿತವಾಗುತ್ತದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ.

**ಧನಸ್ಸು** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

**ಮಕರ** ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದು. ದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ.

**ಕುಂಭ** ನಿಮ್ಮ ಹಳೆಯ ಯಾವುದೇ ರೋಗ ಇಂದು ನಿಮ್ಮನ್ನು ಕಾಡಬಹುದು. ಇದರ ಕಾರಣದಿಂದ ನೀವು ಆಸ್ಪತ್ರೆಗೂ ಹೋಗಬೇಕಾಗಬಹುದು ಮತ್ತು ನಿಮ್ಮ ಸಾಕಷ್ಟು ಹಣವು ಸಹ ಖರ್ಚು ಆಗಬಹುದು.

**ಮೀನ** ಮಾದಕವಸ್ತುವಿನ ಅವಲಂಬನೆ ಹೆಚ್ಚುವ ಸಾಧ್ಯತೆಗಳಿರುವುದರಿಂದ ಸ್ವಯಂ ಔಷಧೋಪಚಾರ ಮಾಡಬೇಡಿ. ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ.

# ಪ್ರಯಾಣಿಕರ ಉಪಯೋಗಕ್ಕೆ ಬಾರದ ತಂಗುದಾಣ

## ಪ್ರಯಾಣಿಕರ ಅನುಕೂಲಕ್ಕಾಗಬೇಕಾಗಿದ್ದ ಬಸ್ ನಿಲ್ದಾಣ ಊರವರ ಮಧ್ಯಾಹ್ನದ ಶಯನ ಗೃಹವಾಗಿ ಬದಲಾಗಿದೆ

• ಉದಯವಾಹಿನಿ, ಮುಧೋಳ

ಪ್ರಯಾಣಿಕರ ಅನುಕೂಲಕ್ಕಾಗಬೇಕಾಗಿದ್ದ ಬಸ್ ನಿಲ್ದಾಣ ಊರವರ ಮಧ್ಯಾಹ್ನದ ಶಯನಗೃಹವಾಗಿ ಬದಲಾದ ಪರಿಣಾಮ ಸಾರಿಗೆ ಬಸ್‌ಗಾಗಿ ಕಾಯುವ ಪ್ರಯಾಣಿಕರು ಹೆದ್ದಾರಿ ಪಕ್ಕದಲ್ಲಿ ನಿಂತು ಹೈರಾಣಾಗುವ ಪರಿಸ್ಥಿತಿ ಸಮೀಪದ ಚಿಂಚಖಂಡಿ ಕೆ.ಡಿ. ಗ್ರಾಮದಲ್ಲಿ ಹಲವಾರು ವರ್ಷಗಳಿಂದ ನಿರ್ಮಾಣವಾಗಿದೆ. ರಸ್ತೆ ಪಕ್ಕ ಹಲವು ದಶಕಗಳ ಹಿಂದೆ ನಿರ್ಮಾಣಗೊಂಡಿರುವ ಬಸ್ ನಿಲ್ದಾಣದ ಮುಂಭಾಗದಲ್ಲಿ ಅಂಗಡಿ, ಮುಂಗಟ್ಟುಗಳು ತಲೆಯೆತ್ತಿರುವ ಪರಿಣಾಮ ಪ್ರಯಾಣಿಕರಿಗೆ ಕಣ್ಣೆದುರಿಗೆ ಇರುವ ತಂಗುದಾಣವನ್ನು ಹುಡುಕುವುದು ಕಷ್ಟಕರವಾಗಿದೆ.

**ರಾಜ್ಯ ಹೆದ್ದಾರಿ ಮೇಲೆ ನಿಲ್ಲುವ ಸ್ಥಿತಿ:** ಚಿಂಚಖಂಡಿ ಕೆ.ಡಿ. ಗ್ರಾಮ ಜಮಖಂಡಿ-ಬೆಳಗಾವಿ ರಾಜ್ಯ ಹೆದ್ದಾರಿಗೆ ಹೊಂದಿಕೊಂಡಿದೆ. ನಿತ್ಯ ಈ ಮಾರ್ಗದಲ್ಲಿ ಸಾವಿರಾರು ವಾಹನಗಳ ಓಡಾಟ ಸರ್ವೇ ಸಾಮಾನ್ಯ.

> ಚಿಂಚಖಂಡಿ ಕೆ.ಡಿ. ಗ್ರಾಮದದಲ್ಲಿನ ಬಸ್ ನಿಲ್ದಾಣ ಇನ್ನೂ ಇಲ್ಲದಂತಾಗಿದೆ. ಬೇರೆ ಊರಿನಿಂದ ಬರುವ ಸಾರ್ವಜನಿಕರಿಗೆ ಬಸ್ ನಿಲ್ದಾಣ ಕಾಣಿಸದಷ್ಟು ಅಂಗಡಿ ಮುಂಗಟ್ಟುಗಳು ತಲೆಯೆತ್ತಿವೆ. ಈ ಬಗ್ಗೆ ಅಧಿಕಾರಿಗಳು ಗಮನ ಹರಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡಬೇಕು
> – ಅಶೋಕ ಸಾಲಾಪುರ, ಪ್ರಯಾಣಿಕ

ಅದೂ ಅಲ್ಲದೆ ಕಬ್ಬು ಹಂಗಾಮು ಆರಂಭವಾಗಿರುವುದರಿಂದ ಕಬ್ಬು ತುಂಬಿದ ವಾಹನಗಳು ಹೆಚ್ಚಿನ ಸಂಖ್ಯೆಯಲ್ಲಿಯೇ ಓಡಾಡುತ್ತಿರುತ್ತವೆ. ಆದರೆ ರಸ್ತೆ ಪಕ್ಕದಲ್ಲಿಯೇ ಸಾರ್ವಜನಿಕರೂ ಬಸ್ ಗಾಗಿ ಕಾದು ನಿಲ್ಲುವುದರಿಂದ ಅಪಘಾತಗಳು ಸಂಭವಿಸುವ ಸನ್ನಿವೇಶ ದಟ್ಟವಾಗಿರುತ್ತವೆ.


ಉದಯವಾಹಿನಿ ಚಿತ್ರ

### ಬೇಕಿದೆ ನೂತನ ಬಸ್ ನಿಲ್ದಾಣ

ಚಿಂಚಖಂಡಿ ಗ್ರಾಮದಲ್ಲಿನ ಬಸ್ ನಿಲ್ದಾಣ ಸದ್ಯ ಶಿಥಿಲಾವಸ್ಥೆಯಲ್ಲುದು ನೂತನ ಕಟ್ಟಡದ ಅನಿವಾರ್ಯತೆ ಇದೆ. ಹಳೆಯ ಕಟ್ಟಡ ಶಿಥಿಲಗೊಂಡಿದ್ದು ಅದನ್ನು ತೆರವುಗೊಳಿಸಿ ನೂತನ ಕಟ್ಟಡ ನಿರ್ಮಿಸಿ ಪ್ರಯಾಣಿಕರ ಉಪಯೋಗಕ್ಕೆ ಬರುವಂತೆ ಕ್ರಮ ವಹಿಸಬೇಕು ಎಂಬುದು ಇಲ್ಲಿನ ಜನರ ಆಗ್ರಹವಾಗಿದೆ.

ಕುಳಿತುಕೊಳ್ಳಲು ಸೂಕ್ತ ನಿಲ್ದಾಣವಿಲ್ಲದ ಪರಿಣಾಮ ಅನಿವಾರ್ಯವಾಗಿ ಸಾರ್ವಜನಿಕರು ರಸ್ತೆ ಪಕ್ಕದಲ್ಲಿಯೇ ನಿಂತು ಬಸ್ ಗಾಗಿ ಕಾಯುವಂತಾಗಿದೆ. ರಸ್ತೆ ಪಕ್ಕದಲ್ಲಿ ಕುಳಿತುಕೊಳ್ಳಲು ಜಾಗವಿಲ್ಲದ ಪರಿಣಾಮ ಪ್ರಯಾಣಿಕರು ಬಿಸಿಲು ಬೆರಳೆನ್ನದೆ ರಸ್ತೆ ಪಕ್ಕದಲ್ಲಿಯೇ ನಿಂತುಕೊಳ್ಳಬೇಕಾಗಿದೆ.

**ಸುತ್ತಳ್ಳಿಗಳಿಗೆ ಕೇಂದ್ರ ಬಿಂದು:** ಚಿಂಚಖಂಡಿ ಗ್ರಾಮ ಮುಧೋಳದಿಂದ 8 ಕಿ.ಮೀ ಅಂತರದಲ್ಲಿದ್ದರೂ ತನ್ನ ಸುತ್ತಲಿನ ಗ್ರಾಮಗಳಾಗಿರುವ ಜಂಬಗಿ ಕೆ.ಡಿ., ಗುಲಗಾಲ ಜಂಬಗಿ, ಕಸಬಾ ಜಂಬಗಿಗೆ ಕೇಂದ್ರ ಬಿಂದುವಾಗಿದೆ. ಜಿಲ್ಲಾ ಕೇಂದ್ರಗಳಿಗೆ ತೆರಳಬೇಕಾದರೆ ಚಿಂಚಖಂಡಿಯಿಂದಲೆ ಬಸ್ ಹತ್ತುವ ಅನಿವಾರ್ಯತೆ ಇರುವುದರಿಂದ ಚಿಂಚಖಂಡಿ ಗ್ರಾಮವೂ ನಿತ್ಯ ಜನಸಂದಣಿಯಿಂದ ಕೂಡಿರುತ್ತದೆ. ಶಾಲಾ ವಿದ್ಯಾರ್ಥಿಗಳು ನಿತ್ಯ ಶಾಲೆ ಕಾಲೇಜುಗಳಿಗೆ ತೆರಳಲು ರಸ್ತೆ ಪಕ್ಕದಲ್ಲಿಯೇ ನಿಂತು ಬಸ್ ಗಾಗಿ ಕಾಯುವಂತಾಗಿದೆ.

**ಅಂಗಡಿ ಮುಂಗಟ್ಟಿನಿಂದ ಕಣ್ಮರೆ**

**ಮಲಗಲು ಹೇಳಿ ಮಾಡಿಸಿರುವ ಜಾಗ:** ಚಿಂಚಖಂಡಿ ಗ್ರಾಮದ ಹೆದ್ದಾರಿ ಪಕ್ಕದಲ್ಲಿರುವ ಬಸ್ ನಿಲ್ದಾಣ ಮಲಗಲು ಹೇಳಿ ಮಾಡಿಸಿದಂತಾಗಿದೆ. ಊರಿನ ಯುವಕರು, ವೃದ್ಧರು ಮಧ್ಯಾಹ್ನದ ಸಮಯದಲ್ಲಿ ಬಸ್ ನಿಲ್ದಾಣದಲ್ಲಿ ನಿದ್ರೆಗೆ ಜಾರುವುದರಿಂದ ಸಾರ್ವಜನಿಕರು ಅತ್ತ ಸುಳಿಯುವುದಿಲ್ಲ. ಬಸ್ ನಿಲ್ದಾಣದ ಸುತ್ತ ಗಿಡಮರಗಳು ಬೆಳೆದಿರುವುದರಿಂದ ತಂಪಾದ ವಾತಾವರಣ ಮನೆಮಾಡಿರುತ್ತದೆ. ಗ್ರಾಮಸ್ಥರು ನೆರಳಿನ ಆಶ್ರಯಕ್ಕಾಗಿ ಬಸ್ ನಿಲ್ದಾಣಕ್ಕೆ ಬಂದು ಅಲ್ಲಿಯೇ ಮಲಗಿ ನಿದ್ದೆ ಮಾಡುವ ದೃಶ್ಯ ಸರ್ವೇ ಸಾಮಾನ್ಯವಾಗಿದೆ.

ಅದೂ ಅಲ್ಲದೆ ಪಾನ್ ಶಾಪ್‌ಗಳು ಬಸ್ ನಿಲ್ದಾಣದ ಮುಂಬಾಗದಲ್ಲಿ ತಲೆಯೆತ್ತಿರುವುದರಿಂದ ಜನರಿಗೆ ಸರಾಗವಾಗಿ ತೆರಳುವುದು ಕಷ್ಟಸಾಧ್ಯವಾಗಿದೆ.

## ತಪಸ್ ಮತ್ತು ಸಾಧನಾ ಪರೀಕ್ಷೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳು

• ಉದಯವಾಹಿನಿ ಹುಣಸಗಿ

ದಿನಾಂಕ 21.12.24 ರಂದು ಕಲಬುರಗಿಯಲ್ಲಿ ನಡೆದ ರಾಷ್ಟ್ರೋತ್ಥಾನ ಪರಿಷತ್ ಬೆಂಗಳೂರು ವತಿಯಿಂದ ನಡೆದ ರಾಜ್ಯಮಟ್ಟದ ತಪಸ್ ಮತ್ತು ಸಾಧನಾ ಸಂದರ್ಶನ ಪರೀಕ್ಷೆಯಲ್ಲಿ ನಮ್ಮ ಶಾಲೆಯ ವಿದ್ಯಾರ್ಥಿಗಳು ಉತ್ತಮ ಸಾಧನೆಗೈದಿದ್ದಾರೆ ಎಂದು ಶಾಲೆಯ ಮುಖ್ಯೋಪಾಧ್ಯಾಯರು ಹೇಳಿದರು.

ಪಟ್ಟಣದ ಹೊರವಲಯದಲ್ಲಿ ಇರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳಾದ ಪುಷ್ಪಾ ತಂದೆ ಚಂದಪ್ಪ, ಭಾಗ್ಯಶ್ರೀ ತಂ ಪೂಲಸಿಂಗ್ ಹಾಗೂ ಕುಮಾರ ಗಣೇಶ ತಂ ನೀಲಪ್ಪ ಈ ಮೂರು ವಿದ್ಯಾರ್ಥಿಗಳು ಎರಡು ಹಂತದ ಲಿಖಿತ ಪರೀಕ್ಷೆ ಹಾಗೂ ಸಂದರ್ಶನದಲ್ಲಿ ಉತ್ತೀರ್ಣರಾಗಿ ಅಂತಿಮ ಹಂತಕ್ಕೆ ಆಯ್ಕೆಯಾಗಿದ್ದಾರೆ.



ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಚನ್ನಬಸಪ್ಪ, ಜಿಲ್ಲಾ ಸಮನ್ವಯ ಅಧಿಕಾರಿಗಳಾದ ನಾಗರಡ್ಡಿ ಗುಂಡಕನಾಳ ಮತ್ತು ವಸತಿ ಶಾಲೆಯ ಪ್ರಾಂಶುಪಾಲರಾದ ಅಶೋಕ ನೀಲಗಾರ, ನಿಲಯಪಾಲಕರಾದ ರಘುವೀರ ಬಡಿಗೇರ ಹಾಗೂ ಸಮಸ್ತ ಸಿಬ್ಬಂದಿ ವರ್ಗ ಹರ್ಷ ವ್ಯಕ್ತಪಡಿಸಿದರು.

ತಪಸ್ ಪರಿಕ್ಷೇಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ರಾಷ್ಟ್ರೋತ್ಥಾನ ಪರಿಷತ್ ಬೆಂಗಳೂರಿನ ಪ್ರತಿಷ್ಠಿತ ಕಾಲೇಜೊಂದರಲ್ಲಿ ಎರಡು ವರ್ಷದ ವಸತಿ ಸಹಿತ ಉಚಿತ ಪಿ.ಯು ಶಿಕ್ಷಣ ಹಾಗೂ ಐಐಟಿ, ಜೆಇಇ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ಉಚಿತ ತರಬೇತಿ ನೀಡಲಾಗುತ್ತದೆ ಹಾಗೂ ಸಾಧನ ಪರಿಕ್ಷೇಯಲ್ಲಿ ಆಯ್ಕೆಯಾದ ವಿದ್ಯಾರ್ಥಿನಿಯರಿಗೆ ರಾಷ್ಟ್ರೋತ್ಥಾನ ಪರಿಷತ್ ಬೆಂಗಳೂರಿನ ಪ್ರತಿಷ್ಠಿತ ಕಾಲೇಜೊಂದರಲ್ಲಿ ಎರಡು ವರ್ಷದ ವಸತಿ ಸಹಿತ ಉಚಿತ ಪಿ.ಯು ಮತ್ತು ಬಿ.ಎಸ್ಸಿ ಬಿ.ಈಡಿ ಶಿಕ್ಷಣ (ಒಟ್ಟು ಆರು ವರ್ಷಗಳ ಶಿಕ್ಷಣ) ಹಾಗೂ ನೀಟ್, ಸಿ.ಇ.ಟಿ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ವಸತಿ ಸಹಿತ ಉಚಿತ ತರಬೇತಿ ನೀಡಲಾಗುತ್ತದೆ ಎಂದರು.

## ಯಾವುದೇ ಉತ್ಸವ ಯಾಂತ್ರಿಕವಾದರೆ ಹೊಸತನ ಮೂಡಲ್ಲ

• ಉದಯವಾಹಿನಿ ಮಂಗಳೂರು

ಅವಿಭಜಿತ ದಕ್ಷಿಣ ಕನ್ನಡದ ಜನರು ಏನೇ ಕಾರ್ಯಕ್ರಮ ಮಾಡಿದರೂ ಅದರಲ್ಲೊಂದು ಅಚ್ಚುಕಟ್ಟುತನ ಇರುತ್ತದೆ. ಈ ಕಾರಣದಿಂದಾಗಿ ಶಿಕ್ಷಣ ಕ್ಷೇತ್ರ, ವೈದ್ಯಕೀಯ ಕ್ಷೇತ್ರದಲ್ಲಿ ಉಡುಪಿ, ದಕ್ಷಿಣ ಕನ್ನಡ ಜಿಲ್ಲೆ ಇಡೀ ದೇಶಕ್ಕೆ ಮಾದರಿಯಾಗಿದೆ ಎಂದು ಹಿರಿಯ ಸಾಹಿತಿ, ಸರಸ್ವತಿ ಸಮ್ಮಾನ್ ಪ್ರಶಸ್ತಿ ಪುರಸ್ಕೃತ ಎಸ್.ಎಲ್.ಭೈರಪ್ಪ ಹೇಳಿದರು.

ಅವರು ಮಂಗಳೂರಿನ ಟಿಎಂಎ ಪೈ ಕನ್ವೆನ್ಸನ್ ಸೆಂಟರ್ ನಲ್ಲಿ ನಡೆದ 7ನೇ ವರ್ಷದ ಮಂಗಳೂರು ಲಿಟ್ ಫೆಸ್ಟ್ ಉದ್ಘಾಟಿಸಿ ಮಾತನಾಡಿದರು. ಈ ಭೂಮಿ ಕನ್ನಡ ನಾಡಿಗೆ ಅನೇಕ ವೈದ್ಯರು, ಶಿಕ್ಷಕರು ಸೇರಿದಂತೆ ಕೋಟ ಶಿವರಾಮ ಕಾರಂತ ರಾಷ್ಟ್ರಕವಿ ಗೋವಿಂದ ಪೈ, ಪಂಜೆ ಮಂಗೇಶರಾಯರು,


ಉದಯವಾಹಿನಿ ಚಿತ್ರ

ಸೇಡಿಯಾಪು, ವ್ಯಾಸರಾಯ ಬಲ್ಲಾಳರಂತಹ ಹೆಸರಾಂತ ಸಾಹಿತಿಗಳನ್ನು ನೀಡಿದೆ ಎಂದರು.

ವರ್ಷಕ್ಕೊಮ್ಮೆ ದೇಶದ ಮೂಲೆ ಮೂಲೆಗಳಿಂದ ಖ್ಯಾತನಾಮರನ್ನು ಕರೆಯಿಸಿ ವಿವಿಧ ವೇದಿಕೆಗಳಲ್ಲಿ ವಿಚಾರ ಸಂಕೀರ್ಣ ಏರ್ಪಡಿಸುತ್ತಿದ್ದೀರಿ.

ಆದರೆ ಇಲ್ಲಿ ಚರ್ಚಿಸಿದ, ಮಂಡಿಸಿದ ವಿಷಯಗಳು ತಲುಪ ಬೇಕಾದವರನ್ನು ತಲುಪುತ್ತಿದೆಯೇ, ನೀವು ನಿರೀಕ್ಷಿಸಿದ ಪರಿಣಾಮ ಆಗುತ್ತಿದೆಯೇ ಎಂಬ ಆತ್ಮ ವಿಶ್ವಾಸ ಮುಖ್ಯವಾಗಿದೆ. ಆದಾಗದಿದ್ದರೆ

> ಯಾವುದೇ ಕಾರ್ಯ ಯಾಂತ್ರಿಕವಾದರೆ, ಅಲ್ಲಿ ಹೊಸ ವಿಚಾರ ಮೂಡಲು ಆಸ್ಪದ ಇರುವುದಿಲ್ಲ. ಇದರಿಂದಾಗಿ ಸಮಾಜಕ್ಕೂ ಹೊಸದೇನನ್ನೂ ನೀಡಲಾಗುವುದಿಲ್ಲ. ಸಾಹಿತ್ಯೋತ್ಸವವನ್ನು ವರ್ಷ -ಸವರ್ಷ ನಡೆಸಿಯೂ ಹೊಸತನವನ್ನು ಕಾಪಾಡಿಕೊಂಡು ಹೋಗುವ ಹೊಣೆಗಾರಿಕೆ ನಿಮ್ಮ ಮೇಲಿದೆ –ಭೈರಪ್ಪ

ವರ್ಷಕ್ಕೊಂದು ಬಾರಿ ನಡೆಸಲೇಬೇಕಾದ ಕಾರ್ಯಕ್ರಮವಾಗುವ ಮೂಲಕ ಇದು ಯಾಂತ್ರಿಕತೆಗೆ ತಿರುಗುತ್ತದೆ ಎಂದು ಭೈರಪ್ಪ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

## ಶಾಲೆಗಳಲ್ಲಿ ಸಂಸ್ಕಾರಯುತ ಶಿಕ್ಷಣ ಸಿಗಬೇಕು: ಉಮೇಶ್ ಜೀ ಅಭಿಪ್ರಾಯ

• ಉದಯವಾಹಿನಿ ಚಿತ್ರದುರ್ಗ

ಇಂದಿನ ನಮ್ಮ ಮಕ್ಕಳು ಮುಂದಿನ ಸಮಾಜದ ಸತ್ಕಾರ್ಯಕ್ಕಾಗಿ ದೊರಕಬೇಕಾದರೆ ಬಾಲಗೋಕುಲ ಶಿಕ್ಷಣ ಅನಿವಾರ್ಯವಾಗಿದೆ.

ನಮ್ಮ ಮಕ್ಕಳನ್ನು ವಿಶ್ವದ ಶ್ರೇಷ್ಠ ನಾಗರೀಕರಾಗಿ ರೂಪಿಸಲು ಸಾಮಾಜಿಕ ಕಳಕಳಿಯುಳ್ಳ ಬಾಲಗೋಕುಲ ಶಿಕ್ಷಣದಿಂದ ಮಾತ್ರ ಸಾಧ್ಯ ಅಂತಹ ಸಂಸ್ಕಾರ ಮತ್ತು ಮೌಲ್ಯಾಧಾರಿತ ಶಿಕ್ಷಣವನ್ನು ನೀಡುತ್ತಾ ಬಂದಿರುವ ವಿದ್ಯಾಸಿರಿ ಶಾಲೆಯ ಕಾರ್ಯ ಶ್ಲಾಘನೀಯವಾದದ್ದು ಎಂದು ಬಾಲಗೋಕುಲ ಸಂಘಟನೆಯ ಪ್ರಾಂತ ಪ್ರಮುಖರಾದ ಉಮೇಶ್ ಜೀ ಅಭಿಪ್ರಾಯ ಪಟ್ಟಿದ್ದಾರೆ.

ಅವರು ನಗರದ ತರಾಸು ರಂಗ ಮಂದಿರದಲ್ಲಿ ತಮಟಕಲ್ಲು ವಿದ್ಯಾಸಿರಿ ಮಾಂಟೆಸ್ಸರಿ ಶಾಲೆ ಚಿತ್ರದುರ್ಗ ಇವರು ಶಾಲಾ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಿದ್ದ ವಿದ್ಯಾಸಿರಿ ವೈಭವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.


ಉದಯವಾಹಿನಿ ಚಿತ್ರ

**ವಿದ್ಯಾಸಿರಿ ವೈಭವ ಕಾರ್ಯಕ್ರಮ**

ಸಂಸ್ಥೆಯ ಕಾರ್ಯದರ್ಶಿ ಶ್ರೀಮತಿ ಗಂಗಾ ಟಿ. ಇವರ ನೇತೃತ್ವದಲ್ಲಿ ಮಕ್ಕಳು ಪ್ರದರ್ಶಿಸಿದ ಯಕ್ಷಗಾನ, ಸಾಮಾಜಿಕ ಜಾಲತಾಣದ ಬಗ್ಗೆ ಜಾಗೃತಿ ಮೂಡಿಸುವ ನಾಟಕ, ಶ್ರೀ ಕೃಷ್ಣನ ಬಾಲಲೀಲೆಗಳ ರೂಪಕ ಸೇರಿ ಚಿನ್ನರ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಎಲ್ಲರ ಮನ ಸೆಳೆಯುವಂತೆ ಮಾಡಿದವು.

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕಿಯರಾದ ಶ್ರೀಮತಿ ತನುಜಾ,ಭಕ್ತಿ, ಅಮೂಲ್ಯ, ಚಂದನ ರೇಣುಕಾ ಉಪಸ್ಥಿತರಿದ್ದು ಶ್ರೀಮತಿ ನಾಗವೇಣಿ ಎಲ್ಲರನ್ನೂ ಸ್ವಾಗತಿಸಿದರೆ, ಶಿಕ್ಷಕಿ ತೊಷಿಕಾರಾಣಿ ನಿರೂಪಣೆ ಕಾರ್ಯಕ್ರಮಕ್ಕೆ ಮೆರುಗು ನೀಡಿತ್ತು.

> ಸಶಕ್ತ ಸಮಾಜದ ಮೂಲಾಧಾರವು ಪ್ರೀತಿ ಮತ್ತು ಸೇವೆ. ನೈತಿಕ ವೌಲ್ಯ ಕುಸಿಯುತ್ತಿರುವ ಇಂದಿನ ವರ್ತಮಾನ ಕಾಲದಲ್ಲಿ ಸಾಮಾಜಿಕ ಅಧ:ಪತನ ಉಂಟಾಗುತ್ತಿದ್ದು ತಡೆಯಲು ಶಾಲೆಗಳಲ್ಲಿ ಮಕ್ಕಳಿಗೆ ಮಾನವೀಯ ವೌಲ್ಯ ಬೆಳೆಸುವ ಸಾಂಸ್ಕೃತಿಕ ಶಿಕ್ಷಣ ನೀಡಬೇಕಿದೆ ಮಕ್ಕಳ ಚಾರಿತ್ರ್ಯಕ್ಕೆ ಮಹತ್ವ ಕೊಡುವ ದೇಶಭಕ್ತರನ್ನು ರೂಪಿಸುವ, ಆಧ್ಯಾತ್ಮಿಕ, ಸಾಂಸ್ಕೃತಿಕ ಆದರ್ಶವನ್ನು ಮೈಗೂಡಿಸುವ ಶಿಕ್ಷಣವಿಂದು ಭಾರತಕ್ಕೆ ಬೇಕಾಗಿದೆ. ಅಂತಹ ಮಹತ್ತರ ಕಾರ್ಯದತ್ತ ವಿದ್ಯಾಸಿರಿ ಶಾಲೆ ಹೆಜ್ಜೆ ಇಟ್ಟಿದೆ ಇದಕ್ಕೆ ಮಕ್ಕಳ ಪೋಷಕರ ಸಹಕಾರ ಅಗತ್ಯವಿದೆ
> –ಪಾರ್ಥಲಿಂಗಪ್ಪ, ಸಂಸ್ಥೆಯ ಅಧ್ಯಕ್ಷ

## ಸಚಿನ್ ಆತ್ಮಹತ್ಯೆ ಕೇಸ್ : ಪ್ರಿಯಾಂಕ್ ಖರ್ಗೆ ಆಪ್ತ ಸೇರಿ ಐವರು, 5 ದಿನ 'ಸಿಐಡಿ' ಕಸ್ಟಡಿಗೆ

• ಉದಯವಾಹಿನಿ ಬೀದರ್

ಬೀದರ್ ನ ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇದೀಗ ಸಚಿವ ಪ್ರಿಯಾಂಕ ಖರ್ಗೆ ಆಪ್ತ ಎನಲಾದ ರಾಜು ಕಪನೂರನನ್ನು 5 ದಿನಗಳ ಕಾಲ ಸಿಐಡಿ ಕಸ್ಟಡಿಗೆ ನೀಡಿ ಬೀದರ್ ನ ಜೆಎಂಎಫ್‌ಸಿ ನ್ಯಾಯಾಲಯ ಆದೇಶ ಹೊರಡಿಸಿದೆ.

ಬೀದರ್‌ನ ಯುವ ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಆಪ್ತ ರಾಜು ಕಪನೂರ್ ಸೇರಿದಂತೆ ಐವರನ್ನು ಬೀದರ್ ಜೆಎಂಎಫ್‌ಸಿ ನ್ಯಾಯಾಲಯ 5 ದಿನಗಳ ಸಿಐಡಿ ಕಸ್ಟಡಿಗೆ ನೀಡಿದೆ. ಸಿಐಡಿ ತನಿಖೆ ಭರದಿಂದ ಸಾಗಿದ್ದು ಡೆತ್ ನೋಟ್‌ನಲ್ಲಿ ಹೆಸರಿಸಲಾದ ಎಂಟು ಜನರ ಪೈಕಿ ಐವರನ್ನು ಬಂಧಿಸಲಾಗಿದೆ. ಉಳಿದ ಮೂವರನ್ನು ಪತ್ತೆ ಹಚ್ಚುವ ಪ್ರಯತ್ನ ನಡೆಯುತ್ತಿದೆ. 2024 ಡಿಸೆಂಬರ್ 26 ರಂದು ಬೀದರ್ ನಗರದ ಬಸವೇಶ್ವರ ವೃತ್ತದ ಬಳಿಯ ರೈಲು ಹಳಿಗೆ ತಲೆಕೊಟ್ಟು ಯುವ ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಮಾಡಿಕೊಂಡಿದ್ದರು. ಸಚಿನ್ ಆತ್ಮಹತ್ಯೆ ಮಾಡಿಕೊಳ್ಳುವ ಮುನ್ನ ಸುಮಾರು ಏಳು ಪುಟಗಳ ಡೆತ್ ನೋಟ್ ಬರೆದಿಟ್ಟಿದ್ದರು.


ಉದಯವಾಹಿನಿ ಚಿತ್ರ

ಡೆತ್ ನೋಟ್ ನಲ್ಲಿ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಜ್ ಖರ್ಗೆ ಆಪ್ತ ರಾಜು ಕಪನೂರ್ ಆಯಂಡ್ ಗ್ಯಾಂಗ್‌ನ ಎಂಟು ಸದಸ್ಯರ ಹೆಸರು ಇತ್ತು. ಈ ಆತ್ಮಹತ್ಯೆ ಪ್ರಕರಣ ರಾಜ್ಯಾದ್ಯಂತ ದೊಡ್ಡ ಸುದ್ದಿಯಾಗಿತ್ತು.

## ಆಸ್ತಿಗಾಗಿ ತಂದೆ- ಮಲತಾಯಿಯನ್ನು ಹತ್ಯೆಗೈದ ಪಾಪಿ ಮಗ : ಆರೋಪಿ ಅರೆಸ್ಟ್

• ಉದಯವಾಹಿನಿ ಹುಬ್ಬಳ್ಳಿ

ಎರಡು ಎಕರೆ ಜಮೀನು ಆಸ್ತಿಗಾಗಿ ತಂದೆ ಹಾಗೂ ಮಲತಾಯಿಯನ್ನು ರಾಡ್ ನಿಂದ ಹೊಡೆದು ಭೀಕರವಾಗಿ ಕೊಲೆ ಮಾಡಿದ್ದ ಘಟನೆ ನಿನ್ನೆ ಹುಬ್ಬಳ್ಳಿ ತಾಲ್ಲೂಕಿನ ಕುಸುಗಲ್ ಗ್ರಾಮದಲ್ಲಿ ನಡೆದಿತ್ತು. ಇದೀಗ ಈ ಒಂದು ಪ್ರಕರಣಕ್ಕೆ ಸಂಬಂಧಪಟ್ಟಂತೆ ಕೊಲೆ ಆರೋಪಿ ಗಂಗಾಧರಪ್ಪ ಎನ್ನುವವನನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಹೌದು ಗಂಗಾಧರಪ್ಪನನ್ನು ಹುಬ್ಬಳ್ಳಿಯ ಗ್ರಾಮೀಣ ಪೊಲೀಸರು ಇದೀಗ ವಶಕ್ಕೆ ಪಡೆದಿದ್ದಾರೆ. ಹುಬ್ಬಳ್ಳಿ ತಾಲ್ಲೂಕಿನ ಕುಸುಗಲ್ ಗ್ರಾಮದಲ್ಲಿ ನಿನ್ನೆ ಈ ಒಂದು ಘಟನೆ ನಡೆದಿತ್ತು ಎರಡು ಎಕರೆ ಜಮೀನಿನ ವಿಚಾರವಾಗಿ ಅಪ್ಪ-ಮಗನ ನಡುವೆ ಗಲಾಟೆ ನಡೆದಿತ್ತು. ಆಸ್ತಿ ಬರೆದುಕೊಡಲು ನಿರಾಕರಿಸಿದಕ್ಕೆ ಪಾಪಿ ಮಗ ರಾಡ್ ನಿಂದ ಹೊಡೆದು ಹತ್ಯೆ ಮಾಡಿದ್ದ. ತಂದೆ ಅಶೋಕಪ್ಪ ಹಾಗೂ ಮಲತಾಯಿ ಶಾರದಮ್ಮನನ್ನು ಆರೋಪಿ ಗಂಗಾಧರಪ್ಪ ಕೊಲೆ ಮಾಡಿದ್ದ. ಮನೆಯಲ್ಲಿ ಇಬ್ಬರನ್ನು ಕೊಲೆ ಮಾಡಿ ಗಂಗಾಧರಪ್ಪ ಪರಾರಿಯಾಗಿದ್ದ ಇದೀಗ ಗಂಗಾಧರಪ್ಪನನ್ನು ಹುಬ್ಬಳ್ಳಿಯ ಗ್ರಾಮೀಣ ಠಾಣೆ ಪೊಲೀಸರು ವಶಕ್ಕೆ ಪಡೆದುಕೊಂಡು ತೀವ್ರ ವಿಚಾರಣೆಗೆ ಒಳಪಡಿಸಿದ್ದಾರೆ.

## ಶೇಂಗಾ ಬೆಳೆಗೆ ನೀರಿಲ್ಲದೇ ರೈತರು ಹೈರಾಣು..!

• ಉದಯವಾಹಿನಿ ಯಾದಗಿರಿ

ಜಿಲ್ಲೆಯ ರೈತರು ಈಗಾಗಲೇ ಬರ-ನೆರೆಯಿಂದ ಬೆಳೆ ಹಾನಿಗೆ ಒಳಗಾಗಿ ಸಂಕಷ್ಟದಲ್ಲಿದ್ದು, ಇದರ ನಡುವೆ ಈಗ ಶೇಂಗಾ ಬೆಳೆಗಾರರಿಗೆ ಶಾಕ್ ಎದುರಾಗಿದೆ. ಶೇಂಗಾ ಬೆಳೆ ಕಟಾವು ಮಾಡಲು ಇನ್ನೆನು ಒಂದು ವಾರ ಇರುವಾಗಲೇ ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ಕಾಲುವೆ ನೀರು ಬಂದ್ ಮಾಡಿದ್ದರಿಂದ ಬೆಳೆ ಒಣಗುವ ಸ್ಥಿತಿಗೆ ಬಂದಿದೆ. ಅಧಿಕಾರಿಗಳ ನಡೆ ವಿರೋಧಿಸಿ ರೈತರ ಜಮೀನಿನಲ್ಲೇ ಉಮೇಶ. ಕೆ.ಮುದ್ನಾಳ ನೇತೃತ್ವದಲ್ಲಿ ದಿಢೀರ್ ಪ್ರತಿಭಟನೆ ನಡೆಸಲಾಯಿತು.

ಯಾದಗಿರಿ ತಾಲ್ಲೂಕಿನ ಹನೂರು(ಬಿ) ಹಾಗೂ ಹನೂರು(ಕೆ) ಗ್ರಾಮದ ರೈತರು ಕಳೆದ 40 ವರ್ಷಗಳಿಂದ ಭೀಮಾ ನದಿಯ ದಡದ ಚಿಗಾನೂರ್ ಬ್ರಿಜ್ ಕಂ ಬ್ಯಾರೇಜ್ ಮೂಲಕ ರೈತರು ತಮ್ಮ ಜಮೀನುಗಳ ಬೆಳೆಗೆ ನೀರುಣಿಸುತ್ತಿದ್ದು, ಈ ಬಾರಿ ಅತೀ ಹೆಚ್ಚು


ಉದಯವಾಹಿನಿ ಚಿತ್ರ

**ಸಂಕ್ರಾಂತಿ ಹಬ್ಬದಂದು ಅನ್ನದಾತರಿಗೆ ಸಂಕಷ್ಟ**

ಮಳೆಯಾಗಿದ್ದರಿಂದ ಜಮೀನಿಗಳಿಗೆ ನೀರುಣಿಸಿ ಅಧಿಕ ಇಳುವರಿ ಹಾಗೂ ಲಾಭದ ನಿರೀಕ್ಷೆಯಲ್ಲಿದ್ರು. ಆದರೆ ಅಧಿಕಾರಿಗಳು ಹಾಗೂ ಶಾಸಕರ ದಿವ್ಯ ನಿರ್ಲಕ್ಷ್ಯಕ್ಕೆ ರೈತರು ಬೆಳೆಗಳಿಗೆ ನೀರುಣಿಸಲು ಸಂಕಷ್ಟಪಡ್ತಿದ್ದಾರೆ. ರೈತರು ಅಧಿಕಾರಿಗಳ ಕಚೇರಿ, ಜನಪ್ರತಿನಿಧಿಗಳ ಕಚೇರಿಗೆ ಅಲೆದಾಡಿ ಕಾಲುವೆಗೆ ನೀರು ಹರಿಸಬೇಕೆಂದು ಕೇಳಿಕೊಂಡ್ರು, ಯಾವುದೇ ಪ್ರಯೋಜನವಾಗಿಲ್ಲ. ಈ ಭಾಗದ 500 ಕ್ಕೂ ಎಕರೆ ಶೇಂಗಾ, ಭತ್ತ, ಹತ್ತಿ, ಸಜ್ಜೆ ಮುಂತಾದ ಬೆಳೆಗಳಿಗೆ ನೀರು ಸಿಗುತ್ತಿಲ್ಲ. ಇದರಿಂದಾಗಿ ರೈತರ ಬದುಕಲ್ಲಿ ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳು ಚೆಲ್ಲಾಟ ಆಡ್ತಿದ್ದಾರೆ.

> ರೈತರು ಈಗಾಗಲೆ ಸಾಲ-ಸೂಲ ಮಾಡಿಕೊಂಡು ಶೇಂಗಾ, ಭತ್ತ ಸೇರಿದಂತೆ ನಾನಾ ಬೆಳೆಗಳನ್ನು ಬಿತ್ತನೆ ಮಾಡಿದ್ದಾರೆ. ಇನ್ನೆನು ಕೆಲವೇ ದಿನಗಳಲ್ಲಿ ಫಸಲು ಬರಲಿದೆ, ಇಂತಹ ಸಂದರ್ಭದಲ್ಲಿ ಕಾಲುವೆಯ ನೀರು ಬಂದ್ ಮಾಡಿದ್ರೆ ರೈತರ ಕತ್ತು ಇಸುಕಿದಂತಾಗ್ತದೆ. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇವತ್ತೆ ಕಾಲುವೆಗೆ ನೀರು ಹರಿಸಿ ರೈತರ ಬೆಳೆ ರಕ್ಷಿಸಬೇಕು. ಇಲ್ಲದಿದ್ರೆ ಉಗ್ರ ಹೋರಾಟ
> –ಉಮೇಶ.ಕೆ.ಮುದ್ನಾಳ, ಸಾಮಾಜಿಕ ಹೋರಾಟಗಾರ

## ವೈಕುಂಠ ಏಕಾದಶಿ ಪ್ರಯುಕ್ತ ಶ್ರೀ ರುಕ್ಮಿಣಿ ಪಾಂಡುರಂಗ ಸ್ವಾಮಿ ಪಾದಸ್ಪರ್ಶ ಕಾರ್ಯಕ್ರಮ

• ಉದಯವಾಹಿನಿ ಅರಸೀಕೆರೆ


ಉದಯವಾಹಿನಿ ಚಿತ್ರ

ನಗರದ ಭಾವಸಾರ ಕ್ಷತ್ರಿಯ ಸಮಾಜದ ಶ್ರೀ ರುಕ್ಮಿಣಿ ಪಾಂಡುರಂಗ ಸ್ವಾಮಿ ದೇವಾಲಯದಲ್ಲಿ ಬೆಳಗ್ಗೆಯಿಂದಲೇ ಭಕ್ತಾದಿಗಳು ಶ್ರೀ ರುಕ್ಮಿಣಿ ಪಾಂಡು ರಂಗ ಸ್ವಾಮಿಯವರ ಪಾದಸ್ಪರ್ಶ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಇದರ ಪ್ರಯುಕ್ತ ಭಾವಸಾರ ಕ್ಷತ್ರಿಯ ಸಮಾಜ ಬಾಂಧವರು ಪೂಜೆ ವಿಧಿ ವಿಧಾನಗಳಲ್ಲಿ ಭಾಗವಹಿಸಿ ಶ್ರೀ ಸ್ವಾಮಿಯವರಿಗೆ ವಿಶೇಷ ಅಭಿಷೇಕ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು ಪತ್ರಕರ್ತರದ ರಾಮಚಂದ್ರು ಟಿ .ಆನಂದ್ . ಆನಂದ್ ಕೌಶಿಖ್. ಕರ್ನಾಟಕ ರಕ್ಷಣಾ ವೇದಿಕೆ ಅರಸಿಕೆರೆ ತಾಲ್ಲೂಕ ಅಧ್ಯಕ್ಷರಾದ ಹೇಮಂತ್ ಕುಮಾರ್. ಪೂಜೆಯಲ್ಲಿ ಭಾಗವಹಿಸಿದ್ದರು. ಭಾವಸಾರ ಕ್ಷತ್ರಿಯ ಸಮಾಜದ ಅಧ್ಯಕ್ಷರಾದ ನರೇಶ್. ಟೈಲರ್ ಅಸೋಸಿಯೇಷನ್ ಅಧ್ಯಕ್ಷರಾದ ಲಕ್ಷ್ಮಣ್ ರಾವ್. ಸೇರಿದಂತೆ ಸಮಾಜದ ಹಿರಿಯರು ಮುಖಂಡರು ಭಾಗವಹಿಸಿದ್ದರು.

## 2025ರ ಉದಯವಾಹಿನಿ ಡೈರಿ ವಿತರಣೆ


• ಉದಯವಾಹಿನಿ, ಚಿಂಚೋಳಿ


ಉದಯವಾಹಿನಿ ಚಿತ್ರ

ಉದಯವಾಹಿನಿ ಕನ್ನಡ ದಿನಪತ್ರಿಕೆ ವತಿಯಿಂದ ಹೊರತಂದಿರುವ ನೂತನ 2025ರ ಉದಯವಾಹಿನಿ ಡೈರಿಯನ್ನು ಈಶಾನ್ಯ ಫೋಕಸ್ ಮತ್ತು ಜೆಕೆ ನ್ಯೂಸ್ ವರದಿಗಾರ ರಾಜೇಂದ್ರಪ್ರಸಾದ್ ಅವರಿಗೆ **ಉದಯವಾಹಿನಿ** ವರದಿಗಾರ ಮಹೇಬೂಬಶಾ ಅಣವಾರ ಡೈರಿ ವಿತರಿಸಿ ಹೊಸ ವರ್ಷದ ಶುಭಕೋರಲಾಯಿತು.

ಈ ಸಂದರ್ಭದಲ್ಲಿ ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ,ಬಿಜೆಪಿ ಅಲ್ಪಸಂಖ್ಯಾತರ ಮೋರ್ಚಾದ ರಾಜ್ಯ ಉಪಾಧ್ಯಕ್ಷ ಕೆ.ಎಂ.ಬಾರಿ,ವಿಶ್ವವಾಣಿ ವರದಿಗಾರ ವೆಂಕಟೇಶ ದುದ್ಯಾಲ್,ಎಂ.ಎಸ್.ಐ.ಎಲ್ ಅಂಗಡಿ ವ್ಯವಸ್ಥಾಪಕ ನರಸಪ್ಪಾ ತಾಡಪಳ್ಳಿ ಇದ್ದರು.

## ಹಿರಿಯ ಸಮಾಜ ಸೇವಕ ಯಾಕಾಪೂರರಿಂದ ಉದಯವಾಹಿನಿ ದಿನದರ್ಶಿಕೆ ಬಿಡುಗಡೆ


ಉದಯವಾಹಿನಿ ಚಿತ್ರ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ಹಿರಿಯ ಸಮಾಜ ಸೇವಕ ರಮೇಶ ಯಾಕಾಪೂರ ಮತ್ತು ಜಿಲ್ಲಾ ಪಂಚಾಯತ್ ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷರು ಮತ್ತು ಜೆಡಿಎಸ್ ಹಿರಿಯ ಮುಖಂಡ ಸಂಜೀವನ್ ಆರ್ ಯಾಕಾಪೂರ ಅವರು **ಉದಯವಾಹಿನಿ** ಕನ್ನಡ ದಿನಪತ್ರಿಕೆ ವತಿಯಿಂದ ಹೊರತಂದಿರುವ 2025ರ ದಿನದರ್ಶಿಕೆಯನ್ನು ಬಿಡುಗಡೆಗೊಳಿಸಿದ್ದರು. ಈ ಸಂದರ್ಭದಲ್ಲಿ ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ,ಪ್ರಗತಿಪರ ಹೋರಾಟಗಾರ ಮಾರುತಿ ಗಂಜಗಿರಿ, ಪುರಸಭೆ ಸದಸ್ಯ ನಾಗೇಂದ್ರಪ್ಪಾ ಗುರಂಪಳ್ಳಿ,ಪುರಸಭೆ ಸದಸ್ಯ ಬಸವರಾಜ ಸಿರ್ಸಿ,ಯುವ ಹೋರಾಟಗಾರ ಅಮರ ಲೋಡನೂರ,ತುಳಸಿರಾಮ ಜಾಧವ ಅನೇಕರಿದ್ದರು.

# ಗವಿಸಿದ್ದೇಶ್ವರ ಜಾತ್ರೆಗೆ ಬನ್ನಿ, ದೇಸಿ ಆಟಗಳಲ್ಲಿ ಭಾಗವಹಿಸಿ ಬಹುಮಾನ ಗೆಲ್ಲಿ

## ಕ್ರೀಡಾಕೂಟದಲ್ಲಿ 19 ರೀತಿಯ ವಿವಿಧ ಸಾಂಪ್ರದಾಯಿಕ, ದೇಶಿಯ ಕ್ರೀಡೆಗಳು ಮತ್ತು ಪ್ರದರ್ಶನ ಪಂದ್ಯಾವಳಿಗಳ ಆಯೋಜನೆ

• ಉದಯವಾಹಿನಿ, ಕೊಪ್ಪಳ

ಕೊಪ್ಪಳ ಜಾತ್ರೆಯಲ್ಲಿ ಏನುಂಟು ಏನಿಲ್ಲ. ಲಕ್ಷಾಂತರ ಭಕ್ತರು ಒಂದೆಡೆ ಕಲೆತು ಭಕ್ತಿಭಾವದಿಂದ ರಥ ಎಳೆಯುವ ಸಂತಸದ ಕ್ಷಣದ ನಡುವೆ ದೇಸಿ ಆಟಗಳಿಗೆ ಒತ್ತು ನೀಡಿ ಅವುಗಳಿಗೆ ಪುನರುತ್ಥಾನ ನೀಡುವ ಕ್ರೀಡಾ ಚಟುವಟಿಕೆಯೂ ಕೊಪ್ಪಳದ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವದ ಭಾಗವಾಗಿ ಇರಲಿದೆ.

ಕೊಪ್ಪಳ ಜಿಲ್ಲಾ ಅಥ್ಲೆಟಿಕ್ಸ್ ಅಸೋಸಿಯೇಷನ್ ನೇತೃತ್ವದಲ್ಲಿ ಕೈಗಾರಿಕೆ ಮತ್ತು ವಾಣಿಜ್ಯೋದ್ಯಮಗಳ ಸಹಭಾಗಿತ್ವದಲ್ಲಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲೆಯ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡ ಗವಿಶ್ರೀ ಕ್ರೀಡಾ ಉತ್ಸವ-2025ರ ಕ್ರೀಡಾಕೂಟದಲ್ಲಿ 19 ರೀತಿಯ ವಿವಿಧ ಸಾಂಪ್ರದಾಯಿಕ ಹಾಗೂ ದೇಶಿಯ ಕ್ರೀಡೆಗಳು ಮತ್ತು ಪ್ರದರ್ಶನ ಪಂದ್ಯಾವಳಿಗಳನ್ನು ಆಯೋಜಿಸಲಾಗಿದೆ.

ಆಹ್ವಾನಿತ ತಂಡಗಳಿಂದ ಕ್ರಿಕೆಟ್ ಪಂದ್ಯಾವಳಿಯು ಕೊಪ್ಪಳದ ತಾಲ್ಲೂಕು ಕ್ರೀಡಾಂಗಣದಲ್ಲಿ ಜ. 12 ಮತ್ತು 13 ರಂದು ಬೆಳಿಗ್ಗೆ 11 ಗಂಟೆಗೆ ಹಾಗೂ ಫೈನಲ್ ಪಂದ್ಯಾವಳಿ ಜ. 14 ರಂದು ಬೆಳಿಗ್ಗೆ 11 ಗಂಟೆಗೆ ಜರುಗಲಿದ್ದು, ಪಂದ್ಯ ವಿಜೇತರಿಗೆ ಆರ್ಕಷಕ ಟ್ರೋಫಿ ನೀಡಲಾಗುವುದು. ಜ. 14 ರಂದು ಬೆಳಿಗ್ಗೆ 6.30ಕ್ಕೆ 12 ಕಿ.ಮಿ. ಮ್ಯಾರಥಾನ್ ಓಟವನ್ನು ಕೊಪ್ಪಳ ನಗರದ ಕಿತ್ತೂರು ಚೆನ್ನಮ್ಮ ಸರ್ಕಲ್, ಅಶೋಕ ಸರ್ಕಲ್, ಕಿನ್ನಾಳ ರೋಡ್, ಭಾಗ್ಯನಗರ ಕ್ರಾಸ್, ಭಾಗ್ಯನಗರ, ಲೇಬರ್ ಸರ್ಕಲ್, ಸಿಂಪಿ ಲಿಂಗಣ್ಣ ರಸ್ತೆ ಮೂಲಕ ಗಡಿಯಾರ ಕಂಬ ಮಾರ್ಗವಾಗಿ ಗವಿಮಠ ಆವರಣದವರೆಗೆ ಪುರುಷ ಮತ್ತು ಮಹಿಳೆಯರಿಗೆ ಹಮ್ಮಿಕೊಳ್ಳಲಾಗಿದೆ.

**ರಥ ಎಳೆಯುವ ಸಂತಸದ ಕ್ಷಣ**

ಈ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಥಮ ಬಹುಮಾನ 20,000 ರೂ., ದ್ವಿತೀಯ 15,000 ರೂ., ತೃತೀಯ 12,000 ರೂಪಾಯಿ ಹಾಗೂ ಒಟ್ಟು ಎಂಟು ಹಂತಗಳಲ್ಲಿ ಬಹುಮಾನ ವಿತರಣೆ ಮಾಡಲಾಗುತ್ತದೆ ಜ. 14 ರಂದು ಬೆಳಿಗ್ಗೆ 11 ಗಂಟೆಗೆ ಗವಿಮಠದ ರಥದ ಹತ್ತಿರ ಮಹಿಳೆಯರಿಗೆ ರಂಗೋಲಿ ಸ್ಪರ್ಧೆಯನ್ನು ಏರ್ಪಡಿಸಲಾಗಿದ್ದು, ಪ್ರಥಮ 10,000 ರೂ., ದ್ವಿತೀಯ ದ್ವಿತೀಯ 8000 ರೂ., ತೃತೀಯ 6000 ರೂ., ನಾಲ್ಕನೇ ಬಹುಮಾನ 4,000 ರೂಪಾಯಿ ಹಾಗೂ ಭಾಗವಹಿಸಿದವರೆಲ್ಲರಿಗೂ ಉಡುಗೊರೆ ನೀಡಲಾಗುತ್ತದೆ.


ಉದಯವಾಹಿನಿ ಚಿತ್ರ

ಜ. 15 ರಂದು ಬೆಳಿಗ್ಗೆ 10 ಗಂಟೆಗೆ ಗವಿಮಠ ಆವರಣದಲ್ಲಿ ಆಕರ್ಷಕ ಮಲ್ಲಕಂಬ ಪ್ರದರ್ಶನ ಜರುಗಲಿದ್ದು, ಹೊಳೆಆಲೂರಿನ ಜ್ಞಾನ ಸಿಂಧು ಅಂಧ ಮಕ್ಕಳ ಶಾಲೆ, ಸಿರಗುಪ್ಪದ ಯೋಗ ಮಲ್ಲಕಂಬ ತಂಡ ಮತ್ತು ಕೊಪ್ಪಳದ ಮಹಿಳಾ ಮಲ್ಲಕಂಬ ತಂಡ ಪಾಲ್ಗೊಳ್ಳಲಿದ್ದಾರೆ. ಜ. 15 ರಂದು ಬೆಳಿಗ್ಗೆ 11 ಗಂಟೆಗೆ ಗವಿಮಠ ಆವರಣದಲ್ಲಿ ನಡೆಯಲಿರುವ ಯುವಕರ ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯು ಮುಕ್ತ ಆಹ್ವಾನವಿದ್ದು, ಪ್ರಥಮ 10,000 ರೂ., ದ್ವಿತೀಯ 8000 ರೂ., ತೃತೀಯ 6000 ರೂ. ಗಳ ಬಹುಮಾನವಿದೆ. ಅಂದು ಬೆಳಿಗ್ಗೆ 9.30ಕ್ಕೆ ಗವಿಮಠ ಆವರಣದಲ್ಲಿ ಕೊಪ್ಪಳ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಶ್ವಾನ ಪ್ರದರ್ಶನವಿದೆ.

ಜ. 16ರಂದು ಬೆಳಿಗೆ, 10 ಗಂಟೆಗೆ ಕರಾಟೆ ಪ್ರದರ್ಶನವಿದೆ. ಬೆಳಿಗ್ಗೆ 10 ಗಂಟೆಗೆ ಯುವಕರಿಂದ ಎತ್ತಿನ ಬಂಡಿ ಜಗ್ಗುವ ಸ್ಪರ್ಧೆ ಜರುಗಲಿದ್ದು, ಪ್ರಥಮ 10,000 ರೂ., ದ್ವಿತೀಯ 8000 ರೂ., ತೃತೀಯ 6000 ರೂ. ಬಹುಮಾನವಿದೆ.

### ಕುಸ್ತಿ ಪಂದ್ಯಾವಳಿ

ಅಂದು ಬೆಳಿಗ್ಗೆ 11 ಗಂಟೆಗೆ ಆಹ್ವಾನಿತ ರಾಷ್ಟ್ರ ಹಾಗೂ ರಾಜ್ಯ ಮಟ್ಟದ, ಪುರುಷ ಮತ್ತು ಮಹಿಳಾ ಕುಸ್ತಿ ಪಟುಗಳಿಂದ ಕುಸ್ತಿ ಪಂದ್ಯಾವಳಿ ನಡೆಯಲಿದ್ದು, ಕೊಪ್ಪಳ ಕೇಸರಿಗೆ ಬೆಳ್ಳಿ ಗಧೆ ನೀಡಲಾಗುವುದು. ತಾಲ್ಲೂಕು ಕ್ರೀಡಾಂಗಣದಲ್ಲಿ ಸಂಜೆ 4 ಗಂಟೆಗೆ ನಡೆಯುವ ಪುರುಷ ವಿಕಲಚೇತನರ ವಾಲಿಬಾಲ್ ಪಂದ್ಯಾವಳಿಯಲ್ಲಿ ಪ್ರಥಮ 15,000 ರೂ., ದ್ವಿತೀಯ 13,000 ರೂ., ತೃತೀಯ 10,000 ರೂ.ಗಳ ಬಹುಮಾನವಿದೆ.

> ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಥಮ ಬೆಳ್ಳಿಯ ಎತ್ತು ಬಂಡಿ, ದ್ವಿತೀಯ ಬೆಳ್ಳಿಯ ಬಂಡಿ, ತೃತೀಯ ಬೆಳ್ಳಿಯ ಎತ್ತು ಬಹುಮಾನದ ರೂಪದಲ್ಲಿ ನೀಡಲಾಗುವುದು. ಸಾಂಪ್ರದಾಯಿಕ, ಜನಪದ ಶೈಲಿಯಲ್ಲಿ ಎತ್ತು ಬಂಡಿಗಳನ್ನು ಬಣ್ಣ ಹಚ್ಚಿ.. ಶೃಂಗಾರಗೊಳಿಸಿದ ರೈತನು ಕೂಡ ಈ ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ ಎನ್ನುವುದು ಗವಿಶ್ರೀ ಕ್ರೀಡಾ ಉತ್ಸವದ ಸಂಚಾಲಕರೂ ಆಗಿರುವ, ಸಂಸದ ಕೆ.ರಾಜಶೇಖರ ಹಿಟ್ನಾಳ ಅವರ ವಿವರಣೆ.

# ನಾನಾಗಿದ್ದರೆ ಟ್ರಂಪ್‌ರವರನ್ನು ಸೋಲಿಸಿ ಬಿಡ್ತಿದ್ದೆ; ಬೈಡನ್

## ಡೆಮಾಕ್ರೆಟಿಕ್ ಒಗ್ಗಟ್ಟಿನ ಕಾರಣಕ್ಕೆ ಸ್ಪರ್ಧೆ ಮಾಡಲಿಲ್ಲ, ಅಧ್ಯಕ್ಷೀಯ ಚುನಾವಣೆಯಿಂದ ಹಿಂದೆ ಸರಿದಿದ್ದ ಜೋ ಬೈಡನ್


**ಎಲ್ಲಾ ಮುಗಿದ ಮೇಲೆ ಜೋ ಬಿಲ್ಡಪ್**

**ವಾಷಿಂಗ್ಟನ್:** 2024ರ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಒಂದು ವೇಳೆ ನಾನು ಸ್ಪರ್ಧೆ ಮಾಡಿದ್ದರೆ, ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಖಂಡಿತವಾಗಿಯೂ ಸೋಲಿಸುತ್ತಿದ್ದೆ ಎಂದು ಅಮೆರಿಕದ ನಿರ್ಗಮಿತ ಅಧ್ಯಕ್ಷ ಜೋ ಬೈಡನ್ ಹೇಳಿದ್ದಾರೆ. ಅಲ್ಲದೇ ಡೆಮಾಕ್ರೆಟಿಕ್ ಪಕ್ಷದ ಒಗ್ಗಟ್ಟಿನ ಕಾರಣಕ್ಕೆ ತಾವು ಈ ಬಾರಿ ಸ್ಪರ್ಧೆಯಿಂದ ಹಿಂದೆ ಸರಿದಿದ್ದಾಗಿ ಬೈಡನ್ ಸ್ಪಷ್ಟಪಡಿಸಿದ್ದಾರೆ.

ಶ್ವೇತಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಪತ್ರಕರ್ತರ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಜೋ ಬೈಡನ್, ಈ ಬಾರಿಯ ಅಧ್ಯಕ್ಷೀಯ ಚುನಾವಣೆಯಲ್ಲಿ ಸ್ಪರ್ಧಿಸದಿರುವ ತಮ್ಮ ನಿರ್ಣಯವನ್ನು ಸಮರ್ಥಿಸಿಕೊಂಡರು. ಒಂದು ವೇಳೆ ನಾನು ಈ ಬಾರಿಯ ಅಧ್ಯಕ್ಷೀಯ ಚುನಾವಣೆಯಲ್ಲಿ ಸ್ಪರ್ಧಿಸಿದ್ದರೆ, ಖಂಡಿತವಾಗಿಯೂ ಡೊನಾಲ್ಡ್ ಟ್ರಂಪ್ ಅವರನ್ನು ಸೋಲಿಸುತ್ತಿದೆ. ಆದರೆ ಡೆಮಾಕ್ರೆಟಿಕ್ ಪಕ್ಷದ ಒಗ್ಗಟ್ಟು ನನಗೆ ಮುಖ್ಯವಾಗಿದ್ದರಿಂದ, ಸ್ಪರ್ಧೆಯಿಂದ ಹಿಂದೆ ಸರಿದೆ. ಅದೇ ರೀತಿ ಕಮಲಾ ಹ್ಯಾರಿಸ್ ಅವರಿಗೂ ಟ್ರಂಪ್ ಅವರನ್ನು ಸೋಲಿಸುವ ಅವಕಾಶವಿತ್ತು. ಎಂದು ಜೋ ಬೈಡನ್ ಹೇಳಿದ್ದಾರೆ.

ಅಮೆರಿಕದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವುದ ತಮ್ಮ ಜೀವನದ ಅತ್ಯಂತ ದೊಡ್ಡ ಗೌರವ ಎಂದು ಹೇಳಿರುವ ಜೋ ಬೈಡನ್, ಮುಂದೆಯೂ ಸಾಮಾನ್ಯ ನಾಗರಿಕನಾಗಿ ಅಮೆರಿಕದ ಸೇವೆ ಸಲ್ಲಿಸುವುದಾಗಿ ಭರವಸೆ ನೀಡಿದ್ದಾರೆ. 82 ವರ್ಷದ ಜೋ ಬೈಡನ್ ಕಳೆದ ವರ್ಷ ನಡೆದ ಅಧ್ಯಕ್ಷೀಯ ಅಭ್ಯರ್ಥಿಗಳ ಚರ್ಚೆಯಲ್ಲಿ ಡೊನಾಲ್ಡ್ ಟ್ರಂಪ್ ಅವರಷ್ಟು ಪ್ರಖರವಾಗಿ ಮಾತನಾಡಿರಲಿಲ್ಲ. ಆ ಚರ್ಚೆ ನಡೆದ ಕೆಲವೇ ದಿನಗಳಲ್ಲಿ ಜೋ ಬೈಡನ್ ತಾವು ಅಧ್ಯಕ್ಷೀಯ ಸ್ಪರ್ಧೆಯಿಂದ ಹಿಂದೆ ಸರಿಯುತ್ತಿರುವುದಾಗಿ ಘೋಷಿಸಿದ್ದರು. ಅಲ್ಲದೇ ಅಮೆರಿಕದ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರ ಅಧ್ಯಕ್ಷೀಯ ಅಭ್ಯರ್ಥಿ ಉಮೇದುವಾರಿಕೆಯನ್ನು ಬೆಂಬಲಿಸುವುದಾಗಿ ಬೈಡನ್ ಹೇಳಿದ್ದರು.

> ಕಮಲಾ ಹ್ಯಾರಿಸ್ ಮುಂದಿನ ನಾಲ್ಕು ವರ್ಷಗಳ ಬಳಿಕ ನಡೆಯುವ ಅಮೆರಿಕದ ಅಧ್ಯಕ್ಷೀಯ ಚುನಾವಣೆಯಲ್ಲಿ ಸ್ಪರ್ಧಿಸಲು ಅರ್ಹ ಅಭ್ಯರ್ಥಿ, ಈ ಕುರಿತು ಡೆಮಾಕ್ರೆಟಿಕ್ ಪಕ್ಷ ಅಂತಿಮ ತೀರ್ಮಾನ ಕೈಗೊಳ್ಳಲಿದೆ
> 
> -ಜೋ ಬೈಡನ್



ಅಧ್ಯಕ್ಷೀಯ ಚುನಾವಣೆ ಸಂದರ್ಭದಲ್ಲಿ ಜೋ ಬೈಡನ್ ಅವರ ವಯಸ್ಸು ಮತ್ತು ಅವರ ಕಾರ್ಯಕ್ಷಮತೆಯ ಬಗ್ಗೆ ಡೆಮಾಕ್ರೆಟಿಕ್ ಪಕ್ಷದಲ್ಲೇ ಅಪಸ್ವರಗಳು ಕೇಳಿಬಂದಿದ್ದವು. ಚುನಾವಣೆಗೂ ಮೊದಲೇ ಪಕ್ಷದಲ್ಲಿ ಒಡಕು ಉಂಟಾಗುತ್ತಿರುವುದನ್ನು ಗಮನಿಸಿದ ಜೋ ಬೈಡನ್, ಅಧ್ಯಕ್ಷೀಯ ಚುನಾವಣೆಯಿಂದ ಹಿಂದೆ ಸರಿಯುವ ನಿರ್ಧಾರ ಕೈಗೊಂಡರು. ಆದರೆ ಚುನಾವಣೆಯಲ್ಲಿ ರಿಪಬ್ಲಿಕನ್ ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ವಿಜಯಶಾಲಿಯಾದರು.

ಇದೇ ಜ.20ರಂದು ಡೊನಾಲ್ಡ್ ಟ್ರಂಪ್ ಅಮೆರಿಕದ ಅಧ್ಯಕ್ಷರಾಗಿ ಅಧಿಕೃತವಾಗಿ ಅಧಿಕಾರ ಸ್ವೀಕರಿಸಲಿದ್ದಾರೆ. ಜೋ ಬೈಡನ್ ಅವರು 2020ರ ಅಧ್ಯಕ್ಷೀಯ ಚುನಾವಣೆ ವೇಳೆ, ಕಮಲಾ ಹ್ಯಾರಿಸ್ ಅವರನ್ನು ಭಾರತೀಯ ಮೂಲದ ಕಮಲಾ ಹ್ಯಾರಿಸ್ ಅವ ರನ್ನು ತಮ್ಮ ಉಪಾಧ್ಯಕ್ಷ ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಿದ್ದರು. ಅದರಂತೆ ಕಮಲಾ ಹ್ಯಾರಿಸ್ ಚುನಾವಣೆಯಲ್ಲಿ ಗೆದ್ದು ಇತಿಹಾಸ ಸೃಷ್ಟಿಸಿದ್ದರು.

ಇನ್ನು ಡೊನಾಲ್ಡ್ ಟ್ರಂಪ್ ಅವರು ಅಧಿಕೃತವಾಗಿ ಅಮೆರಿಕದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸುವ ಐದು ದಿನಗಳ ಮೊದಲು(ಜ.15), ಜೋ ಬೈಡನ್ ಅವರು ರಾಷ್ಟ್ರವನ್ನುದ್ದೇಶಿಸಿ ತಮ್ಮ ವಿದಾಯ ಭಾಷಣ ಮಾಡಲಿದ್ದಾರೆ.

### ಇದೀಗ ತಮ್ಮ ವಿದಾಯ ಭಾಷಣದ ತಯಾರಿ

**ಊರೆಲ್ಲಾ ಕೊಳ್ಳೆ ಹೊಡೆದ ಮೇಲೆ ದಿಡ್ಡಿ ಬಾಗಿಲು ಹಾಕಿದಂತೆ.. ಎಂಬ ನಾಣ್ನುಡಿ ಸದ್ಯ ಅಮೆರಿಕದ ನಿರ್ಗಮಿತ ಅಧ್ಯಕ್ಷ ಜೋ ಬೈಡನ್ ಅವರಿಗೆ ಸರಿಯಾಗಿ ಹೊಂದಿಕೆಯಾಗುತ್ತದೆ. ಅಧ್ಯಕ್ಷಯ ಚುನಾವಣೆಗಳು ಮುಗಿದು, ರಿಪಬ್ಲಿಕನ್ ಪಕ್ಷದ ಡೊನಲ್ಡ್ ಟ್ರಂಪ್ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿ, ಇದೀಗ ತಮ್ಮ ವಿದಾಯ ಭಾಷಣದ ತಯಾರಿ ನಡೆಸುತ್ತಿರುವ ಜೋ ಬೈಡನ್, ಒಂದು ವೇಳೆ ತಾವು ಈ ಬಾರಿಯ ಅಧ್ಯಕ್ಷೀಯ ಚುನಾವಣೆಯಲ್ಲಿ ಸ್ಪರ್ಧಿಸಿದ್ದರೆ, ಖಂಡಿತವಾಗಿಯೂ ಡೊನಾಲ್ಡ್ ಟ್ರಂಪ್ ಅವರನ್ನು ಸೋಲಿಸುತ್ತಿದ್ದೆ ಎಂದು ಹೇಳಿರುವುದು ಎಲ್ಲೆಡೆ ಚರ್ಚೆಗೆ ಕಾರಣವಾಗಿದೆ.**

# ಅವಶೇಷಗಳಡಿ ಸಿಲುಕಿದ್ದ 23 ಕಾರ್ಮಿಕರ ರಕ್ಷಣೆ

**ಲಖನೌ:** ಉತ್ತರ ಪ್ರದೇಶದ ಕನೌಜ್ ರೈಲು ನಿಲ್ದಾಣದಲ್ಲಿ ನಿರ್ಮಾಣ ಹಂತದಲ್ಲಿದ್ದ ಕಟ್ಟಡದ ಛಾವಣಿ(ಲಿಂಟಲ್) ಕುಸಿದು ಬಿದ್ದಿದ್ದು, ಹಲವು ಕಾರ್ಮಿಕರು ಅವಶೇಷಗಳಡಿ ಸಿಲುಕಿರುವ ಘಟನೆ ಶನಿವಾರ ನಡೆದಿದೆ. ಈಗಾಗಲೇ 23 ಕಾರ್ಮಿಕರನ್ನು ರಕ್ಷಿಸಲಾಗಿದೆ. ರಾಜ್ಯ ವಿಪತ್ತು ನಿರ್ವಹಣಾ ತಂಡ, ಪೊಲೀಸರು ಸೇರಿ ರಕ್ಷಣಾ ಸಿಬ್ಬಂದಿ ಘಟನಾ ಸ್ಥಳದಲ್ಲಿದ್ದು, ಅವಶೇಷಗಳಡಿ ಸಿಲುಕಿರುವ ಕಾರ್ಮಿಕರನ್ನು ರಕ್ಷಿಸುವಲ್ಲಿ ನಿರತರಾಗಿದ್ದಾರೆ. ರಕ್ಷಿಸಲ್ಪಟ್ಟ ಕಾರ್ಮಿಕರನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗೆ ರವಾನಿಸಲಾಗಿದೆ. ಮೂವರ ಸ್ಥಿತಿ ಚಿಂತಾಜನಕವಾಗಿದೆ ಎಂದು ವರದಿಯಾಗಿದೆ.

ಕಟ್ಟಡ ನಿರ್ಮಾಣದಲ್ಲಿ ತೊಡಗಿಸಿಕೊಂಡಿದ್ದ ಎಲ್ಲ ಕಾರ್ಮಿಕರು ಸುರಕ್ಷಿತವಾಗಿದ್ದಾರೆ. ಗಾಯಾಳುಗಳನ್ನು ರಕ್ಷಿಸಿ ಚಿಕಿತ್ಸೆಗೆ ದಾಖಲು ಮಾಡಲಾಗಿದೆ. ಸದ್ಯ ಯಾವುದೇ ಸಾವು ಸಂಭವಿಸಿಲ್ಲ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಗಾಯಾಳುಗಳಿಗೆ ಸೂಕ್ತ ವೈದ್ಯಕೀಯ ಚಿಕಿತ್ಸೆ ನೀಡುವಂತೆ ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ್ ಸೂಚನೆ ನೀಡಿದ್ದು, ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ.



**ಕನೌಜ್ ರೈಲು ನಿಲ್ದಾಣದಲ್ಲಿ ಛಾವಣಿ ಕುಸಿತ**

'ಕನೌಜ್ ರೈಲ್ವೆ ನಿಲ್ದಾಣದಲ್ಲಿ ಹೊಸ ಟರ್ಮಿನಲ್‌ಗಾಗಿ ಕೆಲಸ ನಡೆಯುತ್ತಿತ್ತು. ಈ ವೇಳೆ ಮೇಲ್ಛಾವಣಿ ಕುಸಿದಿದೆ. ಅವಶೇಷಗಳಡಿಯಿಂದ 23 ಮಂದಿ ಕಾರ್ಮಿಕರನ್ನು ರಕ್ಷಿಸಲಾಗಿದೆ. 20 ಮಂದಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, 3 ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ. ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ಇನ್ನಷ್ಟು ಮಂದಿ ಸಿಲುಕಿರುವ ಸಾಧ್ಯತೆ ಇದೆ' ಎಂದು ಉತ್ತರ ಪ್ರದೇಶದ ಸಚಿವ ಅಸಿಮ್ ಅರುಣ್ ತಿಳಿಸಿದ್ದಾರೆ.

> **ಉತ್ತರ ಪ್ರದೇಶದ ಕನೌಜ್ ರೈಲು ನಿಲ್ದಾಣದಲ್ಲಿ ನಿರ್ಮಾಣ ಹಂತದಲ್ಲಿದ್ದ ಕಟ್ಟಡದ ಛಾವಣಿ(ಲಿಂಟಲ್) ಕುಸಿದು ಬಿದ್ದಿದ್ದು, ಕಾರ್ಮಿಕರು ಅವಶೇಷಗಳಡಿ ಸಿಲುಕಿರುವ ಘಟನೆ ಶನಿವಾರ ನಡೆದಿದೆ. ಈಗಾಗಲೇ 23 ಕಾರ್ಮಿಕರನ್ನು ರಕ್ಷಿಸಲಾಗಿದೆ. ರಾಜ್ಯ ವಿಪತ್ತು ನಿರ್ವಹಣಾ ತಂಡ, ಪೊಲೀಸರು ಸೇರಿ ರಕ್ಷಣಾ ಸಿಬ್ಬಂದಿ ಘಟನಾ ಸ್ಥಳದಲ್ಲಿದ್ದು, ಅವಶೇಷಗಳಡಿ ಸಿಲುಕಿರುವ ಕಾರ್ಮಿಕರನ್ನು ರಕ್ಷಿಸುವಲ್ಲಿ ನಿರತರಾಗಿದ್ದಾರೆ. ರಕ್ಷಿಸಲ್ಪಟ್ಟ ಕಾರ್ಮಿಕರನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗೆ ರವಾನಿಸಲಾಗಿದೆ. ಇಬ್ಬರ ಸ್ಥಿತಿ ಚಿಂತಾಜನಕವಾಗಿದೆ ಎಂದು ವರದಿಯಾಗಿದೆ. ಯಾವುದೇ ಸಾವು ಸಂಭವಿಸಿಲ್ಲ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.**

# ಉತ್ತರ ಕೊರಿಯಾ ಯೋಧರ ಬಂಧನ

**ಕೀವ್:** ರಷ್ಯಾದ ಕುರ್ಸ್ಕ್ ಪ್ರಾಂತ್ಯದಲ್ಲಿ ಉತ್ತರ ಕೊರಿಯಾದ ಇಬ್ಬರು ಯೋಧರನ್ನು ಉಕ್ರೇನ್ ಸೇನೆ ಸೆರೆ ಹಿಡಿದಿದೆ. ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝುಲೆನ್ಸ್ಕಿ ಅವರು ಶನಿವಾರ ಈ ವಿಚಾರ ಬಹಿರಂಗ ಪಡಿಸಿದ್ದಾರೆ. ಎಕ್ಸ್‌ಟ್ವಿಟರ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಝುಲೆನ್ಸ್ಕಿ, ನಮ್ಮ ಯೋಧರು ಉತ್ತರ ಕೊರಿಯಾದ ಇಬ್ಬರು ಸೈನಿಕರನ್ನು ಕುರ್ಸ್ಕ್ ಪ್ರಾಂತ್ಯದಲ್ಲಿ ಸೆರೆ ಹಿಡಿದಿದ್ದಾರೆ. ಬಂಧಿತ ಇಬ್ಬರೂ ಗಾಯಗೊಂಡಿದ್ದು, ಬದುಕುಳಿದಿದ್ದಾರೆ.

ಅವರನ್ನು ಕೀವ್‌ಗೆ ಕರೆತರಲಾಗಿದ್ದು, ಭದ್ರತಾ ಪಡೆ ವಿಚಾರಣೆ ನಡೆಸುತ್ತಿದೆ ಎಂದಿದ್ದಾರೆ. ಬಂಧನವು ಸುಲಭದ ಕಾರ್ಯವಾಗಿರಲಿಲ್ಲ. ಯುದ್ಧದಲ್ಲಿ ಉತ್ತರ ಕೊರಿಯಾ ಪಾಲ್ಗೊಂಡಿದೆ ಎಂ ಬುದಕ್ಕೆ ಸಂಬಂ ಧಿಸಿದ ಎಲ್ಲಾ ಸಾಕ್ಷ್ಯಗಳನ್ನು ನಾಶಪಡಿಸುವುದಕ್ಕಾಗಿ, ಗಾಯಾಳು ಸೈನಿಕರನ್ನು ರಷ್ಯಾ, ಉತ್ತರ ಕೊರಿಯಾ ಸೇನಾ ಪಡೆಗಳು ಈವರೆಗೆ ಗಲ್ಲಿಗೇರಿಸಿವೆ. ಅದೃಷ್ಟವಶಾತ್, ನಮ್ಮ ಸೇನಾಪಡೆ ವಿಶೇಷ ಕಾರ್ಯಾಚರಣೆ ಮೂಲಕ ಉತ್ತರ ಕೊರಿಯಾದ ಗಾಯಾಳು ಯೋಧರನ್ನು ಸೆರೆ ಹಿಡಿದಿದೆ ಎಂದು ತಿಳಿಸಿದ್ದಾರೆ. ರಷ್ಯಾ ಸೇನೆಯು 2022ರ ಫೆಬ್ರುವರಿಯಲ್ಲಿ ಉಕ್ರೇನ್ ಮೇಲೆ ಆಕ್ರಮಣ ಆರಂಭಿಸಿತು. ಆಗಿನಿಂದ ಉಭಯ ದೇಶಗಳ ನಡುವೆ ಸಂಘರ್ಷ ನಡೆಯುತ್ತಿದೆ.

> **ಮುಂದುವರಿದು, ಬಂಧಿತ ಎಲ್ಲಾ ಯುದ್ಧ ಕೈದಿ ಗಳಂತೆ ಉತ್ತರ ಕೊರಿಯಾ ಯೋಧರಿಗೂ ಅಗತ್ಯ ವೈದ್ಯಕೀಯ ಸೇವೆ ನೀಡಲಾಗುತ್ತಿದೆ. ಬಂಧಿತರೊಂದಿಗೆ ಮಾತುಕತೆ ನಡೆಸಲು ಪತ್ರಕರ್ತರಿಗೆ ಅವಕಾಶ ಕಲ್ಪಿಸುವಂತೆ ಭದ್ರತಾ ಪಡೆಗೆ ಸೂಚಿಸಿದ್ದೇನೆ. ಏನೆಲ್ಲಾ ಆಗುತ್ತಿದೆ ಎಂಬ ಸತ್ಯವನ್ನು ಜಗತ್ತು ತಿಳಿಯಬೇಕಿದೆ ಎಂದು ಹೇಳಿದರು.**



# ಅಯೋಧ್ಯೆ ರಾಮನಿಗೆ ವರ್ಷದ ಸಂಭ್ರಮ

**ಅಯೋಧ್ಯೆ:** ಹಿಂದೂಗಳ ಆರಾಧ್ಯ ದೈವ, ಮಾರ್ಯದಾ ಪುರುಷೋತ್ತಮ ಶ್ರೀರಾಮನ ಜನ್ಮಸ್ಥಳವಾದ ಅಯೋಧ್ಯೆಯಲ್ಲಿ ರಾಮಲಲ್ಲಾನ ಭವ್ಯ ಮಂದಿರ ಆರಂಭವಾಗಿ ಇದೀಗ ಒಂದು ವರ್ಷ ಪೂರ್ಣಗೊಂಡಿದೆ. ಅಯೋಧ್ಯೆ ರಾಮ ಮಂದಿರದ ಪ್ರಾಣ ಪ್ರತಿಷ್ಠಾಪನೆಯ ಮೊದಲ ವಾರ್ಷಿಕೋತ್ಸವದ ಸಂಭ್ರಮ ಮೂರು ದಿನಗಳ ಕಾಲ ಜರುಗಲಿದೆ. ಸಾಂಸ್ಕೃತಿಕ, ಆಧ್ಯಾತಿಕತೆಯ ರಾಜಧಾನಿಯಂತಿ ರುವ ಉತ್ತರ ಪ್ರದೇಶದಲ್ಲಿ ಇದೀಗ ಅಯೋ ಧ್ಯೆಯೇ ದೇಶದ ಗಮನ ಸೆಳೆಯುತ್ತಿರುವುದು. ಅದಕ್ಕೆಲ್ಲ ಕಾರಣ ಅಲ್ಲಿ ಏನೆಲ್ಲಾ ಬೆಳವಣಿಗೆ ನಡೆಯುತ್ತಿದೆ ಎಂಬುದು.

ಅಯೋಧ್ಯೆಯಲ್ಲಿನ ರಾಮ ಮಂದಿರವು ಹಿಂದೂ ಧರ್ಮೀಯರ ಜೀವಾಳವಾಗಿದೆ.2024ರಲ್ಲಿ ಅಂದರೆ, ಕಳೆದ ವರ್ಷವಷ್ಟೇ ಅಯೋಧ್ಯೆಯಲ್ಲಿ ರಾಮ ದೇವಾಲಯದ ನಿರ್ಮಾಣ ಕಾರ್ಯ ಪೂರ್ಣಗೊಂಡು ಕೋಟ್ಯಂತರ ಜನರು ಇಲ್ಲಿನ ರಾಮನ ದರ್ಶನ ಪಡೆದುಕೊಂಡಿದ್ದಾರೆ. ಹಿಂದೂ ಪಂಚಾಂಗದ ಪ್ರಕಾರಲ್ಲಿ ಜ.11ರಿಂದ 13ರವರೆಗೆ ಪ್ರತಿಷ್ಠಾ ವಾರ್ಷಿಕೋತ್ಸವ (ಪ್ರತಿಷ್ಠಾ ದ್ವಾದಶಿ) ಹಮಿಕೊಳ್ಳಲಾಗಿದೆ. ಮೊದಲ ದಿನ ಬೆಳಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಬಾಲ ರಾಮನಿಗೆ ಅಭಿಷೇಕ ನೆರವೇರಿಸಲಿದ್ದಾರೆ. ಮಂದಿರದ ಸಮೀಪವಿರುವ ಅಂಗದ ಟೀಲಾದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಜತೆಗೆ, ಖ್ಯಾತ ಗಾಯಕರ ಭಕ್ತಿ ಗೀತೆಗಳೂ ಬಿಡುಗಡೆಗೊಳ್ಳಲಿವೆ. ದೇಶಾದ್ಯಂತವಿರುವ ಸಂತರು ಹಾಗೂ ಭಕ್ತರಿಗೆ ಟ್ರಸ್ಟ್ ಆಮಂತ್ರಣ ಕಳುಹಿಸಿದೆ. ಈಗಾಗಲೇ ಅಯೋಧ್ಯೆಯ ರಾಮ ಮಂದಿರ ಮದುವಣಗಿತ್ತಿಯಂತೆ ಸಿಂಗಾರಗೊಂಡಿದ್ದು, ಒಂದೊಂದೇ ಕಾರ್ಯಕ್ರಮಗಳು ನೆರವೇರುತ್ತಿವೆ.

ಈ ಬಗ್ಗೆ ಮಾಹಿತಿ ನೀಡಿರುವ ರಾಮ ಜನಭೂಮಿ ತೀರ್ಥಕ್ಷೇತ್ರ ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಚಂಪತ್ ರಾಯ್, ಜ.11ರಂದು ಮ.12.20ಕ್ಕೆ ಬಾಲರಾಮನ ಮೂರ್ತಿಗೆ ವಿಶೇಷ ಪೂಜೆ ಮತ್ತು ಆರತಿ ಮಾಡುವ ಮೂಲಕ 3 ದಿನಗಳ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುತ್ತದೆ. ಈ ಬಾರಿ ಕಾರ್ಯಕ್ರಮದಲ್ಲಿ ಶ್ರೀಸಾಮಾನ್ಯನೂ ಭಾಗಿಯಾಗಲು ಅವಕಾಶ ನೀಡಲಾಗುತ್ತಿದೆ ಎಂದು ಹೇಳಿದರು.



ಮಂದಿರವು ರಾಜ್ಯದ ಪ್ರವಾಸೋದ್ಯಮದ ನಕಾಶೆಯನ್ನೇ ಬದಲಿಸಿದೆ. ಹಬ್ಬಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರ ದಂಡೇ ಹರಿದು ಬರುತ್ತದೆ. ದೀಪಾವಳಿ ಸಂದರ್ಭದಲ್ಲಿ ಸರಯೂ ನದಿಯ ದಂಡೆಯ ಮೇಲೆ 22 ಲಕ್ಷ ಹಣತೆಗಳನ್ನು ಸರ್ಕಾರ ಬೆಳಗಿಸುವ ಮೂಲಕ ಗಿನ್ನಿಸ್ ದಾಖಲೆ ನಿರ್ಮಿಸಿತು. ರಾಮಮಂದಿರ ಸುರಕ್ಷತೆ ನಿರ್ವಹಣೆಗೆ ವಿಶ್ವದ ಅತ್ಯುನ್ನತ ಪ್ರಶಸ್ತಿಗಳಲ್ಲಿ ಒಂದಾದ ಪ್ರತಿಷ್ಠಿತ ಸ್ವರ್ಡ್ ಆಫ್ ಆನರ್ ಪ್ರಶಸ್ತಿಯನ್ನು ರಾಮಮಂದಿರ ಪಡೆದುಕೊಂಡಿದೆ. ಜ.11ರ ಮೊದಲ ದಿನ ಪ್ರತಿಷ್ಠಾ ದ್ವಾದಶಿಯ ಆರಂಭಿಕ ದಿನ, ಕಳೆದ ವರ್ಷದ ಪ್ರಾಣ ಪ್ರತಿಷ್ಠಾ ಕಾರ್ಯಕ್ರಮದಂತೆಯೇ ಕಾರ್ಯಕ್ರಮ ಆರಂಭವಾಗಲಿದೆ. ಪಂಚಾಮೃತ ಮತ್ತು ಸರಯೂ ಜಲದ ಅಭಿಷೇಕವನ್ನು ಒಳಗೊಂಡಂತೆ ಅಭಿಷೇಕ ಸಮಾರಂಭ ಬೆಳಗ್ಗೆ 10 ಗಂಟೆಗೆ ಆರಂಭ. ನಂತರ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರಿಂದ ರಾಮಲಲ್ಲಾಗೆ ಅಭಿಷೇಕ ಬಳಿಕ ಮಧ್ಯಾಹ್ನ 12.20ಕ್ಕೆ ಪ್ರಾಥಮಿಕ ಆರತಿ ಕಾರ್ಯಕ್ರಮ ನಡೆಯಲಿದೆ.

### ಉದ್ಘಾಟನೆಗೆ ಬರದವರಿಗೆ ಆಹ್ವಾನ

**ರಾಮಮಂದಿರ ಉದ್ಘಾಟನೆಗೆ ಬರದ ಸಂತರು ಮತ್ತು ಗಣ್ಯರಿಗೆ ಈಗ ಆಹ್ವಾನ ನೀಡಲಾಗುತ್ತದೆ. ಒಟ್ಟು 5 ಸ್ಥಳಗಳಲ್ಲಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ. ಮೊದಲ ಕಾರ್ಯಕ್ರಮ ಮಂದಿರದಲ್ಲಿ, 2 ಮತ್ತು 3ನೇ ಕಾರ್ಯಕ್ರಮ ಯಜ್ಞ ಮಂಟಪದಲ್ಲಿ, 4, 5ನೇ ಕಾರ್ಯಕ್ರಮ ಅಂಗದ್ ತಿಲಾದಲ್ಲಿ ನಡೆಸಲಾಗುತ್ತದೆ ಎಂದು ಅವರು ಹೇಳಿದರು. ಉದ್ಘಾಟನೆಗೊಂಡ ವರ್ಷದೊಳಗೇ ಅಯೋಧ್ಯೆ ರಾಮಮಂದಿರ ದೇಶದ ನಂ.1 ಪ್ರವಾಸಿ ತಾಣ ಅಥವಾ ಭಕ್ತಾದಿಗಳ ನೆಚ್ಚಿನ ಭೇಟಿಯ ತಾಣವಾಗಿ ಹೊರಹೊಮಿದೆ. 2024ರ ಜನವರಿ, ಸೆ. ಅವಧಿಯಲ್ಲಿ ಉತ್ತರ ಪ್ರದೇಶಕ್ಕೆ ಸುಮಾರು 47 ಕೋಟಿ ಪ್ರವಾಸಿಗರು ಭೇಟಿ ನೀಡಿದ್ದರು. ಈ ಪೈಕಿ ಅಯೋಧ್ಯೆ ಒಂದಕ್ಕೇ 13.3 ಕೋಟಿ ಪ್ರವಾಸಿಗರು ಭೇಟಿ ಕೊಟ್ಟಿದ್ದಾರೆ. ಅದರಲ್ಲಿ 3,153 ವಿದೇಶಿಗರೂ ಕೂಡ ಸೇರಿದ್ದಾರೆ.**

# ಹೆಂಡತಿಯನ್ನು ಕತ್ತರಿಸಿ ಸುಟ್ಟುಹಾಕಿದವನ ಬಂಧನ

**ಶ್ರೀನಗರ:** ಹೆಂಡತಿಯನ್ನು ಅಮಾನುಷವಾಗಿ ಕೊಂದ ವ್ಯಕ್ತಿಯೊಬ್ಬ ತನ್ನ ತಾಯಿಯ ಸಹಾಯದಿಂದ ಆಕೆ ದೇಹವನ್ನು ತುಂಡುತುಂಡುಗಳಾಗಿ ಮಾಡಿ ಕೊಟ್ಟಿಗೆಯಲ್ಲಿ ಸುಟ್ಟು ಹಾಕಿದ ಘಟನೆ ದಕ್ಷಿಣ ಕಾಶ್ಮೀರದ ಅನಂತನಾಗ್‌ನ ಐಶ್‌ಮುಕಂನ ಪಹಾಲ್‌ಗ್ರಾಮ್‌ನಲ್ಲಿ ನಡೆದಿದೆ. ಈ ಸಂಬಂಧ ಆರೋಪಿಗಳನ್ನು ಬಂಧಿಸಲಾಗಿದೆ. ಇಮ್ರಾನ್ ಅಹಮದ್‌ಖಾನ್ ಮತ್ತು ಆತನ ತಾಯಿ ಬಂಧಿತ ಆರೋಪಿಗಳು. ಕಳೆದ ಅಕ್ಟೋಬರ್‌ನಲ್ಲಿ ಈ ಭೀಕರ ಕೊಲೆ ಗಂಡನಿಂದಲೇ ನಡೆದಿದೆ ಎಂಬುದನ್ನು ಪತ್ತೆಹಚ್ಚಿದ ಪೊಲೀಸರು ಈತನನ್ನು ಬಂಧಿಸಿದ್ದಾರೆ.

ತನಿಖೆಯಲ್ಲಿ ಕೊಲೆಯ ವಿಷಯ ಬಾಯಿಬಿಟ್ಟ ಈತ ಅಕ್ಟೋಬರ್ 4 ರಂದು ತನ್ನ ಹೆಂಡತಿಯನ್ನು ಕೊಂದು ಬಳಿಕ ಆಕೆಯನ್ನು ತುಂಡುತುಂಡಾಗಿ ಕತ್ತರಿಸಿ ಕೊಟ್ಟಿಗೆಯಲ್ಲಿ ಸುಟ್ಟುಹಾಕಿಕೊಂಡಿರುವುದಾಗಿ ಒಪ್ಪಿಕೊಂಡಿದ್ದಾನೆ. ಈ ದುಷ್ಕೃತ್ಯವೆಸಗಿದ ಬಳಿಕ ಇಮ್ರಾನ್ ತನ್ನ ಹೆಂಡತಿ ಕಾಣೆಯಾಗಿದ್ದಾಳೆ ಎಂದು ಪೊಲೀಸ್ ಠಾಣೆಗೆ ದೂರು ನೀಡಿದ್ದ.

ದೂರು ದಾಖಲಿಸಿಕೊಂಡು ತನಿಖೆ ನಡೆಸಿದ ಪೊಲೀಸರಿಗೆ ಹತ್ತು ದಿನಗಳ ಬಳಿಕ ಮನೆಯ ಕೊಟ್ಟಿಗೆಯಲ್ಲಿ ಮೃತದೇಹದ ಮೂಳೆ ಸೇರಿದಂತೆ ಹಲವು ಕುರುಹುಗಳು ಪತ್ತೆಯಾಗಿದ್ದವು. ಮೃತಪಟ್ಟ ಮಹಿಳೆ ಈತನಿಗೆ ಎರಡನೇ ಹೆಂಡತಿಯಾಗಿದ್ದು, ಈಕೆಯನ್ನು ಕೊಲೆ ಮಾಡಿದ ಬಳಿಕ ತನ್ನ ಮೊದಲ ಹೆಂಡತಿ ಜೊತೆ ಜೀವನ ಮಾಡಲು ಶುರು ಮಾಡಿದ್ದ ಎಂಬುದು ತನಿಖೆಯಿಂದ ಗೊತ್ತಾಗಿದೆ.

ಸ್ಥಳಕ್ಕೆ ಆಗಮಿಸಿದ್ದ ಎಫ್‌ಎಸ್‌ಎಲ್ ತಂಡ ಸ್ಥಳದಲ್ಲಿದ್ದ ಕೊಲೆಯಾದ ಮಹಿಳೆಯ ಮೂಳೆ, ಕೂದಲು, ಮೊಬೈಲ್ ಅನ್ನು ವಶಕ್ಕೆ ಪಡೆದಿದ್ದಾರೆ. ಇನ್ನು ಹೀನಕೃತ್ಯಕ್ಕೆ ಸಹಾಯ ಮಾಡಿದ ಇಮ್ರಾನ್ ತಾಯಿಯನ್ನೂ ಬಂಧಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಇಸ್ಲಾಂ ಧರ್ಮದಲ್ಲಿ ಬಾಲಕಿಯರಿಗೆ ಶಾಲಾ ಶಿಕ್ಷಣ



**ಸಮಾವೇಶದಲ್ಲಿ ಮಲಾಲ ಭಾಗಿ**

**ಇಸ್ಲಾಮಾಬಾದ್:** ನೊಬೆಲ್ ಶಾಂತಿ ಪುರಸ್ಕಾರ ಪಡೆದ ಮಲಾಲ ಯೂಸುಫ್ ಜಾಯ್ ಅವರು ಹಲವು ವರ್ಷಗಳ ಬಳಿಕ ತವರು ರಾಷ್ಟ್ರ ಪಾಕಿಸ್ತಾನಕ್ಕೆ ಮರಳಿದ್ದಾರೆ. ಆಫ್ಘಾನಿಸ್ತಾನ ಸರ್ಕಾರವು ಬಾಲಕಿಯರಿಗೆ ಶಿಕ್ಷಣ ನಿರಾಕರಿಸಿರುವ ಬೆನ್ನಲ್ಲೇ ನಡೆಯು ತ್ತಿರುವ ಇಸ್ಲಾಂ ಧರ್ಮದಲ್ಲಿ ಬಾಲಕಿಯರಿಗೆ ಶಾಲಾ ಶಿಕ್ಷಣ ಕುರಿತ ಜಾಗತಿಕ ಸಮಾವೇಶದಲ್ಲಿ ಅವರು ಪಾಲ್ಗೊಂಡಿದ್ದಾರೆ.

ಜಗತ್ತಿನಲ್ಲಿ ಆಫ್ಘಾನಿಸ್ತಾನ ಹೊರತುಪಡಿಸಿ ಎಲ್ಲಾ ಮುಸ್ಲಿಂ ರಾಷ್ಟ್ರಗಳ ಪ್ರತಿನಿಧಿಗಳು ಈ ಸಮಾವೇಶದಲ್ಲಿ ಪಾಲ್ಗೊಂಡಿದ್ದಾರೆ. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಶರೀಫ್, 'ಪಾಕಿಸ್ತಾನವನ್ನೂ ಒಳಗೊಂಡು ಮುಸ್ಲಿಂ ದೇಶಗಳಲ್ಲಿ ಸಮಾನ ಶಿಕ್ಷಣ ಬಾಲಕಿಯರಿಗೂ ಸಿಗುವಂತೆ ಮಾಡವುದು ಈ ಯುಗದಲ್ಲೂ ಸವಾಲಿನ ಕೆಲಸವಾಗಿದೆ ಎಂದಿದ್ದಾರೆ.

ಬಾಲಕಿಯರಿಗೆ ಶಿಕ್ಷಣ ನಿರಾಕರಿಸುವುದೆಂದರೆ ಅವರ ಧ್ವನಿ ಮತ್ತು ಅಯ್ಕೆಯನ್ನು ಹತ್ತಿಕ್ಕಿದಂತೆ. ಜತೆಗೆ ತಮ್ಮ ಉಜ್ವಲ ಭವಿಷ್ಯ ರೂಪಿಸಿಕೊಳ್ಳುವುದರಿಂದ ವಂಚಿತರನ್ನಾಗಿ ಮಾಡಿದಂತೆ' ಎಂದು ಹೇಳಿದ್ದಾರೆ. ಆಫ್ಘಾನಿಸ್ತಾನದ ಗೈರು ಕುರಿತು ಪ್ರತಿಕ್ರಿಯಿಸಿರುವ ಪಾಕಿಸ್ತಾನದ ಶಿಕ್ಷಣ ಸಚಿವ ಖಾಲೀದ್ ಮಕ್ಬ್ಯಾಲ್ ಸಿದ್ದಿಕಿ ಅವರು, ಎಲ್ಲರಿಗೂ ಕಳುಹಿಸಿದಂತೆ ಆಫ್ಘಾನಿಸ್ತಾನಕ್ಕೂ ಕಳುಹಿಸಲಾಗಿತ್ತು. ಆದರೆ ಅಲ್ಲಿನ ಸರ್ಕಾರದ ಯಾವೊಬ್ಬ ಪ್ರತಿನಿಧಿಯೂ ಈ ಸಮ್ಮೇಳನದಲ್ಲಿ ಪಾಲ್ಗೊಂಡಿಲ್ಲ' ಎಂದಿದ್ದಾರೆ. ಮುಸ್ಲಿಂ ವರ್ಲ್ಡ್ ಲೀಗ್ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಅಲ್ ಇಸ್ಸಾ ಅವರು ಮಾತನಾಡಿ, ಶಾಲಾ ಶಿಕ್ಷಣದಿಂದ ಬಾಲಕಿಯರನ್ನು ದೂರವಿಡಲು ಧರ್ಮ ಆಧಾರವಲ್ಲ. ಹೆಣ್ಣು ಮಕ್ಕಳಿಗೆ ಶಿಕ್ಷಣ ಅಗತ್ಯ ಎಂಬುದನ್ನು ಇಡೀ ಮುಸ್ಲಿಂ ರಾಷ್ಟ್ರಗಳು ಒಪ್ಪಿಕೊಂಡಿವೆ. ಯಾರೆಲ್ಲಾ ಇದನ್ನು ವಿರೋಧಿಸುತ್ತಾರೋ ಅವರ ನಿರ್ಧಾರ ತಪ್ಪು' ಎಂದಿದ್ದಾರೆ. ಮಲಾಲ ಯೂಸುಫ್ ಜಾಯ್ ಅವರ ಮೇಲೆ 2012ರಲ್ಲಿ ತಾಲಿಬಾನ್ ಭಯೋತ್ಪಾದಕರು ಗುಂಡಿನ ದಾಳಿ ನಡೆಸಿದ್ದರು. ತೀವ್ರವಾಗಿ ಗಾಯಗೊಂಡಿದ್ದ ಅವರು ನಂತರ ಗುಣಮುಖರಾದರು. ಸಮ್ಮೇಳನದಲ್ಲಿ ಭಾನುವಾರ ನಡೆಯಲಿರುವ ಗೋಷ್ಠಿಯಲ್ಲಿ ಪಾಲ್ಗೊಳ್ಳಲಿದ್ದಾರೆ. ತಮ್ಮ ಈ ಭೇಟಿ ಕುರಿತು ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

# ರಾಗಾ ತಾಳ ಹಾಕದೇ ಥಟ್ ಅಂತ ಉತ್ತರಿಸಿದ ಮೋದಿ

## ▶▶ ನಿಮ್ಮ ಫೆವರಿಟ್ ಯುವ ರಾಜಕಾರಣಿ ಯಾರು? ▶▶ ರಾಷ್ಟ್ರ ಮೊದಲು ನೀತಿಯ ಕುರಿತು ಪ್ರಧಾನಿ ಮೋದಿ ವಿಸ್ತ ೃತ ಮಾತು

**ಯಾರ ಹೆಸರನ್ನು ಸೂಚಿಸಿದ್ದಾರೆ?**

**ಹೊಸದಿಲ್ಲಿ:** ಇಂದಿನ ಯುವಪೀಳಿಗೆಯ ರಾಜಕಾರಣಿಗಳ ಪೈಕಿ ನಿಮಗೆ ಯಾರು ಹೆಚ್ಚು ಇಷ್ಟ..? ಇದು ಪಾಡ್‌ಕಾಸ್ಟ್‌ನಲ್ಲಿ ಜೆರೋಧಾ ಸಹ-ಸಂಸ್ಥಾಪಕ ನಿಖಿಲ್ ಕಾಮತ್ ಅವರು ಪ್ರಧಾನಿ ಮೋದಿ ಅವರಿಗೆ ಕೇಳಿದ ಪ್ರಶ್ನೆ. ಇದಕ್ಕೆ ಅಷ್ಟೇ ಕುತೂಹಲಭರಿತವಾಗಿ ಉತ್ತರಿಸಿರುವ ಪ್ರಧಾನಿ ಮೋದಿ, ರಾಷ್ಟ್ರ ಮೊದಲು ಸಿದ್ಧಾಂತ ವನ್ನು ಮುಂದಕ್ಕೆ ಕೊಂಡೊಯ್ಯಬಲ್ಲ ಯುವ ರಾಜಕಾರ ಣಿಗಳ ಬಗ್ಗೆ ಮಾತನಾಡಿದ್ದಾರೆ.

ಹಾಗಿದ್ದರೆ ತಮ್ಮ ಫೆವರಿಟ್ ಯುವ ರಾಜಕಾರಣಿಯಾಗಿ ಪ್ರಧಾನನಿ ಮೋದಿ ಯಾರ ಹೆಸರನ್ನು ಸೂಚಿಸಿದ್ದಾರೆ ಜೆರೋಧಾ ಸಹ-ಸಂಸ್ಥಾಪಕ ನಿಖಿಲ್ ಕಾಮತ್ ಅವರೊಂದಿಗಿನ ತಮ್ಮ ಮೊಟ್ಟಮೊದಲ ಪಾಡ್‌ಕಾಸ್ಟ್‌ನಲ್ಲಿ ಮಾತನಾಡಿದ ಪ್ರಧಾನಿ ಮೋದಿ, ರಾಷ್ಟ್ರ ಮೊದಲು ನೀತಿಗಾಗಿ ತಾವು ಹಳೆಯ ವಿಚಾರಗಳನ್ನು ತ್ಯಜಿಸ ಹೊಸ ವಿಚಾರಗಳನ್ನು ಮೈಗೂಡಿಸಿಕೊಳ್ಳಲು ಸಿದ್ಧ ಎಂದು ಹೇಳಿದ್ದಾರೆ.

ತಮ್ಮ ರಾಜಕೀಯ ಮಹತ್ವಾಕಾಂಕ್ಷೆಗಿಂತ ದೇಶದ ಅಭಿವೃದ್ಧಿಗಾಗಿ ದುಡಿಯುವ ಯುವ ರಾಜಕಾರಣಿಗಳು ಸಾಕಷ್ಟು ಸಂಖ್ಯೆಯಲ್ಲಿದ್ದಾರೆ. ಅವರಿಗಾಗಿ ನಾನು ಮಾರ್ಗದರ್ಶನ ಮಾಡಲೂ ಸಿದ್ಧನಿದ್ದೇನೆ. ಆಡಳಿತದ ವಿಷಯದಲ್ಲಿ ಎಲ್ಲಾ ರೀತಿಯ ಪರಿಸ್ಥಿತಿಗಳನ್ನು ಸಮರ್ಥವಾಗಿ ನಿಭಾಯಿಸುವ ಯುವ ರಾಜಕಾರಣಿಗಳ ದೊಡ್ಡ ಪಡೆಯೇ ಇದೆ.. ಎಂದು ಪ್ರಧಾನಿ ಮೋದಿ ಹೇಳಿದರು. ಈ ವೇಳೆ ನಿಖಿಲ್ ಕಾಮತ್ ಅವರು, ಹಾಗಾ ದರೆ ನಿಮ್ಮ ನೆಚ್ಚಿನ ಯುವ ರಾಜಕಾರಣಿ ಯಾರು ಎಂದು ಪ್ರಶ್ನಿಸಿದರು. ಇದಕ್ಕೆ ಸೂಚ್ಯವಾಗಿ ಉತ್ತರಿಸಿದ ಮೋದಿ, ನಾನು ಯಾವುದೇ ಒಬ್ಬ ರಾಜಕಾರಣಿಯ ಹೆಸರು ಹೇಳ ಲು ಇಚ್ಛಿಸುವುದಿಲ್ಲ, ಏಕೆಂದರೆ ಇದರಿಂದ ಇತರರಿಗೆ ಅನ್ಯಾಯ ಮಾಡಿದಂತಾಗುತ್ತದೆ.. ಎಂದು ನುಡಿ ದರು. ದೇಶದಲ್ಲಿ ಅನೇಕ ಸಮರ್ಥ ಯುವ ರಾಜಕಾರಣಿಗಳಿದ್ದಾರೆ. ಅವರ ಬಗ್ಗೆ ನನಗೂ ವೈಯಕ್ತಿಕವಾಗಿ ಗೊತ್ತಿದೆ. ಆದರೆ ಇಲ್ಲಿ ನಾನು ಒಬ್ಬರ ಹೆಸರು ಹೇಳುವುದರಿಂದ, ಇದೇ ದಾರಿಯಲ್ಲಿ ಸಾಗುತ್ತಿರುವ ಇತರರಿಗೆ ಅನ್ಯಾಯ ಮಾಡಿದಂತಾಗುತ್ತದೆ. ಹೀಗಾಗಿ ನಾನು ಯಾರ ಹೆಸರನ್ನೂ ಉಲ್ಲೇಖಿಸುವುದಿಲ್ಲ. ಎಂದು ಪ್ರಧಾನಿ ಮೋದಿ ಹೇಳಿದರು.



ಭವಿಷ್ಯದ ರಾಜಕಾರಣಿಗಳು ಈ ದೇಶವನ್ನು ಮುನ್ನಡೆಸಲು ಯಾವ ರೀತಿಯ ಸಮರ್ಥ ತಂಡವನ್ನು ರಚಿಸುತ್ತಾರೆ ಎಂಬುದರಲ್ಲಿ ನಾನು ನನ್ನ ಯಶಸ್ಸನ್ನು ನೋಡುತ್ತೇನೆ.

> **ನಾನು ಹೆಚ್ಚಿನ ಸಮಯವನ್ನು ರಾಜಕಾರಣದಲ್ಲಿ ಕಳೆಯದೇ, ಆಡಳಿತದಲ್ಲಿ ಕಳೆಯುತ್ತೇನೆ. ಹಾಗಂತ ಅಧಿಕಾರ ರಾಜಕಾರಣ ಮಾಡುವುದಿಲ್ಲ. ಚುನಾವಣೆಗಳ ಸಂದರ್ಭದಲ್ಲಿ ವಿಪಕ್ಷಗಳ ಮೇಲೆ ವಾಗ್ದಾಳಿ ನಡೆಸುವುದು ಸಾಮಾನ್ಯ. ಅದನ್ನು ಎಲ್ಲಾ ರಾಜಕಾರಣಿ ಗಳೂ ಅನಿವಾರ್ಯವಾಗಿ ಮಾಡಬೇಕಾಗುತ್ತದೆ. ನನಗೆ ವೈಯಕ್ತಿಕವಾಗಿ ಅದು ಇಷ್ಟವಿಲ್ಲದಿದ್ದರೂ, ಅನಿವಾರ್ಯವಾಗಿ ಮಾಡುತ್ತೇನೆ. ಆದರೆ ಉತ್ತಮ ಆಡಳಿತ ನೀಡುವುದು ನನ್ನ ಪ್ರಾಥಮಿಕ ಆದ್ಯತೆಯಾಗಿರುತ್ತದೆ**
> 
> -ನರೇಂದ್ರ ಮೋದಿ, ಪ್ರಧಾನ ಮಂತ್ರಿ

- **ಪ್ರಧಾನಿ ಮೋದಿ ಅವರ ಫೆವರಿಟ್ ಯಂಗ್ ಪಾಲಿಟಿಶಿಯನ್ ಯಾರು ಗೊತ್ತಾ?**
- **ಯುವ ರಾಜಕಾರಣಿಗಳ ಪೈಕಿ ಪ್ರಧಾನಿ ಮನಗೆದ್ದವರು ಯಾರು?**
- **ಮೊಟ್ಟಮೊದಲ ಪಾಡ್‌ಕಾಸ್ಟ್‌ನಲ್ಲಿ ಮನಬಿಚ್ಚಿ ಮಾತನಾಡಿದ ಪ್ರಧಾನಿ ಮೋದಿ**

ಏಕೆಂದರೆ ನಾನು ಅಂತಹ ಕ್ರಮಗಳಿಂದಲೇ ಆಡಳಿತ ನಡೆಸಿದವನು.

ನಾನು ಗುಜರಾತ್ ಮುಖ್ಯಮಂತ್ರಿಯಾಗಿದ್ದಾಗ ಮುಂದಿನ 20 ವರ್ಷಗಳ ಕಾಲ ಗುಜರಾತ್ ಅಭಿವೃದ್ಧಿಗಾಗಿ ಯೋಚಿಸುವ ಮತ್ತು ದುಡಿಯುವ ಸಮರ್ಥ ತಂಡವನ್ನು ಕಟ್ಟಿದ್ದೆ. ಈ ಪ್ರಯತ್ನದಲ್ಲಿ ನಾವು ಕೆಲವೊಮ್ಮೆ ಸೋಲು ಕಂಡಿದ್ದರೆ, ಹೆಚ್ಚಿನ ಸಂದರ್ಭದಲ್ಲಿ ಗೆಲುವಿನ ರುಚಿ ಉಂಡಿದ್ದೇವೆ.. ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

## ಮಿನಿ ನ್ಯೂಸ್

### ಪವನ್‌ಕಲ್ಯಾಣ್‌ಗೆ ಟಿಟಿಡಿ ಮುಖ್ಯಸ್ಥರ ತಿರುಗೇಟು

**ತಿರುಪತಿ:** ತಿರುಪತಿಯಲ್ಲಿನ ಕಾಲ್ತುಳಿತ ಘಟನೆಗೆ ಕ್ಷಮೆ ಕೋರುವುದರಿಂದ ಸತ್ತವರು ಬದುಕಿ ಬರುವುದಿಲ್ಲ ಎಂದು ಟಿಟಿಡಿ ಮುಖ್ಯಸ್ಥ ಬಿ.ಆರ್.ನಾಯ್ಡು ಆಂಧ್ರ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರಿಗೆ ತಿರುಗೇಟು ನೀಡಿದ್ದಾರೆ. ಜ.8 ರಂದು ವಿಶೇಷ ದರ್ಶನದ ಟಿಕೆಟ್ ವಿತರಣೆ ಸಂದರ್ಭದಲ್ಲಿ ಸಂಭವಿಸಿ ಕಾಲ್ತುಳಿತದಿಂದ ಆರು ಮಂದಿ ಸಾವನ್ನಪ್ಪಿ, ಹಲವರು ಗಾಯಗೊಂಡಿದ್ದರು. ಈ ಘಟನೆಗೆ ಕ್ಷಮೆ ಕೇಳಬೇಕೆಂದು ಉಪಮುಖ್ಯಮಂತ್ರಿ ಪವನ್‌ಕಲ್ಯಾಣ್ ಸಲಹೆ ನೀಡಿದ್ದರು. ಇದಕ್ಕೆ ತಿರುಗೇಟು ನೀಡಿರುವ ಬಿ.ಆರ್.ನಾಯ್ಡು ಕ್ಷಮೆ ಕೋರುವುದರಿಲ್ಲಿ ಯಾವುದೇ ಸಮಸ್ಯೆಯಿಲ್ಲ.

ಆದರೆ ಕ್ಷಮೆಯು ಸತ್ತವರನ್ನು ಬದುಕಿಸುವುದಿಲ್ಲ. ಯಾರೋ, ಏನೋ ಹೇಳುತ್ತಾರೆ ಎಂದು ಪ್ರತಿಕ್ರಿಯಿಸುವ ಅಗತ್ಯವಿಲ್ಲ ಎಂದು ಆಂಧ್ರ ಪ್ರದೇಶದ ಮೈತ್ರಿ ಸರ್ಕಾರಕ್ಕೆ ಮುಜುಗರ ಉಂಟುಮಾಡುವಂತಹ ಹೇಳಿಕೆ ನೀಡಿದ್ದಾರೆ. ಕಾಲ್ತುಳಿತ ಘಟನೆಯಲ್ಲಿ ತಪ್ಪಿಲ್ಲದಿದ್ದರು ಟಿಟಿಡಿ ಮಂಡಳಿ ಭಕ್ತರ ಕ್ಷಮೆ ಯಾಚಿಸಿದೆ. ಈ ಘಟನೆ ಹೇಗೆ ಸಂಭವಿಸಿತು ಎಂಬ ಬಗ್ಗೆ ತನಿಖೆ ನಡೆಯುತ್ತಿದೆ. ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

### ಪಟಾಕಿ ಸ್ಫೋಟ; ಒಂದೇ ಕುಟುಂಬದ ಆರು ಮಂದಿ ಸಾವು

**ಲಾಹೋರ್:** ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದ ಹಳ್ಳಿಯೊಂದರಲ್ಲಿ ಪಟಾಕಿ ಸ್ಫೋಟ ಸಂಭವಿಸಿದ್ದು, ಮಗು, ನಾಲ್ವರು ಮಹಿಳೆಯರು ಸೇರಿದಂತೆ ಒಂದೇ ಕುಟುಂಬದ ಆರು ಮಂದಿ ಮೃಪಟ್ಟಿದ್ದಾರೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ. ಮಂಡಿ ಬಹೌದ್ದೀನ್ ಫಾಲಿಯಾದಲ್ಲಿ ಈ ಘಟನೆ ನಡೆದಿದೆ.

ಮನೆಯೊಳಗೆ ಸಂಗ್ರಹಿಸಿಟಿದ್ದ ಪಟಾಕಿಗಳಿಂದ ಸ್ಫೋಟ ಸಂಭವಿಸಿದ್ದು, ಮನೆಯ ಮೇಲ್ಛಾವಣಿ ಕುಸಿದು ಬಿದ್ದಿದೆ. ಅವಶೇಷಗಳ ಅಡಿಯಿಂದ ಮೃತದೇಹವನ್ನು ಹೊರತೆಗೆಯಲಾಯಿತು. ಘಟನೆಯಲ್ಲಿ ಗಾಯಗೊಂಡವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಈ ಅವಘಡದಲ್ಲಿ ಏಳು ಮಂದಿ ಗಾಯಗೊಂಡಿದ್ದು, ಮೂವರ ಸ್ಥಿತಿ ಚಿಂತಾಜನಕವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

### ವೆನಿಜುವೆಲಾದ ಅಧ್ಯಕ್ಷರಾಗಿ ನಿಕೋಲಸ್ ಮಡುರೊ ಪ್ರಮಾಣವಚನ ಸ್ವೀಕಾರ

**ಕಾರ್‌ಕಸ್:** ಚುನಾವಣೆ ಅಕ್ರಮಗಳ ವಿವಾದದ ನಡುವೆಯೂ ವೆನಿಜುವೆಲಾದ ಅಧ್ಯಕ್ಷರಾಗಿ ನಿಕೋಲಸ್ ಮಡುರೊ ಶುಕ್ರವಾರ ಪ್ರಮಾಣವಚನ ಸ್ವೀಕಾರ ಮಾಡಿದರು. ನಿಕೋಲಸ್ ಮಡುರೊ ಅವರು ಮೂರನೇ ಅವಧಿಗೆ ಅಧ್ಯಕ್ಷರಾಗಿ ಪ್ರಮಾಣವಚನ ಸ್ವೀಕಾರ ಮಾಡಿದ್ದು ವಿಶೇಷ. ಇವರ ಅವಧಿ ಮುಂದಿನ 6 ವರ್ಷಗಳವರೆಗೆ ಇರಲಿದೆ. ಕಳೆದ ಜುಲೈ ತಿಂಗಳಲ್ಲಿ ನಡೆದ ಅಧ್ಯಕ್ಷೀಯ ಚುನಾವಣೆಯಲ್ಲಿ ನಿಕೋಲಸ್ ಮಡುರೊ ಶೇಕಡ 51 ರಷ್ಟು ಮತಗಳನ್ನು ಪಡೆದು ವಿಜಯ ಸಾಧಿಸಿದ್ದಾರೆ ಎಂದು ರಾಷ್ಟ್ರೀಯ ಚುನಾವಣಾ ಮಂಡಳಿ ಮುಖ್ಯಸ್ಥ ಎಲ್ವಿಸ್ ಅಮೊರೊಸೊ ಘೋಷಣೆ ಮಾಡಿದ್ದರು.

ವಿರೋಧ ಪಕ್ಷದ ನಾಯಕ ಟೌನ್ ಗೈಡೊ ಶೇಕಡ 44 ರಷ್ಟುಗಳಿಸಿ ಪರಾಭವಗೊಂಡಿದ್ದಾರೆ ಎಂದು ಪ್ರಕಟಿಸಿದ್ದರು. ಈ ಘೋಷಣೆ ಬಳಿಕ ಟೌನ್ ಗೈಡೊ ಅವರು ಚುನಾವಣೆ ಹಾಗೂ ಮತ ಎಣಿಕೆಯಲ್ಲಿ ವ್ಯಾಪಕ ಆಕ್ರಮವಾಗಿದ್ದು ವಿದೇಶಿ ನಾಯಕರು ಮಧ್ಯಪ್ರವೇಶ ಮಾಡಬೇಕು ಎಂದು ಆಗ್ರಹಿಸಿ ಪ್ರತಿಭಟನೆ ನಡೆದಿದ್ದರು.

### ತಿರುಪತಿ ಕಾಲ್ತುಳಿತ ದುರಂತ ಇಂದು ಪರಿಹಾರ ಚೆಕ್ ವಿತರಣೆ

**ಹೈದರಾಬಾದ್:** ಕಾಲ್ತುಳಿತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ತಿರುಪತಿ ತಿರುಮಲ ದೇವಸ್ಥಾನ (ಟಿಟಿಡಿ) ಮಂಡಳಿಯು ಪರಿಹಾಧನ ಚೆಕ್‌ಗಳ ವಿತರಣೆಯನ್ನು ಭಾನುವಾರ ಆರಂಭಿಸಲಿದೆ. ಮೃತರ ಕುಟುಂಬಗಳಿಗೆ ತಲಾ 25 ಲಕ್ಷ, ಗಂಭೀರವಾಗಿ ಗಾಯಗೊಂಡವರಿಗೆ ತಲಾ 5 ಲಕ್ಷ ಹಾಗೂ ಸಣ್ಣಗಾಯಗಳಿಗೆ ಚಿಕಿತ್ಸೆ ಪಡೆಯುತ್ತಿರುವವರಿಗೆ ತಲಾ 2 ಲಕ್ಷ ಪರಿಹಾರ ನೀಡಲು ಮಂಡಳಿ ನಿರ್ಧರಿಸಿದೆ. ಶನಿವಾರ ಟಿಟಿಡಿ ಮಂಡಳಿ ಅಧ್ಯಕ್ಷ ಬಿ.ಆರ್.ನಾಯ್ಡು ಅಧ್ಯಕ್ಷೆಯಲ್ಲಿ ನಡೆದ ಸಭೆಯಲ್ಲಿ, ಪರಿಹಾರ ಚೆಕ್ ವಿತರಣೆ ಸೇರಿದಂತೆ ಹಲವಾರು ವಿಷಯಗಳ ಕುರಿತು ಚರ್ಚಿಸಲಾಯಿತು. ಮೃತಪಟ್ಟಿರುವ 6 ಮಂದಿಯ ಕುಟುಂಬಗಳನ್ನು ಹಾಗೂ ಗಾಯಗೊಂಡವರನ್ನು ಖುದ್ದಾಗಿ ಭೇಟಿ ಮಾಡುವುದು, ಪರಿಹಾರದ ಚೆಕ್ ವಿತರಣೆ ಉಸ್ತುವಾರಿಗಾಗಿ ಸ್ಥಳೀ ಯ ಶಾಸಕರು, ಟಿಟಿಡಿ ಸದಸ್ಯರನ್ನು ಒಳಗೊಂಡ ಎರಡು ಸಮಿತಿಗಳನ್ನು ನಾಯ್ಡು ರಚಿಸಿದರು. ಕಾಲ್ತುಳಿತದಲ್ಲಿ ಮೃತಪಟ್ಟವರ ಮಕ್ಕಳಿಗೆ ಟಿಟಿಡಿ ಅಧೀನದ ಶಿಕ್ಷಣ ಸಂಸ್ಥೆಗಳಲ್ಲಿ ಉಚಿತ ಶಿಕ್ಷಣ ನೀಡಲು ಕೂಡ ಮಂಡಳಿ ನಿರ್ಧರಿಸಿದೆ.

**ವಿಶೇಷ ದರ್ಶನಕ್ಕೆ ವ್ಯವಸ್ಥೆ:** ಕಾಲ್ತುಳಿತ ಘಟನೆಯಲ್ಲಿ ಗಾಯಗೊಂಡವರಿಗೆ ವೈಕುಂಠ ದ್ವಾರ ದರ್ಶನಕ್ಕಾಗಿ ವಿಶೇಷ ವ್ಯವಸ್ಥೆ ಮಾಡಲು ಕೂಡ ಟಿಟಿಡಿ ನಿರ್ಧರಿಸಿದೆ. ಮುಂದಿನ ಕೆಲ ದಿನಗಳ ಕಾಲ ಈ ವ್ಯವಸ್ಥೆ ಇರಲಿದೆ.

### ಕಾಂಗ್ರೆಸ್ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಅಭಿಯಾನ

**ಭೋಪಾಲ್:** ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಜನ್ಮಸ್ಥಳ ಮಧ್ಯಪ್ರದೇಶದ ಮಹೂನಿಂದ ಜ. 27ರಂದು ಕಾಂಗ್ರೆಸ್ ತನ್ನ ರಾಷ್ಟ್ರವ್ಯಾಪಿ ಜೈ ಬಾಪು, ಜೈ ಭೀಮ್,ಜೈ ಸಂವಿಧಾನ ಅಭಿಯಾನವನ್ನು ಪ್ರಾರಂಭಿಸಲಿದೆ ಎಂದು ಪಕ್ಷದ ಪ್ರಧಾನ ಕಾರ್ಯದರ್ಶಿ ಜಿತೇಂದ್ರ ಸಿಂಗ್ ಶನಿವಾರ ತಿಳಿಸಿದ್ದಾರೆ. ಅಂಬೇಡ್ಕರ್ ಅವರನ್ನು ಅಮಾನಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕ್ಷಮೆಯಾಚಿಸಿ, ರಾಜೀನಾಮೆ ನೀಡುವವರೆಗೂ ಅಭಿಯಾನ ಮುಂದುವರಿಯಲಿದೆ ಎಂದು ಅವರು ಹೇಳಿದ್ದಾರೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಸಂಸದೆ ಪ್ರಿಯಾಂಕಾ ಗಾಂಧಿ, ಕಾಂಗ್ರೆಸ್ ಅಧಿಕಾರದಲ್ಲಿರುವ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಪ್ರಮುಖ ನೇತಾರರು ಅಭಿಯಾನದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಅವರು ತಿಳಿಸಿದರು. ಸಂಸತ್ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಬಿಜೆಪಿ ಅವಹೇಳನಕಾರಿ ಪದಗಳ ಪ್ರಯೋಗ ಮಾಡುತ್ತಿದೆ. ಅವರಿಗೆ ಸಂವಿಧಾನದ ಮೇಲೆ ನಂಬಿಕೆ ಇಲ್ಲ ಎಂದು ಅವರು ಆರೋಪಿದ್ದಾರೆ. ಬಿಜೆಪಿಯ ಹಿಟ್ಲರ್ ಆಡಳಿತದಲ್ಲಿ ದೇಶದಾದ್ಯಂತ ಎಸ್‌ಸಿ, ಎಸ್‌ಟಿ, ಒಬಿಸಿ ಮತ್ತು ದಲಿತರ ಮೇಲಿನ ದೌರ್ಜನ್ಯಗಳು ಹೆಚ್ಚಾಗಿವೆ. ಮತ್ತೊಂದೆಡೆ ಜನರ ಹಕ್ಕುಗಳಿಗಾಗಿ ಮತ್ತು ಸಂವಿಧಾನ ರಕ್ಷಣೆಗಾಗಿ ಕಾಂಗ್ರೆಸ್ ಹೋರಾಡುತ್ತಿದೆ ಎಂದು ಅವರು ತಿಳಿಸಿದರು.

# ಆಂಜನೇಯ ಸ್ವಾಮಿಗೆ ಅವಮಾನ




ನಟ, ನಿರ್ದೇಶಕ ರಿಷಬ್ ಶೆಟ್ಟಿ ಪ್ರಸ್ತುತ 'ಕಾಂತಾರ 2' ಸಿನಿಮಾದ ಚಿತ್ರೀಕರಣದಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ರಿಷಬ್ ಶೆಟ್ಟಿಗೆ ತೆಲುಗು, ಹಿಂದಿ ಚಿತ್ರರಂಗದಿಂದ ಒಂದರ ಹಿಂದೊಂದು ಆಫರ್‌ಗಳು ಬರುತ್ತಲೇ ಇವೆ. 'ಹನುಮ್ಯಾನ್' ಸಿನಿಮಾ ನಿರ್ದೇಶಿಸಿ ಸೂಪರ್ ಹಿಟ್ ನೀಡಿರುವ ಪ್ರಶಾಂತ್ ವರ್ಮಾ ಅವರ ಮುಂದಿನ ತೆಲುಗು ಸಿನಿಮಾ 'ಜೈ ಹನುಮಾನ್'ನಲ್ಲಿ ರಿಷಬ್ ಶೆಟ್ಟಿ ನಟಿಸಲಿದ್ದಾರೆ. ಸಿನಿಮಾದ ಪೋಸ್ಟರ್ ಹಾಗೂ ಕಿರು ಟೀಸರ್ ಈಗಾಗಲೇ ಬಿಡುಗಡೆ ಆಗಿದೆ. ಅದರ ಬೆನ್ನಲ್ಲೆ ರಿಷಬ್ ಶೆಟ್ಟಿ ಸೇರಿದಂತೆ ಚಿತ್ರತಂಡದ ವಿರುದ್ಧ ದೂರು ಸಹ ದಾಖಲಾಗಿದೆ.

'ಜೈ ಹನುಮಾನ್' ಸಿನಿಮಾದಲ್ಲಿ ರಿಷಬ್ ಶೆಟ್ಟಿ ಆಂಜನೇಯ ಸ್ವಾಮಿಯ ಪಾತ್ರದಲ್ಲಿ ನಟಿಸಲಿದ್ದಾರೆ. ಈಗ ಬಿಡುಗಡೆ ಆಗಿರುವ ಪೋಸ್ಟರ್‌ನಲ್ಲಿ ರಿಷಬ್ ಶೆಟ್ಟಿ ಉದ್ದನೆಯ ಗಡ್ಡ ಬಿಟ್ಟುಕೊಂಡು, ಉದ್ದನೆಯ ಕೂದಲು ಬಿಟ್ಟುಕೊಂಡು ಶ್ರೀರಾಮನ ಮೂರ್ತಿಯನ್ನು ಅಪ್ಪಿಕೊಂಡಿರುವ ಚಿತ್ರ ಇದೆ. ಟೀಸರ್‌ನಲ್ಲೂ ಬಹುತೇಕ ಇದೇ ಇತ್ತು. ಈ ಹಿಂದೆ ಭಾರತೀಯ ಚಿತ್ರರಂಗದಲ್ಲಿ ನಿರ್ಮಿಸಲಾಗಿರುವ ಎಲ್ಲಾ ಪೌರಾಣಿಕ ಸಿನಿಮಾಗಳಲ್ಲಿ ಹನುಮಂತನ ಪಾತ್ರವನ್ನು ತೋರಿಸಿದ್ದಕ್ಕಿಂತಲೂ ಭಿನ್ನವಾಗಿ 'ಜೈ ಹನುಮಾನ್' ಸಿನಿಮಾದಲ್ಲಿ ತೋರಿಸಲಾಗುತ್ತಿದೆ. ಹನುಮಂತನ ಮುಖವನ್ನೇ 'ಜೈ ಹನುಮಾನ್' ಸಿನಿಮಾದಲ್ಲಿ ಬದಲಾಯಿಸಲಾಗಿದೆ. ಎಲ್ಲಾರಿಗೂ ತಿಳಿದಿರುವಂತೆ ಹನುಮಂತನ ಮುಖ ವಾನರ ಮುಖವನ್ನು ಹೋಲುತ್ತದೆ. ಆದರೆ 'ಜೈ ಹನುಮಾನ್' ಸಿನಿಮಾದಲ್ಲಿ ರಿಷಬ್ ಶೆಟ್ಟಿಯ ಮುಖವನ್ನು ಸಾಮಾನ್ಯ ಮನುಷ್ಯನ ಮುಖದಂತೆಯೇ ತೋರಿಸಲಾಗಿದೆ. ವಾನರನ ರೀತಿ ಹನುಮಂತನನ್ನು ತೋರಿಸಿಲ್ಲ ಇದೇ ಕಾರಣಕ್ಕೆ ಈಗ ವಕೀಲ ತಿರುಮಲ ರಾವ್ ಎಂಬುವರು ನಾಂಪಲ್ಲಿ ನ್ಯಾಯಾಲಯದಲ್ಲಿ ಸಿನಿಮಾದ ನಿರ್ದೇಶಕ ಪ್ರಶಾಂತ್ ವರ್ಮಾ, ರಿಷಬ್ ಶೆಟ್ಟಿ, ಸಿನಿಮಾದ ನಿರ್ಮಾಣ ಸಂಸ್ಥೆಯಾದ ಮೈತ್ರಿ ಮೂವಿ ಮೇಕರ್ಸ್ ವಿರುದ್ಧ ದೂರು ದಾಖಲಿಸಿದ್ದಾರೆ. ಹನುಮಂತನ ಮುಖವನ್ನೇ ಬದಲಾಯಿಸುವ ಮೂಲಕ, ಹನುಮನ ಪಾತ್ರವನ್ನು ತಿದ್ದುವ ಕೆಲಸ ಮಾಡಲಾಗಿದೆ.

ಹಿಂದೂಗಳ ಭಾವನೆಗೆ ಧಕ್ಕೆ ಉಂಟು ಮಾಡುವ ಕಾರ್ಯ ಇದಾಗಿದ್ದು, ಶೀಘ್ರವೇ ಸಿನಿ ಮಾದ ಪೋಸ್ಟರ್, ಟೀಸರ್‌ಗಳನ್ನು ಹಿಂಪಡೆಯುವಂತೆಆದೇಶಿಸ ಬೇಕೆಂದು ವಕೀಲ ತಿರುಮಲ ವರ್ಮಾ ಅರ್ಜಿ ದಾಖಲಿಸಿದ್ದಾರೆ. ರಿಷಬ್ ಶೆಟ್ಟಿಯ 'ಜೈ ಹನುಮಾನ್' ಸಿನಿಮಾ ರಾಮಾಯಣದ ನಂತರದ ಕತೆಯನ್ನು ಒಳಗೊಂಡಿದೆಯಂತೆ. ರಾಮನಿಗೆ ಹನುಮಂತ ನೀಡಿರುವ ಪ್ರತಿಜ್ಞೆಯ ಕತೆ ಇದಾಗಿದೆಯಂತೆ. ಸಿನಿಮಾದಲ್ಲಿ ರಿಷಬ್ ಶೆಟ್ಟಿ ಹನುಮಂತನ ಪಾತ್ರದಲ್ಲಿ ನಟಿಸಲಿದ್ದಾರೆ.

# 5ನೇ ವಯಸ್ಸಿಗೆ ಅನುಭವಿಸಿದ್ರು ಕಿರುಕುಳ!

ಬಣ್ಣದ ಲೋಕಕ್ಕೆ ಕಾಲಿಟ್ಟು ಸ್ಟಾರ್‌ಗಳಾಗಿ ಮಿಂಚುವ ಅನೇಕ ನಟಿ ಮಣಿಯರು ನಾನಾ ಕಷ್ಟಗಳನ್ನ ಎದುರಿಸಿರುತ್ತಾರೆ. ಈ ನಟಿ ಕೂಡ ಬ್ಯಾಲದಲ್ಲೇ ಕಿರುಕುಳಕ್ಕೆ ಒಳಗಾಗಿದ್ರಂತೆ. ಚಿಕ್ಕ ವಯಸ್ಸಿನಲ್ಲೇ ತನಗಾದ ಕೆಟ್ಟ ಅನುಭವದ ಬಗ್ಗೆ ದಂಗಲ್ ಗರ್ಲ್ ಹೇಳಿಕೊಂಡಿದ್ದಾರೆ.

ಬಾಲಿವುಡ್ ನಟ ಅಮೀರ್ ಖಾನ್ ಸಿನಿಮಾದಲ್ಲಿ ಮಗಳ ಪಾತ್ರದಲ್ಲಿ ಮಿಂಚಿದ್ದ ನಟಿ ಫಾತಿಮಾ ಸನಾ ಶೇಖ್ ನಾನಾ ಕಷ್ಟಗಳನ್ನು ಅನುಭವಿಸಿದ್ರಂತೆ. ಬಣ್ಣದ ಲೋಕದಲ್ಲಿ ತಮ್ಮ ನಟನೆಯ ಮೂಲಕವೇ ಗುರುತಿಸಿಕೊಂಡಿರುವ ಫಾತಿಮಾ, ನಾನಾ ಕಷ್ಟಗಳನ್ನು ಕೂಡ ಅನುಭವಿಸಿದ್ದಾರೆ. ಫಾತಿಮಾ ಸನಾ ಶೇಖ್ ಬಾಲ್ಯದಲ್ಲಿ ಕಿರುಕುಳದ ನೋವು ಅನುಭವಿಸಿದ್ದಾರೆ. ಸಂದರ್ಶನದಲ್ಲಿ ಮಾತಾಡಿದ್ದ ನಟಿ ಫಾತೀಮಾ 5ನೇ ವಯಸ್ಸಿನಲ್ಲೇ ಲೈಂಗಿಕ ಕಿರುಕುಳಕ್ಕೆ ಬಲಿಯಾಗಿದ್ದೆ ಎಂದಿದ್ದಾರೆ. ನಾನು 5 ವರ್ಷದವಳಿದ್ದಾಗಲೇ ನನಗೆ ಕಿರುಕುಳ ನೀಡಿದ್ರು. ಮಹಿಳೆಯರ ಹೋರಾಟ ನಿಲ್ಲೋದಿಲ್ಲ ಎಂದು ನಟಿ ಬೇಸರ ಹೊರ ಹಾಕಿದ್ರು. ಇಷ್ಟೇ ಅಲ್ಲದೇ, ಫಾತಿಮಾ ಸನಾ ಶೇಖ್ ಕೂಡ ತಮ್ಮ ಸಿನಿ ಕೆರಿಯರ್ ಆರಂಭದಲ್ಲಿ ಕಾಸ್ಟಿಂಗ್ ಕೌಚ್ ಗೆ ಬಲಿಯಾಗಿದ್ದರಂತೆ. ಈ ಬಗ್ಗೆ ಮಾತಾಡಿದ ನಟಿ ಫಾತಿಮಾ, ನಾನು ಕೂಡ ಕಾಸ್ಟಿಂಗ್ ಕೌಚ್ ಎದುರಿಸಿದ್ದೇನೆ. ನಿಮಗೆ ಸಿನಿಮಾ ಕೆಲಸ ಬೇಕು ಅಂದ್ರೆ, ನಮ್ಮ ಜೊತೆ ಅಡ್ಜೆಸ್ಟ್ ಮಾಡಿಕೊಳ್ಳಬೇಕು ಎಂದು ಹೇಳುವ ಜನರನ್ನು ಕೂಡ ನಾನು ಭೇಟಿಯಾಗಿದ್ದೆ ಎಂದು ನಟಿ ಹೇಳಿದ್ದಾರೆ. ಇದ್ರಿಂದಾಗಿ ನಾನು ಹಲವು ಬಾರಿ ನನಗೆ ನಟನೆಯ ಅವಕಾಶ ಕೈ ತಪ್ಪಿತ್ತು. ನನ್ನ ಸ್ಥಾನಕ್ಕೆ ಬೇರೆಯವರು ಬಂದ್ರು. ಆದ್ರೆ ಉದ್ಯಮದ ಹೊರಗಿನ ಬಹಳಷ್ಟು ಮಹಿಳೆಯರು ಸಹ ಬಹಳಷ್ಟು ಸಮಸ್ಯೆಗಳನ್ನು ಎದುರಿಸುತ್ತಾರೆ. ಲಿಂಗಭೇದಭಾವವು ಪ್ರತಿ ಉದ್ಯಮದಲ್ಲಿ ಅಸ್ತಿತ್ವದಲ್ಲಿದೆ ಎಂದ್ರು.







# ಬಿಡುಗಡೆಯಾಯ್ತು 'ರುದ್ರ ಗರುಡ ಪುರಾಣ'ದ ನಶೆಯೇರಿಸೋ ಸಾಂಗು!

ರಿಷಿ ನಾಯಕನಾಗಿ ನಟಿಸಿರುವ 'ರುದ್ರ ಗರುಡ ಪುರಾಣ' ಚಿತ್ರ ಜನವರಿ 24ರಂದು ತೆರೆಕಾಣಲಿದೆ. ಈಗಾಗಲೇ ಟೀಸರ್, ಹಾಡುಗಳ ಮೂಲಕ ದೊಡ್ಡ ಮಟ್ಟದಲ್ಲಿ ಸದ್ದು ಮಾಡಿರುವ ಈ ಸಿನಿಮಾದ ಮತ್ತೊಂದು ಹಾಡು ಇದೀಗ ಬಿಡುಗಡೆಗೊಂಡಿದೆ. ಈಗಾಗಲೇ ಟೀಸರ್ ಮತ್ತು ಒಂದಷ್ಟು ಹಾಡುಗಳೊಂದಿಗೆ ಸದರಿ ಸಿನಿಮಾ ಪ್ರೇಕ್ಷಕರನ್ನು ಸೆಳೆದಿತ್ತು. ಯಾವುದೇ ಪ್ರಚಾರದ ಭರಾಟೆಗಳಿಲ್ಲದೆ ಗಟ್ಟಿ ಕಂಟೆಂಟಿನ ಮುನ್ಸೂಚನೆಯೊಂದಿಗೆ ಕುತೂಹಲ ಮೂಡಿಸಿರೋ 'ರುದ್ರ ಗರುಡ ಪುರಾಣ'ದಲ್ಲೊಂದು ಪ್ರೇಮ ಕಥನವೂ ಮಿಳಿತಗೊಂಡಿದೆ. ಅದರ ಖುಷಿಯ ಭಾವದ ತೀವ್ರತೆಯನ್ನು ಸಮರ್ಥವಾಗಿ ಹಿಡಿದಿಟ್ಟುಕೊಂಡಂತಿರೋ ಈ ಹಾಡಿಗೀಗ ಕೇಳುಗರ ಕಡೆಯಿಂದ ವ್ಯಾಪಕ ಮೆಚ್ಚುಗೆ, ಹೆಚ್ಚೆಚ್ಚು ವೀಕ್ಷಣೆಗಳು ಸಿಗಲಾರಂಭಿಸಿವೆ. ಅದೇನೇನೋ ಖುಷಿ ತಂದೆ, ಅದೇನೇನೋ ನಶೇ ತಂದೆ ಅಂತ ಶುರುವಾಗೋ ಈ ಹಾಡನ್ನು ಸಂಜಿತ್ ಹೆಗ್ಡೆ ಹಾಡಿದ್ದಾರೆ. ಇತ್ತೀಚೆಗೆ ಮತ್ತೆ ಮತ್ತೆ ಗುನುಗಿಸಿಕೊಳ್ಳೋ ಹಾಡುಗಳ ಮೂಲಕ ಹೆಸರಾಗಿರುವವರು ಸಂಜಿತ್. ಅವರ ಹಿಟ್ ಲಿಸ್ಟಿಗೆ ಈ ಹಾಡೂ ಕೂಡಾ ಸೇರಿಕೊಳ್ಳೋ ಲಕ್ಷಣಗಳಿದ್ದಾವೆ. ದೀಪಿಕಾ ವರದರಾಜನ್ ಈ ಹಾಡಿಗೆ ಧ್ವನಿಗೂಡಿಸಿದ್ದಾರೆ. ಕೃಷ್ಣಪ್ರಸಾದ್ ಸಂಗೀತ ಸಂಯೋಜನೆಯಲ್ಲಿ ಮೂಡಿ ಬಂದಿರೋ ಸದರಿ ಗೀತೆಗೆ ಕಾಂತಾರಾ ಖ್ಯಾತಿಯ ಪ್ರಮೋದ್ ಮರವಂತೆ ಸಾಹಿತ್ಯ ಬರೆದಿದ್ದಾರೆ.ಮಿಸ್ಟ್ರಿ ಥ್ರಿಲ್ಲರ್ ಜಾನರಿನ ರುದ್ರ ಗರುಡ ಪುರಾಣದಲ್ಲೊಂದು ಪ್ರೇಮ ಕಥನವೂ ಇದೆ. ಪ್ರೀತಿ ಅಂದ್ರೆ ನಾನಾ ಪದರಗಳಿರುವ ಮಾಯೆ. ಅದರಲ್ಲಿ ಕಿಬ್ಬೊಟ್ಟೆಯಲ್ಲಿ ಚಿಟ್ಟೆ ಹಾರಾಡಿದಂಥಾ ಅನೂಹ್ಯ ಖುಷಿಯೂ ಸೇರಿಕೊಂಡಿದೆ. ಅಂಥಾದ್ದೊಂದು ಆಹ್ಲಾದ ತುಂಬಿಕೊಂಡಂತಿರೋ ಈ ಹಾಡು ವೇಗವಾಗಿ ಕೇಳುಗರನ್ನು ಆವರಿಸಿಕೊಳ್ಳುತ್ತಿದೆ.

ಕನ್ನಡಕ್ಕೆ ಒಂದಷ್ಟು ವಿಭಿನ್ನ ಸಿನಿಮಾಗಳನ್ನು ಕೊಟ್ಟಿರುವವರು ನಿರ್ದೇಶಕ ಜೇಕಬ್ ವರ್ಗೀಸ್. ದಶಕಗಳ ಕಾಲ ಅವರ ಗರಡಿಯಲ್ಲಿ ಪಳಗಿಕೊಂಡಿರುವ ನಂದೀಶ್ 'ರುದ್ರ ಗರುಡ ಪುರಾಣ'ವನ್ನು ನಿರ್ದೇಶನ ಮಾಡಿದ್ದಾರೆ.

# ರಶ್ಮಿಕಾ ಮಂದಣ್ಣಗೆ ಪೆಟ್ಟು ಸಿಖಂದರ್ ಚಿತ್ರದ ಶೂಟಿಂಗ್ ಸ್ಥಗಿತ



'ಪುಷ್ಪ 2ಸಕಸ್' ಖುಷಿಯಲ್ಲಿದ್ದ ಕೊಡಗಿನ ಕುವರಿ ರಶ್ಮಿಕಾ ಮಂದಣ್ಣ ಗಾಯಗೊಂಡಿದ್ದಾರೆ. ಜಿಮ್‌ನಲ್ಲಿ ವರ್ಕೌಟ್ ಮಾಡುವಾಗ ರಶ್ಮಿಕಾಗೆ ಪೆಟ್ಟಾಗಿದೆ ಎಂದು ಹೇಳಲಾಗುತ್ತಿದೆ. ಮೂಲಗಳ ಪ್ರಕಾರ, ನಟಿ ರಶ್ಮಿಕಾಗೆ ಸಣ್ಣದಾಗಿ ಪೆಟ್ಟಾಗಿದೆ ಎನ್ನಲಾಗಿದೆ. ಜಿಮ್‌ನಲ್ಲಿ ವ್ಯಾಯಾಮ ಮಾಡುವಾಗ ನಟಿ ಗಾಯಗೊಂಡಿದ್ದಾರೆ. ಆತಂತಪಡುವಂತಹದ್ದು ಏನಿಲ್ಲ. ಕೆಲ ದಿನಗಳ ಕಾಲ ಅವರು ವಿಶ್ರಾಂತಿ ಪಡೆಯಲಿದ್ದಾರೆ ಎನ್ನಲಾಗಿದೆ. ಈ ಹಿನ್ನೆಲೆ ಸದ್ಯ ಒಪ್ಪಿಕೊಂಡಿದ್ದ ಸಲ್ಮಾನ್ ಖಾನ್ ಜೊತೆಗಿನ 'ಸಿಖಂದರ್' ಚಿತ್ರದ ಶೂಟಿಂಗ್ ಕೂಡ ನಿಲ್ಲಿಸಲಾಗಿದೆ. ಸಂಪೂರ್ಣವಾಗಿ ಚೇತರಿಸಿಕೊಂಡ ನಂತರವೇ ಅವರು ಶೂಟಿಂಗ್‌ನಲ್ಲಿ ಭಾಗಿಯಾಗಲಿದ್ದಾರೆ. ಇನ್ನೂ ನಟಿಯ ಕಡೆಯಿಂದ ಆರೋಗ್ಯದ ಬಗ್ಗೆ ಮಾಹಿತಿ ಸಿಗುತ್ತಾ ಕಾಯಬೇಕಿದೆ. ಈ ವಿಚಾರ ತಿಳಿದು ಫ್ಯಾನ್ಸ್ ನಟಿಗೆ ಏನಾಯ್ತು ಎಂದು ಚರ್ಚೆ ಸುತ್ತಿದ್ದಾರೆ. ಅಂದಹಾಗೆ, ಅಲ್ಲು ಅರ್ಜುನ್ ಜೊತೆ ರಶ್ಮಿಕಾ ನಟಿಸಿದ್ದ 'ಪುಷ್ಪ 2' ಡಿ.5ರಂದು ರಿಲೀಸ್ ಆಗಿ ಭರ್ಜರಿ ಕಲೆಕ್ಷನ್ ಮಾಡಿದೆ. 1800 ಕೋಟಿ.ರೂಗೂ ಅಧಿಕ ಗಳಿಕೆ ಮಾಡಿ ಸಿನಿಮಾ ಗೆದ್ದು ಬೀಗಿದೆ.

# 7 ಸಿಕ್ಸರ್, 10 ಬೌಂಡರಿ..! ಟಿ20 ಯಲ್ಲಿ ಸ್ಫೋಟಕ ಶತಕ ಸಿಡಿಸಿದ ಸ್ಟೀವ್ ಸ್ಮಿತ್

ಬಿಗ್ ಬ್ಯಾಷ್ ಲೀಗ್‌ನಲ್ಲಿ ಸಿಡ್ನಿ ಸಿಕ್ಸರ್ಸ್ ಮತ್ತು ಪರ್ತ್ ಸ್ಕಾರ್ಚರ್ಸ್ ನಡುವಿನ ಪಂದ್ಯದಲ್ಲಿ ಸ್ಟೀವ್ ಸ್ಮಿತ್ ಅಜೇಯ ಶತಕ (121 ರನ್) ಬಾರಿಸಿ ತಂಡವನ್ನು ಗೆಲುವಿನತ್ತ ಮುನ್ನಡೆಸಿದರು. ಕೇವಲ 58 ಎಸೆತಗಳಲ್ಲಿ ಶತಕ ಪೂರ್ಣಗೊಳಿಸಿದ ಸ್ಮಿತ್, ಬಿಗ್ ಬ್ಯಾಷ್ ಲೀಗ್‌ನಲ್ಲಿ 32 ಪಂದ್ಯಗಳಲ್ಲಿ ಮೂರು ಶತಕ ಬಾರಿಸಿದ ದಾಖಲೆಯನ್ನು ಸೃಷ್ಟಿಸಿದ್ದಾರೆ. ಆಸ್ಟ್ರೇಲಿಯಾದಲ್ಲಿ ನಡೆಯುತ್ತಿರುವ ಬಿಗ್ ಬ್ಯಾಷ್ ಲೀಗ್‌ನ 30 ನೇ ಪಂದ್ಯದಲ್ಲಿ, ಸಿಡ್ನಿ ಸಿಕ್ಸರ್ಸ್ ಮತ್ತು ಪರ್ತ್ ಸ್ಕಾರ್ಚರ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಸಿಡ್ನಿ ಸಿಕ್ಸರ್ಸ್ ಪರ ಕಣಕ್ಕಿಳಿದಿದ್ದ ಸ್ಟೀವ್ ಸ್ಮಿತ್ ಸ್ಮರಣೀಯ ಇನ್ನಿಂಗ್ಸ್ ಆಡಿದರು. ಇತ್ತೀಚೆಗೆ ನಡೆದಿದ್ದ ಬಾರ್ಡರ್ ಗವಾಸ್ಕರ್ ಟ್ರೋಫಿಯಲ್ಲಿ ಮಿಶ್ರ ಪ್ರದರ್ಶನ ನೀಡಿದ್ದ ಸ್ಟೀವ್ ಸ್ಮಿತ್, ಇದೀಗ ಬಿಗ್ ಬ್ಯಾಷ್ ಲೀಗ್‌ನಲ್ಲಿ ಉತ್ತಮ ಆರಂಭ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಪರ್ತ್ ಸ್ಕಾರ್ಚರ್ಸ್ ವಿರುದ್ಧದ ಪಂದ್ಯದಲ್ಲಿ ಸ್ಫೋಟಕ ಬ್ಯಾಟಿಂಗ್ ನಡೆಸಿದ ಸ್ಮಿತ್ ಶತಕದ ಇನ್ನಿಂಗ್ಸ್ ಆಡುವ ಮೂಲಕ ತಮ್ಮ ಹೆಸರಿನಲ್ಲಿ ವಿಶೇಷ ದಾಖಲೆಯನ್ನು ಮಾಡಿದರು. ವಿಶೇಷವೆಂದರೆ ಈ ಪಂದ್ಯದಲ್ಲಿ ಓಪನಿಂಗ್ ಮಾಡಲು ಬಂದ ಅವರು ಅಜೇಯರಾಗಿ ಪೆವಿಲಿಯನ್‌ಗೆ ಮರಳಿದರು.

**ಐತಿಹಾಸಿಕ ಶತಕ ಬಾರಿಸಿದ ಸ್ಟೀವ್ ಸ್ಮಿತ್**

ಪರ್ತ್ ವಿರುದ್ಧದ ಈ ಪಂದ್ಯದಲ್ಲಿ ಸ್ಟೀವ್ ಸ್ಮಿತ್ 7 ಸಿಕ್ಸರ್ ಮತ್ತು 10 ಬೌಂಡರಿಗಳ ನೆರವಿನಿಂದ 121 ರನ್ ಗಳಿಸಿ ಅಜೇಯ ಇನ್ನಿಂಗ್ಸ್ ಆಡಿದರು. ಕೇವಲ 58 ಎಸೆತಗಳಲ್ಲಿ ಸ್ಟೀವ್ ಸ್ಮಿತ್ ತಮ್ಮ ಶತಕವನ್ನು ಪೂರೈಸಿದರು. ಇದು ಅವರ ಟಿ20 ವೃತ್ತಿಜೀವನದ ನಾಲ್ಕನೇ ಶತಕವಾಗಿದ್ದರೆ, ಬಿಗ್ ಬ್ಯಾಷ್ ಲೀಗ್‌ನಲ್ಲಿ ಇದು ಅವರ ಮೂರನೇ ಶತಕವಾಗಿದೆ. ಸ್ಟೀವ್ ಸ್ಮಿತ್ ಬಿಗ್ ಬ್ಯಾಷ್ ಲೀಗ್‌ನಲ್ಲಿ ಇದುವರೆಗೆ ಕೇವಲ 32 ಪಂದ್ಯಗಳನ್ನು ಆಡಿದ್ದು, ಅತಿ ಹೆಚ್ಚು ಶತಕಗಳನ್ನು ಬಾರಿಸಿದ ದಾಖಲೆಯನ್ನು ಸರಿಗಟ್ಟಿದ್ದಾರೆ.

ಇವರ ಹೊರತಾಗಿ ಬೆನ್ ಮೆಕ್‌ಡರ್ಮಾಟ್ ಮಾತ್ರ ಈ ಲೀಗ್‌ನಲ್ಲಿ 3 ಶತಕ ಸಿಡಿಸಿದ್ದಾರೆ. ಆದರೆ ಬೆನ್ ಮೆಕ್‌ಡರ್ಮೊಟ್ ಅವರ ಬಿಗ್ ಬ್ಯಾಷ್ ಲೀಗ್ ವೃತ್ತಿಜೀವನವು 100 ಪಂದ್ಯಗಳನ್ನು ಹೊಂದಿದೆ. ಅಂದರೆ ಸ್ಟೀವ್ ಸ್ಮಿತ್ ಬೆನ್ ಮೆಕ್‌ಡರ್ಮಾಟ್‌ಗಿಂತ ಕಡಿಮೆ ಪಂದ್ಯಗಳನ್ನು ಆಡಿದ್ದಾರೆ. ಇದಲ್ಲದೇ ಸಿಡ್ನಿ ಸಿಕ್ಸರ್ಸ್ ತಂಡದ ಪರ ಶತಕ ಸಿಡಿಸಿದ ಏಕೈಕ ಬ್ಯಾಟ್ಸ್‌ಮನ್ ಸ್ಟೀವ್ ಸ್ಮಿತ್.

**ಕಳೆದ 7 ಇನ್ನಿಂಗ್ಸ್‌ಗಳಲ್ಲಿ 3 ಶತಕ**

ಬಿಗ್ ಬ್ಯಾಷ್ ಲೀಗ್‌ನಲ್ಲಿ ಸ್ಟೀವ್ ಸ್ಮಿತ್ ಅವರ ಪ್ರದರ್ಶನ ಅಮೋಘವಾಗಿದೆ. ಈ ಲೀಗ್‌ನ ಕೊನೆಯ 7 ಇನ್ನಿಂಗ್ಸ್‌ಗಳಲ್ಲಿ ಅವರು 3 ಶತಕ ಮತ್ತು 2 ಅರ್ಧಶತಕಗಳನ್ನು ಸಿಡಿಸಿದ್ದಾರೆ. ಇದಲ್ಲದೇ ಕಳೆದ 8 ಇನ್ನಿಂಗ್ಸ್‌ಗಳಲ್ಲಿ 88ರ ಸರಾಸರಿಯಲ್ಲಿ ಮತ್ತು 173.11 ರ ಸ್ಟ್ರೈಕ್ ರೇಟ್‌ನಲ್ಲಿ 528 ರನ್ ಗಳಿಸಿದ್ದಾರೆ. ಇನ್ನು ಈ ಪಂದ್ಯದ ಬಗ್ಗೆ ಹೇಳುವುದಾದರೆ.. ಮೊದಲು ಬ್ಯಾಟಿಂಗ್ ಮಾಡಿದ ಸಿಡ್ನಿ ತಂಡವು ಪರ್ತ್ ವಿರುದ್ಧ 20 ಓವರ್‌ಗಳಲ್ಲಿ 3 ವಿಕೆಟ್ ಕಳೆದುಕೊಂಡು 222 ರನ್‌ಗಳ ದೊಡ್ಡ ಸ್ಕೋರ್ ಗಳಿಸಿತು. ಈ ಗುರಿ ಬೆನ್ನಟ್ಟಿದ ಪರ್ತ್ ಸ್ಕಾರ್ಚರ್ಸ್ ತಂಡ ಕೂಡ ಗೆಲುವಿಗಾಗಿ ಹೋರಾಟ ನೀಡಿತ್ತಾದರೂ ಕೇವಲ 14 ರನ್‌ಗಳಿಂದ ಸೋಲೊಪ್ಪಿಕೊಳ್ಳಬೇಕಾಯಿತು.







# ಬಿಸಿಸಿಐ ಹಠಾತ್ ಯು-ಟರ್ನ್

ಆಸ್ಟ್ರೇಲಿಯಾ ವಿರುದ್ಧ ಸತತ ಐದು ಟೆಸ್ಟ್ ಪಂದ್ಯಗಳನ್ನು ಆಡಿದ ಟೀಂ ಇಂಡಿಯಾ ಇದೀಗ ತವರಿನಲ್ಲಿ ಇಂಗ್ಲೆಂಡ್ ವಿರುದ್ಧ ಸತತ ಎಂಟು ಪಂದ್ಯಗಳನ್ನು ಆಡಬೇಕಿದೆ. ಮೊದಲು ಭಾರತ ಮತ್ತು ಇಂಗ್ಲೆಂಡ್ ನಡುವೆ ಐದು ಪಂದ್ಯಗಳ ಟಿ-20 ಸರಣಿ ನಡೆಯಲಿದೆ. ಇದಾದ ಬಳಿಕ ಮೂರು ಪಂದ್ಯಗಳ ಏಕದಿನ ಸರಣಿ ನಡೆಯಲಿದೆ.

ಆದರೆ, ಇಂಗ್ಲೆಂಡ್ ವಿರುದ್ಧದ ಸರಣಿಗೆ ಟೀಂ ಇಂಡಿಯಾ ಇನ್ನೂ ಪ್ರಕಟವಾಗಿಲ್ಲ. ಏತನ್ಮಧ್ಯೆ, ಏಕದಿನ ಸರಣಿಯಲ್ಲಿ ಸ್ಟಾರ್ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಕೆಎಲ್ ರಾಹುಲ್ ಅವರಿಗೆ ಅವಕಾಶ ನೀಡಲಾಗುತ್ತದೆ ಎಂಬ ದೊಡ್ಡ ಸುದ್ದಿ ಬರುತ್ತಿದೆ. ಈ ಹಿಂದೆ ಏಕದಿನ ಸರಣಿಯಲ್ಲಿ ಅವರಿಗೆ ವಿಶ್ರಾಂತಿ ನೀಡುವ ಬಗ್ಗೆ ಚರ್ಚೆ ನಡೆದಿತ್ತು. ಆದರೀಗ ಹಠಾತ್ ಯು-ಟರ್ನ್ ತೆಗೆದುಕೊಂಡಿರುವ ಬಿಸಿಸಿಐ, ಚಾಂಪಿಯನ್ಸ್ ಟ್ರೋಫಿಯನ್ನು ಗಮನದಲ್ಲಿಟ್ಟುಕೊಂಡು ರಾಹುಲ್‌ರನ್ನು ಕಣಕ್ಕಿಳಿಸಲು ನಿರ್ಧರಿಸಿದೆ.

ಏಕದಿನ ಸರಣಿಗೆ ರಾಹುಲ್ ಆಯ್ಕೆ

ಇಂಗ್ಲೆಂಡ್ ವಿರುದ್ಧದ ಟಿ20 ಸರಣಿಯಲ್ಲಿ ಕೆಎಲ್ ರಾಹುಲ್ ಆಡುತ್ತಾರೋ ಇಲ್ಲವೋ ಎಂಬ ಬಗ್ಗೆ ಯಾವುದೇ ಮಾಹಿತಿ ಬಹಿರಂಗವಾಗಿಲ್ಲ. ಆದರೆ, ರಾಹುಲ್ ಏಕದಿನ ಸರಣಿಯಲ್ಲಿ ಆಡುವುದು ಖಚಿತ ಎಂದು ಹೇಳಲಾಗುತ್ತಿದೆ. ಈ ಹಿಂದೆ ಬಿಸಿಸಿಐ ಮೂಲಗಳನ್ನು ಉಲ್ಲೇಖಿಸಿದ ವರದಿಗಳಲ್ಲಿ ರಾಹುಲ್‌ಗೆ ಏಕದಿನ ಸರಣಿಯಿಂದ ವಿಶ್ರಾಂತಿ ನೀಡಲಾಗುವುದು ಎಂದು ಹೇಳಲಾಗಿತ್ತು. ಆದರೆ ಇದೀಗ ಅವರಿಗೆ ಏಕದಿನ ಸರಣಿಯಲ್ಲಿ ಅವಕಾಶ ನೀಡಲಾಗುವುದು ಎಂದು ಹೇಳಲಾಗುತ್ತಿದೆ. ಬಿಸಿಸಿಐ ತನ್ನ ಹಿಂದಿನ ನಿರ್ಧಾರವನ್ನು ಮರುಪರಿಶೀಲಿಸಿದ್ದು, ಇದೀಗ ಏಕದಿನ ಸರಣಿಯಲ್ಲಿ ಆಡುವಂತೆ ರಾಹುಲ್‌ರನ್ನು ಕೇಳಿಕೊಂಡಿದೆ. ಇದರಿಂದಾಗಿ ಫೆಬ್ರವರಿಯಲ್ಲಿ ನಡೆಯಲ್ಲಿರುವ ಚಾಂಪಿಯನ್ಸ್ ಟ್ರೋಫಿಗೂ ಮೊದಲು ಕೆಲವು ಪಂದ್ಯಗಳನ್ನು ಆಡುವ ಮೂಲಕ ರಾಹುಲ್ ಸಿದ್ಧವಾಗಲಿ ಎಂಬುದು ಇದರ ಹಿಂದಿನ ಉದ್ದೇಶ ಎಂದು ಹೇಳಲಾಗುತ್ತಿದೆ.


**ಚಾಂಪಿಯನ್ಸ್ ಟ್ರೋಫಿಗೆ ರಾಹುಲ್ ಫಿಕ್ಸ್**

ಬಿಸಿಸಿಐ ಈ ಹಿಂದೆ ತೆಗೆದುಕೊಂಡ ನಿರ್ಧಾರದಿಂದಾಗಿ ಕೆಎಲ್ ರಾಹುಲ್ ಚಾಂಪಿಯನ್ಸ್ ಟ್ರೋಫಿಯಲ್ಲಿ ಆಡುವುದು ಅನುಮಾನ ಎಂದು ತೋರುತ್ತಿತ್ತು. ಏಕೆಂದರೆ ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಯ ನಂತರ, ಟೀಂ ಇಂಡಿಯಾ ಚಾಂಪಿಯನ್ಸ್ ಟ್ರೋಫಿ ಆಡಲು ದುಬೈಗೆ ಹೋಗಲಿದೆ. ಚಾಂಪಿಯನ್ಸ್ ಟ್ರೋಫಿ ಕೂಡ ಏಕದಿನ ಮಾದರಿಯಲ್ಲಿ ನಡೆಯಲಿದೆ. ಹೀಗಿರುವಾಗ ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲಿ ರಾಹುಲ್‌ಗೆ ಅವಕಾಶ ನೀಡದಿದ್ದರೆ ಅವರ ಸ್ಥಾನದಲ್ಲಿ ಬೇರೆ ಆಟಗಾರನಿಗೆ ಅವಕಾಶ ಸಿಗಬಹುದು ಎನ್ನಲಾಗುತ್ತಿತ್ತು. ಆದರೀಗ ರಾಹುಲ್‌ರನ್ನು ಏಕದಿನ ಸರಣಿಗೆ ಆಯ್ಕೆ ಮಾಡುವ ಮೂಲಕ ಚಾಂಪಿಯನ್ಸ್ ಟ್ರೋಫಿಗೆ ಅವರ ಆಯ್ಕೆಯನ್ನು ಖಚಿತಪಡಿಸಿದಂತ್ತಾಗಿದೆ.

**ತಂಡ ಪ್ರಕಟ ಯಾವಾಗ**

ಐಸಿಸಿ ಚಾಂಪಿಯನ್ಸ್ ಟ್ರೋಫಿ ಫೆಬ್ರವರಿ 19 ರಿಂದ ಪಾಕಿಸ್ತಾನ ಮತ್ತು ದುಬೈನಲ್ಲಿ ನಡೆಯಲಿದೆ. ಫೆಬ್ರವರಿ 20 ರಂದು ಬಾಂಗ್ಲಾದೇಶ ವಿರುದ್ಧ ಭಾರತದ ಮೊದಲ ಪಂದ್ಯವನ್ನು ಆಡಲಿದೆ. ಆದರೆ ಈ ಐಸಿಸಿ ಟೂರ್ನಿಗೆ ಭಾರತ ತಂಡವನ್ನು ಇನ್ನೂ ಪ್ರಕಟಿಸಿಲ್ಲ. ಶೀಘ್ರದಲ್ಲೇ ಆಯ್ಕೆಗಾರರು ಇಂಗ್ಲೆಂಡ್ ವಿರುದ್ಧದ ಟಿ20 ಸರಣಿಗೆ ತಂಡವನ್ನು ಪ್ರಕಟಿಸಲಿದ್ದು, ವಾರದ ನಂತರ ಏಕದಿನ ಸರಣಿ ಹಾಗೂ ಹಾಗೂ ಚಾಂಪಿಯನ್ಸ್ ಟ್ರೋಫಿಗೆ ತಂಡವನ್ನು ಪ್ರಕಟಿಸಬಹುದು.

# ಚಾಂಪಿಯನ್ಸ್ ಟ್ರೋಫಿಗೆ ಟೀಂ ಇಂಡಿಯಾ ಘೋಷಣೆ ವಿಳಂಬ ಸಾಧ್ಯತೆ



ಐಸಿಸಿ ಚಾಂಪಿಯನ್ಸ್ ಟ್ರೋಫಿಗೆ ಭಾರತ ತಂಡದ ಆಯ್ಕೆ ಜನವರಿ 19 ರೊಳಗೆ ಪ್ರಕಟವಾಗುವ ನಿರೀಕ್ಷೆಯಿದೆ. ಹೀಗಾಗಿ ಬಿಸಿಸಿಐ, ಐಸಿಸಿ ಬಳಿ ಸಮಯಾವಕಾಶ ಕೋರುವ ಸಾಧ್ಯತೆಗಳಿವೆ ಎಂದು ವರದಿಯಾಗಿದೆ. ಆದರೆ ಇಂಗ್ಲೆಂಡ್ ವಿರುದ್ಧದ ಟಿ20 ಸರಣಿಗೆ ತಂಡವನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು. ಐಸಿಸಿ ಚಾಂಪಿಯನ್ಸ್ ಟ್ರೋಫಿ ಫೆಬ್ರವರಿ 19 ರಿಂದ ಆರಂಭವಾಗಲಿದೆ.

ಹೀಗಾಗಿ ಈ ಪಂದ್ಯಾವಳಿಯಲ್ಲಿ ಭಾಗವಹಿಸುವ ಎಲ್ಲಾ ತಂಡಗಳನ್ನು ಪ್ರಕಟಿಸಲು ಐಸಿಸಿ ಜನವರಿ 12 ವರೆಗೆ ಗಡುವು ನಿಗದಿಪಡಿಸಿದೆ. ಆದ್ದರಿಂದ ಟೂರ್ನಿಯಲ್ಲಿ ಆಡಲಿರುವ 8 ತಂಡಗಳು ಇನ್ನೇರಡು ದಿನಗಳಲ್ಲಿ ಪ್ರಕಟವಾಗಬೇಕಿದೆ. ಆದರೆ ಬಿಸಿಸಿಐ ಮಾತ್ರ ತನ್ನ ತಂಡವನ್ನು ಪ್ರಕಟಿಸಲು ಕೊಂಚ ಸಮಯಾವಕಾಶ ಕೇಳಬಹುದು ಎಂದು ವರದಿಯಾಗಿದೆ.

ಮಾಧ್ಯಮ ವರದಿಗಳ ಪ್ರಕಾರ, ಐಸಿಸಿಯ ಸೂಚನೆಗಳನ್ನು ಅನುಸರಿಸಿ ಟೀಂ ಇಂಡಿಯಾದ ಮುಖ್ಯ ಆಯ್ಕೆಗಾರ ಅಜಿತ್ ಅಗರ್ಕರ್ ಸಮಯಕ್ಕೆ ತಂಡವನ್ನು ಪ್ರಕಟಿಸುತ್ತಾರೆ ಎಂದು ನಿರೀಕ್ಷಿಸಲಾಗಿತ್ತು. ಆದರೆ ಇತ್ತೀಚಿನ ಮಾಹಿತಿಯ ಪ್ರಕಾರ, ಬಿಸಿಸಿಐ ತನ್ನ ತಂಡವನ್ನು ಪ್ರಕಟಿಸಲು ಐಸಿಸಿ ಬಳಿ ಸಮಯಾವಕಾಶ ಕೇಳಬಹುದು. ಆದರೆ, ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳ ಟಿ20 ಸರಣಿಗೆ ಭಾರತ ತಂಡವನ್ನು ಎರಡು ಮೂರು ದಿನಗಳಲ್ಲಿ ಪ್ರಕಟಿಸಬಹುದು. ತಂಡವನ್ನು ಯಾವಾಗ ಘೋಷಿಸಲಾಗುತ್ತದೆ ಐಸಿಸಿ, ಸಾಮಾನ್ಯವಾಗಿ ತನ್ನ ಯಾವುದೇ ಪಂದ್ಯಾ ವಳಿಗಳಿಗೆ 4 ವಾರಗಳ ಮೊದಲು ತಾತ್ಕಾಲಿಕ ತಂಡವನ್ನು ಘೋಷಿಸಲು ಎಲ್ಲಾ ಮಂಡಳಿಗಳಿಗೆ ಸೂಚನೆ ನೀಡುತ್ತದೆ.

ಇದಾದ ನಂತರ ತಂಡದಲ್ಲಿ ಬದಲಾವಣೆಗಳನ್ನು ಮಾಡಲು ಕಾಲಾವಕಾಶವನ್ನು ನೀಡುತ್ತದೆ. ಆದರೆ ಪಾಕಿಸ್ತಾನ ಮತ್ತು ದುಬೈನಲ್ಲಿ ನಡೆಯಲಿರುವ ಚಾಂಪಿಯನ್ಸ್ ಟ್ರೋಫಿಗಾಗಿ ಐಸಿಸಿ, 5 ವಾರಗಳ ಮುಂಚಿತವಾಗಿಯೇ ಎಲ್ಲಾ 8 ಮಂಡಳಿಗಳಿಗೆ ತಮ್ಮ ತಂಡವನ್ನು ಪ್ರಕಟಿಸುವಂತೆ ಸೂಚಿಸಿದೆ.

# ಆರ್‌ಸಿಬಿ ನಾಯಕ ಯಾರು



ವಿರಾಟ್ ಕೊಹ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರುತಂಡವನ್ನು ವಿರಾಟ್ ಕೊಹ್ಲಿ 143 ಪಂದ್ಯಗಳಲ್ಲಿ ಮುನ್ನಡೆಸಿದ್ದಾರೆ. ಈ ವೇಳೆ 66 ಪಂದ್ಯಗಳಲ್ಲಿ ಆರ್‌ಸಿಬಿ ಜಯ ಸಾಧಿಸಿದೆ. ಹಾಗೆಯೇ 2016 ರಲ್ಲಿ ಕಿಂಗ್ ಕೊಹ್ಲಿ ನಾಯಕತ್ವದಲ್ಲೇ ಆರ್‌ಸಿಬಿ ಫೈನಲ್‌ಗೆ ಪ್ರವೇಶಿಸಿತ್ತು. ಇದೀಗ 18ನೇ ಸೀಸನ್‌ನಲ್ಲಿ ಮತ್ತೆ ವಿರಾಟ್ ಕೊಹ್ಲಿಯನ್ನು ನಾಯಕನನ್ನಾಗಿ ನೋಡಲು ಅಭಿಮಾನಿಗಳು ಕಾತುರದಿಂದ ಕಾಯುತ್ತಿದ್ದಾರೆ. ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18 ರಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರುತಂಡವನ್ನು ಮುನ್ನಡೆಸುವವರು ಯಾರು ಈ ಪ್ರಶ್ನೆಗೆ ಈವರೆಗಿನ ಉತ್ತರ ವಿರಾಟ್ ಕೊಹ್ಲಿ ಆಗಿತ್ತು. ಆದರೀಗ ಕೊಹ್ಲಿಯೇ ನಾಯಕರಾಗಿ ಕಾಣಿಸಿಕೊಳ್ಳಲಿದ್ದಾರೆ ಎಂಬುದರ ಬಗ್ಗೆ ಖಚಿತತೆ ಇಲ್ಲ. ಏಕೆಂದರೆ ಆರ್‌ಸಿಬಿ ತಂಡದ ಮುಖ್ಯ ಕೋಚ್ ಆಯಂಡಿ ಫ್ಲವರ್ ಪ್ರಸ್ತುತ ಹರಿದಾಡುತ್ತಿರುವ ಊಹಾಪೋಹಗಳಿಗೆ ತೆರೆ ಎಳೆದಿದ್ದಾರೆ. ಸಂದರ್ಶನವೊಂದರಲ್ಲಿ ಮಾತನಾಡಿದ ಆಂಡಿ ಫ್ಲವರ್, ಆರ್‌ಸಿಬಿ ತಂಡದ ಮುಂದಿನ ನಾಯಕ ಯಾರೆಂಬುದರ ಬಗ್ಗೆ ಇನ್ನೂ ಸಹ ಚರ್ಚೆ ನಡೆದಿಲ್ಲ. ಹೀಗಾಗಿ ಈಗಲೇ ನಾಯಕ ಯಾರೆಂದು ಹೇಳಲಾಗುವುದಿಲ್ಲ. ಮುಂದಿನ ಮೂರು ವರ್ಷಗಳನ್ನು ಮುಂದಿಟ್ಟುಕೊಂಡು ಹೊಸ ನಾಯಕನನ್ನು ಆಯ್ಕೆ ಮಾಡಲಿದ್ದೇವೆ ತಿಳಿಸಿದ್ದಾರೆ. ಐಪಿಎಲ್ 2025 ರೊಂದಿಗೆ ಆರ್‌ಸಿಬಿ ಹೊಸ ಯುಗವನ್ನು ಪ್ರಾರಂಭಿಸಲಿದೆ.

ಮುಂದಿನ ಮೂರು ವರ್ಷಗಳ ಪ್ರಯಾಣವು ಇದರೊಂದಿಗೆ ಆರಂಭವಾಗಲಿದ್ದು, ತಂಡದ ಮೇಲೆ ಹೆಚ್ಚಿನ ನಿರೀಕ್ಷೆಗಳಿವೆ. ಹೀಗಾಗಿ ದೀರ್ಘ ಕಾಲದವರೆಗೆ ತಂಡವನ್ನು ಮುನ್ನಡೆಸಬಲ್ಲ ಆಟಗಾರನಿಗೆ ತಂಡದ ನಾಯಕತ್ವವನ್ನು ನೀಡಲಿದ್ದೇವೆ ಎಂದು ಆಯಂಡಿ ಫ್ಲವರ್ ತಿಳಿಸಿದ್ದಾರೆ.

ಇದಾಗ್ಯೂ ವಿರಾಟ್ ಕೊಹ್ಲಿಗೆ ನಾಯಕತ್ವ ನೀಡಲಿದ್ದೇವೆ ಅಥವಾ ಇಲ್ಲ ಎಂಬುದನ್ನು ಆಯಂಡಿ ಫ್ಲವರ್ ಸ್ಪಷ್ಟಪಡಿಸಿಲ್ಲ. ನೀವು ಎಷ್ಟೇ ಬಾರಿ ಕೇಳಿದರೂ ಸದ್ಯಕ್ಕಂತು ಯಾರು ನಾಯಕರಾಗುತ್ತಾರೆ ಎಂದು ಹೇಳಲಾಗುವುದಿಲ್ಲ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA,
No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966